ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಡಿಸೆಂಬರ್ 26 ಗುರುವಾರ 2024
ಸಂಪುಟ: 45 | ಸಂಚಿಕೆ: 249 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಆರ್‌ಆರ್ ನಗರದ ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ!

● ತಮ್ಮ ಮೇಲೆ ಆಸಿಡ್ ಎಸೆದು ಕೊಲೆ ಯತ್ನ ● ಇದಕ್ಕೆ ಡಿಕೆ ಬ್ರದರ್ಸ್, ಕುಸುಮಾ, ಹನುಮಂತರಾಯಪ್ಪ ಕಾರಣ ಆರೋಪ ● ಕೆಸಿ ಜನರಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ

ಮೂವರು ಕಾಂಗ್ರೆಸ್ ಕಾರ್ಯಕರ್ತರ ಬಂಧನ

ಬೆಂಗಳೂರು, ಡಿ.25–ಬೆಂಗಳೂರಿನ ರಾಜರಾಜೇಶ್ವರಿ ನಗರ (ಆರ್‌ಆರ್) ದಲ್ಲಿ ಬಿಜೆಪಿ ಶಾಸಕ ಮುನಿರತ್ನ ಅವರ ತಲೆ ಮೇಲೆ ಇಂದು ಮಧ್ಯಾಹ್ನ ಕಾಂಗ್ರೆಸ್ ಕಾರ್ಯಕರ್ತರು ಮೊಟ್ಟೆ ಎಸೆದಿದ್ದು, ತಮ್ಮನ್ನು ಆಸಿಡ್ ಎಸೆದು ಕೊಲೆ ಮಾಡಲು ಪ್ರಯತ್ನಿಸಲಾಗಿದೆ ಎಂದು ಮುನಿರತ್ನ ಆರೋಪಿಸಿದ್ದಾರೆ. ಮೊಟ್ಟೆ ಎಸೆತದಿಂದ ಗಾಯಗೊಂಡಿರುವ ಮುನಿರತ್ನ ಮಲ್ಲೇಶ್ವರಂನ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ವಿವರ: ನಂದಿನಿ ಲೇಔಟ್ ಪೊಲೀಸ್ ಠಾಣೆಗೊಳಪಟ್ಟ ಲಗ್ಗೆರೆ ಬಳಿಯ ಲಕ್ಷ್ಮೀದೇವಿ ನಗರದಲ್ಲಿರುವ ಬಿಜೆಪಿ ಕಚೇರಿಯಲ್ಲಿ ಇಂದು ಆಯೋಜಿಸಲಾಗಿದ್ದ ದಿವಂಗತ ವಾಜಪೇಯಿ ಅವರ ಜನ್ಮ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಕಾರ್ಯಕರ್ತರೊಂದಿಗೆ ಮುನಿರತ್ನ ನಡೆದು ಬರುತ್ತಿದ್ದ ವೇಳೆ ಅವರ ತಲೆಯ ಮೇಲೆ ಮೊಟ್ಟೆ ಎಸೆಯಲಾಗಿದೆ.

ಮೊಟ್ಟೆ ಎಸೆಯುವ ವೇಳೆ 'ಆಸಿಡ್' ಎಂದು ಕೂಗಿರುವುದು ವೀಡಿಯೋ ಕ್ಲಿಪ್ಪಿಂಗ್‌ನಲ್ಲಿ ಕೇಳಿ ಬಂದಿದೆ. ಮುನಿರತ್ನ ತಲೆ ಮೇಲೆ ಮೊಟ್ಟೆ ಎಸೆಯುತ್ತಿದ್ದಂತೆಯೇ ಸ್ಥಳದಲ್ಲಿದ್ದ ಪೊಲೀಸರು ಮತ್ತು ಬಿಜೆಪಿ ಕಾರ್ಯಕರ್ತರು ಅವರನ್ನು ಸುತ್ತುವರೆದು ರಕ್ಷಿಸಿದ್ದಾರೆ. ಅದೇ ವೇಳೆ ಪೊಲೀಸರು ಮೂವರನ್ನು ಬಂಧಿಸಿದ್ದಾರೆ. ಮೊಟ್ಟೆ ದಾಳಿಯಾಗುತ್ತಿದ್ದಂತೆಯೇ ಮುನಿರತ್ನ ತಮ್ಮ ಪಕ್ಷದ ಕಾರ್ಯಕರ್ತರೊಡಗೂಡಿ ರಸ್ತೆಯಲ್ಲೇ ಧರಣಿ ಕುಳಿತು ಪ್ರತಿಭಟನೆ ನಡೆಸಿದ್ದಾರೆ. ತಮ್ಮ ವಿರುದ್ಧ ಸ್ಪರ್ಧಿಸಿ ಪರಾಜಯಗೊಂಡಿದ್ದ ಕಾಂಗ್ರೆಸ್‌ನ ಕುಸುಮಾ ಹನುಮಂತರಾಯಪ್ಪ ಅವರನ್ನು ಶಾಸಕಿ ಮಾಡಿ, ಸಚಿವೆ ಮಾಡಬೇಕೆಂಬ ಉದ್ದೇಶದಿಂದ ಉಪ ಮುಖ್ಯಮಂತ್ರಿ ■ 6ನೇ ಪುಟಕ್ಕೆ



ಬುಧವಾರ ಬೆಂಗಳೂರಿನ ಲಗ್ಗೆರೆ ಬಳಿ ಲಕ್ಷ್ಮೀದೇವಿನಗರದಲ್ಲಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ ನಡೆಯಿತು.

'ಮೊಟ್ಟೆ ಅಟ್ಯಾಕ್' ಚಿತ್ರದ ರಚನೆ, ನಿರ್ಮಾಣ ಮುನಿರತ್ನರದ್ದೇ...!

ಮೊಟ್ಟೆ ಎಸೆತ ಪ್ರಕರಣದಲ್ಲಿ ತಮ್ಮ ವಿರುದ್ಧ ಆರೋಪ ಮಾಡಿರುವ ಮುನಿರತ್ನ ವಿರುದ್ಧ ಕುಸುಮಾ ಹನುಮಂತರಾಯಪ್ಪ ಸಾಮಾಜಿಕ ಜಾಲತಾಣದಲ್ಲಿ ಹರಿಹಾಯ್ದಿದ್ದಾರೆ. ಶಾಸಕ ಮುನಿರತ್ನ ಅವರ ಮೇಲಿನ 'ಮೊಟ್ಟೆ ಅಟ್ಯಾಕ್' ಚಿತ್ರದ ರಚನೆ ಹಾಗೂ ನಿರ್ಮಾಣ ಸ್ವತಃ ಅವರದ್ದೇ. ದಲಿತರನ್ನು ತುಚ್ಛವಾಗಿ ನಿಂದಿಸಿ, ಒಕ್ಕಲಿಗ ಗುತ್ತಿಗೆದಾರ ಕುಟುಂಬದ ಹೆಣ್ಣು ಮಕ್ಕಳ ಬಗ್ಗೆ ಅವಹೇಳನ ಮಾಡಿದ್ದ ಧ್ವನಿ ಎಫ್‌ಎಸ್‌ಎಲ್ ರಿಪೋರ್ಟ್‌ನಲ್ಲಿ ಅವರದ್ದೇ ಎಂದು ಸಾಬೀತಾದ ಬೆನ್ನಲ್ಲೇ ತರಹೇವಾರಿ ನಾಟಕಗಳು ಶುರುವಾಗಿವೆ. ಜನರೆದುರು ತನ್ನ ನಿಜರೂಪ ಬೆತ್ತಲಾದ ನಂತರ ಸಿಂಪಥಿ ಗಿಟ್ಟಿಸಿಕೊಳ್ಳಲು ಇಮೇಜ್ ಬಿಲ್ಡಿಂಗ್ ಆಕ್ಟಿವಿಟಿಯ ಒಂದು ಭಾಗವೇ ಇಂದಿನ ಪ್ರಹಸನಗಳು. ಈತನ ಸ್ಕ್ರಿಪ್ಟೆಡ್ ಸ್ಟೋರಿಗಳು ಅಲ್ಪವಿರಾಮದ ಬಳಿಕ ಮತ್ತೆ ಚಾಲ್ತಿಗೆ ಬಂದಿವೆ. ಮಹಿಳೆಯರಿಗೆ ರಾಜಕೀಯದಲ್ಲಿ ಆದ್ಯತೆಯೇ ಕಡಿಮೆ. ಇಂತಹ ಸನ್ನಿವೇಶದಲ್ಲಿ ಸ್ವಚ್ಛ ರಾಜಕಾರಣದ ಮೂಲಕ ಸ್ವಾಸ್ಥ್ಯ ಸಮಾಜದ ನಿರ್ಮಾಣದ ಕನಸುಗಳಿಗೆ ಬೆಲೆ ಇಲ್ಲವೆನಿಸುತ್ತದೆ. ಈ ನಾಟಕಗಳನ್ನು ಗಮನಿಸಿದರೆ ಕೊಚ್ಚೆಯಲ್ಲಿ ಹೊರಳಾಡುವ ಹಂದಿಯ ಜೊತೆ ಹಂದಿಗಳಾಗಿಯೇ ಇರಬೇಕಾ ಎಂಬ ಪ್ರಶ್ನೆಯ ಜೊತೆ ಅಸಹ್ಯ ಮೂಡಿಸುತ್ತದೆ. ಇಂದಿನ ಪ್ರಹಸನದ ದುರುದ್ದೇಶಗಳನ್ನು ಅಳೆಯದೇ ಈತನ ಕತೆಗಳನ್ನು ನಂಬುವಷ್ಟು ಜನರು ದಡ್ಡರೂ ಅಲ್ಲ, ಮೂರ್ಖರೂ ಅಲ್ಲ ಎಂದು ಕುಸುಮಾ ಹೇಳಿದ್ದಾರೆ.



ಕುಸುಮಾ

ಬೆಂಗಳೂರು ರೈಲ್ವೆ ನಿಲ್ದಾಣದಲ್ಲಿ ಮೈಸೂರು ವಿದ್ಯಾರ್ಥಿನಿ ಸಾವು



ಶ್ರೇಯ

ಮೈಸೂರು, ಡಿ.25(ಎಸ್‌ಪಿಎನ್)– ಬೆಂಗಳೂರು ರೈಲ್ವೆ ನಿಲ್ದಾಣದಲ್ಲಿ ಚೆನ್ನೈ ಎಕ್ಸ್‌ಪ್ರೆಸ್ ರೈಲು ಹತ್ತುವಾಗ ಆಯಾತಪ್ಪಿ ಕೆಳಗೆ ಬಿದ್ದು ಮೈಸೂರಿನ ಪ್ರತಿಭಾವಂತ ವಿದ್ಯಾರ್ಥಿನಿ ಸಾವಿಗೀಡಾಗಿರುವ ದುರಂತ ಬುಧವಾರ ಸಂಜೆ ಸಂಭವಿಸಿದೆ.

ಮೈಸೂರು ಜಿಲ್ಲಾ ವಕೀಲರ ಸಂಘದ ಮಾಜಿ ಕಾರ್ಯದರ್ಶಿಯೂ ಆದ ಹಿರಿಯ ವಕೀಲ ಉಮೇಶ್ ಪುತ್ರಿ ಶ್ರೇಯ(19) ಮೃತಪಟ್ಟ ವಿದ್ಯಾರ್ಥಿನಿಯಾಗಿದ್ದು, ಈಕೆ ಮೈಸೂರಿನ ಮಾತಾ ಅಮೃತಾನಂದಮಯಿ ಕಾಲೇಜಿನಲ್ಲಿ ದ್ವಿತೀಯ ವರ್ಷದ ಬಿಸಿಎ ವ್ಯಾಸಂಗ ಮಾಡುತ್ತಿದ್ದರು.

ಕಾಲೇಜಿನ ಸಾಂಸ್ಕೃತಿಕ ತಂಡದೊಂದಿಗೆ ಚೆನ್ನೈನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನೀಡಲು ಮೈಸೂರಿನಿಂದ ಚೆನ್ನೈ ಎಕ್ಸ್‌ಪ್ರೆಸ್‌ನಲ್ಲಿ ತೆರಳುತ್ತಿದ್ದರು. ರೈಲು ಬೆಂಗಳೂರು ನಿಲ್ದಾಣದಲ್ಲಿ ನಿಂತಿದ್ದ ವೇಳೆ ನೀರಿನ ಬಾಟಲಿ ಖರೀದಿಸಲು ಕೆಳಗಿಳಿದ ಶ್ರೇಯ, ಮತ್ತೆ ರೈಲು ಹತ್ತುವ ವೇಳೆ ಆಯಾತಪ್ಪಿ ಪ್ಲಾಟ್ ಫಾರ್ಮನಲ್ಲಿ ಬಿದ್ದಿದ್ದಾರೆ. ಈ ವೇಳೆ ತಲೆಗೆ ತೀವ್ರವಾಗಿ ಪೆಟ್ಟು ಬಿದ್ದಿದ್ದ ಶ್ರೇಯಾಳನ್ನು ಗಮನಿಸಿದ ಸಹಪಾಠಿಗಳು ತಕ್ಷಣವೇ ರೈಲಿನಿಂದ ಇಳಿದು ಆಕೆಯ ಆರೈಕೆಯಲ್ಲಿ ತೊಡಗಿದ್ದರಾದರೂ ಅಷ್ಟರಲ್ಲಿ ಶ್ರೇಯ ಮೃತಪಟ್ಟಿದ್ಧಾರೆ ಎಂದು ಹೇಳಲಾಗಿದೆ. ಈ ಸಂಬಂಧ ಬೆಂಗಳೂರು ರೈಲ್ವೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ಬೆಳಗಾವಿಯಲ್ಲಿ 'ಗಾಂಧಿ ಭಾರತ'; ಕಾಂಗ್ರೆಸ್‌ನಿಂದ ಐತಿಹಾಸಿಕ ಸ್ವಾತಂತ್ರ್ಯ ಹೋರಾಟ ಸ್ಮರಣೆ; ಇಂದು ಗಾಂಧಿ ಬಾವಿಯಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಭೆ; ಮಹಾತ್ಮ ಗಾಂಧೀಜಿ ನವನಗರದಲ್ಲಿ


ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ

● ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಿದ್ಧತೆ ಪೂರ್ಣ ● ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಹತ್ವದ ನಿರ್ಣಯ

ಬೆಂಗಳೂರು, ಡಿ.25(ಕೆಎಂಶಿ)– ಬೆಳಗಾವಿಯಲ್ಲಿ 27ರಂದು ನಡೆಯಲಿರುವ ಸಾರ್ವಜನಿಕ ಸಭೆಗೆ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ' ಎಂದು ಹೆಸರಿಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾವೇಶ ಪ್ರದೇಶವನ್ನು 'ಮಹಾತ್ಮ ಗಾಂಧೀಜಿ ನವನಗರ' ಎಂಬುದಾಗಿ ಘೋಷಣೆ ಮಾಡಲಾಗಿದೆ, 26ರಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ಸಭೆಯನ್ನು 'ಗಾಂಧಿ ಬಾವಿ' (ಪಂಪ ಸರೋವರ) ಬಳಿ ಹಮ್ಮಿಕೊಳ್ಳಲಾಗಿದೆ ಎಂದರು. 1924ರಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ಮಹಾತ್ಮಗಾಂಧಿ ಅಧ್ಯಕ್ಷರಾಗಿದ್ದರು, ಕರ್ನಾಟಕದ ಗಂಗಾಧರ ದೇಶಪಾಂಡೆ ಹಾಗೂ ಜವಾಹರ್‌ಲಾಲ್ ನೆಹರು ಪ್ರಧಾನ ಕಾರ್ಯದರ್ಶಿಗಳಾಗಿದ್ದರು. ಅಂದು 80 ಎಕರೆ ಜಾಗದಲ್ಲಿ ಅಧಿವೇಶನ ನಡೆದಿತ್ತು. ಇಂದು ಅದೇ ಸ್ಥಳದಲ್ಲಿ ಕಾರ್ಯಕಾರಿ ಸಮಿತಿ ಸಭೆ ಮಾಡುತ್ತಿದ್ದೇವೆ.

ಮಹತ್ವದ ನಿರ್ಣಯ: ನಮ್ಮ ನಾಯಕರು ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿ, ದೇಶಕ್ಕೆ ಮಾರ್ಗದರ್ಶನ ನೀಡಿ ಸ್ವಾತಂತ್ರ್ಯ ತಂದುಕೊಟ್ಟು ಮಹಾತ್ಮರಾದರು, ಇದರ ಸ್ಮರಣಾರ್ಥ ಕಾರ್ಯಕ್ರಮ ರೂಪಿಸಲಾಗಿದೆ. ಇದು ಕಾಂಗ್ರೆಸ್ ಪಕ್ಷದ ಕಾರ್ಯಕ್ರಮವಲ್ಲ, ಎಲ್ಲರ ಕಾರ್ಯಕ್ರಮ. ದೇಶವನ್ನು ಯಾವ ದಿಕ್ಕಿನಲ್ಲಿ ಮುನ್ನಡೆಸಬೇಕು, ಯಾವ ರೀತಿ ಶಕ್ತಿ ತುಂಬಬೇಕು ಎಂಬ ಕುರಿತು ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಲಾಗುವುದು. ಪಕ್ಷದ ಕಾರ್ಯಕಾರಿ ಸಮಿತಿ ಸದಸ್ಯರು, ವಿವಿಧ ರಾಜ್ಯಗಳ ಕಾಂಗ್ರೆಸ್ ಮುಖ್ಯಮಂತ್ರಿಗಳು, ಮಾಜಿ ಮುಖ್ಯಮಂತ್ರಿಗಳು, ಎಲ್ಲಾ ರಾಜ್ಯಗಳ ಶಾಸಕಾಂಗ ಪಕ್ಷದ ■ 6ನೇ ಪುಟಕ್ಕೆ



ಸುದ್ದಿಗೋಷ್ಠಿಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಮಾತನಾಡಿದರು.



'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ' ಸ್ಥಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪರಿಶೀಲಿಸಿದರು.

ಸಮಾವೇಶದ ಮೂಲಕ 'ಕೈ' ಬಲಪಡಿಸುವ ಜಾಣ್ಮೆ!

ಬೆಂಗಳೂರು, ಡಿ.25(ಕೆಎಂಶಿ)–ಲೋಕಸಭಾ ಚುನಾವಣೆ ನಂತರ ವಿವಿಧ ರಾಜ್ಯಗಳಿಗೆ ನಡೆದ ವಿಧಾನಸಭಾ ಚುನಾವಣೆಗಳಲ್ಲಿ ಹೀನಾಯ ಸೋಲು ಕಂಡು ಸಂಕಷ್ಟದಲ್ಲಿರುವ ಪಕ್ಷಕ್ಕೆ ಬಲ ಕೊಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನಾಳೆಯಿಂದ (ಗುರುವಾರ) ಬೆಳಗಾವಿಯಲ್ಲಿ ಎರಡು ದಿನಗಳ ರಾಷ್ಟ್ರೀಯ ಕಾಂಗ್ರೆಸ್ ಸಮಾವೇಶ ಹಮ್ಮಿಕೊಂಡಿದೆ.

ಪಕ್ಷ ಸಂಕಷ್ಟದಲ್ಲಿದ್ದ ಸಮಯದಲ್ಲೆಲ್ಲಾ ಎಸ್.ಎಂ.ಕೃಷ್ಣ, ಧರ್ಮಸಿಂಗ್ ಹಾಗೂ ಸಿದ್ದರಾಮಯ್ಯ ಆಡಳಿತಾವಧಿಯಲ್ಲಿ ಕಾಂಗ್ರೆಸ್‌ಗೆ ಮರು ಜೀವ ನೀಡಿದ್ದಾರೆ. ಬೆಳಗಾವಿಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ ನಾಳೆ 100 ವರ್ಷ ತುಂಬಲಿದೆ, ಇದನ್ನೇ ಮುಂದಿಟ್ಟುಕೊಂಡು ಇಲ್ಲಿನ ಸರ್ಕಾರ ಪಕ್ಷಕ್ಕೆ ಜೀವ ತುಂಬಲು ಸಮಾವೇಶ ಹಮ್ಮಿಕೊಂಡಿದೆ. ಎಐಸಿಸಿ ಮಹಾಧಿವೇಶನವು ಡಿಸೆಂಬರ್ 27ರಂದು ನಡೆಯಲಿದ್ದು, ಆ ನಂತರ ಬೃಹತ್ ಸಾರ್ವಜನಿಕ ಸಭೆ ಉದ್ದೇಶಿಸಿ ಪಕ್ಷದ ಧುರೀಣರು ಮಾತನಾಡಲಿದ್ದಾರೆ. ಸಮಾವೇಶಕ್ಕೆ ಕುಂದಾನಗರಿ ಸಿಂಗರಿಸಿಕೊಂಡು ಸಿದ್ಧಗೊಂಡಿದೆ, ಇದಕ್ಕಾಗಿ ರಾಜ್ಯ ಸರ್ಕಾರ ಮತ್ತು ಪಕ್ಷ ಒಟ್ಟಾರೆ 20 ಕೋಟಿ ರೂ. ವೆಚ್ಚ ಮಾಡುತ್ತಿದೆ. ಸಮಾವೇಶದಲ್ಲಿ ಭಾಗವಹಿಸಲೆಂದೇ ■ 6ನೇ ಪುಟಕ್ಕೆ

ಮೊಟ್ಟೆಯಿಂದ ಶಾಲಾ ಮಕ್ಕಳಲ್ಲಿ ಅನಾರೋಗ್ಯ!

ಮೊಟ್ಟೆ ವಿತರಣೆ ನಿಲ್ಲಿಸಲು ಹೈಕೋರ್ಟ್‌ಗೆ ಪಿಐಎಲ್

● ಶೀಘ್ರ ಬೆಳವಣಿಗೆಗೆ ಕೋಳಿಗಳಿಗೆ ಸ್ಟಿರಾಯಿಡ್ ರಸಾಯನಿಕ
● 6 ತಿಂಗಳಲ್ಲಿ ಆಗಬೇಕಿದ್ದ ಬೆಳವಣಿಗೆ ಮೂರು ತಿಂಗಳಲ್ಲಿ ಸಾಧ್ಯ
● ಅವಧಿ ಮೀರಿದ ಮೊಟ್ಟೆ ವಿತರಣೆ; ಮಕ್ಕಳ ಬುದ್ಧಿಶಕ್ತಿ ಕ್ಷೀಣ



ಮೈಸೂರು, ಡಿ.25(ಬಿಎಲ್‌ಯು)– ಸರ್ಕಾರದಿಂದ ಶಾಲಾ ಮಕ್ಕಳಿಗೆ ಕೋಳಿ ಮೊಟ್ಟೆ ವಿತರಣೆ ಮಾಡುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಮೈಸೂರಿನ ವಕೀಲ ವಿ.ರವಿಕುಮಾರ್ ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್) ಸಲ್ಲಿಸಿದ್ದಾರೆ.

ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಮಧ್ಯಾಹ್ನದ ಬಿಸಿಯೂಟದೊಂದಿಗೆ ಮಕ್ಕಳಿಗೆ ಕೋಳಿ ಮೊಟ್ಟೆ ವಿತರಣೆ ಮಾಡಲಾಗುತ್ತಿದೆ.

ಜಾತ್ಯಾತೀತ ಮನೋಭಾವದೊಂದಿಗೆ ಸಮಾನತೆಯಿಂದ ವ್ಯಾಸಂಗ ಮಾಡುವ ಮಕ್ಕಳಲ್ಲಿ ಮೊಟ್ಟೆ ವಿತರಣೆಯಲ್ಲಿ ಜಾತೀಯತೆ ಬಿಂಬಿತವಾಗುತ್ತಿದೆ. ಈತ ಸಸ್ಯಾಹಾರಿ, ಆತ ಮಾಂಸಾಹಾರಿ ಎಂಬ ಭೇದ–ಭಾವವನ್ನು ಇದರಿಂದ ಸೃಷ್ಟಿಸಿದಂತಾಗುತ್ತದೆ ಎಂದು ■ 6ನೇ ಪುಟಕ್ಕೆ

ಸಿ.ಟಿ.ರವಿ ರೌಂಡ್ಸ್‌ಗೆ ಮೊದಲ ತಲೆದಂಡ ಖಾನಾಪುರ ಇನ್ಸ್‌ಪೆಕ್ಟರ್ ಸಸ್ಪೆಂಡ್



ಮಂಜುನಾಥ್ ನಾಯಕ್

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಆರೋಪ ವಿಚಾರ ಸಂಬಂಧ ಎಂಎಲ್‌ಸಿ ಸಿ.ಟಿ.ರವಿ ಅವರನ್ನು ಬಂಧಿಸಿ ಸುತ್ತಾಡಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೊದಲ ತಲೆದಂಡವಾಗಿದೆ. ಕರ್ತವ್ಯಲೋಪದಡಿ ಖಾನಾಪುರ ಪೊಲೀಸ್ ಠಾಣೆಯ ಸಿಪಿಐ ಮಂಜುನಾಥ್ ನಾಯಕ್ ಅವರನ್ನ ಅಮಾನತು ಮಾಡಿ ಬೆಳಗಾವಿ ಉತ್ತರ ವಲಯದ ಐಜಿಪಿ ವಿಕಾಸ್ ಕುಮಾರ್ ಆದೇಶ ಹೊರಡಿಸಿದ್ದಾರೆ. ಬಿಜೆಪಿ ನಾಯಕರನ್ನು ಠಾಣೆಯೊಳಗೆ ಬಿಟ್ಟಿದ್ದಕ್ಕೆ ಅಮಾನತು ಮಾಡಲಾಗಿದೆ ಎನ್ನಲಾಗಿದೆ. ಸಿ.ಟಿ.ರವಿ ಬಂಧನ ನಂತರ ಬಿಜೆಪಿ ನಾಯಕರನ್ನ ಠಾಣೆಯೊಳಗೆ ಬಿಟ್ಟಿದ್ದರು. ಈ ವೇಳೆ ಖಾನಾಪುರ ಠಾಣೆಯಲ್ಲಿ ಬಿಜೆಪಿ ನಾಯಕರು ಸಭೆ ಮಾಡಿದ್ದರು. ಆಗ ಕಮಿಷನರ್ ಯಡಾ ಮಾರ್ಟಿನ್, ಡಿಸಿಪಿ ರೋಹನ್ ಇದ್ದರು. ಕಮಿಷನರ್ ಅನುಮತಿ ಮೇರೆಗೆ ಬಿಜೆಪಿ ನಾಯಕರನ್ನ ಠಾಣೆಯೊಳಗೆ ಬಿಟ್ಟಿದ್ದರು ಎನ್ನಲಾಗಿದೆ.

ಪ್ರೋಟಿನ್ ಆಧಾರಿತ 'ನಂದಿನಿ' ಇಡ್ಲಿ, ದೋಸೆ ಹಿಟ್ಟು ಬಿಡುಗಡೆ

ಸದ್ಯಕ್ಕೆ ಬೆಂಗಳೂರಲ್ಲಿ ಲಭ್ಯ; ಶೀಘ್ರವೇ ಎಲ್ಲಾ ನಗರಗಳಿಗೂ ವಿಸ್ತರಣೆ


ಬೆಂಗಳೂರು, ಡಿ.25– ಬೆಂಗಳೂರಿನಲ್ಲಿ ನಂದಿನಿ ಹಾಲಿನ ಜತೆಗೆ ಇನ್ನು ಮುಂದೆ ರೆಡಿ ಟು ಕುಕ್ ದೋಸೆ ಮತ್ತು ಇಡ್ಲಿ ಹಿಟ್ಟು ಕೂಡ ಸಿಗಲಿದೆ. ಕೆಎಂಎಫ್ ಮೊದಲ ಬಾರಿಗೆ ಮಾರುಕಟ್ಟೆಗೆ ಪರಿಚಯಿಸುತ್ತಿರುವ 'ನಂದಿನಿ' ಪ್ರೋಟಿನ್ ಆಧಾರಿತ ಇಡ್ಲಿ ಮತ್ತು ದೋಸೆ ಹಿಟ್ಟನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬಿಡುಗಡೆ ಮಾಡಿದ್ದಾರೆ.

ಮಾರುಕಟ್ಟೆ ವಿಸ್ತರಿಸುವ ನಿಟ್ಟಿನಲ್ಲಿ ಬೆಂಗಳೂರು ಮಹಾನಗರ ಹಾಗೂ ರಾಜ್ಯದ ಪ್ರಮುಖ ನಗರಗಳನ್ನು ಗಮನದಲ್ಲಿಟ್ಟುಕೊಂಡು ಕೆಎಂಎಫ್ 'ನಂದಿನಿ' ಹೆಸರಿನಲ್ಲಿ ದೋಸೆ ಹಾಗೂ ಇಡ್ಲಿ ಹಿಟ್ಟನ್ನು ಮಾರುಕಟ್ಟೆಗೆ ಪರಿಚಯಿಸಿದೆ.ದಿನದಿಂದ ದಿನಕ್ಕೆ ರೆಡಿ ಟು ಕುಕ್ ಮಾದರಿ ಹೆಚ್ಚು ಜನಪ್ರಿಯವಾಗುತ್ತಿದೆ. ಈಗಾಗಲೇ ಕೆಲ ಆಹಾರ ಉತ್ಪಾದನಾ ಕಂಪೆನಿಗಳು ರೆಡಿ ಟು ಕುಕ್ ಮಾದರಿಯ ಖಾದ್ಯಗಳನ್ನು ಪೂರೈಸುತ್ತಿವೆ. ಇವುಗಳಿಗೆ ಪೈಪೋಟಿ ನೀಡಲು ನಿರ್ಧರಿಸಿದ ಕೆಎಂಎಫ್ ಇದೀಗ ಮಾರುಕಟ್ಟೆಗೆ ದೋಸೆ ಹಾಗೂ ಇಡ್ಲಿ ಹಿಟ್ಟನ್ನು ಪರಿಚಯಿಸಿದೆ.

ನಾಗರಿಕರ ಬಹುದಿನಗಳ ಅಪೇಕ್ಷೆಯಂತೆ ನಂದಿನಿ ಉತ್ಪನ್ನಗಳಿಗೆ ಹೊಸ ಸೇರ್ಪಡೆಯಾಗಿ ದೋಸೆ ಹಾಗೂ ಇಡ್ಲಿ ಹಿಟ್ಟು ಮಾರುಕಟ್ಟೆಗೆ ಲಗ್ಗೆಯಿಟ್ಟಿದೆ. ಪ್ರೋಟೀನ್ ಆಧಾರಿತ ಉತ್ಕೃಷ್ಟ ಗುಣಮಟ್ಟದ ಹಿಟ್ಟು ಕೈಗೆಟಕುವ ದರದಲ್ಲಿ ಗ್ರಾಹಕರಿಗೆ ಲಭ್ಯವಿದ್ದು, ಬೆಳಗ್ಗಿನ ಉಪಾಹಾರವು ಗರಿಗರಿ ದೋಸೆ, ಸವಿಸವಿ ಇಡ್ಲಿಯೊಂದಿಗೆ ರುಚಿ ಮತ್ತು ಆರೋಗ್ಯವನ್ನು ವೃದ್ಧಿಗೊಳಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಕನ್ನಡಿಗರ ಹೆಮ್ಮೆಯ ಬ್ರ್ಯಾಂಡ್ ಕೆಎಂಎಫ್‌ನ ನಂದಿನಿ ಉತ್ಪನ್ನಗಳು ದೇಶವ್ಯಾಪಿ ಮಾರುಕಟ್ಟೆಯನ್ನು ಸೃಷ್ಟಿಸಿಕೊಂಡಿದ್ದು, ರಾಷ್ಟ್ರ ರಾಜಧಾನಿ ದೆಹಲಿಗೂ ನಂದಿನಿ ಹಾಲು ತಲುಪುತ್ತಿದೆ. ರಾಜಸ್ಥಾನ, ಮಧ್ಯಪ್ರದೇಶ ರಾಜ್ಯಗಳ ಪ್ರಮುಖ ನಗರಗಳಿಂದ ನಂದಿನಿ ಹಾಲಿಗೆ ಬೇಡಿಕೆ ಬರುತ್ತಿದೆ. ದೇಶದ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ತಿರುಪತಿಯ ಲಡ್ಡು ಪ್ರಸಾದವನ್ನು ನಂದಿನಿ ತುಪ್ಪದಿಂದ ಸಿದ್ಧಪಡಿ ಸಲಾಗುತ್ತಿದೆ. ಹೀಗೆ ನಂದಿನಿಯ ನಾನಾ ಉತ್ಪನ್ನಗಳಿಗೆ ಭಾರೀ ಬೇಡಿಕೆ ವ್ಯಕ್ತವಾಗುತ್ತಿದ್ದು, ಕನ್ನಡಿಗರ ಬ್ರ್ಯಾಂಡ್ ಹೆಮ್ಮರವಾಗಿ ಬೆಳೆಯುತ್ತಿದೆ ಎಂದು ತಿಳಿಸಿದರು. ಬಿಡುಗಡೆ ಕಾರ್ಯಕ್ರಮದಲ್ಲಿ ಸಚಿವರಾದ ಕೃಷ್ಣ ಬೈರೇಗೌಡ, ಕೆ.ವೆಂಕಟೇಶ್, ದಿನೇಶ್ ಗುಂಡೂ ರಾವ್, ಕೆಎಂಎಫ್ ಅಧ್ಯಕ್ಷ ಭಿಮಾನಾಯಕ್, ವ್ಯವಸ್ಥಾಪಕ ನಿರ್ದೇಶಕ ಶಿವಸ್ವಾಮಿ ಹಾಗೂ ಅಧಿಕಾರಿಗಳು ಇದ್ದರು.

ಸದ್ಯಕ್ಕೆ ಬೆಂಗಳೂರಲ್ಲಿ ಲಭ್ಯ: ಪ್ರಪ್ರಥಮ ಬಾರಿಗೆ ಇಡ್ಲಿ ಹಾಗೂ ದೋಸೆ ಹಿಟ್ಟಿನಲ್ಲಿ ಪ್ರೋಟೀನ್ ಅಂಶವನ್ನು ಶೇ.5ರ ಪ್ರಮಾಣ ದಲ್ಲಿ ಮಿಶ್ರಣಗೊಳಿಸಿ ಹಿಟ್ಟನ್ನು ತಯಾರಿಸಲಾಗುತ್ತದೆ. ಬೆಂಗಳೂರು ನಗರದಲ್ಲಿ ಪ್ರಾಯೋಗಿಕವಾಗಿ ಎರಡು ವಿವಿಧ ಪ್ಯಾಕುಗಳಲ್ಲಿ ಮಾರಾಟ ಮಾಡಲಾಗುತ್ತದೆ. 450 ಗ್ರಾಂ ಪ್ಯಾಕೆಟ್‌ಗೆ ರೂ.40 ಹಾಗೂ 900 ಗ್ರಾಂ ಪ್ಯಾಕೆಟ್‌ಗೆ ರೂ.80 ದರ ನಿಗದಿ ಪಡಿಸಲಾಗಿದೆ. ಗ್ರಾಹಕರ ಪ್ರತಿಕ್ರಿಯೆಯನ್ನು ಅವಲೋಕಿಸಿ ಮುಂದೆ ಇತರೇ ನಗರಗಳಿಗೂ ಮಾರಾಟ ವನ್ನು ವಿಸ್ತರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೆಎಂಎಫ್ ತಿಳಿಸಿದೆ. ಜೆ.ಪಿ.ನಗರದಲ್ಲಿರುವ ಮ್ಯಾನುಫ್ಯಾಕ್ಚರಿಂಗ್ ಮತ್ತು ಪ್ಯಾಕೇಜಿಂಗ್ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡಿದ್ದೇವೆ. ಅಲ್ಲಿ ದೋಸೆ ಹಾಗೂ ಇಡ್ಲಿ ಹಿಟ್ಟು ಸಿದ್ಧವಾಗಲಿದೆ.





ಅನಿವಾಸಿ ಭಾರತೀಯರಿಂದ ಸಂಪೂರ್ಣ ಗೀತ ಪಠನ



ಬುಧವಾರ ಕುರುಕ್ಷೇತ್ರದಲ್ಲಿ ನೂರಾರು ಅನಿವಾಸಿ ಭಾರತೀಯರಿಂದ ಸಂಪೂರ್ಣ ಗೀತ ಪಠನ ನಡೆಯಿತು.

ಹರಿಯಾಣ,ಡಿ.25–ಭಗವದ್ಗೀತೆಯ ಜನ್ಮಸ್ಥಳವಾದ ಕುರುಕ್ಷೇತ್ರದಲ್ಲೇ ಇಂದು ನೂರಾರು ಅನಿವಾಸಿ ಭಾರತೀಯರು ಸೇರಿ ಸಂಪೂರ್ಣ ಗೀತೆ ಪಠಿಸುವ ಮೂಲಕ ಗುರು ಮಹೋತ್ಸವ ಸ್ಮರಣೆಯೊಂದಿಗೆ ಕಾರ್ಯಕ್ರಮವನ್ನು ಅಭೂತ ಪೂರ್ವವಾಗಿ ಯಶಸ್ವಿಗೊಳಿಸಿದರು.

ಅಮೇರಿಕಾ, ಕೆನಡಾ, ಟ್ರಿನಿಡಾಡ್ ಮತ್ತು ಟೊಬಾಗೊ, ಯುಕೆ, ಜರ್ಮನಿ, ಸ್ವಿಟ್ಜರ್ಲೆಂಡ್, ಯುಎಇ, ಕುವೈತ್, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ನ 400ಕ್ಕೂ ಹೆಚ್ಚು ಅನಿವಾಸಿ ಭಾರತೀಯರು ಗುರು ಮಹೋತ್ಸವ ಸ್ಮರಣೆಯೊಂದಿಗೆ ಸಂಪೂರ್ಣ ಗೀತೆಯನ್ನು ಪಠಿಸಿ ಅನನ್ಯ ಆಧ್ಯಾತ್ಮಿಕ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಕುರುಕ್ಷೇತ್ರದಲ್ಲಿ ಈ ಅಭೂತಪೂರ್ವ ಕಾರ್ಯಕ್ರಮವು ಮೈಸೂರಿನ ಅವಧೂತ ದತ್ತಪೀಠದ ಪೀಠಾಧಿಪತಿ ಪೂಜ್ಯ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ಕಿರಿಯ ಶ್ರೀಗಳಾದ ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ ಸಾನ್ನಿಧ್ಯದಲ್ಲಿ ನೆರವೇರಿತು. ಹರಿಯಾಣ ರಾಜ್ಯಪಾಲರಾದ ಬಂಡಾರು ದತ್ತಾತ್ರೇಯ ಅವರು ಕಾರ್ಯಕ್ರಮನ್ನು ಉದ್ಘಾಟಿಸಿ, ಶ್ರೀಗಳ ಆಶೀರ್ವಾದ ಪಡೆದರು. ಕುರುಕ್ಷೇತ್ರ ಯುದ್ಧ ನಡೆದಾಗ ಭಗವಾನ್ ಶ್ರೀಕೃಷ್ಣನು ತನ್ನ ಅತ್ಯಾಪ್ತ ಪ್ರಿಯ ಭಕ್ತ ಅರ್ಜುನನಿಗೆ ಬೋಧಿಸಿದ ಗೀತೆ ಹುಟ್ಟಿದ ಪುಣ್ಯ ಸ್ಥಳ ಈಗಿನ ಹರಿಯಾಣ ರಾಜ್ಯದ ಕುರುಕ್ಷೇತ್ರ ನಗರ. ಇಂದು ಇದೇ ನಗರದಲ್ಲಿ ಗೀತ ಪಠನ ಕಾರ್ಯಕ್ರಮ ನಡೆದಿರುವುದು ನಮ್ಮ ನಗರ ಹಾಗೂ ದೇಶದ ಪುಣ್ಯ ಎಂದು ಗಣ್ಯರು ಬಣ್ಣಿಸಿದರು.

ಇಂತಹ ಅಪೂರ್ವ ಗೀತಾ ಕಂಠಸ್ಥ ಮಾಡಿಸಲು ಪೂಜ್ಯ ಶ್ರೀ ಸ್ವಾಮೀಜಿಯವರ ದರ್ಶನವಾದ ಎಸ್‌ಜಿಎಸ್ ಗೀತಾ ಪ್ರತಿಷ್ಠಾನವು ಶ್ರಮಿಸುತ್ತಿರುವುದು ನಿಜಕ್ಕೂ ಸ್ವಾಗತಾರ್ಹ, ಈ ಮೂಲಕ ಗೀತೆಯನ್ನು ನಾವು ಆಲಿಸುತ್ತಿರುವುದು ನಮ್ಮ ಪುಣ್ಯ ಎಂದು ಕೊಂಡಾಡಿದರು.

ಅಪರಾಧ ಕುರಿತ ಜಾಗೃತಿಗಾಗಿ ಮೈಸೂರಲ್ಲಿ ಪೊಲೀಸರ 5 ಕಿ.ಮೀ. ನಡಿಗೆ-ಓಟ



ಅಪರಾಧ ತಡೆ ಮಾಸಾಚರಣೆ ಅಂಗವಾಗಿ ನಗರ ಪೊಲೀಸ್ ಘಟಕದ ವತಿಯಿಂದ ಮೈಸೂರಲ್ಲಿ ಆಯೋಜಿಸಿದ್ದ 5 ಕಿ.ಮೀ. ನಡಿಗೆ ಮತ್ತು ಓಟಕ್ಕೆ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಾಗೃತಿ ನಡಿಗೆಗೆ ಹಸಿರು ನಿಶಾನೆ ತೋರಿದರು.

ಮೈಸೂರು,ಡಿ.25(ಆರ್‌ಕೆ) –ಅಪರಾಧ ತಡೆ ಮಾಸಾಚರಣೆ ಅಂಗವಾಗಿ ನಗರ ಪೊಲೀಸ್ ಘಟಕದ ವತಿಯಿಂದ ಮೈಸೂರಲ್ಲಿ ಇಂದು 5 ಕಿ.ಮೀ. ನಡಿಗೆ ಮತ್ತು ಓಟ ಆಯೋಜಿಸಲಾಗಿತ್ತು.

ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಾಗೃತಿ ನಡಿಗೆಗೆ ಹಸಿರು ನಿಶಾನೆ ತೋರಿದರು. ನಡಿಗೆ ಮತ್ತು ಓಟವು ಕೆ.ಆರ್.ಸರ್ಕಲ್, ಡಿ.ದೇವರಾಜ ಅರಸು ರಸ್ತೆ, ಜೆಎಲ್‌ಬಿ ರಸ್ತೆ, ರಾಮಸ್ವಾಮಿ ಸರ್ಕಲ್, ಚಾಮರಾಜ ಜೋಡಿ ರಸ್ತೆ, ಗನ್ ಹೌಸ್ ಸರ್ಕಲ್, ಹಾರ್ಡಿಂಗ್ ಸರ್ಕಲ್ ಮಾರ್ಗವಾಗಿ ಮರಳಿ ಶ್ರೀ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಅಂತ್ಯಗೊಂಡಿತು.

ಈ ಸಂದರ್ಭ ಮಾತನಾಡಿದ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಯುವಪೀಳಿಗೆ ಅಪರಾಧ ಕೃತ್ಯಗಳಲ್ಲಿ ನಿರತರಾಗುತ್ತಿರುವುದು ವಿಪರ್ಯಾಸ. ಇತ್ತೀಚೆಗೆ ಸೈಬರ್ ಸ್ವರೂಪದ ಅಪರಾಧ ಪ್ರಕರಣಗಳಲ್ಲಿ ಬುದ್ಧಿವಂತರು, ವಿದ್ಯಾವಂತರು ಭಾಗಿಯಾಗುತ್ತಿರುವುದು ಕಂಡುಬರುತ್ತಿದೆ ಎಂದರು. ಮಕ್ಕಳು, ಮಹಿಳೆಯರ ಮೇಲಿನ ದೌರ್ಜನ್ಯ, ವಂಚನೆ ಪ್ರಕರಣಗಳು ದಾಖಲಾಗುತ್ತಿದ್ದು, ಸಾರ್ವಜನಿಕರು ಅಪರಾಧ ತಡೆ ಮತ್ತು ಪತ್ತೆಗೆ ಪೊಲೀಸರೊಂದಿಗೆ ಸಹಕರಿಸಬೇಕು. ಮಹಿಳೆಯರು, ಅಪ್ರಾಪ್ತ ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಪೊಲೀಸರು ಕಾರ್ಯನಿರತರಾಗಿದ್ದು, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನಗರ ಪೊಲೀಸ್ ಆಯುಕ್ತರು ಎಚ್ಚರಿಕೆ ನೀಡಿದ್ದಾರೆ.

ಸೀಮಾ ಲಾಟ್ಕರ್ ಅವರೊಂದಿಗೆ ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ, ಮಾರುತಿ, ಎಸಿಪಿಗಳಾದ ಸಂದೇಶ್‌ಕುಮಾರ್, ಎಸ್.ಜಿ.ಗಜೇಂದ್ರ ಪ್ರಸಾದ್, ಅಶ್ವಥ ನಾರಾಯಣ, ಎಲ್ಲಾ ಠಾಣೆಗಳ ಇನ್‌ಸ್ಪೆಕ್ಟರ್, ಸಬ್‌ಇನ್‌ಸ್ಪೆಕ್ಟರ್, ಪೊಲೀಸ್ ಸಿಬ್ಬಂದಿ, ಸಿಟಿ ಸಿವಿಲ್, ಟ್ರಾಫಿಕ್, ಫಿಂಗರ್ ಪ್ರಿಂಟ್ಸ್ ಯೂನಿಟ್, ಸಿಎಆರ್, ಕೆಎಸ್‌ಆರ್‌ಪಿ, ಶ್ವಾನದಳದ ಸಿಬ್ಬಂದಿ ಅಪರಾಧ ತಡೆ ಜಾಗೃತಿ ನಡಿಗೆಯಲ್ಲಿ ಪಾಲ್ಗೊಂಡಿದ್ದರು. ಡೆಕತ್ಲಾನ್ ಈ ಕಾರ್ಯಕ್ರಮ ಆಯೋಜಿಸಿತ್ತು.

ಒಳಚರಂಡಿ ಕಾಮಗಾರಿಗೆ ಶಾಸಕ ಕೆ.ಹರೀಶ್‌ಗೌಡರಿಂದ ಗುದ್ದಲಿಪೂಜೆ



ಮೈಸೂರು ಮಹಾನಗರಪಾಲಿಕೆಯ ಚಾಮರಾಜ ಕ್ಷೇತ್ರದ ವಾರ್ಡ್ ನಂ.1ರ ವ್ಯಾಪ್ತಿಯ ಪಡುವಾರಹಳ್ಳಿ ಅರಳಿಕಟ್ಟೆ ಸನ್ನಿಧಿಯ ಸುತ್ತಮುತ್ತಲಿನ ರಸ್ತೆಗಳ ಒಳಚರಂಡಿ ಕಾಮಗಾರಿಗೆ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಗುದ್ದಲಿಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಪಾಲಿಕೆ ಅಧಿಕಾರಿಗಳು, ಬ್ಲಾಕ್ ಅಧ್ಯಕ್ಷ ರವಿ, ವಾರ್ಡ್ ಅಧ್ಯಕ್ಷೆ ಮಾಲಾ ಜಗದೀಶ್, ಕಾರ್ಯದರ್ಶಿ ರಾಮಚಂದ್ರು, ಸ್ಥಳೀಯ ಮುಖಂಡರಾದ ರಮೇಶ್, ಮಹೇಶ್, ವೆಂಕಟೇಶ್, ತನುಜಾ ಮಹೇಶ್, ಹೆಬ್ಬಾಳ್ ವಿಜಿ, ಗೋವಿಂದನ್, ಶಿವಣ್ಣ, ಆರ್.ರವಿ ಸೇರಿದಂತೆ ಕಾರ್ಯಕರ್ತರು, ಬಡಾವಣೆ ನಿವಾಸಿಗಳು ಉಪಸ್ಥಿತರಿದ್ದರು.

ಆಟೋ ಚಾಲಕರಿಗೆ ಹೊದಿಕೆ ವಿತರಣೆ



ಮೈಸೂರಿನ ಚಾಮರಾಜ ಕ್ಷೇತ್ರದ ಸದ್ಭಾವನಾ ಯುವಕರ ಸಂಘದ ವತಿಯಿಂದ ಚಿಕ್ಕ ಗಡಿಯಾರ ವೃತ್ತದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನಾಚರಣೆ ಅಂಗವಾಗಿ ಆಟೋ ಚಾಲಕರಿಗೆ ಹೊದಿಕೆ ವಿತರಿಸಲಾಯಿತು. ಮಾಜಿ ಸಂಸದ ಪ್ರತಾಪ್ ಸಿಂಹ, ನಾರಾಯಣಗೌಡ, ಎಂ.ಡಿ.ಗೋಪಿನಾಥ್, ಸತೀಶ್, ಬಾಲಣ್ಣ, ಸೋಮಶೇಖರ್ ರಾಜು, ಸಂಜಯ್‌ಗೌಡ, ರಾ.ಪರಮೇಶಗೌಡ, ಸುರೇಂದ್ರ, ನಾಗೇಶ್ ಯಾದವ್, ಶ್ರವಣ್, ಕಿರಣ್, ಬೆಳಕು ಮಂಜು, ಪ್ರಮೋದ್‌ಗೌಡ, ವಿನೋದ್, ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

ಡಿ.29, ವಿಶೇಷ ಕಾರ್ಯಾಗಾರ

ಮೈಸೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಡಿ.29ರಂದು ಯುವಜನತೆಯನ್ನು ಸಶಕ್ತಗೊಳಿಸುವ ನಿಟ್ಟಿನಲ್ಲಿ ಒತ್ತಡವನ್ನು ಹೇಗೆ ನಿರ್ವಹಿಸಬೇಕು ಮತ್ತು ಯುವ ಜನತೆಗೆ ಸಂಬಂಧಿಸಿದ ವಿಷಯ ಕುರಿತು ಪೋಷಕರಿಗೆ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಮೈಸೂರು ಜಿಲ್ಲೆಯ ಪೋಷಕರು ಸದರಿ ಕಾರ್ಯಾಗಾರದಲ್ಲಿ ಭಾಗವಹಿಸಿ ಪ್ರಯೋಜನವನ್ನು ಪಡೆದುಕೊಳ್ಳಬಹುದು. ಮೊದಲು ಬಂದ 50 ಪಾಲಕರು/ಪೋಷಕರಿಗೆ (ಕುಟುಂಬದಲ್ಲಿ ಒಬ್ಬರಿಗೆ ಮಾತ್ರ) ಆದ್ಯತೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ದೂ.ಸಂ:0821-2564179, ಯುವ ಸ್ಪಂದನ ಕೇಂದ್ರದ ದೂ.ಸಂ: 0821-2444922, ಯುವ ಸ್ಪಂದನ ಕೇಂದ್ರದ ಕ್ಷೇತ್ರ ಸಂಪರ್ಕಾಧಿಕಾರಿ ಬಿ.ಸಿ.ಆನಂದ ಅವರ ಮೊ.ಸಂ: 9632104204 ಅನ್ನು ಸಂಪರ್ಕಿಸಬಹುದು.

ಸಿದ್ದರಾಮಯ್ಯ ಏನೇ ಹೇಳಲಿ ಗ್ಯಾರಂಟಿ ಅನುಷ್ಠಾನಕ್ಕೂ ಹಣದ ಕೊರತೆ ಇದ್ದೇ ಇದೆ

● ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕೆ ● ಅವರದೇ ಪಕ್ಷದ ಶಾಸಕರ ಹತಾಶೆ ಹೇಳಿಕೆಯಿಂದಲೇ ಪರಿಸ್ಥಿತಿ ಅನಾವರಣ



ಕಾರ್ಯಕ್ರಮದಲ್ಲಿ ಬಿ.ವೈ.ವಿಜಯೇಂದ್ರ ಮಾತನಾಡಿದರು.

ಬೆಂಗಳೂರು,ಡಿ.25(ಕೆಎಂಶಿ)–'ಆಲ್ ಈಸ್ ವೆಲ್' ಎಂಬುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಷಣ ಬಿಗಿಯುತ್ತಾರೆ, ಸತ್ಯ ಸಂಗತಿಯೆಂದರೆ ಗ್ಯಾರಂಟಿಗಳ ಅನುಷ್ಠಾನಕ್ಕೂ ಹಣಕಾಸಿನ ಕೊರತೆ ಎದ್ದು ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದ್ದಾರೆ.

ಕಾಂಗ್ರೆಸ್ ಸರ್ಕಾರಕ್ಕೆ ನೌಕರರಿಗೆ ಸಂಬಳ ಕೊಡಲೂ ಆಗುತ್ತಿಲ್ಲ, ಆಡಳಿತ ಪಕ್ಷದ ಶಾಸಕ ರಾಜುಕಾಗೆ ತಮ್ಮದೇ ಸರ್ಕಾರಕ್ಕೆ ಛೀಮಾರಿ ಹಾಕಿದ್ದಾರೆ. ಬೆಳಗಾವಿ ಘಟನೆ ನೋಡಿದ್ದೀರಿ, ವಿವಿಧ ಜಿಲ್ಲೆಗಳಲ್ಲಿ ಬಾಣಂತಿಯರ ಸಾವು ಸಂಭವಿಸುತ್ತಿದೆ, ತೊಗರಿ ಬೆಳೆದ ರೈತರು ಕಂಗಾಲಾಗಿದ್ದಾರೆ, ಸರ್ಕಾರ ಬೆಳೆ ಹಾನಿ ಪರಿಶೀಲನೆಗೆ ಸಿದ್ಧವಿಲ್ಲ, ಪರಿಹಾರ ಕೊಡಲೂ ಹಣ ಇಲ್ಲ. ರಾಜ್ಯದ ಹಣಕಾಸಿನ ದುಸ್ಥಿತಿ ಒಂದೆಡೆಯಾದರೆ, ನೆರೆಯ ತೆಲಂಗಾಣ ರಾಜ್ಯದಲ್ಲೂ ಕಾಂಗ್ರೆಸ್ ಸರ್ಕಾರದ ಸ್ಥಿತಿ ಇದಕ್ಕಿಂತ ಭಿನ್ನವಾಗಿಲ್ಲ. ಅಲ್ಲಿನ ಮುಖ್ಯಮಂತ್ರಿ, ಗ್ಯಾರಂಟಿ ಈಡೇರಿಸಲು ಅಸಾಧ್ಯ ಎಂಬ ಹೇಳಿಕೆ ಕೊಟ್ಟಿದ್ದಾರೆ ಎಂದರು.

ಮಾಜಿ ಪ್ರಧಾನಿ, ಭಾರತರತ್ನ ಅಟಲ್ ಬಿಹಾರಿ ವಾಜಪೇಯಿ ಅವರ 100ನೇ ಜನ್ಮದಿನ ಹಾಗೂ ಸುಶಾಸನ ದಿನದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಬಿಜೆಪಿ ಸುಭದ್ರವಾಗಿ ಬೆಳೆದು ನಿಲ್ಲಲು ಲಕ್ಷಾಂತರ ಕಾರ್ಯಕರ್ತರ ಹಾಗೂ ನಾಯಕರ ಅವಿರತ ಶ್ರಮ ಕಾರಣ ಎಂದರು.

ಬಿಜೆಪಿ ಕಾರ್ಯಾಲಯ ಕಟ್ಟಡ ಕಾಣುತ್ತಿದೆ, ಪಕ್ಷ ಬೆಳೆದು ನಿಂತಿರುವುದು ಗೋಚರಿಸುತ್ತಿದೆ. ಆದರೆ, ಅದಕ್ಕೆ ಹಾಕಿದ ಅಡಿಪಾಯದ ಶ್ರಮ ಕಣ್ಣಿಗೆ ಕಾಣಿಸದು. ಅಟಲ್, ಅಡ್ವಾಣಿ, ಮೋದಿ, ಅಮಿತ್ ಶಾ, ನಡ್ಡಾ ಅವರ ಶ್ರಮವನ್ನು ನೆನಪಿಸಿಕೊಳ್ಳಬೇಕು, ಬೂತ್‌ಮಟ್ಟದ ಕಾರ್ಯಕರ್ತರೂ ದೇಶ ಮುನ್ನಡೆಸುವ ಪ್ರಧಾನಿ ಸ್ಥಾನಕ್ಕೆ ಬೆಳೆದು ನಿಲ್ಲುವ ಅವಕಾಶ ಬಿಜೆಪಿಯಲ್ಲಿ ಮಾತ್ರ ಸಾಧ್ಯ. ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಆಶಯದಂತೆ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನವನ್ನು ಸುಶಾಸನ ದಿನವನ್ನಾಗಿ ದೇಶ ಮತ್ತು ರಾಜ್ಯದ ಎಲ್ಲ ಬೂತ್‌ಮಟ್ಟದಲ್ಲೂ ಆಚರಿಸಲಾಗುತ್ತಿದೆ.

ಜೆ.ಎಚ್.ಪಟೇಲ್ ಮುಖ್ಯಮಂತ್ರಿಯಾಗಿದ್ದಾಗ ಯಡಿಯೂರಪ್ಪ ವಿರೋಧಪಕ್ಷದ ನಾಯಕರಾಗಿದ್ದರು, ಆಗ ಅವರ ನಿವಾಸಕ್ಕೆ ವಾಜಪೇಯಿ ಹಲವು ಬಾರಿ ಆಗಮಿಸಿದ್ದರು. ಶಾಸಕರಿಗೆ ಮಾರ್ಗದರ್ಶನ ನೀಡುತ್ತಿದ್ದರು. ಶಿಕಾರಿಪುರಕ್ಕೂ ಭೇಟಿ ನೀಡಿದ್ದರು ಎಂದು ಸ್ಮರಿಸಿದರು.

ಜೆ.ಎಚ್.ಪಟೇಲ್ ಸರ್ಕಾರದ ವಿರುದ್ಧ 1999ರಲ್ಲಿ ಯಡಿಯೂರಪ್ಪ, ಅನಂತಕುಮಾರ್, ರಾಮಚಂದ್ರಗೌಡ, ಶಂಕರಮೂರ್ತಿ ಮೊದಲಾದವರ ನೇತೃತ್ವದಲ್ಲಿ ಜನಾಂದೋಲನ ನಡೆದಿತ್ತು. ಹುಬ್ಬಳ್ಳಿ ಸಮಾವೇಶದಲ್ಲಿ ಒಂದೂವರೆ ಲಕ್ಷದಿಂದ 2 ಲಕ್ಷದಷ್ಟು ಜನಸ್ತೋಮ ಸೇರಿತ್ತು.

ದೊಡ್ಡ ಸಮಾವೇಶ ಉದ್ದೇಶಿಸಿ ವಾಜಪೇಯಿ ಭಾಷಣ ಮುಗಿಸಿ ಹೆಲಿಕಾಪ್ಟರ್ ಏರುವ ಮುನ್ನ ಯಡಿಯೂರಪ್ಪ ಅವರನ್ನು ಬಾಚಿ ಅಪ್ಪಿಕೊಂಡಿದ್ದರು. ವಾಜಪೇಯಿ ಅವರೆಂದರೆ ಒಂದು ರೀತಿ ರೋಮಾಂಚನ. ವಾಜಪೇಯಿ ಅವರ ಜೊತೆಗಿದ್ದು ಪಕ್ಷ ಸಂಘಟನೆ ಮಾಡಿದ ಅನೇಕ ಹಿರಿಯರು ಇಂದು ವೇದಿಕೆ ಮೇಲಿದ್ದಾರೆ, ವಾಜಪೇಯಿ ಒಬ್ಬ ಶ್ರೇಷ್ಠ ನಾಯಕ ಎಂದು ಗುಣಗಾನ ಮಾಡಿದರು. ನಮ್ಮ ವೈಯಕ್ತಿಕ ಸಮಸ್ಯೆ, ವ್ಯತ್ಯಾಸಗಳನ್ನು ಬದಿಗಿಟ್ಟು ರಾಜ್ಯ, ಪಕ್ಷ ಹಾಗೂ ಕಾರ್ಯಕರ್ತರ ಹಿತದೃಷ್ಟಿಯಿಂದ ಎಲ್ಲರೂ ಒಗ್ಗಟ್ಟಾಗಿ ಪಕ್ಷ ಸಂಘಟನೆಯ ಸನ್ಮಾರ್ಗದಲ್ಲಿ ಸಾಗಬೇಕಿದೆ ಎಂದರು.

ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ

9 ತಿಂಗಳಾದರೂ ಚಾರ್ಜ್‌ಶೀಟ್ ಸಲ್ಲಿಸದ ಪೊಲೀಸರ ನಡೆಗೆ ಯತ್ನಾಳ್ ಖಂಡನೆ



ಬೆಂಗಳೂರು,ಡಿ.25–ರಾಜ್ಯಸಭೆ ಚುನಾವಣೆ ವೇಳೆ ವಿಧಾನಸೌಧದಲ್ಲೇ ಪಾಕಿಸ್ತಾನ ಪರ ಘೋಷಣೆ ಕೂಗಿದ್ದ ವಿಚಾರ ಮತ್ತೆ ಮುನ್ನಲೆಗೆ ಬಂದಿದ್ದು, ಪ್ರಕರಣ ನಡೆದು 9 ತಿಂಗಳು ಕಳೆದರೂ ಇನ್ನೂ ಚಾರ್ಜ್‌ಶೀಟ್ ಸಲ್ಲಿಸದಿದ್ದಕ್ಕೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ನಾಸಿರ್ ಹುಸೈನ್, ರಾಜ್ಯಸಭಾ ಚುನಾವಣೆಯಲ್ಲಿ ಗೆದ್ದ ಸಂದರ್ಭದಲ್ಲಿ ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದವರ ಮೇಲೆ ಪೊಲೀಸರು ದೋಷಾರೋಪಣಾ ಪಟ್ಟಿ ದಾಖಲು ಮಾಡಲು ಮೀನಾಮೇಷ ಎಣಿಸುತ್ತಿರುವುದು ನಿಜಕ್ಕೂ ಖಂಡನೀಯ. ದೇಶದ ವಿರುದ್ಧ ಯಾರೇ ಮಾತಾಡಿದರೂ ಅವರ ಮೇಲೆ ಮುಲಾಜಿಲ್ಲದೆ ಕೇಸು ದಾಖಲಿಸಿ ಶಿಕ್ಷೆ ಕೊಡಿಸಬೇಕಾದದ್ದು ಪೊಲೀಸರ ಕರ್ತವ್ಯ ಎಂದಿದ್ದಾರೆ. ಪ್ರಕರಣ ನಡೆದು 9 ತಿಂಗಳಾದರೂ ದೋಷಾರೋಪಣಾ ಪಟ್ಟಿ ಸಲ್ಲಿಸದಿರುವುದು ಯಾರ ಒತ್ತಡ, ಪ್ರಭಾವದ ಮೇಲೆ ಎಂದು ಪೊಲೀಸರು ತಿಳಿಸಬೇಕು. ಪ್ರಕರಣದಲ್ಲಿ ಎಲ್ಲರ ಹೇಳಿಕೆ ಪಡೆದು ಕೂಡಲೇ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು. ದೇಶ ವಿರೋಧಿ ಘೋಷಣೆ ಕೂಗಿದವರಿಗೆ ಶಿಕ್ಷೆ ಆಗುವಂತೆ ಪೊಲೀಸರು ನೋಡಿಕೊಳ್ಳಬೇಕು ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಸದಸ್ಯ ನಾಸಿರ್ ಹುಸೇನ್ ಗೆಲುವು ಸಾಧಿಸುತ್ತಿದ್ದಂತೆ, ಸಂತಸಗೊಂಡ ಅವರ ಬೆಂಬಲಿಗರು ವಿಧಾನಸೌಧದ ಆವರಣದಲ್ಲಿ 'ಪಾಕಿಸ್ತಾನ್ ಜಿಂದಾಬಾದ್' ಎಂದು ಘೋಷಣೆ ಕೂಗಿದ್ದರು. ಈ ಸಂಬಂಧ ಮೂವರು ಆರೋಪಿಗಳನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿತ್ತು. ನಂತರ ಆರೋಪಿಗಳು ಜಾಮೀನು ಪಡೆದು ಬಿಡುಗಡೆ ಆಗಿದ್ದರು. ಘಟನೆ ನಡೆದು 9 ತಿಂಗಳು ಕಳೆದಿದ್ದರೂ, ಪ್ರಕರಣಕ್ಕೆ ಸಂಬಂಧಿಸಿ ಪೊಲೀಸರು ನ್ಯಾಯಾಲಯಕ್ಕೆ ಇನ್ನೂ ದೋಷಾರೋಪ ಪಟ್ಟಿಯನ್ನು ಸಲ್ಲಿಸಿಲ್ಲ. ಅಲ್ಲದೇ ಈವರೆಗೆ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಹೇಳಿಕೆಯನ್ನೂ ಪಡೆಯಲು ಪೊಲೀಸರಿಗೆ ಸಾಧ್ಯವಾಗಿಲ್ಲ ಎಂದು ಹೇಳಲಾಗುತ್ತಿದೆ.

ಮೈಸೂರಲ್ಲಿ ಕಿಡ್ಸ್ ಅಥ್ಲೆಟಿಕ್ಸ್ ಮೀಟ್-2024



ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಕಿಡ್ಸ್ ಅಥ್ಲೆಟಿಕ್ಸ್ ಮೀಟ್-2024 ಕ್ರೀಡಾಕೂಟ ಜರುಗಿತು.

ಮೈಸೂರು, ಡಿ. 25– ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಎಕ್ಸ್ಟ್ರೋನ್ಸ್ ಸ್ಪೋರ್ಟ್ಸ್, ಡೆಕಥ್ಲಾನ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗ ಹಾಗೂ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು ಸಹಯೋಗದಲ್ಲಿ ಕಿಡ್ಸ್ ಅಥ್ಲೆಟಿಕ್ಸ್ ಮೀಟ್ –2024 ಕ್ರೀಡಾಕೂಟ ಜರುಗಿತು.

ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು ಅಧ್ಯಕ್ಷ ರೊ.ಆರ್.ರಾಜೇಶ್ ಕ್ರೀಡಾಕೂಟ ಉದ್ಘಾಟಿಸಿದರು. ಕ್ಲಬ್‌ನ ಸದಸ್ಯ ರೊ.ಬಾಲಸುಬ್ರಹ್ಮಣ್ಯ (ಬಾಲು), ಪಾಲಿಕೆ ಮಾಜಿ ಸದಸ್ಯ ಜಿ.ಸತ್ಯರಾಜ್, ಅಂತರರಾಷ್ಟ್ರೀಯ ಖ್ಯಾತಿಯ ಕ್ರೀಡಾಪಟು ಆದ ರೀಮಾ ಜೋನ್ಸ್, ಎಕ್ಸ್ಟ್ರೋನ್ಸ್ ಸ್ಪೋರ್ಟ್ಸ್‌ನ ಮುಖ್ಯ ತರಬೇತುದಾರ ಮತ್ತು ರೋಟರಿ ಕ್ಲಬ್ ಆಫ್ ಹೆರಿಟೇಜ್‌ನ ಸದಸ್ಯ ರೊ.ಸಾಗರ್, ಡೆಕಥ್ಲಾನ್‌ನ ವ್ಯವಸ್ಥಾಪಕ ಮಂಜುನಾಥ್, ಅಂಥೋನಿ ಮೆಸಸ್ ಭಾಗವಹಿಸಿದ್ದರು.


ರೋಟರಿ ಕ್ಲಬ್ ಆಫ್ ಹೆರಿಟೇಜ್‌ನ ಅಧ್ಯಕ್ಷ ರೊ.ಆರ್.ರಾಜೇಶ್ ಮಾತನಾಡಿ, ಮಕ್ಕಳು ಜಿಲ್ಲಾ, ರಾಜ್ಯ, ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ನಮ್ಮ ಭಾರತವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಾಗಿ ನಮ್ಮ ದೇಶಕ್ಕೆ ಹೆಮ್ಮೆ ತರುವಂತಹ ಸಾಧನೆ ಮಾಡಬೇಕು. ಜೊತೆಗೆ ವಿಜೇತರಾದ ಕ್ರೀಡಾಪಟುಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಕ್ಲಬ್‌ನ ಸದಸ್ಯ ರೊ.ದರ್ಶನ್, ಶ್ರೀನಿವಾಸ್ ದವನವ್, ರೊ.ಸಾಗರ್, ರೊ.ವಿನಯ್ ಕುಮಾರ್ ಮತ್ತು ರೊ.ಬಾಲಸುಬ್ರಹ್ಮಣ್ಯ (ಬಾಲು), ರೊ.ನಾರಾಯಣ್ ನಾಯಕ್, ರೊ.ರಾಘವೇಂದ್ರ ಆಚಾರ್, ರೊ.ಶಿವಕುಮಾರ್, ಶ್ರೀಮತಿ ಶಿಲ್ಪಾ, ಕ್ಲಬ್‌ನ ಮಾಜಿ ಅಧ್ಯಕ್ಷ ರೊ.ವೆಂಕಟೇಶ್ ಎಚ್.ಎಂ. ಇತರರು ಭಾಗವಹಿಸಿದ್ದರು.

ಚೆಸ್ ಟೂರ್ನಿ: ಈಶ್ವರ್ ಅಯ್ಯಪ್ಪನ್‌ಗೆ ಮೊದಲ ಸ್ಥಾನ



ಮೈಸೂರು: ಕರ್ನಾಟಕ ದಸರಾ ವಸ್ತುಪ್ರದರ್ಶನ ಮಹಿಳಾ ಮತ್ತು ಮಕ್ಕಳ ಉಪಸಮಿತಿ ಹಾಗೂ ಪ್ರವಾಸೋದ್ಯಮ ಇಲಾಖೆ ಸಹಯೋಗದಲ್ಲಿ ವಸ್ತುಪ್ರದರ್ಶನ ಪ್ರಾಧಿಕಾರದ ಪಿ.ಕಾಳಿಂಗ ರಾವ್ ಗಾನಮಂಟಪದಲ್ಲಿ ನಡೆದ ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿ 6ರಿಂದ 12 ವರ್ಷದೊಳಗಿನ ವಿಭಾಗದಲ್ಲಿ ಮೈಸೂರಿನ ಈಶ್ವರ್ ಅಯ್ಯಪ್ಪನ್ ಮೊದಲ ಸ್ಥಾನ ಗಳಿಸಿದ್ದಾರೆ. ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 150ಕ್ಕೂ ಹೆಚ್ಚು ಸ್ಪರ್ಧಿಗಳು ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.12.2024 ಗುರುವಾರ, ಮಳೆ ನಕ್ಷತ್ರ: ಮೂಲ, 16.12.2024 ರಿಂದ 28.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಧನುರ್ಮಾಸ, ಕೃಷ್ಣ ಪಕ್ಷ, ತಿಥಿ: ಏಕಾದಶಿ, ನಕ್ಷತ್ರ: ಸ್ವಾತಿ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹತೋಬಾರ ಶ್ರೀ ಧರ್ಮ ಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ (ಬೆಂಗಳೂರು), ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ :** ಬೆಂಗಳೂರು ಮಹಾರಾಣಿ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೆ.ಎಸ್. ಶ್ರೀಧರನ್ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಸನಾತನ ಸಭಾ, ಜಯನಗರ, ಸಂಜೆ 6.15ರಿಂದ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕಿ, ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ವಿದ್ವನ್ಮಣಿ, ದರ್ಶನ ವಾರಿಧಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ.

■ **ನಿರಂತರ ಫೌಂಡೇಷನ್ :** ನಿರಂತರ ರಂಗ ಉತ್ಸವ, ಸಂಜೆ 5.30ಕ್ಕೆ ಅಭಿನವ ವೀರಭದ್ರೇಶ್ವರ ತಂಡದಿಂದ ವೀರಗಾಸೆ ಜನಪದ ನೃತ್ಯ, ಸಂಜೆ 6.15ಕ್ಕೆ ಉದ್ಘಾಟನಾ ಸಮಾರಂಭ, ಉಪಸ್ಥಿತರು : ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ನಿರ್ದೇಶಕರಾದ ಶ್ರೀಮತಿ ಧರಣಿದೇವಿ ಮಾಲಗತ್ತಿ, ನಿರಂತರ ನಿರ್ದೇಶಕ ಪ್ರಸಾದ್ ಕುಂದೂರು, ಸಂಜೆ 7ಕ್ಕೆ ನಿರ್ದಿಗಂತ ಕೆ. ಶೆಟ್ಟಿಹಳ್ಳಿ (ಶ್ರೀರಂಗಪಟ್ಟಣ) ಅಭಿನಯದ ತಿಂಡಿಗೆ ಬಂದ ತುಂಡೇರಾಯ ನಾಟಕ ಪ್ರದರ್ಶನ, ರಚನೆ : ಬರ್ಟೋಲ್ಟ್ ಬ್ರೆಕ್ಟ್, ನಿರ್ದೇಶನ : ಶಕೀಲ್ ಅಹಮದ್, ಸ್ಥಳ: ಕಿರುರಂಗ ಮಂದಿರ, ರಂಗಾಯಣ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜಿ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ಮೈಸೂರು ಅರಮನೆ ಮಂಡಳಿ:** ಬೆಳಗ್ಗೆ 10 ರಿಂದ ಅರಮನೆ ಫಲಪುಷ್ಪ ಪ್ರದರ್ಶನ–2024, ಸಂಜೆ 7 ರಿಂದ ಅರಮನೆ ವಿದ್ಯುತ್ ದೀಪಾಲಂಕಾರ, ಸ್ಥಳ: ಮೈಸೂರು ಅರಮನೆ ಆವರಣ.

■ **ವಿದ್ಯುಲ್ಲಹರಿ :** ಡಾ. ರಾಜ್ ಹಾಗೂ ಡಾ. ವಿಷ್ಣುರವರ ಚಲನಚಿತ್ರಗೀತೆಗಳ ಗೀತೋತ್ಸವ, ಸಾರಥ್ಯ: ವಿದ್ಯುಲ್ಲಹರಿ ವ್ಯವಸ್ಥಾಪಕ ಪ್ರೊ. ಎಂ.ಡಿ. ಶ್ರೀನಿವಾಸ್, ಉಪಸ್ಥಿತರು : ಕರ್ನಾಟಕ ಸುಗಮ ಸಂಗೀತ ಪರಿಷತ್, ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಡಾ. ನಾಗರಾಜ್ ವಿ. ಭೈರಿ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸ್ಥಳ: ನಾದಬ್ರಹ್ಮ ಸಂಗೀತ ಸಭಾಂಗಣ, ನಂಜು ಮಳಿಗೆ ಸರ್ಕಲ್ ಹತ್ತಿರ, ಸಂಜೆ 5ಕ್ಕೆ.

■ **ಸುಪ್ರಭ ನಾಗೇಶ್‌ರಾವ್ ಸೇವಾ ಪ್ರತಿಷ್ಠಾನ :** 5ನೇ ವರ್ಷದ ಪ್ರಸ್ತುತಿ ವಿಶ್ವ ಶಾಂತಿಗಾಗಿ ವಿಷ್ಣು ಸಹಸ್ರನಾಮ ಪಾರಾಯಣ, ಸ್ಥಳ: #622, 2ನೇ ಮೇನ್, 2ನೇ ಕ್ರಾಸ್, ಶಾರದಾದೇವಿನಗರ, ಬೆಳಗ್ಗೆ 5 ರಿಂದ ರಾತ್ರಿ 10 ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ. ಹೆಚ್. ಎಂ. ಕಲಾಶ್ರೀ, 6.15 ಗೀತಾರಾಧನ, 6.35 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಹಂಸಿನಿ. ಎಸ್.ಕುಮಾರ್, ಎಂ.ಎಸ್. ಲಕ್ಷ್ಮೀಶ, ವ್ಯಾಖ್ಯಾನ–ಡಾ. ಹೆಚ್.ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು –ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ರಂಜನಿ, ಗಾಯತ್ರಿ–ಯುಗಳ ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ : ಜಿ. ಶಾಂತಕುಮಾರ್

ಮಧ್ಯಾಹ್ನ: 12.35ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಕನ್ನಡ ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ಕನ್ನಡ ಭಾರತಿ, 6.10 ಸೀರೆಯ ಸೊಬಗು –ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ : ಜಯಶ್ರೀ ಹೆಗಡೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ಆಹಾರ ಇಂಜಿನಿಯರಿಂಗ್ ತಾಂತ್ರಿಕತೆಗಳು ಈ ಕುರಿತು ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾ ಸಂಸ್ಥೆಯ ವಿಜ್ಞಾನಿ ಗಿರೀಶ್ ಘಿವಾರಿ ಅವರೊಂದಿಗೆ ಸಂದರ್ಶನ, ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ–ಮೈಸೂರಿನ ಸರ್ಕಾರಿ ಶಿಕ್ಷಕರ ಶಿಕ್ಷಣ ಕಾಲೇಜಿನ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ವೈವಿಧ್ಯ (ಭಾಗ – 01), 9.30 ಕನ್ನಡ ಭಾರತಿ, 10.00 ನಾಟಕ 'ಮೈಲಿಗೆ', ರಚನೆ–ತ್ರಿಪುರಾಂತಕ. ಜಿ. ಎಲ್., ನಿರ್ದೇಶನ ಹಾಗೂ ನಿರ್ಮಾಣ– ಪ್ರಭುಸ್ವಾಮಿ ಮಳೀಮಠ್, 10.30 ಸವಿನೆನಪು

ಮೈಸೂರು ಮಿತ್ರ ಗುರುವಾರ 26 ಡಿಸೆಂಬರ್ 2024

ಸಿಎಂಗೆ ನೈತಿಕ ಹೊಣೆಗಾರಿಕೆ ಇಲ್ಲವೇ



ಬೆಂಗಳೂರು: ಮೈಸೂರಿನ ಪ್ರಮುಖ ರಸ್ತೆಯೊಂದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಡುವ ಮಹಾನಗರಪಾಲಿಕೆಯ ಪ್ರಸ್ತಾವನೆಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಈ ವಿಚಾರದಲ್ಲಿ ಸಿಎಂಗೆ ನೈತಿಕ ಹೊಣೆಗಾರಿಕೆಯಿಲ್ಲವೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಪ್ರಶ್ನಿಸಿದ್ದಾರೆ.

ಮೈಸೂರು ಸಾಮ್ರಾಜ್ಯವನ್ನು ರಾಜರು ಮತ್ತು ಆಡಳಿತಗಾರರು ಕಟ್ಟಿ ಬೆಳೆಸಿದರು. ಆದರೆ, ಮಹಾನ್ ರಾಜವಂಶದ ಹೆಸರನ್ನು ಹೊಂದಿರುವ ರಸ್ತೆಗೆ ತಮ್ಮ ಹೆಸರಿಡಲು ಸಿಎಂ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ. ಸದ್ಯ ಚುನಾಯಿತ ಪ್ರತಿನಿಧಿಗಳಿಲ್ಲದ ಮೈಸೂರು ಮಹಾನಗರ ಪಾಲಿಕೆಯು ಇಂತಹ ಪ್ರಮುಖ ನಿರ್ಧಾರ ಕೈಗೊಳ್ಳುವುದು ಎಷ್ಟು ಸಮಂಜಸವಾಗಿದೆ ಎಂದರು.

ಮುಖ್ಯಮಂತ್ರಿ ಅಧಿಕಾರದಲ್ಲಿದ್ದುಕೊಂಡು ತಮ್ಮ ಹೆಸರಿಡಲು ಪ್ರಯತ್ನಿಸುತ್ತಿರುವ ಸಿದ್ದರಾಮಯ್ಯ ಅವರಿಗೆ ನೈತಿಕ ಹೊಣೆಗಾರಿಕೆ ಇಲ್ಲವೇ. ತುಘಲಕ್ ಆಡಳಿತವನ್ನು ನೆನಪಿಸುವ ಆಡಳಿತದಲ್ಲಿ ಮಾತ್ರ ಇಂತಹ ನಡವಳಿಕೆಗಳನ್ನು ಕಾಣಬಹುದು ಎಂದು ಟೀಕಿಸಿದರು.

ಕೆಆರ್‌ಎಸ್ ರಸ್ತೆಯು ಲಕ್ಷ್ಮೀನಾರಾಯಣಸ್ವಾಮಿ ದೇವಸ್ಥಾನದಿಂದ ಮೇಟಗಳ್ಳಿ ರಾಯಲ್ ಜಂಕ್ಷನ್‌ವರೆಗಿನ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ನಾಮಕರಣ ಮಾಡುವ ಪ್ರಸ್ತಾವನೆಗೆ ಮೈಸೂರು ಮಹಾನಗರ ಪಾಲಿಕೆ ಇತ್ತೀಚೆಗೆ ಪತ್ರಿಕೆಗಳಲ್ಲಿ ಜಾಹೀರಾತು ನೀಡಿ ಆಕ್ಷೇಪಣೆಗಳನ್ನು ಆಹ್ವಾನಿಸಿದೆ. ಡಿ.13ರಂದು ಜಾಹೀರಾತು ಪ್ರಕಟವಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು 30 ದಿನಗಳೊಳಗೆ ಲಿಖಿತವಾಗಿ ಸಲ್ಲಿಸಲು ಕೇಳಲಾಗಿದೆ.

ಕಾಂಗ್ರೆಸ್ ಶಾಸಕ ಹರೀಶ್‌ಗೌಡ ಅವರ ಸಲಹೆಯನ್ನು ಆಧರಿಸಿ, ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ) ನವೆಂಬರ್ 22 ರಂದು ನಡೆದ ಸಭೆಯಲ್ಲಿ ಈ ನಿರ್ಧಾರವನ್ನು ತೆಗೆದುಕೊಂಡಿದೆ. ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರು ಆರೋಪಿಯಾಗಿದ್ದು, ಲೋಕಾಯುಕ್ತ ಪೊಲೀಸರಿಂದ ತನಿಖೆ ಎದುರಿಸುತ್ತಿದ್ದಾರೆ. ಹೀಗಿರುವಾಗ ಅವರ ಹೆಸರನ್ನು ಇಡುವುದಕ್ಕೆ ಪ್ರಸ್ತಾವನೆಗೆ ಆಕ್ಷೇಪಣೆಗಳು ಕೇಳಿಬಂದಿವೆ.

ಕೆಆರ್‌ಎಸ್ ರಸ್ತೆಗೆ ಸಿಎಂ ಸಿದ್ದರಾಮಯ್ಯ ಹೆಸರಿಟ್ಟರೆ ಕಾನೂನು ಹೋರಾಟ

ಮೈಸೂರು, ಡಿ.25– ಮೈಸೂರಿನ ಕೆಆರ್‌ಎಸ್ ರಸ್ತೆಗೆ ಸಿಎಂ ಸಿದ್ದರಾಮಯ್ಯ ಅವರ ಹೆಸರಿಡಲು ಮೈಸೂರು ಮಹಾನಗರ ಪಾಲಿಕೆ ಮಾಡಿರುವ ತೀರ್ಮಾನಕ್ಕೆ



ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ವಿರೋಧ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಪ್ರತಿಕ್ರಿಯೆ ನೀಡಿರುವ ಅವರು, ಈ ರಸ್ತೆಗೆ ಇತಿಹಾಸವಿದೆ. ನಾಲ್ವಡಿ ಅವರ ಅಕ್ಕ ಕೃಷ್ಣಜಮ್ಮಣ್ಣಿ ಹಾಗೂ ಅವರ ಮಕ್ಕಳು ಕ್ಷಯರೋಗಕ್ಕೆ ತುತ್ತಾಗಿ ಮರಣ ಹೊಂದಿದ್ದರಿಂದ ಅವರ ಸ್ಮರಣೆಗಾಗಿ ನೂರಾರು ಎಕರೆ ಭೂಮಿಯನ್ನು ರಾಜರು ದಾನ ಮಾಡಿದ ಭೂಮಿಯಲ್ಲಿ ಆ ರಸ್ತೆಯಲ್ಲಿ ಪಿಕೆಟಿಬಿ ಆಸ್ಪತ್ರೆ ಕಟ್ಟಿಸಲಾಗಿದೆ. ಅಂತಹ ಐತಿಹಾಸಿಕ ರಸ್ತೆಯಲ್ಲಿ ಏಷ್ಯಾದ ಮೊದಲ ಕ್ಷಯರೋಗ ಆಸ್ಪತ್ರೆ ಇದೆ. ಪಿಕೆಟಿಬಿ ಸ್ಯಾನಿಟೋರಿಯಂ ರಸ್ತೆ ಎಂತಲೇ ಫೇಮಸ್ ಆಗಿದೆ. ಇಂತಹ ರಸ್ತೆಗೆ ಕಳಂಕಿತರಾದ ಸಿಎಂ ಸಿದ್ದರಾಮಯ್ಯ ಹೆಸರು ಬೇಡ, ಗಂಭೀರ ಆರೋಪ ಹೊತ್ತಿರುವ ವ್ಯಕ್ತಿಯ ಹೆಸರಿಡಲು ಮೈಸೂರಿನ ಜನತೆ ಒಪ್ಪಲ್ಲ. ಅದನ್ನೂ ಮೀರಿ ಈ ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರು ನಾಮಕರಣ ಮಾಡಿದರೆ ನ್ಯಾಯಾಲಯದ ಮೂಲಕ ಕಾನೂನು ಹೋರಾಟ ಮಾಡಲಾಗುವುದು ಎಂದು ಸ್ನೇಹಮಯಿ ಕೃಷ್ಣ ಹೇಳಿದ್ದಾರೆ.

ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಪ್ರಸ್ತಾಪ

ಮೈಸೂರು ಪರಂಪರೆಯ ಪ್ರಮುಖ ಸಂಬಂಧ ಅಳಿಸಿ ಹಾಕಿದಂತೆ...!

- ಸಂಸದ ಯದುವೀರ್ ಅಭಿಮತ
- ಈ ರಸ್ತೆಗೆ ರಾಜಕುಮಾರಿಯರ ಹೆಸರಿಡಲಾಗಿದೆ
- ಜೊತೆಗೆ ಮೈಸೂರು ಇತಿಹಾಸ, ಒಡೆಯರ್ ಪರಂಪರೆ ಸಾರುತ್ತಿದೆ





ಮೈಸೂರಿನ ಕೆಆರ್‌ಎಸ್ ರಸ್ತೆಯ ಒಂದು ನೋಟ.

ಮೈಸೂರು, ಡಿ.25–ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಮರು ನಾಮಕರಣ ಮಾಡುವುದರಿಂದ ನಗರದ ಪರಂಪರೆಯ ಪ್ರಮುಖ ಸಂಬಂಧವನ್ನು ಅಳಿಸಿಹಾಕಿದಂತಾಗುತ್ತದೆ ಎಂದು ಮೈಸೂರು ರಾಜವಂಶಸ್ಥರೂ ಆದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟಿದ್ದಾರೆ.

'ಮೈಸೂರು ಪರಂಪರೆ ಉಳಿಸೋಣ: ಕೆಆರ್‌ಎಸ್‌ಗೆ ತೆರಳುವ ಮಾರ್ಗದ ಪ್ರಿನ್ಸೆಸ್ ರಸ್ತೆಯನ್ನು ಸಿದ್ದರಾಮಯ್ಯ ಆರೋಗ್ಯ ಮಾರ್ಗ ಎಂದು ಮರು ನಾಮಕರಣ ಮಾಡದೇ ಪರಂಪರೆಯನ್ನು ಉಳಿಸಿ' ಶೀರ್ಷಿಕೆಯಡಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕೆಆರ್‌ಎಸ್ ರಸ್ತೆ ಎಂದೇ ಜನಪ್ರಿಯವಾಗಿರುವ ರಾಜಕುಮಾರಿ (ಪ್ರಿನ್ಸೆಸ್) ರಸ್ತೆ ಕೇವಲ ರಸ್ತೆಯ ಹೆಸರಲ್ಲದೆ, ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಹೊಂದಿದೆ ಎಂದಿದ್ದಾರೆ.

ಈ ರಸ್ತೆಗೆ ಇಬ್ಬರು ರಾಜಕುಮಾರಿಯರ ಹೆಸರನ್ನು ಇಡಲಾಗಿದೆ. ಮಹಾರಾಜ ಚಾಮರಾಜ ಒಡೆಯರ್ ವಾಣಿವಿಲಾಸ ಸನ್ನಿಧಾನದ ಮಹಾರಾಣಿ ಕೆಂಪನಂಜಮ್ಮಣ್ಣಿ ಪುತ್ರಿಯರಾದ ರಾಜಕುಮಾರಿ ಕೃಷ್ಣಜಮ್ಮಣ್ಣಿ ಮತ್ತು ರಾಜಕುಮಾರಿ ಚೆಲುವರಾಜಮ್ಮಣ್ಣಿ ಸ್ಮರಣಾರ್ಥವಾಗಿ ಪ್ರಿನ್ಸೆಸ್ ಹೆಸರನ್ನು ಇಡಲಾಗಿದೆ.

ಮಹಾರಾಜಕುಮಾರಿ ಕೃಷ್ಣಜಮ್ಮಣ್ಣಿ ಅವರ ಹೆಸರಿನಲ್ಲಿ ಸ್ಥಾಪಿಸಲಾದ ಪಿ.ಕೆ. ಸ್ಯಾನಿಟೋರಿಯಂ ಮೂಲಕ ಅವರ ಸ್ಮರಣೆಯು ಜೀವಂತವಾಗಿದೆ. ಮಹಾರಾಜಕುಮಾರಿ ಚೆಲುವಜಮ್ಮಣ್ಣಿ ಅವರ ನಿವಾಸ, ಚೆಲುವಜಮ್ಮಣ್ಣಿ ಮ್ಯಾನ್ಷನ್, ಈಗಿನ ಸಿಎಫ್‌ಟಿಆರ್‌ಐ ಬಂಗಲೆಯೂ ಇದೇ ರಸ್ತೆಯಲ್ಲಿದೆ ಎಂದಿರುವ ಅವರು, ಪ್ರಿನ್ಸೆಸ್ ರೋಡ್ ಮೈಸೂರಿನ ಇತಿಹಾಸ ಮತ್ತು ಒಡೆಯರ್ ಕುಟುಂಬದ ಪರಂಪರೆಯನ್ನು ಒಳಗೊಂಡಿದೆ. ಇದನ್ನು ಸಿದ್ದರಾಮಯ್ಯ ಆರೋಗ್ಯ ಮಾರ್ಗ ಎಂದು ಮರುನಾಮಕರಣ ಮಾಡುವುದರಿಂದ ನಗರದ ಪರಂಪರೆಯ ಪ್ರಮುಖ ಸಂಬಂಧವನ್ನು ಕಳಚಿಹಾಕಿದಂತಾಗುತ್ತದೆ. ಈ ರಸ್ತೆಯು ರಾಜಕುಮಾರಿಯರು ಮತ್ತು ರಾಜಮನೆತನದ ಕೊಡುಗೆಗಳನ್ನು ಸ್ಮರಿಸುವ ಪ್ರಮುಖ ಮಾರ್ಗವಾಗಿದೆ. ಇದು ಭವಿಷ್ಯದ ಪೀಳಿಗೆಗೆ ಮೈಸೂರಿನ ಸಾಂಸ್ಕೃತಿಕ ಗುರುತಿಗೆ ಸಂಬಂಧಿಸಿದ ಐತಿಹಾಸಿಕ ಹೆಗ್ಗುರುತುಗಳನ್ನು ಸಂರಕ್ಷಿಸುವ ಮಹತ್ವವನ್ನು ನೆನಪಿಸುತ್ತದೆ. ಪ್ರಿನ್ಸೆಸ್ ರಸ್ತೆಯ ಮರುನಾಮಕರಣವು ಮೈಸೂರಿನ ಐತಿಹಾಸಿಕ ಮಹತ್ವ ಮತ್ತು ಪರಂಪರೆಯನ್ನು ಕೆಡವಿದಂತಾಗುತ್ತದೆ ಎಂದು ಹೇಳಿದ್ದಾರೆ.

ಪಿ.ಕೆ.ಸ್ಯಾನಿಟೋರಿಯಂ ಮತ್ತು ಚೆಲುವಾಂಬ ಮ್ಯಾನ್ಷನ್‌ನ ಇತಿಹಾಸದಿಂದ ಈ ರಸ್ತೆಯು ಈಗಾಗಲೇ ಆಳವಾದ ಸಾಂಸ್ಕೃತಿಕ ಮಹತ್ವವನ್ನು ಹೊಂದಿದೆ. ಈ ಹೆಸರುಗಳನ್ನು ಅಳಿಸುವುದರಿಂದ ಆರೋಗ್ಯ ಮತ್ತು ಸಮುದಾಯ ಸೇವೆಯಲ್ಲಿ ರಾಜಮನೆತನದ ಕೊಡುಗೆಯನ್ನು ಕಡೆಗಾಣಿಸಿದಂತಾಗುತ್ತದೆ. ಪ್ರಿನ್ಸೆಸ್ ರಸ್ತೆಯ ಶ್ರೀಮಂತ ಇತಿಹಾಸವನ್ನು ಸಂರಕ್ಷಿಸಬೇಕು. ಮೈಸೂರಿನ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪರಂಪರೆಯನ್ನು ಪ್ರತಿಬಿಂಬಿಸುವ ಹೆಸರನ್ನು ಉಳಿಸಿಕೊಳ್ಳುವ ಮೂಲಕ ರಾಜಕುಮಾರಿ ಕೃಷ್ಣಜಮ್ಮಣ್ಣಿ ಮತ್ತು ಅವರ ಕುಟುಂಬದ ಕೊಡುಗೆಗಳ ಸ್ಮರಣೆಯನ್ನು ನಾವು ಗೌರವಿಸೋಣ. ಸಾರ್ವಜನಿಕ ಹೆಗ್ಗುರುತುಗಳಿಗೆ ಸಂಬಂಧಿಸಿದ ನಿರ್ಧಾರಗಳನ್ನು ಮಾಡುವಾಗ ಮೈಸೂರು ಜನತೆಯ ಭಾವನೆಗಳನ್ನು ಮತ್ತು ಅವರ ಪರಂಪರೆಯನ್ನು ಗೌರವಿಸಬೇಕಾಗಿದೆ. ಇದನ್ನು ಅಳಿಸಿ ಹಾಕುವ ಯಾವುದೇ ನಿರ್ಣಯವೂ ನಮ್ಮ ಮುಂದಿನ ಪೀಳಿಗೆಗೆ ಮಾರಕವಾಗುತ್ತದೆ. ಮತ್ತು ಮೈಸೂರಿನ ಸಾಂಸ್ಕೃತಿಕ ಪರಂಪರೆಯನ್ನು ಕೊಂದಂತಾಗುತ್ತದೆ ಎಂದು ಯದುವೀರ್ ತಿಳಿಸಿದ್ದಾರೆ.

ಮಹಾರಾಜಕುಮಾರಿ ಕೃಷ್ಣಜಮ್ಮಣ್ಣಿ ಅವರ ಇತಿಹಾಸ

ಮಹಾರಾಜಕುಮಾರಿ ಕೃಷ್ಣಜಮ್ಮಣ್ಣಿ ಅವರ ಜೀವನವು ದುರಂತದ ಸಾವು ಮತ್ತು ಮೈಸೂರಿನ ಇತಿಹಾಸಕ್ಕೆ ಮಹತ್ವದ ಕೊಡುಗೆಗಳಿಂದ ಗುರುತಿಸಲ್ಪಟ್ಟಿದೆ. ಕರ್ನಲ್, ಜಹಗೀರ್‌ದಾರ್ ಶ್ರೀ ದೇಸರಾಜೇ ಅರಸ್ ಅವರ ಧರ್ಮಪತ್ನಿಯಾದ ಇವರು ಮತ್ತು ಇವರ ಮೂವರು ಹೆಣ್ಣು ಮಕ್ಕಳು 1904 ಮತ್ತು 1913ರ ನಡುವೆ ಕ್ಷಯರೋಗಕ್ಕೆ ಬಲಿಯಾದರು. ಅವರ ಸ್ಮರಣೆಗಾಗಿ ರಾಜಕುಮಾರಿ ಕೃಷ್ಣಜಮ್ಮಣ್ಣಿ ಸ್ಯಾನಿಟೋರಿಯಂ (ಪಿಕೆಟಿಬಿ) ಆಸ್ಪತ್ರೆ ಸ್ಥಾಪಿಸಲು ಅವರ ಕುಟುಂಬ 100 ಎಕರೆ ಭೂಮಿ ದಾನ ಮಾಡಿದೆ. ಆರೋಗ್ಯ ರಕ್ಷಣೆಗಾಗಿ ರಾಜಮನೆತನದ ದೃಷ್ಟಿಕೋನವು ಪಿ.ಕೆ.ಸ್ಯಾನಿಟೋರಿಯಂ ಸ್ಥಾಪನೆಗೆ ಕಾರಣವಾಯಿತು.

1918ರಲ್ಲಿ ಪಿ.ಕೆ.ಸ್ಯಾನಿಟೋರಿಯಂ ಆಸ್ಪತ್ರೆಗೆ ಅಡಿಗಲ್ಲು ಹಾಕಲಾಯಿತು. ಕರ್ನಲ್ ದೇಸರಾಜೇ ಅರಸ್ ಅವರು ಆ ಕಾಲದಲ್ಲೇ 75 ಸಾವಿರ ರೂ.ಗಳನ್ನು ಈ ಆಸ್ಪತ್ರೆಯ ನಿರ್ಮಾಣ ಸೌಲಭ್ಯಗಳಿಗಾಗಿ ನೀಡಿದರು. 1921ರಲ್ಲಿ ತೆರೆಯಲಾದ ಆಸ್ಪತ್ರೆಯು ಕ್ಷಯರೋಗ ಚಿಕಿತ್ಸಾ ಕೇಂದ್ರವಾಗಿ ಕಾರ್ಯ ನಿರ್ವಹಿಸುತ್ತಿದೆ. ಜಯದೇವ ಹೃದ್ರೋಗ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸೇರಿದಂತೆ ಅನೇಕ ಸೌಲಭ್ಯಗಳಿಗೆ ಈ ಜಾಗವು ವಿಸ್ತರಿಸಿಕೊಂಡಿದೆ.

ವಿರೋಧ ಪಕ್ಷ ನಾಯಕತ್ವಕ್ಕೆ ವಾಜಪೇಯಿ ಮಾದರಿ

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಗುಣಗಾನ

ವಿರೋಧ ಪಕ್ಷ ಎನ್ನುವುದಕ್ಕೆ ಕಾಂಗ್ರೆಸ್ ಕಳಂಕ ತರುತ್ತಿದೆ



ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರಿಗೆ ಅಟಲ್ ಪುರಸ್ಕಾರ ನೀಡಿ ಗೌರವಿಸಲಾಯಿತು. ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್, ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ ನಾರಾಯಣ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಇನ್ನಿತರರಿದ್ದರು.

ಬೆಂಗಳೂರು, ಡಿ.25– ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ವಿರೋಧ ಪಕ್ಷ ನಾಯಕರು ಹೇಗಿರಬೇಕು ಎಂಬುದಕ್ಕೆ ಮಾದರಿ. ಆದರೆ, ಕಾಂಗ್ರೆಸ್ ವಿರೋಧ ಪಕ್ಷ ಎನ್ನುವುದಕ್ಕೆ ಕಳಂಕ ತರುತ್ತಿದೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಆಕ್ರೋಶ ವ್ಯಕ್ತಪಡಿಸಿದರು.

ವಾಜಪೇಯಿ ಅವರ ಜನ್ಮಶತಾಬ್ದಿ ಅಂಗವಾಗಿ ಬೆಂಗಳೂರಿನಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಸುಶಾಸನ ದಿನಾಚರಣೆ ಕಾರ್ಯಕ್ರಮದಲ್ಲಿ ಅಟಲ್ ಪುರಸ್ಕಾರ ಸ್ವೀಕರಿಸಿ ಅವರು ಮಾತನಾಡಿದರು. ಪ್ರಜಾಪ್ರಭುತ್ವದ ಹೆಸರಲ್ಲಿ ಕಾಂಗ್ರೆಸ್ ದೇಶದ ಜನರು ತಲೆ ತಗ್ಗಿಸುವಂತೆ ಮಾಡುತ್ತಿದೆ. ಅಧಿವೇಶನದಲ್ಲಿ ನಾನು ಅಮಿತ್ ಶಾ ಭಾಷಣ ಕೇಳಿದ್ದೇನೆ. ಅವರ ಭಾಷಣ ತಿರುಚಿ ಅಪಪ್ರಚಾರ ಮಾಡುತ್ತಿದ್ದಾರೆ. ಪ್ರತಿಪಕ್ಷವಾಗಿ ಕಾಂಗ್ರೆಸ್ ತಪ್ಪು ಮಾಡುತ್ತಿದೆ ಎಂದು ಅವರು ಆರೋಪಿಸಿದರು.

ಅಟಲ್ ಜೀ ಅವರು ವಿರೋಧ ಪಕ್ಷದಲ್ಲಿದ್ದಾಗ ನಾನು ಅವರ ಭಾಷಣ ಕಾರಿನಲ್ಲಿ ಹೋಗುವಾಗ ಕೇಳುತ್ತಿದ್ದೆ. ಅವರ ಭಾಷಣ ಕೇಳುತ್ತಾ ನಾನು ವಿರೋಧ ಪಕ್ಷ ನಾಯಕನಾದಾಗ ಹೇಗೆ ಮಾತನಾಡಬೇಕು ಎಂದು ತಿಳಿದುಕೊಳ್ಳುತ್ತಿದ್ದೆ. ಅವರು ವಿರೋಧ ಪಕ್ಷ ನಾಯಕರಾಗಿ ಬಹಳ ಗೌರವಯುತವಾಗಿ ನಡೆದುಕೊಳ್ಳುತ್ತಿದ್ದರು. ಅವರು ಮಾದರಿಯಾಗಿದ್ದರು ಎಂದು ದೇವೇಗೌಡರು ಆ ಸಂದರ್ಭವನ್ನು ನೆನಪು ಮಾಡಿಕೊಂಡರು.

ನಾನು ಆಳುವ ಪಕ್ಷದ ನಾಯಕನಾಗಿದ್ದಾಗ ಅಟಲ್ ಜೀ ವಿರೋಧ ಪಕ್ಷದ ನಾಯಕರಾಗಿದ್ದರು. ನಾನು ವಿರೋಧ ಪಕ್ಷದಲ್ಲಿದ್ದಾಗ ಅವರು ನನ್ನನ್ನು ತುಂಬಾ ಗೌರವದಿಂದ ಕಾಣುತ್ತಿದ್ದರು. ಅವರ ಹಿಂದಿ ಭಾಷಣದ ಅರ್ಥ ತಿಳಿದುಕೊಳ್ಳುತ್ತಿದ್ದೆ. ಬಹಳ ದೊಡ್ಡ ವ್ಯಕ್ತಿ, ದೂರದೃಷ್ಟಿ ಇದ್ದ ನಾಯಕ ಎಂದು ವಾಜಪೇಯಿ ಅವರ ಗುಣಗಾನ ಮಾಡಿದರು.

ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯ ದರ್ಶಿ ಬಿ.ಎಲ್ ಸಂತೋಷ್, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ನಿವೃತ್ತ ಐಎಎಸ್ ಅಧಿಕಾರಿ ಮದನ್‌ಗೋಪಾಲ್, ಉನ್ನತ ಶಿಕ್ಷಣ ಮಂಡಳಿಯ ಮಾಜಿ ಅಧ್ಯಕ್ಷ ತಿಮ್ಮೇಗೌಡ ಅವರೂ ಇದೇ ಸಂದರ್ಭದಲ್ಲಿ ಅಟಲ್ ಪುರಸ್ಕಾರಕ್ಕೆ ಪಾತ್ರರಾದರು.

ಸಭೆಯಲ್ಲಿ ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಕೃಷ್ಣೇಗೌಡ ಮತ್ತಿತರರು ಉಪಸ್ಥಿತರಿದ್ದರು.

ನಟ ಶಿವರಾಜ್‌ಕುಮಾರ್‌ಗೆ ಯಶಸ್ವಿ ಸರ್ಜರಿ



ಫ್ಲೋರಿಡಾದ ಮಿಯಾಮಿ ಆಸ್ಪತ್ರೆ ವೈದ್ಯ ಡಾ. ಮುರುಗೇಶ್ ಅವರು ಶಿವರಾಜ್‌ಕುಮಾರ್ ಅವರ ಆರೋಗ್ಯದ ಬಗ್ಗೆ ವಿಡಿಯೋ ಸಂದೇಶ ನೀಡಿದರು. ಗೀತಾ ಶಿವರಾಜ್‌ಕುಮಾರ್, ಸಚಿವ ಮಧು ಬಂಗಾರಪ್ಪ ಅವರನ್ನು ಕಾಣಬಹುದು.

ಫ್ಲೋರಿಡಾ, ಡಿ.25–ನಟ ಶಿವರಾಜ್ ಕುಮಾರ್ ಅವರಿಗೆ ಯಶಸ್ವಿಯಾಗಿ ಸರ್ಜರಿ ನಡೆದಿದೆ. ಅಮೆರಿಕಾದ ಫ್ಲೋರಿಡಾದ ಮಿಯಾಮಿ ಕ್ಯಾನ್ಸರ್ ಇನ್‌ಸ್ಟಿಟ್ಯೂಟ್‌ಗೆ ದಾಖಲಾಗಿದ್ದ ಅವರಿಗೆ ಸತತ 6 ಗಂಟೆ ಗಳ ಕಾಲ ಪಿತ್ತಕೋಶ ಸರ್ಜರಿ ಮಾಡ ಲಾಗಿದೆ. ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದ್ದು, ಶಿವರಾಜ್‌ಕುಮಾರ್ ಆರೋಗ್ಯ ಸ್ಥಿರವಾಗಿದೆ ಎಂದು ಅಮೆರಿಕದಿಂದ ವೈದ್ಯರು ಮಾಹಿತಿ ನೀಡಿದ್ದಾರೆ. ಡಾ. ಮುರುಗೇಶ್ ನೇತೃತ್ವದಲ್ಲಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಅಮೆರಿಕಾ ಕಾಲಮಾನ ಮಧ್ಯಾಹ್ನ 12 ಗಂಟೆಗೆ ಆಪರೇಷನ್ ಮುಗಿದಿದೆ.

ದೇವರ ಆಶೀರ್ವಾದ, ಎಲ್ಲರ ಹಾರೈಕೆಯಿಂದ ಶಸ್ತ್ರಚಿಕಿತ್ಸೆ ಯಶಸ್ವಿ ಯಾಗಿದೆ ಎಂದು ಅಮೆರಿಕದಿಂದ ಡಾ. ಮುರುಗೇಶ್ ಮಾಹಿತಿ ನೀಡಿದ್ದಾರೆ. ಶಸ್ತ್ರಚಿಕಿತ್ಸೆಗೆ ಶಿವರಾಜ್ ಕುಮಾರ್ ಉತ್ತಮವಾಗಿ ಸ್ಪಂದಿಸಿರುವ ಕಾರಣ ಎಲ್ಲವೂ ಸುಸೂತ್ರವಾಗಿ ನಡೆದಿದೆ. ಪಿತ್ತಕೋಶ ಶಸ್ತ್ರಚಿಕಿತ್ಸೆ ಬಳಿಕ ಶಿವರಾಜ್ ಕುಮಾರ್ ಆರೋಗ್ಯ ಸ್ಥಿರವಾಗಿದೆ. ಶಿವರಾಜ್‌ಕುಮಾರ್ ಆದಷ್ಟು ಬೇಗ ಚೇತರಿಸಿಕೊಳ್ಳುವ ವಿಶ್ವಾಸವಿದೆ ಎಂದು ಡಾ.ಮುರುಗೇಶ್ ಹೇಳಿದ್ದಾರೆ.

ಸದ್ಯ ಐಸಿಯುನಲ್ಲಿರುವ ಶಿವರಾಜ್ ಕುಮಾರ್‌ಗೆ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇಲ್ಲ. 10 ದಿನಗಳ ಕಾಲ ಆಸ್ಪತ್ರೆಯಲ್ಲಿ ಶಿವರಾಜ್‌ಕುಮಾರ್ ಇರಲಿದ್ದಾರೆ. ಅವರ ಆರೋಗ್ಯ ಕುರಿತು ತೀವ್ರ ನಿಗಾವಹಿಸಲಾಗುತ್ತದೆ. ಬಳಿಕ ಶಿವರಾಜ್ ಕುಮಾರ್ ಆಸ್ಪತ್ರೆಯಿಂದ ಬಿಡುಗಡೆಯಾಗಲಿದ್ದಾರೆ ಎಂದು ವೈದ್ಯರು ಮಾಹಿತಿ ನೀಡಿದ್ದಾರೆ.

ರಾಜಕಾರಣಿಗಳ ಭೂ ಕಬಳಿಕೆ ತಡೆಗೆ ಬಡವರ ಪರ ಹೋರಾಟಗಾರರು ಇರಬೇಕು

- ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಮನವಿ
- ಕೆಆರ್‌ಎಸ್ ಪಕ್ಷ ಲಿಂಗೇಗೌಡ, ಮೂಸಕುಂಜಿ ಅವರಿಗೆ ಶ್ರದ್ಧಾಂಜಲಿ



ಕೆಆರ್‌ಎಸ್ ಪಕ್ಷದ ರಾಜ್ಯ ಕಾರ್ಯಾಧ್ಯಕ್ಷ ಎಸ್.ಹೆಚ್.ಲಿಂಗೇಗೌಡ, ದಕ್ಷಿಣ ಕನ್ನಡ ಜಿಲ್ಲಾ ಕಾರ್ಯದರ್ಶಿ ಮೂಸಕುಂಜಿ ಅವರ ಶ್ರದ್ಧಾಂಜಲಿ ಸಭೆಯಲ್ಲಿ ನುಡಿನಮನ ಸಲ್ಲಿಸಲಾಯಿತು.

ಮೈಸೂರು, ಡಿ.25(ಎಸ್‌ಪಿಎನ್)– ಇಂದಿನ ರಾಜಕಾರಣಿಗಳು ಸರ್ಕಾರಿ ಭೂಮಿಯನ್ನು ತಮ್ಮ ಪ್ರಭಾವ ಬಳಸಿ ನಯವಾಗಿ ಕಬಳಿಸುತ್ತಿದ್ದು, ಇಂತಹ ಅಕ್ರಮಗಳಿಗೆ ಕಡಿವಾಣ ಹಾಕಲು ಹೋರಾಟಗಾರರು ಬಡವರ ಪರವಾಗಿ ಹೋರಾಡಬೇಕು ಎಂದು ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಅಭಿಪ್ರಾಯಪಟ್ಟರು.

ಮೈಸೂರು ಅರಮನೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗ ಕೆಆರ್‌ಎಸ್ ಪಕ್ಷದ ಮೈಸೂರು ಘಟಕ ಏರ್ಪಡಿಸಿದ್ದ ಇತ್ತೀಚೆಗೆ ಗುಜರಾತ್‌ನಲ್ಲಿ ಅಪಘಾತದಿಂದ ನಿಧನರಾದ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ರಾಜ್ಯ ಕಾರ್ಯಾಧ್ಯಕ್ಷ ಎಸ್.ಹೆಚ್.ಲಿಂಗೇಗೌಡ, ದಕ್ಷಿಣ ಕನ್ನಡ ಜಿಲ್ಲಾ ಕಾರ್ಯದರ್ಶಿ ಮೂಸಕುಂಜಿ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಮಾತನಾಡಿದರು.

ಭೂ ಕಬಳಿಕೆಯಲ್ಲಿ ಪಾಲ್ಗೊಳ್ಳುವ ರಾಜಕಾರಣಿಗಳ ವಿರುದ್ಧ ನಿರಂತರ ಹೋರಾಡಲು ನೈತಿಕ ಸ್ಥೈರ್ಯ ಮುಖ್ಯ. ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಹೇಳಿದ ಹಾಗೆ ಕೋಟ್ಯಾಂತರ ರೂ. ಬೆಲೆಬಾಳುವ ನಿವೇಶನಗಳನ್ನು ಮುಡಾಗೆ ವಾಪಸ್ ಕೊಡಿಸಿದ್ದೇವೆ. ಈ ಪ್ರಕರಣಗಳನ್ನು ಗಮನಿಸಿದಾಗ ಹೋರಾಟಗಾರರು ಸುಮ್ಮನಿದ್ದರೆ, ಸರ್ಕಾರಿ ಭೂಮಿಗಳು, ಪ್ರಭಾವಿಗಳ ಪಾಲಾಗುತ್ತವೆ ಎಂಬುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ಇಂತಹ ಅನ್ಯಾಯವನ್ನು ತಪ್ಪಿಸಲು ಸಾಮಾಜಿಕ ಹೋರಾಟಗಾರರು ರಚನಾತ್ಮಕ ಹೋರಾಟ ಹಮ್ಮಿಕೊಳ್ಳಬೇಕು. ಕೆಆರ್‌ಎಸ್ ಪಕ್ಷದ ಕಾರ್ಯಾಧ್ಯಕ್ಷ ಎಸ್.ಹೆಚ್. ಲಿಂಗೇಗೌಡರು ಇಂತಹ ಅನ್ಯಾಯಗಳ ವಿರುದ್ಧ ಹೋರಾಡುತ್ತಿದ್ದರು. ಅಂತಹ ವ್ಯಕ್ತಿ ಅಪಘಾತದಲ್ಲಿ ನಿಧನರಾದುದು ಬೇಸರ ಸಂಗತಿ ಎಂದು ನುಡಿನಮನ ಸಲ್ಲಿಸಿದರು.

ಈ ವೇಳೆ ಸಾಮಾಜಿಕ ಚಿಂತಕರು ಹೆಚ್.ಕೆ.ವಿವೇಕಾನಂದ, ಮುಡಾ ನಿವೃತ್ತ ಅಧಿಕಾರಿ ನಟರಾಜ್, ಕೆಆರ್‌ಎಸ್ ಪಕ್ಷದ ಸೋಮಸುಂದರ್, ಪರಿಸರ ಹೋರಾಟಗಾರ್ತಿ ಭಾನು ಮೋಹನ್, ಕೆಆರ್‌ಎಸ್ ಪಕ್ಷದ ಗುರುಮೂರ್ತಿ, ನ.ಲಿ.ಕೃಷ್ಣ, ವೆಂಕಟೇಶ್, ವೇಣುಗೋಪಾಲ್, ಮುಖಂಡರಾದ ರವಿಕುಮಾರ್, ಶಿವನಂಜಯ್ಯ, ಕೆ.ಆರ್.ಶ್ರೀನಿವಾಸ, ಚಂದ್ರು, ಸೇರಿದಂತೆ ಇತರರಿದ್ದರು. ಶ್ರೀ ಚೌಡೇಶ್ವರಿ ಕಲಾವೃಂದದ ಎಂ.ಎಸ್.ಪಾಟೀಲ್, ಮಹೇವಪ್ಪ, ಕೃಷ್ಣಮೂರ್ತಿ ತಂಡದ ಗೀತಾ ಗಾಯನ ನಡೆಸಿಕೊಟ್ಟರು.

ಮದ್ಯದ ನಶೆಯಲ್ಲಿ ಪತ್ನಿಯನ್ನು ಕಲ್ಲಿನಿಂದ ಜಜ್ಜಿ ಕೊಂದ ಪತಿ

ರಾಮಾಪುರ (ಹನೂರು ತಾ.), ಡಿ.25–ಕುಡಿದ ಮತ್ತಿನಲ್ಲಿ ಪತ್ನಿಯನ್ನು ಕಲ್ಲಿನಿಂದ ಜಜ್ಜಿ ಪತಿ ಕೊಲೆ ಮಾಡಿದ ಘಟನೆ ರಾಮಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಬಿದರಹಳ್ಳಿ ಗ್ರಾಮದಲ್ಲಿ ಮಂಗಳವಾರ ರಾತ್ರಿ ನಡೆದಿದೆ. ಗ್ರಾಮದ ಅಮಲ್ ರಾಜ್ ಎಂಬಾತನೇ ಪತ್ನಿ ಶೋಭಾಳನ್ನು ಹತ್ಯೆಗೈದು ಜೈಲಿಗೆ ಸೇರಿದವನು.

ವಿವರ: ಬಿದರಹಳ್ಳಿ ಗ್ರಾಮದ ಅಮಲ್ ರಾಜ್ ಸುಮಾರು 8 ವರ್ಷದ ಹಿಂದೆ ಕೆಲಸಕ್ಕೆಂದು ಬಿಡದಿಗೆ ತೆರಳಿದ್ದಾಗ ವಿವಾಹಿತೆ ಶೋಭಾ ಪರಿಚಯವಾಗಿದೆ. ವಿವಾಹವಾಗಿ 2 ಮಕ್ಕಳ ತಾಯಿಯಾಗಿದ್ದ ಈಕೆ, ಗಂಡನನ್ನು ಬಿಟ್ಟು ಇಬ್ಬರು ಮಕ್ಕಳೊಂದಿಗೆ ಅಮಲ್ ರಾಜ್ ಜೊತೆ ಬಿದರಹಳ್ಳಿಗೆ ಬಂದು ಬಿಟ್ಟಿದ್ದಾಳೆ.

ಆನಂತರ ಇವರಿಬ್ಬರೂ ವಿವಾಹವಾಗಿದ್ದು, ಇಬ್ಬರಿಗೂ ಕುಡಿತದ ಚಟ ಇತ್ತು ಎಂದು ಹೇಳಲಾಗಿದೆ. ಮದ್ಯದ ನಶೆಯಲ್ಲಿ ಗಂಡ–ಹೆಂಡತಿ ನಡುವೆ ಗಲಾಟೆ ಆಗುವುದು ಸರ್ವೇಸಾಮಾನ್ಯವಾಗಿತ್ತು. ಅದರಲ್ಲೂ ಅಮಲ್ ರಾಜ್ ಕುಡಿದಾಗ ಪತ್ನಿ ಮಾತ್ರವಲ್ಲದೆ ಕಂಡ–ಕಂಡವರೊಂದಿಗೆ ಜಗಳ ತೆಗೆಯುತ್ತಿದ್ದ. ಈ ಹಿಂದೆ ಗ್ರಾಮದ ಕೆಲವರೊಂದಿಗೆ ಕುಡಿದ ಮತ್ತಿನಲ್ಲಿ ಗಲಾಟೆ ಮಾಡಿಕೊಂಡ ಪರಿಣಾಮ ಜೈಲಿಗೂ ಹೋಗಿ ಬಂದಿದ್ದ. ಆದರೂ ಆತ ತನ್ನ ಚಾಳಿ ಬಿಟ್ಟಿರಲಿಲ್ಲ.


ಬಿದರಹಳ್ಳಿ ಗ್ರಾಮದಲ್ಲಿ ಕ್ರೈಸ್ತ ಧರ್ಮದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಮಂಗಳವಾರ ಸಂಜೆಯಿಂದಲೇ ಇಡೀ ಗ್ರಾಮ ಕ್ರಿಸ್‌ಮಸ್ ಸಂಭ್ರಮದಲ್ಲಿ ಮುಳುಗಿತ್ತು. ಇದೇ ವೇಳೆ ರಾತ್ರಿ ಅಮಲ್ ರಾಜ್ ಮತ್ತು ಶೋಭಾ ಕಂಠಪೂರ್ತಿ ಕುಡಿದು ಜಗಳಕ್ಕಿಳಿದಿದ್ದಾರೆ ಎನ್ನಲಾಗಿದ್ದು, ಅದು ವಿಕೋಪಕ್ಕೆ ತೆರಳಿ ಶೋಭಾಳನ್ನು ಕಲ್ಲಿನಿಂದ ಜಜ್ಜಿ ಅಮಲ್ ರಾಜ್ ಹತ್ಯೆಗೈದಿದ್ದಾನೆ.

ವಿಷಯ ತಿಳಿದು ಗ್ರಾಮಕ್ಕೆ ದೌಡಾಯಿಸಿದ ರಾಮಾಪುರ ಠಾಣೆ ಪೊಲೀಸರು ಅಮಲ್ ರಾಜ್‌ನನ್ನು ಬಂಧಿಸಿದ್ದಾರೆ. ಅನಾಥರಾಗಿರುವ ಶೋಭಾಳ ಇಬ್ಬರು ಮಕ್ಕಳನ್ನು ಒಪ್ಪಿಸಲು ಆಕೆಯ ಸಂಬಂಧಿಕರ ಹುಡುಕಾಟದಲ್ಲಿ ಪೊಲೀಸರು ತೊಡಗಿದ್ದಾರೆ. ಅಮಲ್ ರಾಜ್ 8 ವರ್ಷದ ಹಿಂದೆ ಬಿಡದಿಗೆ ತೆರಳಿದ್ದಾಗ 2 ಮಕ್ಕಳ ತಾಯಿ ಶೋಭಾಳನ್ನು ಬಿದರಹಳ್ಳಿಗೆ ಕರೆತಂದಿದ್ದ ಎಂಬ ಮಾಹಿತಿ ಹೊರತುಪಡಿಸಿ, ಆಕೆಯ ಗಂಡ ಯಾರು? ಸಂಬಂಧಿಕರು ಯಾರು? ಎಂಬುದರ ವಿವರ ಗ್ರಾಮಸ್ಥರಿಗೆ ಗೊತ್ತಿಲ್ಲ ಎಂದು ಹೇಳಲಾಗಿದೆ.

'ಅವಸಾನದತ್ತ ನೀಲಗಿರಿ ಕನ್ನಡಿಗರು' ಪುಸ್ತಕ ಬಿಡುಗಡೆ ; ಗಡಿನಾಡು ಕನ್ನಡಿಗರಿಗೆ ನೀಡುವಂತೆ

ನೀಲಗಿರಿ ಕನ್ನಡಿಗರಿಗೂ ಕರ್ನಾಟಕ ಸರ್ಕಾರ ಸೌಲಭ್ಯ ಕಲ್ಪಿಸಬೇಕು

ಪ್ರಗತಿಪರ ಚಿಂತಕ ಡಾ.ಮುಜಾಫರ್ ಅಸ್ಸಾದಿ ಒತ್ತಾಯ



ಮೈಸೂರಿನ ರಂಗಾಯಣದ ಬಿ.ವಿ.ಕಾರಂತರ ರಂಗಚಾವಡಿಯಲ್ಲಿ ಬುಧವಾರ 'ಅವಸಾನದತ್ತ ನೀಲಗಿರಿ ಕನ್ನಡಿಗರು' ಪುಸ್ತಕ ಬಿಡುಗಡೆ ಮಾಡಲಾಯಿತು.

ಮೈಸೂರು,ಡಿ.25(ಪಿಎಂ)– ಪ್ರಸ್ತುತ ತಮಿಳುನಾಡಿನ ಭಾಗವಾಗಿರುವ ನೀಲಗಿರಿಯಲ್ಲಿ ನೆಲೆಸಿರುವ ಕನ್ನಡಿಗರಿಗೆ ಗಡಿನಾಡು ಕನ್ನಡಿಗರಿಗೆ ನೀಡುವಂತಹ ಸೌಲಭ್ಯಗಳನ್ನು ನೀಡಲು ಕರ್ನಾಟಕ ಸರ್ಕಾರ ಮುಂದಾಗಬೇಕು ಎಂದು ಪ್ರಗತಿಪರ ಚಿಂತಕ ಡಾ.ಮುಜಾಫರ್ ಅಸ್ಸಾದಿ ಒತ್ತಾಯಿಸಿದರು.

ಮೈಸೂರಿನ ರಂಗಾಯಣದ ಬಿ.ವಿ.ಕಾರಂತರ ರಂಗಚಾವಡಿಯಲ್ಲಿ ಜನಮನ ಸಾಂಸ್ಕೃತಿಕ ಸಂಘಟನೆ, ಸಪ್ತಗಿರಿ ಕ್ಷೇಮಾಭಿವೃದ್ಧಿ ಸಂಘ, ನೀಲಗಿರಿ ಒಡನಾಡಿಗಳ ಸಂಗಮ, ನೀಲಗಿರಿ ಬಳಗ ಕೊಳ್ಳೇಗಾಲ, ನೀಲಗಿರಿ ಕನ್ನಡ ಬಳಗ ಬೆಂಗಳೂರು ಸಂಯುಕ್ತಾಶ್ರಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಡಾ.ಎ.ಆರ್.ರಾಧಾಕೃಷ್ಣ ಅವರ 'ಅವಸಾನದತ್ತ ನೀಲಗಿರಿ ಕನ್ನಡಿಗರು' ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಪುಸ್ತಕವನ್ನು ನಾನು ಪೂರ್ತಿಯಾಗಿ ಓದಿದ್ದೇನೆ. ಈ ಪುಸ್ತಕದಲ್ಲಿ ನೀಲಗಿರಿಯಲ್ಲಿ ನೆಲೆಸಿರುವ ಕನ್ನಡಿಗರು ಅಲ್ಲಿನ ಮೂಲ ನಿವಾಸಿಗಳು ಎಂದು ಮತ್ತೆ ಮತ್ತೆ ಪ್ರಸ್ತಾಪಿಸಲಾಗಿದೆ. ಏಕೆಂದರೆ ಕರ್ನಾಟಕದಿಂದ ವಲಸೆ ಹೋದ ಕನ್ನಡಿಗರನ್ನು ಅಲ್ಲಿನ ಮೂಲ ನಿವಾಸಿಗಳು ಹೇಗಾಗುತ್ತಾರೆ ಎಂಬ ಪ್ರಶ್ನೆ ಉದ್ಭವಿಸುತ್ತದೆ. ವಲಸಿಗರು ಎಂದು ಹೇಳಿಕೊಂಡರೆ ನೀಲಗಿರಿಯಿಂದ ಕನ್ನಡಿಗರನ್ನು ಹೊರ ಹಾಕುವ ಸಾಧ್ಯತೆಯೇ ಹೆಚ್ಚು. ಲಾಜಿಕ್‌ನಲ್ಲಿ ಕರ್ನಾಟಕದಿಂದ ವಲಸೆ ಹೋಗಿ ಅಲ್ಲಿ ನೆಲೆಸಿರುವ ಕನ್ನಡಿಗರು ಅಲ್ಲಿನ ಮೂಲನಿವಾಸಿಗಳೇ. ಬಹಳ ಮುಖ್ಯವಾಗಿ ಅವರೆಲ್ಲಾ ದ್ರಾವಿಡರು. ಮೂಲನಿವಾಸಿಗಳು ಒಂದು ಜಾಗದಿಂದ ಮತ್ತೊಂದು ಜಾಗಕ್ಕೆ ಹೋಗುವುದು ಅನಿವಾರ್ಯ ಎಂದು ಹೇಳಿದರು.

ನೀಲಗಿರಿಯು ರಾಜ್ಯದ ಮುಕುಟ ಮಣಿಯಂತಿತ್ತು. ಅಲ್ಲಿನ ಕನ್ನಡಿಗರು ಬ್ರಿಟಿಷರಲ್ಲಿ ಆಸ್ತಿ ಹಕ್ಕು ಕೇಳಿದ್ದರೆ, ಅದು ಕರ್ನಾಟಕದ ಭಾಗವಾಗುತ್ತಿತ್ತು. ಸ್ವಾತಂತ್ರ್ಯದ ಬಳಿಕ ಅಲ್ಲಿನ ಕನ್ನಡಿಗರು, ಕರ್ನಾಟಕ ಸರ್ಕಾರ ಹಾಗೂ ಇಲ್ಲಿನ ಕನ್ನಡಿಗರು, ಭಾಷಾಭಿಮಾನಿಗಳು, ಹೋರಾಟಗಾರರು ನೀಲಗಿರಿ ಕನ್ನಡಿಗರ ನೆಲವೆಂದು ಪ್ರತಿಪಾದಿಸಲೇ ಇಲ್ಲ. ಧರ್ಮಾರ್ಥವಾಗಿ ತಮಿಳು ನಾಡಿಗೆ ಬಿಟ್ಟುಕೊಟ್ಟೆವು. ಇದು ನಾಡಿನ ದುರಂತ ಎಂದು ವಿಷಾದಿಸಿದರು.

ಊಟಿಯ ಸಪ್ತಗಿರಿ ಟೀ ತೋಟಗಳನ್ನು ಕಂಪನಿಗಳಿಗೆ ಬ್ರಿಟಿಷರು ಮಾರಿ ಹೋದರು. ಆ ಸಂದರ್ಭದಲ್ಲಿ ತೋಟಗಳನ್ನು ಕಂಪನಿಗಳಿಗೆ ನೋಂದಣಿ ಮಾಡಿದ್ದಾದರೂ ಹೇಗೆ ಎಂಬ ಪ್ರಶ್ನೆ ಕಾಡುತ್ತದೆ. ಈಗ ಅಲ್ಲಿನ ಕನ್ನಡಿಗರು ಅತಂತ್ರ ಸ್ಥಿತಿಯಲ್ಲಿದ್ದಾರೆ. ಅವರಿಗೆ ನೆರವಾಗುವುದು ನಮ್ಮ ರಾಜ್ಯ ಸರ್ಕಾರದೊಂದಿಗೆ ಕನ್ನಡಿಗರ ಜವಾಬ್ದಾರಿಯೂ ಆಗಿದೆ ಎಂದರು.

ಕನ್ನಡಿಗರು ನೆಲೆಸಿರುವ ಸಪ್ತಗಿರಿ ಎಸ್ಟೇಟ್‌ಗಳನ್ನು ಹುಲಿ ಸಂರಕ್ಷಿತ ಅರಣ್ಯ ಪ್ರದೇಶವೆಂದು ಘೋಷಣೆಗೆ ಪ್ರಸ್ತಾಪಗಳಿದ್ದು, ಇದಾದಲ್ಲಿ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972ರ ಅನ್ವಯ ಅಲ್ಲಿ ಮಾನವ ವಸತಿ ನೆಲೆ ಇರಬಾರದು. ವ್ಯವಸ್ಥಿತವಾಗಿ ಅಲ್ಲಿನ ಕನ್ನಡಿಗರನ್ನು ಹೊರ ಹಾಕಲಾಗುತ್ತದೆ. ಹೀಗಾಗಿ ಅಲ್ಲಿನ ಕನ್ನಡಿಗರು ಮೂರು ತಲೆಮಾರಿನಿಂದ ನೆಲೆನಿಂತಿದ್ದೇವೆಂದು ಪ್ರತಿಪಾದಿಸಬೇಕು. ಆಗ 2006ರ ಅರಣ್ಯ ಹಕ್ಕು ಕಾಯ್ದೆ ಅನ್ವಯ ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸುವ, ಆಸ್ತಿ ಹಾಗೂ ಬದುಕುವ ಹಕ್ಕು ದೊರೆಯುತ್ತದೆ ಎಂದು ಸಲಹೆ ನೀಡಿದರು.

ಮಹಿಳಾಪರ ಹೋರಾಟಗಾರ್ತಿ ರತಿರಾವ್ ಅಧ್ಯಕ್ಷತೆ ವಹಿಸಿದ್ದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ.ಪುರುಷೋತ್ತಮ ಬಿಳಿಮಲೆ, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ರಂಗಕರ್ಮಿಗಳಾದ ಹೆಚ್.ಜನಾರ್ಧನ್ (ಜನ್ನಿ), ಸಿ.ಬಸವಲಿಂಗಯ್ಯ, ಲೇಖಕ ಪರಮಶಿವ ನಡುಬೆಟ್ಟ, ನಿವೃತ್ತ ಎಂಜಿನಿಯರ್ ಟಿ.ಆರ್.ಸ್ವಾಮಿ, ಮುಖಂಡ ಅಹಿಂದ ಜವರಪ್ಪ, ಕೃತಿ ಕರ್ತೃ ಡಾ.ಎ.ಆರ್.ರಾಧಾಕೃಷ್ಣ ಮತ್ತಿತರರು ಹಾಜರಿದ್ದರು.

ನಕ್ಕರೆ ಅದೇ ಸ್ವರ್ಗ

ಗಂಡ : ಈ ಹೊತ್ತಲ್ಲಿ ಎಲ್ಲಿಗೆ ಹೊರಟಿದಿ?
ಹೆಂಡತಿ : ಮೇಕಪ್ ಮಾಡ್ಕೊಂಡ ಬರ್ತೀನ್ರಿ
ಗಂಡ : ಈ ಟೈಮ್‌ನ್ಯಾಗ ಯಾಕೆ?
ಹೆಂಡತಿ : ಅದು ಫೋನ್ ನನ್ನ ಫೇಸ್ ಡಿಟೆಕ್ಟ್ ಮಾಡ್ತಿಲ್ಲ!
ಫೋನ್ ಲಾಕ್ ಓಪನ್ ಆಗ್ತಿಲ್ಲ...

ಮೈಸೂರು ಮಿತ್ರ
ಗುರುವಾರ, 26 ಡಿಸೆಂಬರ್ 2024
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಶಕ್ತಿ ಇರುವುದು ಸಾಧು ಸ್ವಭಾವದಲ್ಲಿ ಹಾಗೂ ಚಾರಿತ್ರ ಶುದ್ಧಿಯಲ್ಲಿ.
–ಸ್ವಾಮಿ ವಿವೇಕಾನಂದ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕರೆದುಣ್ಣುವ ಕೆಚ್ಚಲನ್ನು ಕೊರೆದುಂಡ ಹಾಗೆ.

ನಿಮ್ಮ ಪತ್ರಗಳು

ಎಸ್.ಎಲ್.ಭೈರಪ್ಪನವರಿಗೆ ರಾಷ್ಟ್ರಕವಿ ಪಟ್ಟ, ಜ್ಞಾನಪೀಠ ಪ್ರಶಸ್ತಿ ದೊರೆಯಲಿ

ಮಾನ್ಯರೆ,

ಇದೀಗ ಮುಗಿದ ಕನ್ನಡ ಸಾಹಿತ್ಯ ಸಮ್ಮೇಳನದ ನಿರ್ಣಯದಲ್ಲಿ ಶೀಘ್ರವೇ ರಾಷ್ಟ್ರಕವಿಯನ್ನು ಘೋಷಣೆ ಮಾಡಬೇಕು ಎನ್ನುವ ಮೂಲಕ ರಾಷ್ಟ್ರಕವಿಯ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ಹಲವು ವರ್ಷಗಳ ಹಿಂದೆ ಇಂತಹ ಒತ್ತಾಯಕ್ಕೆ ಮಣಿದ ಅಂದಿನ ಸರ್ಕಾರ ರಾಷ್ಟ್ರಕವಿಯ ಹೆಸರು ಸೂಚಿಸಲು ಒಂದು ಸಮಿತಿಯನ್ನು ಕೂಡ ರಚಿಸಿತ್ತು. ನಂತರ ಅದು ಒಂದಷ್ಟು ಕವಿಗಳ ಹೆಸರನ್ನು ಕೂಡ ಸರ್ಕಾರಕ್ಕೆ ಸಲ್ಲಿಸಿತ್ತು. ಅದನ್ನು ನೋಡಿದ, ಇನ್ನುಳಿದ ಹಲವು, ಅಂದಿನ ಕೆಲ ಸಾಹಿತಿಗಳು ಏನು ಅವರಿಗೆ ಮಾತ್ರವೇ ಅರ್ಹತೆ ಇರುವುದೇ? ಅವರು ಮಾತ್ರ ರಾಷ್ಟ್ರಕವಿಯಾದರೆ ಉಳಿದವರು ಯಾರು? ಎಂದು ಆಕ್ಷೇಪ ವ್ಯಕಪಡಿಸಿದ್ದರು. ಇದು ವಿವಾದಕ್ಕೆ ಕಾರಣವಾಗುತ್ತದೆ ಎನ್ನುವುದನ್ನು ಮನಗಂಡ ಸರ್ಕಾರ ರಾಷ್ಟ್ರಕವಿ ಎನ್ನುವ ಘೋಷಣೆಯ ನಿರ್ಧಾರವನ್ನು ಕೈಬಿಟ್ಟಿತು ಎನ್ನುವ ಅಂದಿನ ಪತ್ರಿಕಾ ವರದಿಗಳನ್ನು ಓದಿದ ನೆನಪು.

ಇದೀಗ ಮತ್ತೆ ರಾಷ್ಟ್ರಕವಿ ಘೋಷಣೆ ಮಾಡುವುದಾದರೂ ಇಂತಹ ಹೇಳಿಕೆಗಳು ಈಗ ಮೊದಲಿಗಿಂತಲೂ ಜೋರಾಗಿ ಕೇಳಿಬರುವ ಸಂಭವವಿದೆ.

ಒಂದು ವೇಳೆ ಸರ್ಕಾರ ಮತ್ತೆ ರಾಷ್ಟ್ರಕವಿ ಘೋಷಣೆಯ ನಿರ್ಧಾರಕ್ಕೆ ಬಂದರೆ, ಅದು ಪರ್ವ ಸೇರಿದಂತೆ 25 ಕಾದಂಬರಿಗಳು (ಅದರಲ್ಲಿ ಹಲವು ಮನೋಜ್ಞ ಕಾದಂಬರಿಗಳು) ಹಾಗೂ ಹಲವು ಕೃತಿಗಳನ್ನು ರಚಿಸಿರುವ, ಹಲವಾರು ಕಾದಂಬರಿಗಳು ಹಲವು ಭಾರತೀಯ, ಇಂಗ್ಲೀಷ್ ಹಾಗೂ ಹಲವು ವಿದೇಶಿ ಭಾಷೆಗಳಿಗೆ ಅನುವಾದಗೊಂಡಿರುವ ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪನವರು ರಾಷ್ಟ್ರಕವಿಗೆ ಅರ್ಹರಾದ ಸೂಕ್ತ ಸಾಹಿತಿಯಾಗಿದ್ದಾರೆ. ಅವರಿಗೆ ಸರ್ಕಾರ ಯಾವುದೇ ತಡ ಮಾಡದೆ ರಾಷ್ಟ್ರಕವಿ ಪಟ್ಟ ನೀಡಲಿ. ಎಸ್.ಎಲ್.ಭೈರಪ್ಪನವರು ಸಾಹಿತ್ಯದ ಜ್ಞಾನಪೀಠ ಪ್ರಶಸ್ತಿಗೆ ಕೂಡ ಅರ್ಹರಿದ್ದಾರೆ. ಅದನ್ನು ಜ್ಞಾನಪೀಠ ಪ್ರಶಸ್ತಿ ಸಮಿತಿಗೆ ಮನವರಿಕೆ ಮಾಡಿಕೊಡುವ ಕೆಲಸ ಆಗಬೇಕು. ಆಫ್ರಿಕನ್, ಲ್ಯಾಟಿನ್ ಅಮೆರಿಕನ್ ಸಾಹಿತಿಗಳಂತೆ ಇಂಗ್ಲೀಷ್ ಸಾಹಿತಿಯಾಗಿದ್ದರೆ ಭೈರಪ್ಪನವರಿಗೆ ಎಂದೋ ಸಾಹಿತ್ಯದ ನೊಬೆಲ್ ಪ್ರಶಸ್ತಿ ಸಿಗುತ್ತಿತ್ತು. ನೊಬೆಲ್ ಪ್ರಶಸ್ತಿ ಸಮಿತಿಯವರು ಕನ್ನಡ, ತಮಿಳು ಸೇರಿದಂತೆ ವಿಶ್ವದ ಇಂಗ್ಲೀಷ್ ಹೊರತಾದ ಭಾಷೆಗಳ ಕಡೆ ಗಮನ ಹರಿಸದಿರುವುದು ನೊಬೆಲ್ ಪ್ರಶಸ್ತಿಯ ದೊಡ್ಡ ವೈಫಲ್ಯ. ಹಲವು ಬಾರಿ ಶಾಂತಿಗಾಗಿ, ಸಾಹಿತ್ಯಕ್ಕಾಗಿ ಡಾ. ಸರ್ವಪಲ್ಲಿ ರಾಧಾಕೃಷ್ಣರ ಹೆಸರು ನಾಮಕರಣಗೊಂಡಿದ್ದರೂ, 5 ಬಾರಿ ಮಹಾತ್ಮ ಗಾಂಧಿಯವರ ಹೆಸರು ಶಾಂತಿಗಾಗಿ ನೊಬೆಲ್ ಪ್ರಶಸ್ತಿಗೆ ಶಿಫಾರಸ್ಸು ಆದರೂ ಪ್ರಶಸ್ತಿ ನೀಡಲಿಲ್ಲ. ಇದು ಅವರ ಪಾಶ್ಚಾತ್ಯ ಪ್ರೇಮವನ್ನು ತೋರಿಸುತ್ತದೆ. ಆದರೆ ಕೆಲ ವರ್ಷಗಳ ಹಿಂದೆ ನೊಬೆಲ್ ಪ್ರತಿಷ್ಠಾನ ಸಮಿತಿಯು ಮಹಾತ್ಮ ಗಾಂಧಿಯವರಿಗೆ ನೊಬೆಲ್ ಪ್ರಶಸ್ತಿ ನೀಡಲಾಗದ್ದಕ್ಕೆ ಪಶ್ಚಾತ್ತಾಪಪಟ್ಟಿತ್ತು ಎನ್ನುವುದು ನೊಬೆಲ್ ಪ್ರತಿಷ್ಠಾನದ ವೈಫಲ್ಯವನ್ನು ಎತ್ತಿ ತೋರಿಸಿದೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಸಂಚಾರಿ ಪೊಲೀಸ್ ಮಹಾನಿರೀಕ್ಷಕರಲ್ಲಿ ಮನವಿ

ಮಾನ್ಯರೇ,

ಕಲಿಸು ಗುರುವೆ ಕಲಿಸು
ಕಲಿಸು ಸದ್ಗುರುವೆ ನೀ ಕಲಿಸು
ಬೆವರಿಳಿಸಿ ಗಳಿಸಿದ ಒಂದು ಕಾಸು ಸಿಕ್ಕ ಹತ್ತಕ್ಕಿಂತ ಮಿಗಿಲೆಂಬುದ ಕಲಿಸು.

ಈ ಸಾಲುಗಳು ನೆನಪಾಗಿದ್ದು ಇತ್ತೀಚೆಗೆ ಮೈಸೂರಿನ ಹಲವು ಕಡೆ ಸಂಚಾರ ಪೊಲೀಸರು ತಪಾಸಣೆ ನಡೆಸುತ್ತಿದ್ದಾರೆ. ಸಾರ್ವಜನಿಕರ ಸುರಕ್ಷತೆ ಹಾಗೂ ಸಂಚಾರಿ ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳಲು ರಸ್ತೆಯಲ್ಲಿ ತಪಾಸಣೆ ಆರಂಭಿಸಿದ್ದಾರೆ. ಮೈಸೂರಿನ ಸಾಮಾನ್ಯವಾಗಿ ಎಲ್ಲಾ ಸಿಗ್ನಲ್‌ಗಳಲ್ಲಿ ಸಿ.ಸಿ.ಟಿವಿ ಕ್ಯಾಮರಾ ಅಳವಡಿಸಿ ಸಂಚಾರಿ ನಿಯಮ ಉಲ್ಲಂಘಿಸುವವರಿಗೆ ದಂಡದ ನೋಟಿಸ್ ಕೂಡ ತಲುಪುತ್ತಿದೆ. ಸಂಚಾರಿ ಪೊಲೀಸರು ಖುದ್ದಾಗಿ ನಡೆಸುವ ತಪಾಸಣೆ ವೇಳೆ ಹಿಂಬದಿ ಸವಾರರು ಹೆಲ್ಮೆಟ್ ಧರಿಸದೆ ಬರುವವರು ಸಿಕ್ಕಿ ಹಾಕಿಕೊಳ್ಳುತ್ತಾರೆ. ಇಂತಹ ಸಂದರ್ಭದಲ್ಲಿ ಕೆಲವು ಸಂಚಾರಿ ಪೊಲೀಸರು ವಾಹನ ಸವಾರರೊಂದಿಗೆ ಬಹಳ ಕೋಪಿಷ್ಟರಂತೆ ವರ್ತಿಸುತ್ತಾರೆ. ವಯಸ್ಸಿನ ಇತಿಮಿತಿ ತಿಳಿಯದೆ ಏಕವಚನದಲ್ಲಿ ವಾದಕ್ಕಿಳಿಯುತ್ತಾರೆ.

ಹೆಲ್ಮೆಟ್ ಧರಿಸದೆ ಬಂದವರಿಗೆ ದಂಡ ವಸೂಲಿ ಹಣ ಐದು ನೂರು ರೂಪಾಯಿಗಳಾಗಿರುತ್ತವೆ. ಸ್ಥಳದಲ್ಲೇ ಪಾವತಿಸಲು ಪಟ್ಟು ಹಿಡಿಯುವ ಪೊಲೀಸರಿಂದ ಬಚಾವಾಗಲು ಸವಾರರು ಬೇರೆ ದಾರಿ ಇಲ್ಲದೆ ಐದು ನೂರು ರೂಪಾಯಿ ಭರಿಸಲು ಶಕ್ತರಿಲ್ಲದೆ ಪೊಲೀಸರ ಕೈಗೆ ನೂರು ರೂಪಾಯಿ ಕೊಟ್ಟು ನೀಡಿದ ಹಣಕ್ಕೆ ರಶೀದಿಯು ಇಲ್ಲದೆ ಹೋಗಬೇಕಾದ ಪರಿಸ್ಥಿತಿ ಇದೆ.

ಈ ಮೂಲಕ ಸಂಚಾರಿ ಪೊಲೀಸ್ ಮಹಾನಿರೀಕ್ಷಕರಲ್ಲಿ ಮನವಿ, ದಯವಿಟ್ಟು ಇನ್ನಾದರೂ ಈ ಪ್ರಕರಣಗಳು ಮರುಕಳಿಸದಿರಲಿ.

ಕೆಲವು ವರ್ಷಗಳ ಹಿಂದೆ ಈ ತರಹನಾದ ಪ್ರಕರಣ ತಡೆಯಲು Body camera ಗಳನ್ನು ಧರಿಸುವ ನಿಯಮವಿತ್ತು. ಸಂಚಾರಿ ನಿಯಮಗಳ ಜಾಗೃತಿ ಜನರಲ್ಲಿ ಮೂಡಿಸುವುದರ ಜೊತೆಗೆ ನಿಮ್ಮ ಇಲಾಖೆಯ ಸಿಬ್ಬಂದಿಗಳಿಗೂ ಸಾರ್ವಜನಿಕರೊಂದಿಗೆ ವರ್ತಿಸುವ ರೀತಿ ಹಾಗೂ ಯಾವುದೇ ದಂಡವನ್ನು ರಶೀದಿ ನೀಡದೆ ಸ್ವೀಕರಿಸಬಾರದೆಂಬುದನ್ನು ತಿಳಿಸುವಂತೆ ಈ ಮೂಲಕ ಮನವಿ.

–ನೊಂದ ವಾಹನ ಸವಾರ, ಮೈಸೂರು

ಸಭಾಪತಿಗಳು ನಿಷ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸಲಿ

ಮಾನ್ಯರೆ,

ಉಪ ರಾಷ್ಟ್ರಪತಿ ಹಾಗೂ ರಾಜ್ಯಸಭೆಯ ಸಭಾಪತಿಗಳೂ ಆಗಿರುವ ಜಗದೀಪ್ ಧನಕರ್ ವಿರುದ್ಧ ಇಂಡಿಯಾ ಕೂಟಕ್ಕೆ ಸೇರಿರುವ 60ಕ್ಕೂ ಹೆಚ್ಚು ರಾಜ್ಯಸಭಾ ಸದಸ್ಯರು ಮಂಡಿಸಿದ್ದ ಅವಿಶ್ವಾಸ ನಿರ್ಣಯಕ್ಕೆ ಕಾನೂನಾತ್ಮಕವಾಗಿ ಸೋಲುಂಟಾಗಿದ್ದರೂ ಸಹ, ಸಭಾಪತಿ ಧನಕರ್‌ರವರ ನಡವಳಿಕೆ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ. ಧನಕರ್ ಅವರು ವಿರೋಧ ಪಕ್ಷಗಳ ಸದಸ್ಯರ ವಿರುದ್ಧ ಪಕ್ಷಪಾತ ಧೋರಣೆ ಅನುಸರಿಸುತ್ತಿದ್ದು, ಅವರ ವಾಕ್ ಸ್ವಾತಂತ್ರ್ಯಕ್ಕೆ ಅಡ್ಡಿಯುಂಟು ಮಾಡುತ್ತಾ, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರನ್ನು ಹಾಗೂ ಇಡೀ ಸರ್ಕಾರವನ್ನು ಹೊಗಳುತ್ತಾರೆಂದು ಧನಕರ್ ವಿರುದ್ಧ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿ ಧನಕರ್ ವಿರುದ್ಧ ಅವಿಶ್ವಾಸ ನಿರ್ಣಯವನ್ನು ಮಂಡಿಸಿದ್ದು ಇಲ್ಲಿ ಉಲ್ಲೇಖನೀಯವಾಗಿದೆ.

ರಾಜ್ಯಸಭೆಯ ಸಭಾಪತಿಗಳೂ ಆಗಿರುವ ಧನಕರ್ ತಮ್ಮ ಕಾರ್ಯ ನಿರ್ವಹಣೆಯಲ್ಲಿ ಪಕ್ಷಪಾತ ಧೋರಣೆ ಅನುಸರಿಸುತ್ತಿದ್ದಾರೆಂಬ ಆರೋಪ ಗಂಭೀರವಾಗಿದೆ. ರಾಜ್ಯಸಭೆಯನ್ನು ಹಿರಿಯರ ಮನೆ (Elders House) ಎಂದು ಕರೆಯಲಾಗುತ್ತದೆ. ಇಲ್ಲಿ ಎಲ್ಲಾ ಪಕ್ಷಗಳ ಸದಸ್ಯರಿಗೆ ಸಮಾನ ಅವಕಾಶ ನೀಡಬೇಕು. ಮೇಲಾಗಿ ಸಭಾಧ್ಯಕ್ಷರು ಪಕ್ಷಾತೀತರಾಗಿ ನಡೆದುಕೊಳ್ಳಬೇಕು. ಭಾರತದ ಸಂಸದೀಯ ಇತಿಹಾಸದಲ್ಲಿ ರಾಜ್ಯಸಭೆಯ ಸಭಾಪತಿಗಳ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಯಾಗಿರುವುದು ಇದೇ ಮೊದಲು ಎನ್ನಲಾಗಿದೆ. ಸಭಾಪತಿಗಳು ಇಂತಹ ಪರಿಸ್ಥಿತಿಗೆ ಅವಕಾಶ ನೀಡದಂತೆ ನಡೆದುಕೊಳ್ಳಬೇಕಾಗಿರುವುದು ಅವಶ್ಯವಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಮಂಥನ

ಕ್ಯಾಲೆಂಡರ್ ಕೌತುಕಮಯ ಜಗತ್ತು




ಎಸ್.ಎಲ್.ಭೈರಪ್ಪ




ಶಾಂತಕುಮಾರ್



ಲೋಕೇಶ್







ಹೌದು, ನಾವು ತೆಗೆದುಕೊಂಡಸಂಕಲ್ಪಗಳಲ್ಲಿ ಯಶಸ್ವಿಯಾಗಿ ಪೂರೈಸಿ ಹೊಸ ಮನುಷ್ಯರಾಗಿದ್ದೇವೋ, ಇಲ್ಲವೊ. ಆದರೆ ಪ್ರತಿವರ್ಷ ಮನೆಯ ಗೋಡೆಯ ಮೇಲಿನ ಕ್ಯಾಲೆಂಡರ್ ಅಂತೂ, ನಮಗಿಷ್ಟ ಇರಲಿ ಇಲ್ಲದಿರಲಿ ಬದಲಾಗಲೇಬೇಕು!

ಹಳೆಯ ಕ್ಯಾಲೆಂಡರ್ ಅನ್ನು ಬದಲಿಸುವ ಘಳಿಗೆಗೆ ಇನ್ನೇನು ದಿನಗಣನೆ ಪ್ರಾರಂಭವಾಗಿಯೇ ಬಿಟ್ಟಿದೆ. ಈಗಾಗಲೇ ಹಲವರ ಮನೆಗಳಲ್ಲಿ ಅದಾಗಲೇ ಹೊಸ ಕ್ಯಾಲೆಂಡರ್‌ಗಳು ಬಂದೇಬಿಟ್ಟಿವೆ. ಮನೆಮಂದಿಯೆಲ್ಲ ತಮಗೆ ಬೇಕಾದ ದಿನಗಳನ್ನು ಹುಡುಕಿ ಈಗಾಗಲೇ ಗುರುತೂ ಹಾಕಿಕೊಂಡಿರಬಹುದು! ಶಾಲೆಗೆ, ಕಚೇರಿಗೆ ಹೋಗುವವರಿಗೆ ಶನಿವಾರ, ಭಾನುವಾರಗಳು, ಹಬ್ಬಗಳ ರಜಾ ದಿನಗಳ ಕಡೆಗೆ ಕಣ್ಣುಗಳು ಹೋಗುತ್ತವೆ. (ಭಾನುವಾರಗಳಂದು ಹಬ್ಬಗಳು ಬಂದು ರಜೆಗೆ ಖೋತಾ ಆದರೆ, ಶಪಿಸುವ ಸರದಿ!) ಹೆಂಗಸರಿಗೆ ಸಾಮಾನ್ಯವಾಗಿ ಹಬ್ಬ ಹರಿದಿನಗಳ ಚಿಂತೆ. ನಾವು ಮೈಸೂರಿನವರು ದಸರೆ ಯಾವಗೆಂದು ಮೊದಲು ನೋಡುತ್ತೇವೆ, ಅಲ್ಲವೇ?

ಹೀಗೆ ಒಬ್ಬೊಬ್ಬರಿಗೆ ಒಂದೊಂದು ರೀತಿಯಲ್ಲಿ ಈ ಕ್ಯಾಲೆಂಡರ್ ಬದಲಾವಣೆ ಮಹತ್ವದ ಘಟನೆಯಾಗುತ್ತದೆ.

ಬೆಂಗಳೂರು ಮುದ್ರಣಾಲಯ, ಪತ್ರಿಕೆಗಳು ನೀಡುವ ಕ್ಯಾಲೆಂಡರ್ ಹೀಗೆ ಒಬ್ಬೊಬ್ಬರಿಗೆ ಒಂದೊಂದು ಅಚ್ಚುಮೆಚ್ಚು! ಅದೇ ಒಂದು ಸಂಪ್ರದಾಯ, ಪರಂಪರೆಯಾಗಿ ಬೆಳೆದುಬಿಟ್ಟಿರುತ್ತದೆ. ಇವಲ್ಲದೆ, ಸ್ವಲ್ಪ ವರ್ಷಗಳ ಹಿಂದೆ, ಬ್ಯಾಂಕುಗಳು, ಆಫೀಸುಗಳು, ಹೋಟೆಲ್, ನಾನಾ ವಾಣಿಜ್ಯ ಮಳಿಗೆಗಳು, ಹೊಸ ವರ್ಷಕ್ಕೆ ಕ್ಯಾಲೆಂಡರ್‌ಗಳನ್ನು ಮುದ್ರಿಸುವ ಪರಿಪಾಠ ಇಟ್ಟುಕೊಂಡಿವೆ. ಮನಮೋಹಕ ಪ್ರಾಕೃತಿಕ ಸೌಂದರ್ಯ, ಪ್ರಾಣಿಗಳು, ಪಕ್ಷಿಗಳು ಅವುಗಳಲ್ಲಿ ಚಿತ್ರಿತವಾಗಿಯೋ ಅಥವಾ ಫೋಟೋ ರೂಪದಲ್ಲಿಯೋ ಇರುತ್ತಿದ್ದವು.

ಆಕಾಶವಾಣಿ, DRDO, HAL, DAVP ಸೇರಿದಂತೆ ಪ್ರತಿಷ್ಠಿತ ಸಂಸ್ಥೆಗಳು ಮಾತ್ರವಲ್ಲದೆ, ಶಾಲಾ-ಕಾಲೇಜು, ಸಹಕಾರ ಸಂಘಗಳ ಕ್ಯಾಲೆಂಡರ್‌ಗಳು ಮನೆ ಮನೆಗಳ ಗೋಡೆಗಳ ಮೇಲೆ ರಾರಾಜಿಸುತ್ತಿದ್ದವು. ಅದರಲ್ಲೂ ಮೈಸೂರು ವಿಶ್ವವಿದ್ಯಾನಿಲಯ, ಇಸ್ಕಾನ್‌ನಂತಹ ಪ್ರತಿಷ್ಠಿತ ಸಂಸ್ಥೆಗಳ ಕ್ಯಾಲೆಂಡರ್‌ಗೆ ಭಾರಿ ಡಿಮ್ಯಾಂಡ್.

ರಾಜಾ ರವಿವರ್ಮ ಮೊದಲ ಬಾರಿಗೆ ಹಿಂದೂ ದೇವತೆಗಳನ್ನು ಕ್ಯಾನ್ವಾಸಿನ ಮೇಲೆ ತಂದು ಮನೆಮನೆಗಳಿಗೆ ತಲುಪುವಂತೆ ಮಾಡಿದ ನಂತೆ. ಅವನ ಕಾಲದಲ್ಲಿ ಪ್ರಾರಂಭವಾದ ಈ ಆಚರಣೆ ಅಥವಾ ಸಂಪ್ರದಾಯವೆನ್ನಿ, ಈಗಲೂ ಅನೂಚಾನವಾಗಿ ನಡೆದು ಕೊಂಡು ಬಂದಿದೆ. ರವಿವರ್ಮನ ಚಿತ್ರಗಳನ್ನು ಕ್ಯಾಲೆಂಡರಿನಲ್ಲಿ ತರುವ ಹವ್ಯಾಸ ಇನ್ನೂ ನಿಂತಿಲ್ಲ!

ಕೆಲವು ವರ್ಷಗಳ ಹಿಂದೆ ಕೆಲವು ವ್ಯಾಪಾರಿಗಳು ಹೀಗೆ ಮುದ್ರಿಸಿ ಹಂಚುತ್ತಿದ್ದ ದೇವರ ಪಟಗಳುಳ್ಳ ಕ್ಯಾಲೆಂಡರ್‌ಗಳು ಅತ್ಯಂತ ಜನಪ್ರಿಯವಾಗಿದ್ದವು. ಎಷ್ಟೋ ಕಂಪನಿಗಳು ಕ್ಯಾಲೆಂಡರ್ ಚಿತ್ರ ಬರೆಯಿಸುವುದಕ್ಕಾಗಿಯೇ ಕಲಾವಿದರ ನೇಮಕ ಮಾಡಿಕೊಳ್ಳುತ್ತಿದ್ದರು. ಈ ವರ್ಷದ ಕ್ಯಾಲೆಂಡರ್‌ನಲ್ಲಿ ಏನಿರಬಹುದು, ಹೇಗಿರಬಹುದು ಅದೆಷ್ಟು ಸುಂದರವಾದ, ವಿಭಿನ್ನವಾದ ದೇವರ ಚಿತ್ರಣ ಇರಬಹುದೆಂದು ಅಕ್ಷರಶಃ ಕಾಯುತ್ತಿದ್ದರು. ಕ್ಯಾಲೆಂಡರುಗಳಲ್ಲಿ ಚಿತ್ರಿತವಾದ ದೇವರ ಚಿತ್ರ ನೋಡಿ, ಭಯ-ಭಕ್ತಿಯಿಂದ ಕಟ್ಟು ಹಾಕಿಸಿ ದೇವರ ಮನೆಯಲ್ಲಿಯೋ ಅಥವಾ ಮನೆಯ ಮುಖ್ಯ ಗೋಡೆಯ ಮೇಲೆ ನೇತುಹಾಕಿ, ಪೂಜಿಸಲು ಪ್ರಾರಂಭಿಸುತ್ತಿದ್ದರು. ಇದನ್ನು ನೀವೂ ಬಹುಶಃ ನೋಡಿಯೇ ಇರುತ್ತೀರಿ. ನಿಮ್ಮ ಮನೆಗಳಲ್ಲಿಯೇ ಇರಲೂ ಇರಬಹುದು! ಕಟ್ಟು ಹಾಕಿಸದಿದ್ದರೂ, ದೇವರ ಪಟ ಎಸೆಯುವಂತಿಲ್ಲ, ಹರಿದು ಹಾಕುವಂತಿಲ್ಲ ಜೊತೆಗೆ ತುಂಬಾ ಸುಂದರವಾಗಿರುವುದು ಎಂಬ ಕಾರಣದಿಂದ, ಹೊಸ ಕ್ಯಾಲೆಂಡರ್ ಬಂದಮೇಲೂ, ಅವುಗಳ ಕೆಳಗೆ ಹಳೆಯ ಕ್ಯಾಲೆಂಡರ್‌ಗಳ ಜಾಗ ಭದ್ರವಾಗಿ ಇದ್ದೇ ಇರುತ್ತಿತ್ತು! ಎಷ್ಟೋ ಮನೆಗಳಲ್ಲಿ ಹತ್ತಾರು ವರ್ಷಗಳ ಕ್ಯಾಲೆಂಡರ್ ಸಂಗ್ರಹ ಇದ್ದವು, ಈಗಲೂ ಹುಡುಕಿದರೆ ಅಂತಹ ಹವ್ಯಾಸಿಗಳು, ಸಂಗ್ರಹಕಾರರು ಸಿಕ್ಕಿಯೇ ಸಿಗುತ್ತಾರೆ.

ಈ ಆಧುನಿಕ ಯುಗದಲ್ಲಿಯೂ ಕ್ಯಾಲೆಂಡರ್ ಮತ್ತು ಡೈರಿಗಳನ್ನು ಮುದ್ರಿಸಿ ಹಂಚುವ ಪರಿಪಾಠ ಹೊಸ ರೂಪ ಪಡೆದುಕೊಂಡಿದೆ.

“ ಪ್ರಾಚೀನ ಕಾಲದಲ್ಲಿ ಸೂರ್ಯ ಚಂದ್ರ ನಕ್ಷತ್ರಗಳಲ್ಲದೆ, ನಮ್ಮ ಪೂರ್ವಿಕರಿಗೆ ಸಮಯವನ್ನು ತಿಳಿಸುವ ಬೇರಾವ ಸಾಧನಗಳೂ ಇರಲಿಲ್ಲ. ಅವರ ದೈನಂದಿನ ಜೀವನಕ್ಕಾಗಲೀ, ಕೃಷಿಗಾಗಲೀ, ಪ್ರಯಾಣ-ಯಾತ್ರೆಗಳಿಗಾಗಲೀ ಅವರು ಬೆಳಕು, ಮಳೆ, ಚಳಿ, ಗಾಳಿ, ಹಿಮಗಳ ಲೆಕ್ಕಾಚಾರ ಹಾಕಿಕೊಳ್ಳಬೇಕಿತ್ತು. ಅದಕ್ಕಾಗಿ ಅವರು ಈ ಆಕಾಶ ಕಾಯಗಳ ಚಲನೆಯ ಮಾದರಿಯನ್ನೇ ಅವಲಂಭಿಸಬೇಕಾಗಿತ್ತು. ಪೂರ್ಣ ಸ್ವಚ್ಛಂದ ಕತ್ತಲಿದ್ದ ಕಾಲದಲ್ಲಿ ಜೀವಿಸಿದ್ದ ಅವರು ಕತ್ತಲಿನ ಅಪಾಯಗಳನ್ನು ಎದುರಿಸುವುದಕ್ಕೆ ಸನ್ನದ್ಧರಾಗಲು ಅವರಿಗೆ ಈ ಅಧ್ಯಯನ ಅವಶ್ಯಕವಾಗಿತ್ತು. ನಿಧಾನಕ್ಕೆ ಈ ಅನ್ವೇಷಣೆಯೇ ಕ್ಯಾಲೆಂಡರ್‌ನ ಸ್ವರೂಪ ಪಡೆದುಕೊಂಡಿತು. ವಿವಿಧ ನಾಗರಿಕತೆಗಳು ಕಾಲಾಂತರದಲ್ಲಿ ಅಭಿವೃದ್ಧಿಯಾದಂತೆ ಕ್ಯಾಲೆಂಡರ್‌ನ ಸ್ವರೂಪವೂ ನವೀಕೃತಗೊಳ್ಳುತ್ತಾ ಹೋಯಿತು.

ಮೈಸೂರಿನವರೇ ಆದ ಲೋಕೇಶ್ ಮೊಸಳೆಯವರ ವನ್ಯ ಜೀವಿಗಳ ಚಿತ್ರಗಳ ಕ್ಯಾಲೆಂಡರ್ ಬಹು ವಿಶಿಷ್ಟ.. ಆಕಾಶವಾಣಿಯ ಅಧಿಕಾರಿ ಜಿ.ಶಾಂತಕುಮಾರ್ ಅವರ ವನ್ಯಜೀವಿಗಳ ಕ್ಯಾಲೆಂಡರ್ ಕೂಡ ಎಲ್ಲರ ಗಮನ ಸೆಳೆದಿತ್ತು. ಪೂರ್ಣಚಂದ್ರ ತೇಜಸ್ವಿ ಅವರು ತೆಗೆದ ವನ್ಯ ಪ್ರಾಣಿ ಲೋಕದ ಕ್ಯಾಲೆಂಡರ್ ಸಹ ಎಲ್ಲರ ಮನ ಸೆಳೆದಿದೆ.

ನಮ್ಮ ಎಸ್.ಎಲ್.ಭೈರಪ್ಪನವರ ಜಲಪಾತ ಕಾದಂಬರಿಯಲ್ಲಿ ತನ್ನ ಗರ್ಭಿಣಿ ಹೆಂಡತಿಯಲ್ಲಿ ನವಮಾಸಗಳಲ್ಲಿ ಆಗುವ ಬದಲಾವಣೆಯನ್ನು ಪ್ರಕೃತಿಯ ಜೊತೆ ಸಮೀಕರಿಸಿ ಚಿತ್ರಿಸಿದ್ದನ್ನು, ಕ್ಯಾಲೆಂಡರ್‌ಗಾಗಿ ಮಾರುವಾಗ ಆತನಲ್ಲಿ ಉಂಟಾದ ತಾಕಲಾಟ ನೋವು ಓದಿದವರ ಅರಿವಿಗೆ ಬಂದಿರುತ್ತದೆ.

ಚಿತ್ರ ತಾರೆಯರನ್ನೊಳಗೊಂಡ ಕ್ಯಾಲೆಂಡರ್‌ಗಳ ಬೇಡಿಕೆ ಬಹುಶಃ ಎಂದಿಗೂ ಕಡಿಮೆಯಾಗುವುದಿಲ್ಲ. ಕಿಂಗ್ ಫಿಷರ್ ಕ್ಯಾಲೆಂಡರ್ ಬಗ್ಗೆ ನೀವು ಕೇಳಿರಬಹುದು!

ನೂರು ವರ್ಷಗಳ ಕ್ಯಾಲೆಂಡರ್ ಒಂದೇ ಹಾಳೆಯಲ್ಲಿ ಇರುತ್ತದೆ! ಅರ್ಥೈಸಿಕೊಳ್ಳುವ ವ್ಯವಧಾನ ಬುದ್ಧಿವಂತಿಕೆ ತರ್ಕ ನಮಗಿರಬೇಕು ಅಷ್ಟೇ.

ಕ್ಯಾಲೆಂಡರ್ ಹೊಸ ಯುಗದ ಆವಿಷ್ಕಾರ ಖಂಡಿತಾ ಅಲ್ಲ. ಸಾವಿರಾರು ವರ್ಷಗಳ ಹಿಂದೆಯೇ ಮಾನವ ಕ್ಯಾಲೆಂಡರ್ ತಯಾರಿಸುವುದನ್ನು ಕಲಿತಿದ್ದ. ಅದರ ಪರಿಷ್ಕೃತ ರೂಪವೇ ಇಂದಿನ ಕ್ಯಾಲೆಂಡರ್‌ಗಳು. ಖಗೋಳ ವಿಜ್ಞಾನದ ಇನ್ನೊಂದು ರೂಪ. ಆಕಾಶ ಕಾಯಗಳ ಚಲನೆಯ ನಿಖರತೆಯನ್ನು ಲೆಕ್ಕಹಾಕಿದಾಗಲೇ ನಮಗೆ ಸಮರ್ಪಕ ಕ್ಯಾಲೆಂಡರ್ ದೊರೆಯುವುದು.

ಪ್ರಾಚೀನ ಕಾಲದಲ್ಲಿ ಸೂರ್ಯ ಚಂದ್ರ ನಕ್ಷತ್ರಗಳಲ್ಲದೆ, ನಮ್ಮ ಪೂರ್ವಿಕರಿಗೆ ಸಮಯವನ್ನು ತಿಳಿಸುವ ಬೇರಾವ ಸಾಧನಗಳೂ ಇರಲಿಲ್ಲ. ಅವರ ದೈನಂದಿನ ಜೀವನಕ್ಕಾಗಲೀ, ಕೃಷಿಗಾಗಲೀ, ಪ್ರಯಾಣ-ಯಾತ್ರೆಗಳಿಗಾಗಲೀ ಅವರು ಬೆಳಕು, ಮಳೆ, ಛಳಿ, ಗಾಳಿ, ಹಿಮಗಳ ಲೆಕ್ಕಾಚಾರ ಹಾಕಿಕೊಳ್ಳಬೇಕಿತ್ತು. ಅದಕ್ಕಾಗಿ ಅವರು ಈ ಆಕಾಶ ಕಾಯಗಳ ಚಲನೆಯ ಮಾದರಿಯನ್ನೇ ಅವಲಂಬಿಸಬೇಕಾಗಿತ್ತು. ಪೂರ್ಣ ಸ್ವಚ್ಛಂದ ಕತ್ತಲಿದ್ದ ಕಾಲದಲ್ಲಿ ಜೀವಿಸಿದ್ದ ಅವರು ಕತ್ತಲಿನ ಅಪಾಯಗಳನ್ನು ಎದುರಿಸುವುದಕ್ಕೆ ಸನ್ನದ್ಧರಾಗಲು ಅವರಿಗೆ ಈ ಅಧ್ಯಯನ ಅವಶ್ಯಕವಾಗಿತ್ತು. ನಿಧಾನಕ್ಕೆ ಈ ಅನ್ವೇಷಣೆಯೇ ಕ್ಯಾಲೆಂಡರ್‌ನ ಸ್ವರೂಪ ಪಡೆದುಕೊಂಡಿತು. ವಿವಿಧ ನಾಗರಿಕತೆಗಳು ಕಾಲಾಂತರದಲ್ಲಿ ಅಭಿವೃದ್ಧಿಯಾದಂತೆ ಕ್ಯಾಲೆಂಡರ್‌ನ ಸ್ವರೂಪವೂ ನವೀಕೃತಗೊಳ್ಳುತ್ತಾ ಹೋಯಿತು.

ನಾವು ಭಾರತೀಯರು ಸಾವಿರಾರು ವರ್ಷಗಳ ಹಿಂದೆಯೇ ಕ್ಯಾಲೆಂಡರ್ ಅನ್ನು ತಯಾರಿಸುತ್ತಿದ್ದೆವು! ಅದೇ ಪಂಚಾಂಗ!

ಪಂಚ ಅಂಗ ಅಂದರೆ, 5 ಅಂಗಗಳು, ತಿಥಿ, ವಾರ, ನಕ್ಷತ್ರ, ಯೋಗ ಮತ್ತು ಕರಣಗಳು. ಸೂರ್ಯ, ಚಂದ್ರ, ಗ್ರಹ ತಾರೆಗಳ ಚಲನೆಗಳ ಮೇಲೆ ಆಧಾರಿತವಾಗಿರುವ ಈ ಐದು ಗುಣಲಕ್ಷಣಗಳ ಅಧ್ಯಯನವೇ ನಮಗೆ ಪಂಚಾಂಗದಲ್ಲಿ ಸಿಗುವುದು. ಈಗಲೂ ನಮ್ಮ ಯಾವುದೇ ಆಚರಣೆಯು ಪಂಚಾಂಗದ ಅಧ್ಯಯನವನ್ನು ಆಧರಿಸಿಯೇ ನಿರ್ಧಾರವಾಗುತ್ತದೆ. ಅದರಲ್ಲೂ ನಮ್ಮ ಮೈಸೂರಿನ ಒಂಟಿಕೊಪ್ಪಲ್ ಪಂಚಾಂಗ ವಿಶ್ವ ಪ್ರಸಿದ್ಧ.

ನಮ್ಮೆಲ್ಲಾ ಹಬ್ಬ ಹರಿದಿನಗಳು, ಪೂಜೆ ಪುನಸ್ಕಾರಗಳು ಪಂಚಾಂಗದಲ್ಲೇ ನಿರ್ಧರಿತವಾಗಿರುತ್ತವೆ. ಚಾಂದ್ರಮಾನ ಕ್ಯಾಲೆಂಡರ್ ಅನ್ನು ಅನುಸರಿಸುವ ನಮ್ಮ ಸಂಪ್ರದಾಯದಲ್ಲಿಯೇ ಎಷ್ಟು ವೈವಿಧ್ಯತೆಯಿದೆ ಗೊತ್ತೇ? ಅದರ ಪ್ರಕಾರ, ಈ ಸಹಸ್ರಮಾನದ ರಜತವರ್ಷವಾದ 2025 ಅನ್ನು ಹೇಗೆ ಗುರುತಿಸಲಾಗುತ್ತದೆ ಎಂಬುದನ್ನು ಯೋಚಿಸಿದರೆ ಅಚ್ಚರಿಯಾಗುತ್ತದೆ.

ಭಾರತೀಯ ಕ್ಯಾಲೆಂಡರ್‌ಗಳಲ್ಲಿ ಪ್ರಮುಖವಾದ ಶಾಲೀವಾಹನ ಶಕೆ 1946-47(ಯುಗಾದಿಯ ನಂತರ ವರ್ಷ ಬದಲು), ವಿಕ್ರಮ ಶಕೆ-2082, ಕಲಿವರ್ಷ 5126, ಚಾಲುಕ್ಯ ವಿಕ್ರಮ ಶಕೆ 949, ಬೆಂಗಾಲಿ ಶಕೆ 1432, ಕೊಲ್ಲಂ ಶಕೆ 1201 ಹಾಗಾಗಿ ಸಹಸ್ರಮಾನದ ಈ ರಜತ ವರ್ಷ ಶಾಲಿವಾಹನ ಶಕೆಯು 1946-47 ಆಗುತ್ತದೆ.

ರೇಡಿಯೋದಲ್ಲಿ ಪ್ರತಿದಿನ ಬೆಳಗ್ಗೆ 5.55ಕ್ಕೆ ಸರಿಯಾಗಿ ಉದ್ಘೋಷಕರು ಉದ್ಧರಿಸುವ ಸಮಯ ದಿನಾಂಕ ವರ್ಷ ನೆನಪಾಯಿತಷ್ಟೇ?!

ಸಾಂಪ್ರದಾಯಿಕವಾಗಿ ಕ್ಯಾಲೆಂಡರ್‌ನಲ್ಲಿ 4 ವಿಧಗಳು.

1. ಸೌರಮಾನ (Solar)
2. ಚಾಂದ್ರಮಾನ (Lunar),
3. ಚಾಂದ್ರ-ಸೌರ (Luni Solar)
4. ಸೈಡ್ ರಿಯಲ್ (Side Real)-

ನಕ್ಷತ್ರ ಪುಂಜಗಳ ಚಲನೆಯ ಮೇಲೆ ಆಧಾರಿತ ಇವಲ್ಲದೆ ಇಂದು, ಆರ್ಥಿಕ, ಶೈಕ್ಷಣಿಕ, ಕಾರ್ಪೊರೇಟ್ ವಲಯಗಳು ತಮ್ಮ ತಮ್ಮ ಚಟುವಟಿಕೆಗಳಿಗೆ ತಕ್ಕಂತೆ ತಮ್ಮದೇ ಆದ ಕ್ಯಾಲೆಂಡರ್‌ಗಳನ್ನು ರೂಪಿಸಿಕೊಂಡಿರುವುದು ನಿಮ್ಮೆಲ್ಲರ ಗಮನವನ್ನು ಸೆಳೆದೇ ಇರುತ್ತದೆ.

ವೈವಿಧ್ಯಮಯವಾದ ಸಂಪ್ರದಾಯ ಆಚರಣೆಗಳನ್ನು ಹೊಂದಿರುವ ಭಾರತದ ವಿವಿಧ ರಾಜ್ಯಗಳು, ತಮ್ಮದೇ ಆದ ಹೊಸ ವರ್ಷಾಚರಣೆಯನ್ನು ಹೊಂದಿವೆ. ಅದಕ್ಕೆ ತಕ್ಕಂತೆ ಸ್ವಲ್ಪ ಮಟ್ಟಿಗಿನ ಭಿನ್ನ ಕ್ಯಾಲೆಂಡರ್ ಪ್ರತಿ ಸಮುದಾಯದಲ್ಲಿಯೂ ಇರುತ್ತದೆ. ಉದಾಹರಣೆಗೆ; ಕನ್ನಡಿಗರಿಗೆ; ತೆಲುಗು ಜನರಿಗೆ, ಮರಾಠಿಗರಿಗೆ ಯುಗಾದಿ ಹೊಸವರ್ಷವಾದರೆ, ತಮಿಳು ನಾಡಿನಲ್ಲಿ ಪುತ್ತಾಂಡು, ಕೇರಳದಲ್ಲಿ ವಿಶು, ಅಸ್ಸಾಮ್‌ನಲ್ಲಿ ಬಿಹು, ಪಂಜಾಬ್ ನಲ್ಲಿ ಬೈಸಾಖಿ, ಗುಜರಾತಿನಲ್ಲಿ ದೀಪಾವಳಿ, ಉತ್ತರಾಖಂಡ, ಸಿಕ್ಕಿಮ್ ಡಾರ್ಜಿಲಿಂಗ್‌ನಲ್ಲಿ ಮೇಷ ಸಂಕ್ರಾಂತಿ, ಲಡಾಖ್ ನಲ್ಲಿ ಲೋಸಾರ್, ಪಾರ್ಸಿಗಳಿಗೆ ನವ್ರೋಜ಼್ ಹೀಗೆ.

ಕ್ಯಾಲೆಂಡರ್‌ಗಳ ಲೋಕ ನಿಜಕ್ಕೂ ವಿಸ್ಮಯಕಾರಿ ಮತ್ತು ಅತಿವಿಶಾಲ. ನಾವು ಈಗ ಬಳಸುವ ಕ್ಯಾಲೆಂಡರ್ ಹುಟ್ಟಿ ಬೆಳೆದು ತಿದ್ದಿ ತೀಡಿಸಿಕೊಂಡು ಸಿಂಗರಗೊಂಡು ಇಲ್ಲಿಯವರೆಗೆ ಬೆಳೆದುಬಂದ ದಾರಿ ರೋಚಕ.

ಕ್ಯಾಲೆಂಡರ್ ಬದಲಾಗುತ್ತದೆ. ಆದರೆ ನಮ್ಮ ಜೀವನ ಬದಲಾಗಲೇ ಬೇಕೆಂದಿಲ್ಲ. ಬದಲಾವಣೆ ಜಗದ ನಿಯಮ ಎಂಬುದು ಹೌದಾದರೂ, ಕೆಲವೊಮ್ಮೆ ಇರುವ ನೆಮ್ಮದಿ ಸುಖ ಸಂತೋಷವನ್ನು ಕಾಪಿಟ್ಟುಕೊಳ್ಳುವುದೂ ಹರಸಾಹಸವೇ. ಹಾಗೆಯೇ ಕಾಪಾಡಿಕೊಳ್ಳುತ್ತೇವೆ ಎಂದು ನಾವು ಸಂಕಲ್ಪಿಸಿಕೊಂಡರೂ ಬದುಕು ನಮಗೆ ಸಿಹಿ ನಿಮಿಷಗಳ ರಸದೌತಣವನ್ನು ಉಣಬಡಿಸುತ್ತದೆ.

ಬರದಿಹುದರೆಣಿಕೆಯಲಿ ಬಂದಿಹುದ ಮರೆಯದಿರು
ಗುರುತಿಸೊಳಿತಿರುವುದನು ಕೇಡುಗಳ ನಡುವೆ
ಇರುವ ಭಾಗ್ಯವ ನೆನೆದು ಬಾರೆನೆಂಬುದ ಬಿಡು
ಹರುಷಕದೇ ದಾರಿಯೆಲೊ ಮಂಕುತಿಮ್ಮ
ಎಂದು ಡಿವಿಜಿ ಅವರು ಕಗ್ಗದಲ್ಲಿ ಹೇಳಿದ್ದಾರಲ್ಲ ಹಾಗೆ!

ಇರುವುದೆಲ್ಲವ ಬಿಟ್ಟು ಇರದುದರೆಡೆಗೆ ತುಡಿಯುವ ಮನಸ್ಸನ್ನು ಕಟ್ಟಿಹಾಕಿ, ನೆಮ್ಮದಿಯಿಂದ ವರ್ಷ ಉಜ್ವಲಿಸುವಂತೆ ನೋಡಿಕೊಳ್ಳೋಣ.

ಎಲ್ಲರಿಗೂ ಹೊಸ ವರ್ಷದ ಶುಭಾಶಯಗಳು

ದೆಹಲಿ ಗಡಿಯಲ್ಲಿ ರೈತರ ಸತ್ಯಾಗ್ರಹಕ್ಕೆ ಮೈಸೂರು ರೈತ ಒಕ್ಕೂಟದಿಂದ ಮೊಂಬತ್ತಿ ಬೆಳಗಿಸಿ ಬೆಂಬಲ

ಮೈಸೂರು, ಡಿ.25(ಎಸ್‌ಪಿಎನ್)-ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ಕಾನೂನು ಜಾರಿಗೆ ಒತ್ತಾಯಿಸಿ ದೆಹಲಿ ಗಡಿಯಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಸಂಘಟನೆಯ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ ಹೋರಾಟಕ್ಕೆ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳು ಮೈಸೂರು ಜಿಲ್ಲಾ ನ್ಯಾಯಾಲಯದ ಮುಂಭಾಗದ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಬುಧವಾರ ಮೊಂಬತ್ತಿ ಬೆಳಗಿಸಿ ಬೆಂಬಲಿಸಿದರು.



ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೈವಾಲ ಹೋರಾಟಕ್ಕೆ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳು ಮೈಸೂರು ಜಿಲ್ಲಾ ನ್ಯಾಯಾಲಯದ ಮುಂಭಾಗದ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಬುಧವಾರ ಮೊಂಬತ್ತಿ ಬೆಳಗಿಸಿ ಬೆಂಬಲಿಸಿದರು.

ಪ್ರತಿಭಟನೆ ನೇತೃತ್ವವನ್ನು ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ವಹಿಸಿ, ಕೇಂದ್ರ ಸರ್ಕಾರದ ವಿರುದ್ಧ ವಿವಿಧ ಘೋಷಣೆಗಳನ್ನು ಕೂಗಿದರು. ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, ಎಂಎಸ್‌ಪಿ ಕಾನೂನು ಜಾರಿಗೆ ಒತ್ತಾಯಿಸಿ ಪಂಜಾಬ್-ಹರಿಯಾಣದ ಕನೋರಿ ಬಾರ್ಡರ್‌ನಲ್ಲಿ ಕಳೆದ 29 ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ ರಾಜಕೀಯೆತರ ಸಂಘಟನೆಯ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೈವಾಲ ಹೋರಾಟವನ್ನು ಬೆಂಬಲಿಸಲಾಗುವುದು ಎಂದರು.

ದೇಶಾದ್ಯಂತ ಮೊಂಬತ್ತಿ ಬೆಳಗಿಸಿ ಪ್ರತಿಭಟನೆ ನಡೆಸಬೇಕೆಂದು ಸಂಯುಕ್ತ ಕಿಸಾನ್ ಮೋರ್ಚಾದ ಮುಖಂಡರು, ವಿವಿಧ ರಾಜ್ಯದ ರೈತ ಮುಖಂಡರಿಗೆ ಕರೆ ನೀಡಿದ್ದರು. ಈ ಹಿನ್ನಲೆಯಲ್ಲಿ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೈವಾಲ ಆರೋಗ್ಯ ಸುಧಾರಿಸಲಿ ಹಾಗೂ ರೈತ ಪರವಾಗಿ ಹಮ್ಮಿಕೊಂಡಿರುವ ಅವರ ಹೋರಾಟಕ್ಕೆ ಜಯವಾಗಲಿ ಎಂದು ಪ್ರಾರ್ಥಿಸಿ, ಮೊಂಬತ್ತಿ ಬೆಳಗಿಸಲಾಗಿದೆ ಎಂದರು.

ಎರಡು ದಿನಗಳ ಹಿಂದೆ ಸುಪ್ರೀಂಕೋರ್ಟ್ ನ್ಯಾಯಾಧೀಶರು ವಿಚಾರಣೆ ನಡೆಸಿ, ಸರ್ಕಾರದ ಪರ ಹಾಜರಿದ್ದ ವಕೀಲರಿಗೆ ಎಚ್ಚರಿಕೆ ನೀಡಿ ದಲ್ಲೈವಾಲಾ ಅವರನ್ನು ಕೂಡಲೇ ಆಸ್ಪತ್ರೆಗೆ ವರ್ಗಾಯಿಸಬೇಕು ಹಾಗೂ ತುರ್ತುಚಿಕಿತ್ಸೆ ನೀಡಬೇಕು ಎಂದು ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮತ್ತು ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚಿಸಿದ್ದಾರೆ. ರೈತರ ನೋವು ನಮ್ಮನ್ನಾಳುವ ಸರ್ಕಾರಗಳಿಗೆ ಏಕೆ ಅರ್ಥವಾಗುತ್ತಿಲ್ಲ ಎಂಬುದೇ ಅನುಮಾನ ಮೂಡಿಸುತ್ತಿದೆ. ಇಂದು ಕ್ರಿಸ್‌ಮಸ್ ಹಬ್ಬ, ಆ ಏಸುವಾದರೂ ನಮ್ಮ ಪ್ರಧಾನಿಗೆ ಒಳ್ಳೆಯ ಬುದ್ಧಿ ನೀಡಲಿ, ರೈತರ ಸಮಸ್ಯೆ ಬಗೆಹರಿಸುವಂತಾಗಲಿ ಎಂದು ಪ್ರಾರ್ಥಿಸಿದರು.

ಪ್ರತಿಭಟನೆಯಲ್ಲಿ ಅತ್ತಳ್ಳಿ ದೇವರಾಜ್, ಬರಡನಪುರ ನಾಗರಾಜ್, ನೀಲಕಂಠಪ್ಪ, ಪೈಲ್ವಾನ್ ವೆಂಕಟೇಶ. ಇಂದಿನ ಧರಣಿಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಮಾರ್ಬಳ್ಳಿ ನೀಲಕಂಠಪ್ಪ, ಕುರುಬೂರು ಪ್ರದೀಪ್, ಬನ್ನೂರು ಸೂರಿ, ಲಕ್ಷ್ಮೀಪುರ ವೆಂಕಟೇಶ್, ವರಕೂಡು ನಾಗೇಶ್, ವಾಜಮಂಗಲ ಮಾದೇವ, ನಾಗರಾಜ್ ಸೇರಿದಂತೆ ಇತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಕೆಆರ್‌ಎಸ್ ರಸ್ತೆಗೆ ಮಹಾರಾಜರ ಹೆಸರು ತೆಗೆದು ಸಿದ್ದರಾಮಯ್ಯ ಹೆಸರು ಇಡುವುದು ಸರಿಯಲ್ಲ

ವಿಧಾನಸಭೆಯ ವಿಪಕ್ಷ ನಾಯಕ ಆರ್.ಅಶೋಕ್



ಬೆಂಗಳೂರು, ಡಿ.25– ಕೆಆರ್‌ಎಸ್ ರಸ್ತೆಗೆ ಮಹಾರಾಜರ ಹೆಸರು ತೆಗೆದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರು ಇಡುವುದು ಸರಿಯಲ್ಲ ಎಂದು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕಕ್ಕೆ ಕೃಷ್ಣರಾಜಸಾಗರ ಅಣೆಕಟ್ಟನ್ನು ನೀಡಿದ ಮಹನೀಯರಾದ ಅವರ ಹೆಸರನ್ನು ತೆಗೆದು ಕೆಆರ್‌ಎಸ್ ರಸ್ತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರು ಇಡುವುದು ಒಳ್ಳೆಯ ಬೆಳವಣಿಗೆ ಅಲ್ಲ. ಹಾಗೇನಾದರೂ ಹೆಸರು ಇಡಬೇಕು ಎಂದಿದ್ದರೆ ಹೊಸ ರಸ್ತೆಯೊಂದನ್ನು ನಿರ್ಮಿಸಿ ಅವರ ಹೆಸರು ಅಥವಾ ಅವರ ಕುಟುಂಬದವರ ಹೆಸರನ್ನು ಇಡಲಿ ಎಂದರು.

ಮಹಾರಾಜರ ಕುಟುಂಬ ಈ ನಾಡಿಗೆ ಸೇವೆ ಸಲ್ಲಿಸಿದೆ. ಅನ್ನ–ನೀರು ಕೊಟ್ಟಿದೆ. ಮಾರಿ ಕಣ್ಣ ಹೋರಿ ಮೇಲೆ ಎನ್ನುವಂತೆ ಆ ಕುಟುಂಬವನ್ನು ಗುರಿ ಮಾಡಬಾರದು. ಸಿಎಂ ಸಿದ್ದರಾಮಯ್ಯ ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದು, ಅವರು ಇಂತಹ ಕೆಲಸಕ್ಕೆ ಕೈ ಹಾಕುತ್ತಾರೆಂದರೆ ಜನರಿಗೆ ಅವರ ಬಗ್ಗೆ ಇರುವ ಭಾವನೆ ಬದಲಾಗುತ್ತದೆ ಎಂದರು.

ಸಾರಿಗೆ 'ಶಕ್ತಿ' ಕಳೆದುಕೊಂಡಿದೆ: ಶಕ್ತಿ ಯೋಜನೆಯಿಂದಾಗಿ ರಾಜ್ಯ ಸರ್ಕಾರಕ್ಕೆ ಅಪಾರ ನಷ್ಟವಾಗಿದ್ದು, ಸಾರಿಗೆ ನೌಕರರು ಪ್ರತಿಭಟಿಸುತ್ತಿದ್ದಾರೆ. ರಾಜ್ಯ ಸರ್ಕಾರ ಆರ್ಥಿಕ ನಷ್ಟದಲ್ಲಿದೆ ಎಂದು ಬಸವರಾಜ ರಾಯರೆಡ್ಡಿ ಹಲವು ಬಾರಿ ಹೇಳಿದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಳಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟು ನಷ್ಟ ಉಂಟಾಗಿದೆ. ಸಾರಿಗೆ ನೌಕರರು ಧರಣಿ ಮಾಡುತ್ತಿದ್ದು, ಅವರಿಗೆ 4 ಸಾವಿರ ಕೋಟಿ ರೂ. ನೀಡಬೇಕು. ರೈತರಿಗೆ ಒಂದುವರೆ ಸಾವಿರ ಕೋಟಿ ಸಬ್ಸಿಡಿ ನಾಮ ಹಾಕಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ನಾಮ ಹಾಕುವುದರಲ್ಲಿ ಕಾಂಗ್ರೆಸ್‌ನವರು ಪಳಗಿದವರು. ಹಾಗಾಗಿ ಈ ವರ್ಷ ಒಂದೂವರೆ ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಮುಂದಿನ ವರ್ಷ ಸಿಎಂ ಸಿದ್ದರಾಮಯ್ಯ ಮನಸ್ಸು ಮಾಡಿ 2 ಲಕ್ಷ ಕೋಟಿ ರೂ. ಸಾಲ ಮಾಡಿದರೆ ಕರ್ನಾಟಕ ಜನತೆಯ ಮುಂದೆ ಬರಲು ಸಾಧ್ಯವಿಲ್ಲ ಎಂದು ಆರ್.ಅಶೋಕ್ ದೂರಿದರು.

ಸರ್ಕಾರ ಹುಚ್ಚರ ಸಂತೆ: ಸರ್ಕಾರ ಹುಚ್ಚರ ಸಂತೆಯಾಗಿದೆ. ಸಿ.ಟಿ.ರವಿ ಮೇಲೆ ಸುಮಾರು ನಲವತ್ತು–ಐವತ್ತು ಜನ ಹಲ್ಲೆ ಮಾಡಿ ಕೊಲೆ ಯತ್ನ ನಡೆದಿದೆ. ಇದರಲ್ಲಿ ಸಚಿವರು ಮತ್ತು ಅವರ ಪಿಎ ಪಾತ್ರ ಇದೆ. ಈ ಪ್ರಕರಣದಲ್ಲಿ ಅದೇ ಠಾಣೆಯಲ್ಲಿ ಎಫ್‌ಐಆರ್ ಮಾಡಬೇಕೆಂದು ಆಗ್ರಹಿಸಿದ್ದೆವು. ನಮ್ಮನ್ನು ಖಾನಾಪುರ ಪೊಲೀಸ್ ಠಾಣೆಯಲ್ಲಿ ಸುಮಾರು ಐದು ಗಂಟೆಗಳ ಕಾಲ ಕಾಯಿಸಿ, ನಂತರ ದೂರು ಸ್ವೀಕರಿಸಿದ್ದಾರೆ. ಸರ್ಕಾರಕ್ಕೆ ಬುದ್ಧಿ ಭ್ರಮಣೆಯಾಗಿದೆ. ಪೊಲೀಸ್ ಠಾಣೆಗಳು ಸುರಕ್ಷಿತ ಅಲ್ಲ. ಯಾರಾದರೂ ಅಪರಾಧಿಯನ್ನು ಬಂಧಿಸಿದರೆ ಅವರನ್ನು ಕಬ್ಬಿನ ಗದ್ದೆಯಲ್ಲಿ ಇರಿಸಬೇಕು ಎಂದು ರೂಲ್ಸ್ ಮಾಡಿದ್ದಾರೆ. ಗೃಹ ಸಚಿವರನ್ನು ಏನೂ ಕೇಳಿದರೂ ನನಗೆ ಗೊತ್ತಿಲ್ಲ ಎನ್ನುತ್ತಿದ್ದಾರೆ ಎಂದು ಆರ್.ಅಶೋಕ್ ಕಿಡಿಕಾರಿದರು.

ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣಕ್ಕೆ ಆಕ್ಷೇಪ ಸರಿಯಲ್ಲ; ಮಾಜಿ ಸಂಸದ ಪ್ರತಾಪ್ ಸಿಂಹ

● ಮೈಸೂರಿಗೆ ಸಿದ್ದರಾಮಯ್ಯ ಕೊಡುಗೆ ಸ್ಮರಣೀಯ ● ಮೊಸರಲ್ಲಿ ಕಲ್ಲು ಹುಡುಕುವುದು ಬೇಡ ● ಪಕ್ಷಭೇದ ಮರೆತು ಬೆಂಬಲಿಸಬೇಕು ● ಮಹಾರಾಜರ ನಂತರ ಬಂದವರಿಗೂ ಗೌರವ ನೀಡಬೇಕು

ಮೈಸೂರು, ಡಿ.25(ಬಿಎಲ್‌ಯು)– ಮೈಸೂರಿನ ಕೆಆರ್‌ಎಸ್ ರಸ್ತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಲು ವಿರೋಧ ವ್ಯಕ್ತಪಡಿಸುವವರ ವಿರುದ್ಧ ಮಾಜಿ ಸಂಸದ ಪ್ರತಾಪ್ ಸಿಂಹ ಬೇಸರ ವ್ಯಕ್ತಪಡಿಸಿದ್ದಾರೆ. ಸಿದ್ದರಾಮಯ್ಯ ಹೆಸರು ನಾಮಕರಣ ಪ್ರಸ್ತಾಪಕ್ಕೆ ವಿರೋಧ ವ್ಯಕ್ತಪಡಿಸಿರುವ ರಾಜ್ಯ ಬಿಜೆಪಿ ನಾಯಕರ ವಿರುದ್ಧವೂ ಅವರ ಹೇಳಿಕೆ ಅಚ್ಚರಿ ಮೂಡಿಸಿದೆ.

ನಗರದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ಎಂದು ಹೆಸರಿಡುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ್ದಾರೆ.

ಮೈಸೂರಿಗೆ ಸಿದ್ದರಾಮಯ್ಯ ಕೊಡುಗೆ ಬಹಳಷ್ಟಿದೆ. ಜಯದೇವ ಆಸ್ಪತ್ರೆ ಕಟ್ಟಡ ನಿರ್ಮಾಣ ಮಾಡಿದ್ದು ಸಿದ್ದರಾಮಯ್ಯ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಿಸಿದ್ದು ಸಿದ್ದರಾಮಯ್ಯ, ರಾಜಪಥ ಮಾಡಿಸಿದ್ದು ಸಿದ್ದರಾಮಯ್ಯ ಹೀಗೆ ಮೈಸೂರಿಗೆ ಹಲವು ಕೊಡುಗೆ ನೀಡಿರುವ ಸಿದ್ದರಾಮಯ್ಯ ಅವರ ಹೆಸರನ್ನು ರಸ್ತೆಗೆ ನಾಮಕರಣ ಮಾಡುವುದರಲ್ಲಿ ಯಾರೂ ಆಕ್ಷೇಪ ವ್ಯಕ್ತಪಡಿಸುವುದು ಸರಿಯಲ್ಲ ಎಂದು ಪ್ರತಾಪ್ ಸಿಂಹ ಅಭಿಪ್ರಾಯಪಟ್ಟಿದ್ದಾರೆ.



ಸಿದ್ದರಾಮಯ್ಯ ಮೈಸೂರಿನ ಸುಪುತ್ರರಾಗಿದ್ದಾರೆ. ಸೈದ್ಧಾಂತಿಕವಾಗಿ ಅವರನ್ನು ನಾನು ವಿರೋಧಿಸುತ್ತೇನೆ. ಆದರೆ ಈ ವಿಚಾರದಲ್ಲಿ ನಾನು ವಿರೋಧ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸ್ಪಷ್ಟ ಬಹುಮತದೊಂದಿಗೆ ಎರಡು ಬಾರಿ ಮುಖ್ಯಮಂತ್ರಿ ಆಗಿರುವ ಸಿದ್ದರಾಮಯ್ಯ ವಿಧಾನಸಭೆಗೆ ಪಾದಾರ್ಪಣೆ ಮಾಡಿ 40 ವರ್ಷವಾಗಿದ್ದು, ಹಲವು ಕೊಡುಗೆಗಳನ್ನು ನೀಡಿದ್ದಾರೆ. ಹೀಗೆ ಅವರ ಹೆಸರನ್ನು ರಸ್ತೆಗೆ ನಾಮಕರಣ ಮಾಡುವ ನಗರಪಾಲಿಕೆ ಕ್ರಮ ಸ್ವಾಗತಾರ್ಹ ಎಂದರು.

ಈ ವಿಚಾರದಲ್ಲಿ ತಕರಾರು ಎತ್ತಿದರೆ ಅದು ಮೊಸರಿನಲ್ಲಿ ಕಲ್ಲು ಹುಡುಕಿದಂತಾಗುತ್ತದೆ. ಸಾಧಕರು ಬರೀ ಬಿಜೆಪಿಯಲ್ಲಿ ಮಾತ್ರವಿಲ್ಲ, ಎಲ್ಲಾ ಪಕ್ಷದಲ್ಲಿಯೂ ಇದ್ದಾರೆ. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಹೆಸರನ್ನು ರಸ್ತೆಗೆ ನಾಮಕರಣ ಮಾಡಲು ಯಾರೂ ಕೂಡ ಪಕ್ಷಭೇದ ಮಾಡಬಾರದು, ಸಣ್ಣತನ ತೋರಬಾರದು ಎಂದು ಸಲಹೆ ನೀಡಿದ್ದಾರೆ.

ಮಹಾರಾಜರ ಹೆಸರು ಎಲ್ಲಾ ಕಡೆ ಇಟ್ಟಿದ್ದೇವೆ. ಮಹಾರಾಜರ ನಂತರವೂ ಅನೇಕ ಸಾಧಕರು ಮೈಸೂರಿಗೆ ಬಂದಿದ್ದಾರೆ. ವಿಶ್ವೇಶ್ವರಯ್ಯ ಅವರಂತಹ ಇಂಜಿನಿಯರ್ ಇರದೇ ಇದ್ದಿದ್ದರೆ ಇಂದು ಕೆಆರ್‌ಎಸ್ ನಿರ್ಮಾಣ ಮಾಡಲು ಸಾಧ್ಯವಾಗುತ್ತಿತ್ತೇ ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಮಿರ್ಜಾ ಇಸ್ಮಾಯಿಲ್ ಇರದಿದ್ದರೆ ಬೆಂಗಳೂರಿಗೆ ವಿದ್ಯುತ್ ಸಂಪರ್ಕ ನೀಡಲು ಆಗುತ್ತಿತ್ತೆ ಎಂದು ಮರು ಪ್ರಶ್ನಿಸಿದರು.

ಮೈಸೂರು ರಾಜ್ಯದಲ್ಲಿ ಒಳ್ಳೆಯ ದಿವಾನರು ಇದ್ದ ಕಾರಣ ಒಳ್ಳೆಯ ಅಭಿವೃದ್ಧಿಯಾಗಿದೆ. ಅವರಿಗೆ ಇನ್ನು ಗೌರವ ಸಿಗಬೇಕು. ಬೆಂಗಳೂರಿಗೆ ಕೆಂಪೇಗೌಡರ ನಂತರ ಬಂದ ಸಾಧಕರಿಗೆ ಎಷ್ಟು ಗೌರವ ಕೊಟ್ಟಿದ್ದೇವೆಂರೋ ಅಷ್ಟೆ ಗೌರವ ಮೈಸೂರು ಮಹಾರಾಜರ ನಂತರ ಬಂದವರಿಗೂ ಸಿಗಬೇಕು ಎಂದು ಪ್ರತಾಪ್ ಸಿಂಹ ಅಭಿಪ್ರಾಯಪಟ್ಟರು.

ಕೆಆರ್‌ಎಸ್ ರಸ್ತೆಗೆ ಸಿದ್ದರಾಮಯ್ಯ ಹೆಸರು ನಾಮಕರಣ ಮಾಡಲು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ಹಲವರು ವಿರೋಧ ವ್ಯಕ್ತಪಡಿಸಿದ್ದಾರೆ. ಆದರೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಪ್ರತಾಪ್ ಸಿಂಹ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿರುವುದು ಆಶ್ಚರ್ಯ ಉಂಟು ಮಾಡಿದೆ.

ಸಿ.ಟಿ.ರವಿ ಪ್ರಕರಣ ಸಿಐಡಿಗೆ ವಹಿಸಿರುವುದು ದ್ವೇಷ ರಾಜಕಾರಣಕ್ಕೆ ಸಾಕ್ಷಿ

ವಿಧಾನಪರಿಷತ್‌ನಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಬಗ್ಗೆ ಸಿ.ಟಿ.ರವಿ ಆಕ್ಷೇಪಾರ್ಹ ಪದ ಬಳಕೆ ಪ್ರಕರಣವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಸಿಐಡಿಗೆ ವಹಿಸುವ ಮೂಲಕ ದ್ವೇಷ ರಾಜಕಾರಣ ಮಾಡುತ್ತಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಆರೋಪಿಸಿದರು. ವಿಧಾನಪರಿಷತ್‌ನಲ್ಲಿ ಸಭಾಪತಿಗಳು ಕಸ್ಟೋಡಿಯನ್ ಆಗಿರುತ್ತಾರೆ. ಅವರ ನಿರ್ಣಯವೇ ಅಂತಿಮವಾಗಿರುತ್ತದೆ. ಹೀಗಿರುವಾಗ ಈ ಪ್ರಕರಣವನ್ನು ಸಿಐಡಿಗೆ ವಹಿಸಿರುವುದು ಸರಿಯಲ್ಲ ಎಂದು ಹೇಳಿದರು.

ಈ ಪ್ರಕರಣವನ್ನು ಸಿಐಡಿಗೆ ವಹಿಸುವ ಮೂಲಕ ರಾಜ್ಯ ಸರ್ಕಾರ ಸಿ.ಟಿ.ರವಿ ಅವರನ್ನು ರಾಜಕೀಯವಾಗಿ ಮುಗಿಸುವ ಷಡ್ಯಂತ್ರ ರೂಪಿಸಿದೆ. ಇದು ಬಹಳ ಕೆಟ್ಟ ಮೇಲ್ಪಂಕ್ತಿಯಾಗಿದ್ದು, ಕೆಟ್ಟ ರಾಜಕಾರಣಕ್ಕೆ ದಾರಿ ಮಾಡಿಕೊಡುವಂತಿದೆ ಎಂದು ಪ್ರತಾಪ್ ಸಿಂಹ ಅಭಿಪ್ರಾಯಪಟ್ಟರು.

ಸಿ.ಟಿ.ರವಿ ಮಾತಿನಿಂದ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಮನಸಿಗೆ ನೋವಾಗಿದ್ದರೆ ನ್ಯಾಯ ಕೇಳಲು ಪ್ರಧಾನಿ ಅಷ್ಟೆ ಅಲ್ಲದೆ ಯಾರ ಬಳಿಯಾದರೂ ಹೋಗಲಿ. ಆದರೆ ಸದನದ ಒಳಗೆ ಆಗಿರುವ ಘಟನೆಗೆ ಎಲ್ಲಿ ನ್ಯಾಯ ಕೇಳಬೇಕೋ ಅಲ್ಲಿ ಕೇಳಬೇಕು. ಇದನ್ನು ಲಕ್ಷ್ಮಿ ಹೆಬ್ಬಾಳ್ಕರ್ ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಿ.ಟಿ.ರವಿ ಹಾಗೂ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಆಣೆ, ಪ್ರಮಾಣ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿದ ಪ್ರತಾಪ್ ಸಿಂಹ, ನಾನು ಈ ಬಗ್ಗೆ ಯಾವ ಪ್ರತಿಕ್ರಿಯೆಯನ್ನು ನೀಡುವುದಿಲ್ಲ. ರಾಜಕಾರಣಿಗಳ ಈ ವರಸೆ ಬಗ್ಗೆ ನನಗೆ ಯಾವುದೇ ನಂಬಿಕೆ ಇಲ್ಲ. ಎಲ್ಲವನ್ನೂ, ಎಲ್ಲರದ್ದನ್ನು ಬಿಚ್ಚಿಡುತ್ತೇನೆ ಎನ್ನುತ್ತಾರೆ ಆ ನಂತರ ಮೌನವಾಗುತ್ತಾರೆ. ಆದ ಕಾರಣ ಈ ವಿಚಾರದ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದರು.

ಡಾ.ಪರಮೇಶ್ವರ್ ಯುವ ಸೈನ್ಯದ ಕ್ಯಾಲೆಂಡರ್ ಬಿಡುಗಡೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಅಖಿಲ ಕರ್ನಾಟಕ ಡಾ.ಜಿ.ಪರಮೇಶ್ವರ್ ಯುವ ಸೈನ್ಯ ಪ್ರಕಟಿಸಿರುವ 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.

ಮೈಸೂರು,ಡಿ.25(ಎಂಟಿವೈ)– ರಾಜಕೀಯ ಕ್ಷೇತ್ರದಲ್ಲಿ ಸದಾ ಜನರ ನೋವುಗಳಿಗೆ ಸ್ಪಂದಿಸುವ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಉತ್ತಮ ಶಿಕ್ಷಣ ತಜ್ಞರು, ಸನ್ನಡತೆಯುಳ್ಳ ರಾಜಕಾರಣಿ ಎಂದು ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ, ಅಖಿಲ ಕರ್ನಾಟಕ ಡಾ.ಜಿ. ಪರಮೇಶ್ವರ್ ಯುವ ಸೈನ್ಯ ಪ್ರಕಟಿಸಿರುವ 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಡಾ.ಜಿ.ಪರಮೇಶ್ವರ್, ಉತ್ತಮ ಮಾತ್ರವಲ್ಲದೆ ಸಮಚಿತ್ತದ ರಾಜಕಾರಣಿಯೂ ಹೌದು. ರಾಜಕಾರಣಿಗಳು, ರಾಜಕೀಯ ಕ್ಷೇತ್ರ ಎಂದೊಡನೆಯೇ ಜನರಿಗೆ ಒಂದಷ್ಟು ಬೇಸರ ಬರುತ್ತದೆ. ಆದರೆ ಡಾ.ಜಿ. ಪರಮೇಶ್ವರ್ ಇದಕ್ಕೆ ಹೊರತಾಗಿದ್ದಾರೆ.

ಇವರು ಕೃಷಿ ವಿಜ್ಞಾನಿಯಾಗಿ ಡಾಕ್ಟರೇಟ್ ಪಡೆದರೂ ಸಮಾಜ ವಿಜ್ಞಾನಿಯಾಗಿ ಕೆಲಸ ಮಾಡುತ್ತಿದ್ದಾರೆ. ತಮ್ಮ ತಂದೆ ಸ್ಥಾಪಿಸಿದ ಶಿಕ್ಷಣ ಸಂಸ್ಥೆಯನ್ನು ರಾಜ್ಯಾದ್ಯಂತ ವಿಸ್ತರಿಸಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ದೇಶವೇ ಕರ್ನಾಟಕದತ್ತ ತಿರುಗಿ ನೋಡುತ್ತದೆ. ಇದಕ್ಕೆ ಪರಮೇಶ್ವರ ಕೊಡುಗೆಯೂ ಅಪಾರವಾಗಿದೆ ಎಂದರು.

ಡಾ.ಜಿ.ಪರಮೇಶ್ವರ್ ವಿವಿಧ ಇಲಾಖೆಗಳ ಸಚಿವರಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಗೃಹ ಸಚಿವರಾಗಿ ಪೊಲೀಸ್ ಇಲಾಖೆಯ ಸಮರ್ಥವಾಗಿ ಮುನ್ನಡೆಸುತ್ತಿದ್ದಾರೆ. ರಾಜ್ಯದ ಯಾವುದೇ ಜಿಲ್ಲೆಗಳಲ್ಲೂ ಕೋಮು ಗಲಭೆ ನಡೆಯದಂತೆ ಕಟ್ಟೆಚ್ಚರ ವಹಿಸಲು ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ. ದಲಿತರು, ಮಹಿಳೆಯರು, ಅಲ್ಪಸಂಖ್ಯಾತರಿಗೆ ರಕ್ಷಣೆ ಸಿಕ್ಕಿದೆ. ಇದರ ಹಿಂದೆ ಪರಮೇಶ್ವರ ಶ್ರಮವಿದೆ ಎಂದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, 'ಅನ್ನ' ಚಲನಚಿತ್ರದ ಸಾಹಿತಿ ಹನೂರು ಚೆನ್ನಪ್ಪ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಸಿ.ಎನ್.ಮಂಜೇಶ್, ಡಾ.ಜಿ.ಪರಮೇಶ್ವರ್ ಯುವ ಸೈನ್ಯದ ಜಿಲ್ಲಾಧ್ಯಕ್ಷ ಸಿ.ಮಂಜುನಾಥ್, ವಕೀಲ ಕುಮಾರ್, ಮುಖಂಡರಾದ ಡೈರಿ ವೆಂಕಟೇಶ್, ಈಶ್ವರ ಚಕ್ಕಡಿ, ಪುಟ್ಟಸ್ವಾಮಿ ಇನ್ನಿತರರಿದ್ದರು.

ಸಿದ್ದರಾಮಯ್ಯರ ಹೆಸರು ಹತ್ತಾರು ರಸ್ತೆಗೆ ಇಡಬೇಕು, ಅವರ ಹೆಸರಲ್ಲಿ ಭವನ ನಿರ್ಮಾಣವಾಗಬೇಕು

"ಕೇವಲ ಒಂದು ರಸ್ತೆಗೆ ಮಾತ್ರ ಸಿಎಂ ಸಿದ್ದರಾಮಯ್ಯ ಹೆಸರಿಡುವುದು ಸೂಕ್ತವಲ್ಲ. ನಗರದ ಹತ್ತಾರು ರಸ್ತೆಗಳಿಗೆ ಸಿಎಂ ಸಿದ್ದರಾಮಯ್ಯ ಹೆಸರಿಡಬೇಕು. ಹತ್ತಾರು ಎಕರೆಯಲ್ಲಿ ಭವನ ನಿರ್ಮಾಣವಾಗಬೇಕು. ಅಲ್ಲಿ ಸಿದ್ದರಾಮಯ್ಯ ಅವರ ಸುಮಾರು ನಲವತ್ತು ವರ್ಷದ ರಾಜಕಾರಣ, ಸಾಧನೆ, ಸಿದ್ಧಾಂತ ಹಾಗೂ ತತ್ವಾದರ್ಶಗಳ ಚರ್ಚೆಯಾಗಬೇಕು. ಬಿಜೆಪಿ, ಜೆಡಿಎಸ್‌ನವರು ತಮ್ಮ ಒಳಮನಸ್ಸಿನಲ್ಲಿ ಸಿದ್ದರಾಮಯ್ಯ ಅವರ ಕೀರ್ತಿ, ಸಾಧನೆಗಳನ್ನು ಒಪ್ಪಿಕೊಳ್ಳುತ್ತಾರೆ. ಆದರೆ, ಬಹಿರಂಗವಾಗಿಯಷ್ಟೇ ವಿರೋಧಿಸುತ್ತಿದ್ದಾರೆ.

– ಹೆಚ್.ಎ.ವೆಂಕಟೇಶ್

ಮೈಸೂರು ನಗರಪಾಲಿಕೆ ಮಹಿಳಾ ಪೌರಕಾರ್ಮಿಕರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ

ಮೈಸೂರು,ಡಿ.25(ಎಂಟಿವೈ)– ಮೈಸೂರು ಮಹಾನಗರಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಪೌರಕಾರ್ಮಿಕರ ಸಂಘ ಅಸ್ತಿತ್ವಕ್ಕೆ ಬಂದಿದ್ದು, ನೂತನವಾಗಿ ಆಯ್ಕೆಯಾಗಿರುವ ಮಹಿಳಾ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ಸನ್ಮಾನ ಸಮಾರಂಭ ಜರುಗಿತು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘ ಆಯೋಜಿಸಿದ್ದ ಸಮಾರಂಭದಲ್ಲಿ ಮಹಿಳಾ ಪೌರಕಾರ್ಮಿಕರ ಸಂಘದ ನೂತನ ಪದಾಧಿಕಾರಿಗಳ ಹೆಸರು ಘೋಷಣೆ ಮಾಡಿ, ಸನ್ಮಾನಿಸಲಾಯಿತು.

ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಪೌರಕಾರ್ಮಿಕರ ಶ್ರೇಯೋಭಿವೃದ್ಧಿ ಹಾಗೂ ಮಹಿಳಾ ಪೌರಕಾರ್ಮಿಕರ ಸಮಸ್ಯೆಗಳ ಈಡೇರಿಕೆಗಾಗಿ ಮೈಸೂರು ಪಾಲಿಕೆ ಕಾಯಂ ಪೌರಕಾರ್ಮಿಕರು ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘದ ಮಹಿಳಾ ಘಟಕವನ್ನು ರಚಿಸಿ ಅಧ್ಯಕ್ಷರಾಗಿ ಮಾದೇವಿ ಅವರನ್ನು ಆಯ್ಕೆ ಮಾಡಲಾಗಿದೆ. ಪ್ರಧಾನ ಕಾರ್ಯದರ್ಶಿಯಾಗಿ ನರಸಮ್ಮ, ಇಂದ್ರ (ಕಾರ್ಯಾಧ್ಯಕ್ಷರು), ರಾಣಿ (ಜಂಟಿ ಕಾರ್ಯದರ್ಶಿ), ಶಾಂತಮ್ಮ (ಸಂಘಟನಾ ಕಾರ್ಯದರ್ಶಿ), ಅನಿತಾ (ಉಪಾಧ್ಯಕ್ಷರು), ಮಹದೇವಮ್ಮ (ಖಜಾಂಚಿ), ನಿರ್ದೇಶಕರಾಗಿ ಉಮಾ, ಸರೋಜಮ್ಮ, ಜಯಾ, ಮಾಗಾಳಿ, ಸಾವಿತ್ರಿ, ಗಾಯತ್ರಿ, ಅಮಲ, ರಾಸಮ್ಮ, ವರಲಕ್ಷ್ಮಿ, ಎ.ಲಕ್ಷ್ಮಿ, ಪಿ.ಗೌರಿ, ಧನಲಕ್ಷ್ಮಿ ಅವರನ್ನು ಆಯ್ಕೆ ಮಾಡಲಾಗಿದೆ. ನೂತನ ಪದಾಧಿಕಾರಿಗಳನ್ನು ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘ ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘದ ವತಿಯಿಂದ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿದ ಬಳಿಕ ಮಹಿಳಾ ಘಟಕದ ಅಧ್ಯಕ್ಷೆ ಮಾದೇವಿ ಮಾತನಾಡಿ, ಮೈಸೂರು ಪಾಲಿಕೆಯಲ್ಲಿ ನೂರಾರು ಮಹಿಳಾ ಪೌರಕಾರ್ಮಿಕರು ಕೆಲಸ ಮಾಡುತ್ತಿದ್ದು, ಇವರ ಯೋಗಕ್ಷೇಮ ಹಾಗೂ ಮಹಿಳೆಯರಿಗೆ ಆಗುತ್ತಿರುವ ಸಮಸ್ಯೆಗಳನ್ನು ಬಗೆಹರಿಸುವ ದೃಷ್ಟಿಯಿಂದ ಮಹಿಳಾ ಘಟಕವನ್ನು ರಚಿಸಲಾಗಿದೆ ಎಂದರು.

ಇದೇ ವೇಳೆ ಸಂಘದ ವತಿಯಿಂದ ಪ್ರಕಟಿಸಿರುವ 2025ರ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಮೈಸೂರು ಪಾಲಿಕೆ ಕಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾಸಂಘದ ಪದಾಧಿಕಾರಿಗಳಾದ ಎಂ.ವಡಿವೇಲು, ಎನ್.ಮಾರ, ಟಿ.ಶ್ರೀನಿವಾಸ್, ಮಂಚಯ್ಯ, ಆರ್.ನರಸಿಂಹ, ಜಿ.ಮಂಜುನಾಥ್, ಎಂ.ರಾಜೀವ್, ದೊರೆ, ದಿನೇಶ್‌ಕುಮಾರ್, ವಿ.ಶ್ರೀನಿವಾಸ್, ಅಮಾಸೆ ಉಪಸ್ಥಿತರಿದ್ದರು.

ಡಿ.28ಕ್ಕೆ ಅಟಲ್‌ಜೀ, ಗುಂಡೂರಾವ್ ಪ್ರಶಸ್ತಿ ಪ್ರದಾನ ಸಮಾರಂಭ

ಅಖಿಲ ಕರ್ನಾಟಕ ಬ್ರಾಹ್ಮಣ ಸುವರ್ಣ ವರ್ಷದ ಮಹಾ ಸಮ್ಮೇಳನ

ಮೈಸೂರು, ಡಿ.25(ಎಂಟಿವೈ)– ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ರಸ್ತೆಯಲ್ಲಿರುವ ವೀಣೆ ಶೇಷಣ್ಣ ಭವನದಲ್ಲಿ ಡಿ.28ರಂದು ಬೆಳಗ್ಗೆ 10.30ಕ್ಕೆ ಅಟಲ್‌ಜೀ ರಾಷ್ಟ್ರೀಯ ಹಾಗೂ ಆರ್.ಗುಂಡೂರಾವ್ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಸುವರ್ಣ ವರ್ಷದ ಮಹಾ ಸಮ್ಮೇಳನ ಆಯೋಜಿಸಲಾಗಿದೆ ಎಂದು ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಬಿ.ಆರ್.ನಟರಾಜ ಜೋಯಿಸ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಧ್ಯಾ ಸುರಕ್ಷಾ ಟ್ರಸ್ಟ್, ಅಟಲ್‌ಜೀ ಸಂಸ್ಕಾರ ಭಾರತ್ ಪ್ರತಿಷ್ಠಾನ, ಶಾಕಾಂಬರಿ ಧಾರ್ಮಿಕ ಶ್ರದ್ಧಾ ಕೇಂದ್ರ, ಕರ್ನಾಟಕ ಬ್ರಾಹ್ಮಣ ಹಿರಿಯ ನಾಗರಿಕ ವೇದಿಕೆಗಳ ಸಂಯುಕ್ತಾಶ್ರಯದಲ್ಲಿ ಬ್ರಾಹ್ಮಣ ಸಮುದಾಯದವರಿಗಾಗಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂದು ವಿವಿಧ ಕ್ಷೇತ್ರಗಳ ಸರ್ವಶ್ರೀ ಅಟಲ್‌ಜೀ 9ನೇ ರಾಷ್ಟ್ರೀಯ ಪ್ರಶಸ್ತಿ, ಸರ್ವಶ್ರೀ ಆರ್.ಗುಂಡೂರಾವ್ 9ನೇ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ, ಜಿಲ್ಲಾ ಬ್ರಾಹ್ಮಣ ಮಹಿಳಾ ಸಮ್ಮೇಳನ, ಅಖಿಲ ಕರ್ನಾಟಕ ಬ್ರಾಹ್ಮಣ ಸುವರ್ಣ ವರ್ಷದ ಮಹಾಸಮ್ಮೇಳನ 'ವಿಶ್ವಾಮಿತ್ರ' ಕಾರ್ಯಕ್ರಮ, ಬ್ರಾಹ್ಮಣ ಸಂಘ ಸಂಸ್ಥೆಗಳ ಮುಖ್ಯಸ್ಥರಿಗೆ ಸನ್ಮಾನ ಹಾಗೂ 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮ ನಡೆಯಲಿದೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಲೋಕಾಯುಕ್ತರಾದ ಎನ್.ಸಂತೋಷ್ ಹೆಗ್ಡೆ, ಸಚಿವ ಆರ್.ದಿನೇಶ್ ಗುಂಡೂರಾವ್, ಶಾಸಕ ಟಿ.ಎಸ್.ಶ್ರೀವತ್ಸ, ಪತ್ರಕರ್ತ ರವಿ ಹೆಗಡೆ, ಉದ್ಯಮಿ ಮಹೇಶ್ ಶೆಣೈ, ಮುಖಂಡರಾದ ರಘುನಾಥ್, ಇಳೈ ಆಳ್ವಾರ್ ಸ್ವಾಮೀಜಿ, ಕೆ.ರಘುರಾಂ ವಾಜಪೇಯಿ, ನವೀನ್‌ಕುಮಾರ್ ಹಾಗೂ ಇನ್ನಿತರರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಇದೇ ವೇಳೆ ಸಾಧಕರಿಗೆ ವಿವಿಧ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಬ್ರಾಹ್ಮಣ ಸಮುದಾಯದ ಮುಖಂಡರಾದ ಕೆ.ರಘುರಾಂ ವಾಜಪೇಯಿ, ಮ.ನ.ಲತಾ ಮೋಹನ್, ವಿಜಯಲಕ್ಷ್ಮೀ ಇತರರಿದ್ದರು.

ಆನಂದೂರು ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿ ಅನರ್ಹಗೊಳಿಸಿದ್ದ ಖಂಡಿಸಿ ಪ್ರತಿಭಟನೆ

ಮೈಸೂರು, ಡಿ.25(ಎಂಟಿವೈ)– ಮೈಸೂರು ತಾಲೂಕು ಆನಂದೂರು ಹಾಲು ಉತ್ಪಾದಕರ ಸಹಕಾರ ಸಂಘದ ಚುನಾಯಿತ ಆಡಳಿತ ಮಂಡಳಿಯನ್ನು ಅನರ್ಹಗೊಳಿಸಿರುವ ಸಹಕಾರ ಇಲಾಖೆ ಅಧಿಕಾರಿಗಳ ನಡೆಯನ್ನು ಖಂಡಿಸಿ ನಾಳೆ (ಡಿ.26) ಬೆಳಗ್ಗೆ 11 ಗಂಟೆಗೆ ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿ ಬಳಿ ಪ್ರತಿಭಟನೆ ನಡೆಸುವುದಾಗಿ ರೈತ ಮುಖಂಡ ವಿಜಯೇಂದ್ರ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಹಕಾರ ಸಂಘಗಳ ಉಪ ನಿಬಂಧಕರ ಮೇಲ್ವಿಚಾರಣೆಯಲ್ಲೇ 2023ರಲ್ಲಿ ಮೈಸೂರು ತಾಲೂಕು ಆನಂದೂರು ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆದಿತ್ತು. ಈ ಚುನಾವಣೆಯಲ್ಲಿ ರೈತಸಂಘ ಬೆಂಬಲಿತರಾಗಿ ಆಯ್ಕೆಯಾಗಿದ್ದ ಎಂಟು ಮಂದಿಯಲ್ಲಿ ಶಿವೇಗೌಡ ಅಧ್ಯಕ್ಷರಾಗಿ ನೇಮಕಗೊಂಡಿದ್ದರು. ನೂತನ ಆಡಳಿತ ಮಂಡಳಿ ರಚನೆಯಾದ ಮೇಲೆ ಸಂಘದಲ್ಲಿ ಕಳೆದ 30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಕಾರ್ಯದರ್ಶಿ ಹಣ ದುರುಪಯೋಗ ಮಾಡಿಕೊಂಡಿರುವುದನ್ನು ಪತ್ತೆ ಹಚ್ಚಿ, ಸಹಕಾರ ಸಂಘಗಳ ನಿಬಂಧಕರಿಗೆ ದೂರು ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಹಿಂದಿನ ಕಾರ್ಯದರ್ಶಿ ಚಿತಾವಣೆಯಿಂದ ನೂತನ ಆಡಳಿತ ಮಂಡಳಿಯನ್ನು ವಿನಾಕಾರಣ ಅನರ್ಹಗೊಳಿಸಲಾಗಿದೆ. ಅಲ್ಲದೆ, ತರಾತುರಿಯಲ್ಲಿ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿದೆ. ಇದರ ಬೆನ್ನಲ್ಲೇ ರಾಜೀನಾಮೆ ಕೊಟ್ಟು ಹೋಗಿದ್ದ ಕಾರ್ಯದರ್ಶಿ ಮತ್ತೆ ಕರ್ತವ್ಯಕ್ಕೆ ಹಾಜರಾಗಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಈ ಸಂಬಂಧ ನ್ಯಾಯ ದೊರಕಿಸಿಕೊಡುವಂತೆ ಆನಂದೂರು ಹಾಲು ಉತ್ಪಾದಕರ ಸಹಕಾರ ಸಂಘದ ಸದಸ್ಯರೊಂದಿಗೆ ಪ್ರತಿಭಟನೆ ನಡೆಸುವುದಾಗಿ ಹೇಳಿದರು. ಗೋಷ್ಠಿಯಲ್ಲಿ ಆನಂದೂರು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಶಿವೇಗೌಡ, ನಿರ್ದೇಶಕಿ ಭವ್ಯಶ್ರೀ, ರೈತ ಸಂಘದ ಆನಂದೂರು ದಿನೇಶ್, ಅನಿಲ್ ಇದ್ದರು.

ಎಸ್‌ಸಿ/ಎಸ್‌ಟಿ ಕುಂದು ಕೊರತೆ ಸಭೆ



ಮೈಸೂರು ತಾಲೂಕು ಜಯಪುರ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಪ್ರಕಾಶ್ ಯತ್ತಿನಮನಿ ನೇತೃತ್ವದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿತರಕ್ಷಣಾ ಸಮಿತಿ ಸಭೆ ನಡೆಯಿತು. ಜಯಪುರ ಠಾಣಾ ವ್ಯಾಪ್ತಿಯ ದಲಿತ ಮುಖಂಡರು ಭಾಗವಹಿಸಿ ಕುಂದು ಕೊರತೆಗಳನ್ನು ಹೇಳಿಕೊಂಡರು. ಕ್ರೈಮ್ ವಿಭಾಗ ಪಿಎಸ್‌ಐ ಹೇಮಲತಾ, ದಲಿತ ಮುಖಂಡರಾದ ಧನಗಹಳ್ಳಿ ಸ್ವಾಮಿ, ಮುರುಡಗಹಳ್ಳಿ ಮಹದೇವು, ಜಯಪುರ ಕೆಂಪರಾಜು, ಗೋಪಾಲಪುರ ವೆಂಕಟೇಶ್ ಸೇರಿದಂತೆ ಹಲವರಿದ್ದರು.



ಅಯೂಬ್ ಖಾನ್‌ಗೆ ಶುಭಾಶಯ ಕೋರಿಕೆ

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅವರ ಹುಟ್ಟುಹಬ್ಬದ ಅಂಗವಾಗಿ ದಸರಾ ವಸ್ತುಪ್ರದರ್ಶನದ ಜೆಪಿಎ ಫನ್ ವರ್ಲ್ಡ್ ಮಲ್ಲಿಕಾರ್ಜುನ, ಮೈಸೂರು ದಸರಾ ವಸ್ತುಪ್ರದರ್ಶನ ನಿರೂಪಕ ಅಜಯ್ ಶಾಸ್ತ್ರಿ, ಆಪ್ತ ಕಾರ್ಯದರ್ಶಿ ನಾಗೇಶ್, ರಾಕೇಶ್ ಸನ್ಮಾನಿಸಿ, ಶುಭ ಕೋರಿದರು.

ಆರ್.ಮೂರ್ತಿ ಹುಟ್ಟುಹಬ್ಬ ಆಚರಣೆ...



ಮೈಸೂರು ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ ಅವರ ಹುಟ್ಟುಹಬ್ಬವನ್ನು ಬೆಳಗಾವಿಯಲ್ಲಿ ಮಾಜಿ ಸಚಿವ ಹೆಚ್.ಎಂ.ರೇವಣ್ಣ ನೇತೃತ್ವದಲ್ಲಿ ಆಚರಿಸಲಾಯಿತು. ಅಯೂಬ್‌ಖಾನ್, ನಾಗೇಶ್, ಕರಿಯಪ್ಪ, ಹೊಯ್ಸಳ, ರೋಹಿತ್‌ಸಿಂಗ್ ಇತರರಿದ್ದಾರೆ.

ಮೈಸೂರು ಬಿಜೆಪಿ ಕಚೇರಿಯಲ್ಲಿ ವಾಜಪೇಯಿ ಜನ್ಮ ದಿನಾಚರಣೆ





ಮೈಸೂರಿನ ಬಿಜೆಪಿ ಕಚೇರಿಯಲ್ಲಿ ದಿವಂಗತ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನ ಆಚರಿಸಲಾಯಿತು. (ಎಡಚಿತ್ರ). ಇದೇ ವೇಳೆ ಹಿರಿಯ ಬಿಜೆಪಿ ನಾಯಕರನ್ನು ಸನ್ಮಾನಿಸಲಾಯಿತು.

ಮೈಸೂರು, ಡಿ.25(ಬಿಎಲ್‌ಯು)– ಮೈಸೂರು ಭಾರತೀಯ ಜನತಾ ಪಾರ್ಟಿ ಕಚೇರಿಯಲ್ಲಿ ಇಂದು ದಿವಂಗತ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಅಟಲ್ ಬಿಹಾರಿ ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಪ್ರಧಾನಮಂತ್ರಿಯಾಗಿ ವಾಜಪೇಯಿ ಅವರು ದೇಶಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ ಎಂದರು.

ಸ್ವರ್ಣ ಚತುಷ್ಪಥ ಪರಿವರ್ತಕ ಯೋಜನೆ ಆರಂಭಿಸಿದ ವಾಜಪೇಯಿ ಅವರು ಕಾಶ್ಮೀರದಿಂದ ಕನ್ಯಾಕುಮಾರಿ ತನಕ ದೇಶದ ಹಲವು ನಗರಗಳನ್ನು ಸಂಪರ್ಕಿಸುವ ಹೆದ್ದಾರಿ ನಿರ್ಮಾಣ ಮಾಡಿದರು. ಅಷ್ಟೆ ಅಲ್ಲದೆ ಅವರ ಸರ್ಕಾರದ ಅವಧಿಯಲ್ಲಿ ಜಾರಿಗೆ ಬಂದ ಸರ್ವ ಶಿಕ್ಷಾ ಅಭಿಯಾನವು ಸಾಕ್ಷರತೆ ಪ್ರಮಾಣವನ್ನು ಹೆಚ್ಚಿಸಿತು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಶಾಸಕ ಟಿ.ಎಸ್.ಶ್ರೀವತ್ಸ, ವಾಜಪೇಯಿ ಅವರು ದೇಶ ಕಂಡ ಅಪ್ರತಿಮ ಸಂವಿಧಾನ ಪಟುವಾಗಿದ್ದರು. ಸಂಸತ್ತಿನಲ್ಲಿ ಅವರ ಮಾತುಗಳು ಹಲವು ವಿಚಾರಗಳ ಮೇಲೆ ಬೆಳಕು ಚೆಲ್ಲುತ್ತಿತ್ತು. ಉತ್ತಮ ರಾಜಕಾರಣಿಯಾಗಿ, ಕವಿಯಾಗಿ, ವಾಗ್ಮಿಯಾಗಿದ್ದ ವಾಜಪೇಯಿ ಅವರು ದೇಶಕ್ಕೆ ಅವಿಸ್ಮರಣೀಯ ಕೊಡುಗೆಗಳನ್ನು ನೀಡಿದ್ದಾರೆ ಎಂದರು.




ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿಯವರ 100ನೇ ವರ್ಷದ ಹುಟ್ಟುಹಬ್ಬವನ್ನು ಚಾಮುಂಡೇಶ್ವರಿ ಕ್ಷೇತ್ರದ ವತಿಯಿಂದ ವಾಜಪೇಯಿ ವೃತ್ತ ಹಿನಕಲ್‌ನಲ್ಲಿ ಆಚರಿಸಲಾಯಿತು. ಈ ಸಂದರ್ಭ ಚಾಮುಂಡೇಶ್ವರಿ ಕ್ಷೇತ್ರದ ಅಧ್ಯಕ್ಷ ವೈ. ಟಿ.ರವಿ ಲಕ್ಷ್ಮೀಪುರ, ಮೈಸೂರು ನಗರ ಜಿಲ್ಲಾಧ್ಯಕ್ಷ ಎಲ್.ನಾಗೇಂದ್ರ, ಎಸ್.ಆರ್.ಗೋಪಾಲ್‌ರಾವ್, ರಾಜಕುಮಾರ್, ಹಿನಕಲ್ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಶಿವಕುಮಾರ್, ಸುನೀಲ್, ಮೋನಿಕಾ, ಉಪಾಧ್ಯಕ್ಷರಾದ ಹಿನಕಲ್ ಗಣೇಶ್, ಮರಿಸ್ವಾಮಿನಾಯಕ್, ಈರಪ್ಪ, ಗುರೂರು ಶಿವು, ಪ್ರಭು, ಶಾಲಿನಿ, ಸವಿತಾಗೌಡ, ನಾರಾಯಣ್, ಮೋಹನ್‌ಕುಮಾರ್, ವೆಂಕಟೇಶ್‌ರಾವ್, ದಿನೇಶ್‌ಗೌಡ, ರಾಮೇಗೌಡ, ಪ್ರಕಾಶ್, ರಾಧಾ, ಯಮುನ, ಕೃಷ್ಣವೇಣಿ, ರಾಘವೇಂದ್ರ, ಶ್ರೀಕಂಠ, ದಾರಿಪುರ ಡಿ.ಚಂದ್ರಶೇಖರ್ ಉಪಸ್ಥಿತರಿದ್ದರು

ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಅಂಗವಾಗಿ ಹಿರಿಯ ಬಿಜೆಪಿ ನಾಯಕರಾದ ಸು.ಮುರುಳಿ, ರಂಗನಾಥ್ ಕರೋಹಟ್ಟಿ, ಮಹದೇವಯ್ಯ, ನರೇಂದ್ರ ಬಾಬು, ಶಾಂತ, ಲಲಿತಾ, ಎಂ.ಕೆ.ಶಂಕರ್, ಸುಬ್ಬರಾವ್, ಶಿವರಾಜಪ್ಪ ವರಕೋಡು, ಪ್ರಕಾಶ್, ಪ್ರೇಮ ಶಂಬಯ್ಯ ಅವರನ್ನು ಸನ್ಮಾನಿಸಲಾಯಿತು. ರಾಜ್ಯ ಬಿಜೆಪಿ ಉಪಾಧ್ಯಕ್ಷ ಎಂ.ರಾಜೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ರಾಜ್ಯ ಪ್ರಕೋಷ್ಠಕ ಸಂಚಾಲಕ ಫಣೀಶ್, ಮಾಜಿ ಮೇಯರ್ ಶಿವಕುಮಾರ್, ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ವಕ್ತಾರ ಕೇಬಲ್ ಮಹೇಶ್, ಗ್ರಾಮಾಂತರ ಪ್ರಧಾನ ಕಾರ್ಯದರ್ಶಿ ಮಹೇಶ್, ಕಿರಣ್, ರಾಮೇಗೌಡ, ನಗರ ಮಾಧ್ಯಮ ಸಂಚಾಲಕ ಮಹೇಶ್ ರಾಜ್ ಅರಸ್ ಹಾಗೂ ಇತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಜಿಲ್ಲಾ ಕಸಾಪ ಹಿಂದಿನ ಆಡಳಿತ ಮಂಡಳಿ ವಿಸರ್ಜನೆ

ನೂತನ ಅಧ್ಯಕ್ಷರನ್ನಾಗಿ ಡಾ.ಎಚ್.ಎಸ್.ಮುದ್ದೇಗೌಡರನ್ನು ನೇಮಿಸಿ ಜೋಶಿ ಆದೇಶ

ಸಮ್ಮೇಳನದ ವಿಚಾರವಾಗಿ ನೂರು ಜನ ಪೈಕಿ ಐದು ಮಂದಿ ಬೇರೆ ರೀತಿ ಮಾತನಾಡುವುದು ಸಹಜ, ಒಪ್ಪಿಗೆ ಸೂಚಿಸಿದವರ ಸಂಖ್ಯೆ ಹೆಚ್ಚಿದ್ದು ಅದಕ್ಕೆ ಮನ್ನಣೆ ನೀಡಬೇಕು. ಜಿಲ್ಲೆಗೆ ಸಮ್ಮೇಳನ ತಂದ ಕೇಂದ್ರ ಪರಿಷತ್ತಿನ ಅಧ್ಯಕ್ಷರ ಕಾಲೆಳೆಯುವುದು ಜಿಲ್ಲೆಗೆ ಶೋಭೆ ತರುವಂತದ್ದಲ್ಲ. ಹಾಗೆಯೇ ಹಾವೇರಿ ಸಮ್ಮೇಳನವನ್ನು ಮೀರಿದ ರೀತಿಯಲ್ಲಿ ಮಂಡ್ಯ ಸಮ್ಮೇಳನ ನಡೆದಿದೆ ಎಂದು ತುಚ್ಛವಾಗಿ ಮಾತನಾಡಿದ್ದರಿಂದಾಗಿ ಹಾವೇರಿ ಜನರು ಪ್ರತಿಭಟನೆ ನಡೆಸುವಂತಾಯಿತು, ಇದು ಬೇಕಿತ್ತೇ...



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಡಾ.ಎಚ್.ಎಸ್.ಮುದ್ದೇಗೌಡ.

ಮುಂದಿನ ವಾರದಲ್ಲಿ ಎಲ್ಲಾ ತಾಲೂಕಿಗೆ ಭೇಟಿ ನೀಡಿ, ರಾಜಕೀಯ ಹೊರತು ಪಡಿಸಿ ಆಸಕ್ತಿಯಿಂದ ಕೆಲಸ ಮಾಡುವವರನ್ನು ನೇಮಕ ಮಾಡಲಾಗುವುದು. ಜಿಲ್ಲಾ ಸಮ್ಮೇಳನಕ್ಕೆ 6 ಲಕ್ಷ ರೂ. ಗಳನ್ನು ರಾಜ್ಯ ಸರ್ಕಾರ ನೀಡಲಿದ್ದು ಅದನ್ನು 6.50 ಲಕ್ಷಕ್ಕೆ ಏರಿಸಲು ಪ್ರಯತ್ನ ಮಾಡಲಾಗುವುದು. ತಾಲೂಕು ಸಮ್ಮೇಳನಕ್ಕೆ 1 ಲಕ್ಷ, ಹೋಬಳಿ ಸಮ್ಮೇಳನಕ್ಕೆ 50 ಸಾವಿರ ನೀಡುತ್ತಿದ್ದು ಅದನ್ನು ಹೆಚ್ಚಿಸಲು ಶ್ರಮಿಸಲಾಗುವುದು
–ಎಚ್.ಎಸ್.ಮುದ್ದೇಗೌಡ

ಮಂಡ್ಯ,ಡಿ.25– ಮಂಡ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿದ್ದ ರವಿಕುಮಾರ್ ಚಾಮಲಾಪುರ ನಿಧನದ ಹಿನ್ನೆಲೆಯಲ್ಲಿ ಜೊತೆಗೆ ಜಿಲ್ಲೆಯಲ್ಲಿ ನಡೆದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಿಯೋಜನೆಗೊಂಡಿದ್ದರಿಂದ ತಾತ್ಕಾಲಿಕವಾಗಿ ಜಿಲ್ಲಾ ಕಸಾಪ ಸಂಚಾಲಕಿಯನ್ನಾಗಿ ಮಾಜಿ ಅಧ್ಯಕ್ಷೆ ಡಾ.ಮೀರಾ ಶಿವಲಿಂಗಯ್ಯ ಅವರನ್ನು ನೇಮಿಸಿದ್ದ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಮಹೇಶ ಜೋಶಿ ಇದೀಗ ತಾತ್ಕಾಲಿಕ ಸಂಚಾಲಕಿ ಮತ್ತು ಆಡಳಿತ ಮಂಡಳಿಯನ್ನು ವಿಸರ್ಜಿಸಿದ್ದು, ಮಾಜಿ ಅಧ್ಯಕ್ಷ ಡಾ.ಎಚ್.ಎಸ್.ಮುದ್ದೇಗೌಡ ಅವರನ್ನು ಮುಂದಿನ ಆದೇಶದವರೆಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನಾಗಿ ನೇಮಿಸಿ ಆದೇಶ ಹೊರಡಿಸಿದ್ದಾರೆ.

ಈ ಕುರಿತು ಬುಧವಾರ ಪರಿಷತ್ತಿನ ನೂತನ ಅಧ್ಯಕ್ಷ ಎಚ್.ಎಸ್.ಮುದ್ದೇಗೌಡ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಸಮ್ಮೇಳನ ಯಶಸ್ವಿಯಾಗಿ ನಡೆದಿದ್ದು, ಇದರ ಬೆನ್ನಲ್ಲೇ ಜಿಲ್ಲೆಯ ಪರಿಷತ್ತಿನ ಎಲ್ಲಾ ಆಡಳಿತ ಮಂಡಳಿಯನ್ನು ವಿಸರ್ಜಿಸಲಾಗಿದೆ. ಮಂಡ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ವಿವರಿಸಿದರು.

ಹಾಲಿ ಜಿಲ್ಲಾ ಪರಿಷತ್ತಿಗೆ ನಾಲ್ಕು ಮಂದಿ ಪದಾಧಿಕಾರಿಗಳನ್ನು ಮಾತ್ರ ಆಯ್ಕೆ ಮಾಡಲಾಗಿದೆ. ಜಿಲ್ಲಾ ಗೌರವ ಕಾರ್ಯದರ್ಶಿಯಾಗಿ ಹುಸ್ಕೂರು ಕೃಷ್ಣೇಗೌಡ, ಜಿಲ್ಲಾ ಕಾರ್ಯದರ್ಶಿಯಾಗಿ ಸುಜಾತ ಕೃಷ್ಣ, ಕೋಶಾಧ್ಯಕ್ಷರಾಗಿ ಬಿ.ಎಂ.ಅಪ್ಪಾಜಪ್ಪ, ಅವರನ್ನು ಆಯ್ಕೆ ಮಾಡಲಾಗಿದೆ ಎಂದರು.

ಒಂದು ತಿಂಗಳಿನಲ್ಲಿ ಹೊಸ ಆಡಳಿತ ಮಂಡಳಿಯ ಕಾರ್ಯಗಳನ್ನು ಮುಗಿಸಿ ಅಧಿಕೃತವಾಗಿ ಸಾಹಿತ್ಯ ಪರಿಷತ್ತಿನ ಕೆಲಸಗಳನ್ನು ಪ್ರಾರಂಭಿಸುವುದಾಗಿ ತಿಳಿಸಿದ ಅವರು ಜಿಲ್ಲೆಯಲ್ಲಿರುವ ಕನ್ನಡ ಭವನ ಸರ್ಕಾರ ಇತರೆ ಇಲಾಖೆ ನೀಡುವುದು ಅಥವಾ ಮಾರಾಟ ಮಾಡುವುದಕ್ಕೆ ನಿರ್ಣಯಿಸಲಾಗಿದ್ದು, ನೂತನ ಕನ್ನಡ ಭವನವನ್ನು ನಗರದ ಕೇಂದ್ರ ಭಾಗದಲ್ಲಿ ನಿರ್ಮಿಸುವ ಉದ್ದೇಶವನ್ನು ಹೊಂದಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ನಡೆದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಅಭೂತಪೂರ್ವ ಯಶಸ್ಸನ್ನು ಕಂಡಿದ್ದು, ಸಮ್ಮೇಳನದ ಯಶಸ್ಸಿಗೆ ಶ್ರಮಿಸಿದ ಸಮಾಜದ ಎಲ್ಲಾ ವರ್ಗದ ಜನ ಸಮುದಾಯಕ್ಕೆ ಕೇಂದ್ರ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಕೃತಜ್ಞತೆ ಸಲ್ಲಿಸಿದೆ.

ಹೊಸ ಹೊಸ ಯೋಜನೆಗಳನ್ನು ತಂದು ಸಮ್ಮೇಳನ ನಡೆಸಿದ್ದು, ಹೊರ ದೇಶದ ಶೇ.95ರಷ್ಟು ಕನ್ನಡಿಗರು ನಮ್ಮ ಕಾರ್ಯಕ್ರಮಕ್ಕೆ ಬಂದಿದ್ದಾರೆ. ಇದು ಪ್ರಪ್ರಥಮವಾಗಿ ನಡೆದ ಬದಲಾವಣೆಯಾಗಿದೆ. ಹೊರದೇಶದವರನ್ನು ಏಕೆ ಕರೆಯಬೇಕಿತ್ತು ವಿಶ್ವೇಶ್ವರಯ್ಯ ಅವರ ಮೊಮ್ಮಗಳನ್ನು ಏಕೆ ಕರೆತರಬೇಕು ಎಂದು ಸಮಾಜದಲ್ಲಿ ಜವಾಬ್ದಾರಿಯುತ ಸ್ಥಾನದಲ್ಲಿರುವ ಪೂಜ್ಯಪ್ರಕಾಶ್‌ಗೌಡ, ಜೆ.ಟಿ.ವೀರಪ್ಪ, ಎಸ್.ಬಿ.ಶಂಕರೇಗೌಡ, ವಾ.ನಂ ಶಿವರಾಮು, ಸತೀಶ್ ಜವರೇಗೌಡ ಸೇರಿದಂತೆ ಹಲವರು ಸಮ್ಮೇಳನದ ವಿರುದ್ಧ ಮಾತನಾಡಿದ್ದು, ಅದು ಶೋಭೆ ತರುವಂತದ್ದಲ್ಲ, ಉಚಿತವಾದದ್ದೂ ಅಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಗೌರವ ಕಾರ್ಯದರ್ಶಿ ಹುಸ್ಕೂರು ಕೃಷ್ಣೇಗೌಡ, ಜಿಲ್ಲಾ ಕಾರ್ಯದರ್ಶಿ ಸುಜಾತ ಕೃಷ್ಣ, ಕೋಶಾಧ್ಯಕ್ಷ ಬಿ.ಎಂ.ಅಪ್ಪಾಜಪ್ಪ ಪದಾಧಿಕಾರಿಗಳಾದ ದರಸಗುಪ್ಪೆ ಧನಂಜಯ, ಮಂಜುನಾಥ ಬಲ್ಲೇನಹಳ್ಳಿ ಚಿಕ್ಕತಿಮ್ಮಯ್ಯ ಇದ್ದರು.

ಅಮಿತ್ ಶಾ ವಿರುದ್ಧ ಭಾರತೀನಗರದಲ್ಲಿ ಪ್ರತಿಭಟನೆ



ಅಮಿತ್ ಶಾ ವಿರುದ್ಧ ದಲಿತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಭಾರತೀನಗರದಲ್ಲಿ ಪಂಜಿನ ಮೆರವಣಿಗೆ ನಡೆಸಿದರು.

ಭಾರತೀನಗರ,ಡಿ.25– ಡಾ.ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ವಿರುದ್ಧ ದಲಿತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿ ಪ್ರತಿಭಟಿಸಿದರು.

ಭಾರತೀನಗರದ ಅಂಬೇಡ್ಕರ್ ಭವನದ ಬಳಿ ದಲಿತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಜಮಾಯಿಸಿ ಮದ್ದೂರು–ಮಳವಳ್ಳಿ ಹೆದ್ದಾರಿಯಲ್ಲಿ ಪಂಜಿನ ಮೆರವಣಿಗೆ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಪ್ರಬಲವಾಗಿ ಕಟ್ಟಿಕೊಟ್ಟ ಸಂವಿಧಾನ ಪ್ರಜಾಪ್ರಭುತ್ವದ ಸಂಸತ್ತಿನಲ್ಲಿ ನಿಂತು ಸಂಸತ್ ಭವನಕ್ಕೆ ಧಕ್ಕೆ ಉಂಟುಮಾಡಿ ತಲೆತಗ್ಗಿಸುವಂತೆ ಮಾಡಿರುವ ಗೃಹ ಸಚಿವ ಅಮಿತ್ ಶಾ ಅವರು ಕೂಡಲೇ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಉಗ್ರ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಕಾರ್ಯಕರ್ತರು ಎಚ್ಚರಿಸಿದರು.

ಹಲಗೂರು ವೃತ್ತದಲ್ಲಿ ಜಮಾಯಿಸಿದ ದಲಿತ ಮುಖಂಡರು ಮಾನವ ಸರಪಳಿ ನಿರ್ಮಿಸಿ ಅಮಿತ್ ಶಾ ಅವರ ಭಾವಚಿತ್ರಕ್ಕೆ ಹಾಗೂ ಮನುಸ್ಮೃತಿ ಪುಸ್ತಕಕ್ಕೆ ಬೆಂಕಿ ಹಾಕುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ದಲಿತ ಮುಖಂಡರಾದ ಕ್ಯಾತಘಟ್ಟ, ಕಾಡುಕೊತ್ತನಹಳ್ಳಿ ಕೆಂಪರಾಜು, ಚಿದಂಬರಮೂರ್ತಿ, ಮರಿಸ್ವಾಮಿ, ಅಪ್ಪು, ಚಿಕ್ಕರಸಿನಕೆರೆ ಮೂರ್ತಿ, ಅಮೀನ್ ಶಿವಲಿಂಗಯ್ಯ, ಸಿ.ಶಿವಲಿಂಗಯ್ಯ, ಕಡಕೆರೆ ಯೋಗೇಶ್, ಗುಡಿಗೆರೆ ಬಸವರಾಜು, ಶಿವು, ರಾಘವೇಂದ್ರ, ಕೆಂಪರಾಜು, ಆರೋಗ್ಯ ಇಲಾಖೆಯ ಬಸವರಾಜು, ಹೊನ್ನಲಗೆರೆ ಶಿವಣ್ಣ ಮೂಡೀಹಳ್ಳಿ ತಿಮ್ಮಯ್ಯ, ಬೋರಯ್ಯ, ದೊಡ್ಡಮಾದನಹಳ್ಳಿ ಸಂತೋಷ, ಮಾದರಹಳ್ಳಿ ದೇವಿರಮ್ಮ ವೈ.ಬಿ.ರುದ್ರಯ್ಯ, ಮಡೇನಹಳ್ಳಿ ಸಿದ್ದರಾಮ್ಮ ಸೇರಿದಂತೆ ಹಲವರಿದ್ದರು.

ಪುನೀತ್ ರಾಜಕುಮಾರ್ ಚಾರಿಟಬಲ್ ಟ್ರಸ್ಟ್‌ನಿಂದ ಮಕ್ಕಳಿಗೆ ಉಚಿತ ಮನೆಪಾಠ

ಮಂಡ್ಯ: ಕೆ.ಆರ್.ಪೇಟೆ ತಾಲೂಕಿನ ಪೂವನಹಳ್ಳಿ ಗ್ರಾಮದಲ್ಲಿ ಪುನೀತ್‌ರಾಜ್ ಕುಮಾರ್ ಚಾರಿಟೇಬಲ್ ಟ್ರಸ್ಟ್‌ನ ವತಿಯಿಂದ ತಾಲೂಕಿನ ಪೂವನಹಳ್ಳಿ ಗ್ರಾಮದಲ್ಲಿ 45 ಮಕ್ಕಳಿಗೆ ಸಂಜೆ ಸಮಯದಲ್ಲಿ ಉಚಿತವಾಗಿ ಟ್ಯೂಷನ್ ವ್ಯವಸ್ಥೆ ಮಾಡಲಾಗಿದೆ ಎಂದು ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಶಿಲ್ಪ ಗೌಡ ತಿಳಿಸಿದರು. ಕುಗ್ರಾಮವಾದ ಪೂವನಹಳ್ಳಿಯಲ್ಲಿ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಸಮಸ್ಯೆಯಾಗಿದ್ದು, ಈ ನಿಟ್ಟಿನಲ್ಲಿ ಮಕ್ಕಳ ಶೈಕ್ಷಣಿಕ ಬೆಳವಣಿಗೆ ಈ ವ್ಯವಸ್ಥೆ ಮಾಡಿದ್ದು, ಪುನೀತ್ ರಾಜಕುಮಾರ್ ಅವರ ಹೆಸರಿನಲ್ಲಿ ಸಮಾಜಕ್ಕೆ ಸೇವೆ ಮಾಡುವ ದೃಷ್ಟಿಯಿಂದ ಗೋಶಾಲೆ, ಅನಾಥಾಶ್ರಮ, ವೃದ್ಧಾಶ್ರಮ, ಹೆಣ್ಣು ಮಕ್ಕಳಿಗೆ ಉಚಿತ ಟೈಲರಿಂಗ್ ತರಬೇತಿ, ಗ್ರಾಮೀಣ ಬಡ ಮಕ್ಕಳಿಗೆ ಟ್ಯೂಷನ್ ವ್ಯವಸ್ಥೆ ಮಾಡುವ ಮೂಲಕ ನೊಂದವರಿಗೆ ಧ್ವನಿಯಾಗಿ ಸಮಾಜಮುಖಿ ಕೆಲಸಗಳಲ್ಲಿ ಟ್ರಸ್ಟ್ ತೊಡಗಿಸಿಕೊಂಡಿದೆ ಎಂದು ತಿಳಿಸಿದ್ದಾರೆ.

ಕಳ್ಳತನಕ್ಕೆ ಯತ್ನಿಸಿದವನಿಗೆ ಗೂಸ



ಪಾಂಡವಪುರ,ಡಿ.25– ತಾಲೂಕಿನಲ್ಲಿ ದರೋಡೆ, ಕಳ್ಳತನ ಪ್ರಕರಣಗಳು ದಿನೇ ದಿನೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜನತೆ ಆತಂಕದಲ್ಲಿ ಜೀವನ ನಡೆಸುವ ಸನ್ನಿವೇಶ ಎದುರಾಗಿದೆ. ಇದಕ್ಕೆ ಪುಷ್ಟಿ ನೀಡುವಂತೆ ಕ್ಯಾತನಹಳ್ಳಿಯಲ್ಲಿ ಒಂಟಿ ಮನೆ ಕೊಲೆ ಪ್ರಕರಣದ ನಡೆದ ಪಕ್ಕದ ಜಯಂತಿ ನಗರ ಗ್ರಾಮದಲ್ಲಿ ಕಳ್ಳತನಕ್ಕೆ ಯತ್ನಿಸಿದ ವ್ಯಕ್ತಿಯೋರ್ವನಿಗೆ ಸ್ಥಳೀಯರು ಹಿಡಿದು ಕಂಬಕ್ಕೆ ಕಟ್ಟಿ ಥಳಿಸಿರುವ ಘಟನೆ ನಡೆದಿದೆ.

ಜಯಂತಿ ನಗರ ಗ್ರಾಮದಲ್ಲಿ ಅನುಮಾನಸ್ಪದವಾಗಿ ಓಡಾಡಿಕೊಂಡು ಮನೆಯೊಂದರ ಬಾಗಿಲು ಬಡಿಯುತ್ತಿದ್ದ ವ್ಯಕ್ತಿಯೊಬ್ಬನಿಗೆ ಸ್ಥಳೀಯರು ಹಿಡಿದು ಕಂಬಕ್ಕೆ ಕಟ್ಟಿ ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಬಂಧಿತ ಆರೋಪಿ ಬೈಲಕುಪ್ಪೆ ಗ್ರಾಮದ ನಿವಾಸಿ ಮಹೇಶ್ ಎಂದು ತಿಳಿದುಬಂದಿದೆ.

ಕಳೆದ ಮೂರ್‍ನಾಲ್ಕು ದಿನದ ಹಿಂದೆ ಜಯಂತಿ ನಗರ ಗ್ರಾಮದ ಸಮೀಪದಲ್ಲಿಯೇ ಒಂಟಿ ಮನೆಯೊಂದಕ್ಕೆ ದರೋಡೆ ನಡೆಸಲು ಮರಕತ್ತರಿಸುವ ಯಂತ್ರದೊಂದಿಗೆ ತೆರಳಿ ಮನೆ ಮಾಲೀಕನನ್ನು ಬರ್ಬರವಾಗಿ ಹತ್ಯೆಮಾಡಿ ಆತನ ಪತ್ನಿಗೆ ಗಾಯಗೊಳಿಸಿ ಪೊಲೀಸರಿಗೆ ಸಿಕ್ಕಿಬಿದ್ದ ಈ ಪ್ರಕರಣ ಇಡೀ ತಾಲೂಕನ್ನೇ ಬೆಚ್ಚಿ ಬೀಳಿಸಿತ್ತು. ಒಂಟಿ ಮನೆಗಳಲ್ಲಿ ವಾಸಿಸುವ ಜನತೆಯಂತೂ ಸಾಕಷ್ಟು ಭಯಭೀತರಾಗಿದ್ದಾರೆ. ಆ ಪ್ರಕರಣ ಮಾಸುವ ಮುನ್ನವೆ ವ್ಯಕ್ತಿಯೋರ್ವ ಜಯಂತಿ ನಗರ ಗ್ರಾಮದ ಬೀದಿಯಲ್ಲಿ ಅನುಮಾನಸ್ಪದವಾಗಿ ಓಡಾಡಿಕೊಂಡು ಬಾಗಿಲು ಬಡಿಯುತ್ತಿದ್ದ ಹಿನ್ನೆಲೆಯಲ್ಲಿ ಸ್ಥಳೀಯರು ಹಿಡಿದು ಹಿಗ್ಗಾಮುಗ್ಗ ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದಾರೆ.

ಅಘಲಯ ಗ್ರಾಮದಲ್ಲಿ ಭೈರವೇಶ್ವರ ಸ್ವಾಮಿಯ ಭೈರವಾಷ್ಟಮಿ ವಿಶೇಷ ಪೂಜೆ, ಅನ್ನದಾನ



ಕೆ.ಆರ್.ಪೇಟೆ ಡಿ.25– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಅಘಲಯ ಗ್ರಾಮದಲ್ಲಿ ಶ್ರೀ ಭೈರವೇಶ್ವರ ದೇವಾಲಯದಲ್ಲಿ ಭೈರವಾಷ್ಟಮಿ ಅಂಗವಾಗಿ ವಿಶೇಷ ಪೂಜೆ, ಹೋಮ, ಹವನ, ಮಹಾಮಂಗಳಾರತಿ, ಅನ್ನದಾನ ಕಾರ್ಯಕ್ರಮಗಳು ಶ್ರದ್ಧಾ ಭಕ್ತಿಯಿಂದ ನಡೆದವು.

ಅಘಲಯ ಗ್ರಾಮದ ಕೆರೆ ಬಳಿ ಇರುವ ಶ್ರೀ ಭೈರವೇಶ್ವರ ಸ್ವಾಮಿಯ ದೇವಾಲಯದಲ್ಲಿ ಭೈರವಾಷ್ಟಮಿ ಅಂಗವಾಗಿ ಅಷ್ಟ ಭೈರವೇಶ್ವರ ಸ್ವಾಮಿಯ ಪ್ರತಿಷ್ಠಾಪನೆ ಮಾಡಿ ಹೋಮ, ಹವನ ನಡೆಸಿ ವಿಶೇಷ ಪೂಜೆ ಸಲ್ಲಿಸಿ ಬೆಳಿಗ್ಗೆ 7ಗಂಟೆಯಿಂದ ಸಂಜೆಯವರೆವಿಗೂ ಭಕ್ತಾದಿಗಳಿಗೆ ದೇವರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು.

ಪ್ರಧಾನ ಅರ್ಚಕ ವೇದಮೂರ್ತಿ ನೇತೃತ್ವದಲ್ಲಿ ಪೂಜಾ ವಿಧಿ ವಿಧಾನಗಳು ನಡೆದವು. ಅಘಲಯ, ದೊಡ್ಡಸೋಮನಹಳ್ಳಿ, ಚಿಕ್ಕಸೋಮನಹಳ್ಳಿ, ಮಾಳಗೂರು, ನಾಯಸಿಂಗನಹಳ್ಳಿ, ನಾಗಮಂಗಲ ತಾಲೂಕಿನ ಬೆಟ್ಟದಮಲ್ಲೇನಹಳ್ಳಿ, ಗಂಗನಹಳ್ಳಿ, ಕುಪ್ಪಳ್ಳಿ, ಕಾರಳ್ಳಿ, ಗಂಗಸಮುದ್ರ, ಅಳಪಳ್ಳಿ, ಚೀಣ್ಯ ಸುಮಾರು 40 ಗ್ರಾಮಗಳ ಸಾವಿರಾರು ಭಕ್ತಾದಿಗಳು ಸೇರಿದಂತೆ ಅಘಲಯ ಗ್ರಾಮದ ಶಿವನಂಜೇಗೌಡ, ಸಿದ್ದೇಗೌಡ, ಎ.ಎಸ್.ಗಣೇಶ್, ಎ.ಎಸ್.ಶ್ರೀಧರ್, ಜಾನಕೀರಾಂ, ಎ.ಎಸ್.ರಮೇಶ್, ಹೋಬಳಿ ಲೋಕೇಶ್, ಮಂಜುನಾಥ್, ವಿಶ್ವನಾಥ್, ಎಸ್.ಆರ್. ಮಂಜುನಾಥ್, ಲಕ್ಷ್ಮೀಶ್, ಲೋಹಿತ್, ಪ್ರತಾಪ್ ಭಾಗವಹಿಸಿದ್ದರು.

ಮನೆಯ ಮುಂದೆ ಕೊಟ್ಟಿಗೆಯಲ್ಲಿ ಕಟ್ಟಿ ಹಾಕಿದ್ದ ಟಗರು, ಮೇಕೆಗಳ ಕಳವು

ಮನೆ ಮುಂಬಾಗಿಲಿಗೆ ಯಾರೂ ಹೊರಗೆ ಬರದಂತೆ ಕಡ್ಡಿ ಸಿಕ್ಕಿಸಿ ಕಳ್ಳತನ

ಚಿನಕುರಳಿ: ಮನೆಯ ಮುಂಭಾಗದ ಕೊಟ್ಟಿಗೆಯ ಶೆಡ್‌ನಲ್ಲಿ ಕಟ್ಟಿಹಾಕಿದ್ದ ಲಕ್ಷಾಂತರ ರೂ ಬೆಲೆ ಬಾಳುವ ಟಗರು, ಮೇಕೆಗಳನ್ನು ಕದ್ದು ಪರಾರಿಯಾಗಿರುವ ಘಟನೆ ಚಿನಕುರಳಿ ಬಳಿಯ ಬೋರೆ ಮೇಗಲ ಕೊಪ್ಪಲು ಗ್ರಾಮದಲ್ಲಿ ಸೋಮವಾರ ರಾತ್ರಿ ನಡೆದಿದೆ.

ಗ್ರಾಮದ ನರಸಿಂಹೇಗೌಡರ ಪುತ್ರ ಧರ್ಮರಾಜು ಎಂಬುವರಿಗೆ ಸೇರಿದ 9 ಟಗರು, ವಾತ ಹಾಗೂ ಮೇಕೆಗಳನ್ನು ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ಇವುಗಳು 2 ಲಕ್ಷಕ್ಕೂ ಅಧಿಕ ಬೆಲೆಬಾಳುತ್ತಿದ್ದವು ಎಂದು ಹೇಳಲಾಗಿದೆ.

ಮಾಲೀಕ ಧರ್ಮರಾಜು ಅವರು ಎಂದಿನಂತೆ ತಮ್ಮ ಮನೆಯ ಮುಂಭಾಗ ಕುರಿ, ಮೇಕೆ ಕಟ್ಟಲು ನಿರ್ಮಿಸಿಕೊಂಡಿದ್ದ ಕೊಟ್ಟಿಗೆಯಲ್ಲಿ ಸೋಮವಾರ ಟಗರು, ಮೇಕೆಗಳನ್ನು ಕಟ್ಟಿಹಾಕಿ ಮಲಗಿದ್ದಾರೆ. ವಾಹನದಲ್ಲಿ ಬಂದಿರುವ ಖದೀಮರು ಧರ್ಮರಾಜು ಮಲಗಿದ್ದ ಮನೆಯ ಬಾಗಿಲಿಗೆ ಯಾರು ಹೊರಗೆ ಬಾರದಂತೆ ಚಿಲಕಕ್ಕೆ ಕಡ್ಡಿಹಾಕಿ ರಾತ್ರಿ ಸುಮಾರು 1 ರಿಂದ 1.30 ಗಂಟೆಯ ಸಮಯದಲ್ಲಿ ಕೊಟ್ಟಿಗೆಯಲ್ಲಿದ್ದ ಕಟ್ಟಿದೆ 9 ಟಗರು, ಮೇಕೆ, ವಾತವನ್ನು ಕದ್ದು ಎರಡು ಕುರಿ ಮರಿಗಳನ್ನು ಅಲ್ಲಿಯೇ ಬಿಟ್ಟು ಪರಾರಿಯಾಗಿದ್ದಾರೆ.

ಮೇಕೆಗಳು ಕಿರುಚಾಡುವ ಶಬ್ಧಕೇಳಿ ಮನೆಯವರು ಹೊರಗಡೆ ಬರಲು ಎಷ್ಟೇ ಪ್ರಯತ್ನಿಸಿದರು. ಹೊರಗಿನಿಂದ ಚಿಲಕ ಹಾಕಿದ್ದರಿಂದ ಬರಲು ಸಾಧ್ಯವಾಗಿಲ್ಲ. ಬಳಿಕ ಕಿರುಚಾಟ ನಡೆಸಿದ್ದಾರೆ. ಅಕ್ಕಪಕ್ಕದ ಮನೆಯವರು ಬರುವಷ್ಟರಲ್ಲಿ ಕಳ್ಳರು ಸ್ಥಳದಿಂದ ಪರಾರಿಯಾಗಿದ್ದರು. ಘಟನೆಯ ಬಗ್ಗೆ ಸ್ಥಳೀಯರು ಪೊಲೀಸರಿಗೆ ಮಾಹಿತಿ ಮುಟ್ಟಿಸಿದ್ದಾರೆ. ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಘಟನೆ ಸಂಬಂಧ ಕುರಿಗಳ ಮಾಲೀಕ ಧರ್ಮರಾಜು ಅವರು ನೀಡಿರುವ ದೂರಿನ ಮೇರೆಗೆ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ವಿವಿಧ ಪ್ರಶಸ್ತಿಗಳಿಗೆ ಆಹ್ವಾನ

ಮಂಡ್ಯ,ಡಿ.25– ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಯುವಸೇನೆ ವತಿಯಿಂದ ಸಂಕ್ರಾಂತಿ ಸಂಭ್ರಮ ಅಂಗವಾಗಿ 10ನೇ ಅಖಿಲ ಕರ್ನಾಟಕ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಜನವರಿ ತಿಂಗಳಲ್ಲಿ ಮಂಡ್ಯ ನಗರದ ಗಾಂಧಿಭವನದಲ್ಲಿ ಆಯೋಜಿಸಿದೆ. ಕವಿಗೋಷ್ಠಿಗೆ ಡಿ.20 ರೊಳಗೆ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರ ಹಾಗೂ ವ್ಯಾಟ್ಸಾಪ್ ನಂ–9448424380.

ಒಂದನೇ ಪುಟದಿಂದ

ಮುನಿರತ್ನ ಮೇಲೆ ಮೊಟ್ಟೆ ದಾಳಿ!

ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ.ಸುರೇಶ್, ಹನುಮಂತರಾಯಪ್ಪ ಮತ್ತು ಕುಸುಮಾ ಅವರು ಗೂಂಡಾಗಳನ್ನು ಬಿಟ್ಟಿದ್ದಾರೆ ಎಂದು ಆರೋಪಿಸಿದ ಮುನಿರತ್ನ, ಇದರ ಸುಳಿವರಿತು ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಪೊಲೀಸರು ಮತ್ತು ಕಾರ್ಯಕರ್ತರಿಂದ ನನ್ನ ಜೀವ ಉಳಿದಿದೆ ಎಂದು ಅವರು ಹೇಳಿದರು.

ಸ್ವಲ್ಪ ಸಮಯದ ನಂತರ ಮುನಿರತ್ನ ಕೆ.ಸಿ.ಜನರಲ್ ಆಸ್ಪತ್ರೆಗೆ ತೆರಳಿ, ಆಸಿಡ್ ನಂತಹ ವಸ್ತು ಎಸೆಯಲಾಗಿದೆ ಎಂದು ವೈದ್ಯರಿಗೆ ತಿಳಿಸಿ ಚಿಕಿತ್ಸೆ ಪಡೆದಿದ್ದಾರೆ. ಅವರ ತಲೆಗೂದಲು ಸ್ವಲ್ಪ ಸುಟ್ಟಿದೆ. ತಲೆ ತಿರುಗುತ್ತಿದೆ ಎಂದು ಅವರು ಹೇಳಿದ್ದರಿಂದ ವೈದ್ಯರೂ ಆದ ಸಂಸದ ಡಾ. ಸಿ.ಎನ್.ಮಂಜುನಾಥ್ ಸಲಹೆ ಮೇರೆಗೆ ವೈದ್ಯರು ಮುನಿರತ್ನ ಅವರಿಗೆ ಸಿ.ಟಿ. ಸ್ಕ್ಯಾನ್ ಮಾಡಿಸಿದ್ದಾರೆ. ಮುನಿರತ್ನ ಆಸ್ಪತ್ರೆಗೆ ತೆರಳಿದ ನಂತರ ಘಟನಾ ಸ್ಥಳದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಘರ್ಷಣೆ ನಡೆದಿದ್ದು, ಎರಡು ಕಾರುಗಳು ಜಖಂಗೊಂಡಿವೆ. ಕೆಲವರು ಗಾಯಗೊಂಡಿದ್ದಾರೆ. ಮುನಿರತ್ನ ವಿರುದ್ಧ ದಾಳಿ ನಡೆಯುತ್ತದೆ ಎಂಬ ಗುಪ್ತಚರ ಮಾಹಿತಿಯಂತೆ ನಂದಿನಿ ಲೇಔಟ್ ಪೊಲೀಸರಿಗೆ ಸುಳಿವು ದೊರೆತ್ತಿತ್ತು ಎಂದು ಹೇಳಲಾಗಿದ್ದು, ಈ ಹಿನ್ನೆಲೆಯಲ್ಲಿ 30 ಮಂದಿಯನ್ನು ಮುಂಜಾಗ್ರತಾ ಕ್ರಮವಾಗಿ ಪೊಲೀಸರು ವಶಕ್ಕೆ ಪಡೆದು, ಕ್ರಮ ಕೈಗೊಂಡಿದ್ದರು. ಅಲ್ಲದೇ ಲಕ್ಷ್ಮೀದೇವಿ ನಗರದ ಬಿಜೆಪಿ ಕಚೇರಿ ಬಳಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದರು. ಈ ನಡುವೆಯೂ ಶಾಸಕ ಮುನಿರತ್ನ ತಲೆ ಮೇಲೆ ಕಾರ್ಯಕರ್ತರು ಮೊಟ್ಟೆ ಎಸೆದಿದ್ದಾರೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮುನಿರತ್ನ ಅವರನ್ನು ಬಿಜೆಪಿ ಸಂಸದ ಡಾ. ಸಿ.ಎನ್. ಮಂಜುನಾಥ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷದ ಹಲವು ಮುಖಂಡರು ಭೇಟಿ ಮಾಡಿ, ಅವರ ಆರೋಗ್ಯ ವಿಚಾರಿಸಿದರು.

ಕುಸುಮಾರನ್ನು ಶಾಸಕಿ ಮಾಡಲು ಆಸಿಡ್ ದಾಳಿ ಮೂಲಕ ನನ್ನ ಕೊಲೆಗೆ ಸಂಚು



ಮುನಿರತ್ನ

ಬೆಂಗಳೂರು, ಡಿ.25– ಕುಸುಮಾ ಅವರನ್ನು ಶಾಸಕಿಯನ್ನಾಗಿ ಮಾಡಲು ಡಿಕೆ ಸುರೇಶ್, ಡಿಕೆ ಶಿವಕುಮಾರ್ ಕಡೆಯವರಿಂದ ನನ್ನ ಮೇಲೆ ಆಸಿಡ್ ದಾಳಿ ನಡೆದಿದೆ ಎಂದು ರಾಜರಾಜೇಶ್ವರಿನಗರ ಶಾಸಕ ಮುನಿರತ್ನ ಗಂಭೀರ ಆರೋಪ ಮಾಡಿದ್ದಾರೆ. ಇಂದು ಲಗ್ಗೆರೆ ಬಳಿ ಲಕ್ಷ್ಮಿದೇವಿ ನಗರದಲ್ಲಿ ವಾಜಪೇಯಿಯವರ 100 ವರ್ಷದ ಹುಟ್ಟುಹಬ್ಬದ ಕಾರ್ಯಕ್ರಮ ದಲ್ಲಿ ಮುನಿರತ್ನ

ಭಾಗಿಯಾಗಿದ್ದರು. ಈ ಕಾರ್ಯಕ್ರಮ ಮುಗಿಸಿ ತೆರಳುತ್ತಿದ್ದಾಗ ಮುನಿರತ್ನ ಮೇಲೆ ಕಲ್ಲು ಮತ್ತು ಮೊಟ್ಟೆ ದಾಳಿ ನಡೆದಿದೆ. ಕಾರಿನ ಗಾಜಿನ ಮೇಲೆಯೇ ಕಲ್ಲು ಬಿದ್ದಿದೆ. ಕೂಡಲೇ ಪೊಲೀಸರು ಮೊಟ್ಟೆ ಎಸೆದ ವ್ಯಕ್ತಿಯನ್ನು ವಶಕ್ಕೆ ಪಡೆದಿದ್ದಾರೆ. ದಾಳಿಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುನಿರತ್ನ, ಮೊಟ್ಟೆಯ ಒಳಗಡೆ ಆಸಿಡ್ ಹಾಕಿ ದಾಳಿ ಮಾಡಿದ್ದಾರೆ. ಗುಂಪು ದಾಳಿ ಮಾಡಿ ನನ್ನ ಕೊಲೆ ಮಾಡಲು ಮುಂದಾಗಿದ್ದಾರೆ. ಡಿ.ಕೆ.ಸುರೇಶ್ ಅವರಿಗೆ ಕುಸುಮಾ ಅವರನ್ನು ಶಾಸಕಿಯನ್ನಾಗಿ ಮಾಡಬೇಕು ಎಂಬ ಆಸೆ ಇದೆ. ಈ ಕಾರಣಕ್ಕೆ ನನ್ನ ಮೇಲೆ ದಾಳಿ ನಡೆದಿದೆ ಎಂದು ದೂರಿದರು.

ಇದು ಕಾಂಗ್ರೆಸ್ ಪ್ರೇರಿತ ಕೃತ್ಯವಾಗಿದ್ದು ಡಿ.ಕೆ.ಸುರೇಶ್, ಡಿಕೆ ಶಿವಕುಮಾರ್, ಕುಸುಮಾ ತಂದೆ ಹನುಮಂತರಾಯಪ್ಪ ಇದಕ್ಕೆ ನೇರ ಹೊಣೆ. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಅವರು ನನ್ನನ್ನು ಒತ್ತಾಯ ಮಾಡುತ್ತಿದ್ದಾರೆ. ಇತ್ತೀಚೆಗೆ ಕೆಲವರು ಮನೆಯ ಮುಂದೆಯೇ ಬಂದು ರಾಜೀನಾಮೆ ಕೊಡಿ. ಇಲ್ಲದೇ ಇದ್ದರೆ ನಿಮ್ಮನ್ನು ಕೊಲೆ ಮಾಡುತ್ತೇವೆ ಎಂದು ಬೆದರಿಕೆ ಹಾಕಿದ್ದರು ಎಂದು ತಿಳಿಸಿದರು. ಕೋರ್ಟ್ ವಿಚಾರಣೆಗೆ ಹಾಜರಾಗುವ ಸಮಯದಲ್ಲಿ ವಕೀಲರ ಉಡುಪು ಧರಿಸಿದ್ದ ವ್ಯಕ್ತಿಯೊಬ್ಬರು ನನ್ನ ಬಳಿ ಬಂದು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ. ಇಲ್ಲದೇ ಇದ್ದರೆ ನಿಮ್ಮ ಮೇಲೆ ಪೋಕ್ಸೋ ಕೇಸ್ ಹಾಕಲಾಗುವುದು ಎಂದು ಹೇಳಿದ್ದರು. ನಾನು ರಕ್ಷಣೆಗಾಗಿ ಗನ್ ಮ್ಯಾನ್ ಕೊಡಿ ಎಂದು ಸರ್ಕಾರಕ್ಕೆ ಕೇಳಿದ್ದೆ. ನನ್ನನ್ನು ಕೊಲೆ ಮಾಡಿಯಾದರೂ ಕುಸುಮಾಗೆ ಶಾಸಕ ಪಟ್ಟ ಕೊಡಿಸಬೇಕು ಎನ್ನುವುದು ಡಿ.ಕೆ.ಸುರೇಶ್ ಆಸೆ ಎಂದು ದೂರಿದರು.

ಅವರೇ ಗೂಂಡಾಗಳಿಂದ ಗಲಾಟೆ ಮಾಡಿಸಿ ನನ್ನ ಮೇಲೆ ಆರೋಪ

ಶಾಸಕ ಮುನಿರತ್ನಗೆ ಡಿ.ಕೆ.ಸುರೇಶ್ ತಿರುಗೇಟು



ಬೆಳಗಾವಿ, ಡಿ.25– ಶಾಸಕ ಮುನಿರತ್ನ ಅವರೇ ಗೂಂಡಾಗಳಿಂದ ಗಲಾಟೆ ಮಾಡಿಸಿ ನನ್ನ ಮೇಲೆ ಆರೋಪ ಬರುವಂತೆ ಮಾಡಲು ಮುಂದಾಗಿದ್ದಾರೆ ಎಂದು ಮಾಜಿ ಸಂಸದ ಡಿ.ಕೆ ಸುರೇಶ್ ತಿರುಗೇಟು ನೀಡಿದ್ದಾರೆ. ಬೆಳಗಾವಿಯಲ್ಲಿ ಸುದ್ದಿ ಗಾರರೊಂದಿಗೆ ಮಾತನಾಡಿದರು. ಈ ವೇಳೆ ಕುಸುಮಾ ಅವರನ್ನು ಶಾಸಕಿ ಯನ್ನಾಗಿ ಮಾಡಲು ಡಿ.ಕೆ.ಸುರೇಶ್, ಡಿ.ಕೆ.ಶಿವಕುಮಾರ್ ಅವರ ಕಡೆಯ ವರಿಂದ ದಾಳಿ ನಡೆದಿದೆ ಎಂಬ ಮುನಿರತ್ನ ಆರೋಪಕ್ಕೆ ತಿರುಗೇಟು ನೀಡಿದ ಅವರು, ನನಗೆ ಆ ವಿಚಾರ ಗೊತ್ತಿಲ್ಲ. ಕಾಂಗ್ರೆಸ್ ಕಾರ್ಯಕರ್ತರಿಗೆ ಅವರೇ ಕೊಲೆ ಬೆದರಿಕೆ ಹಾಕುತ್ತಿದ್ದಾರೆ ಎಂಬ ವಿಚಾರ ತಿಳಿದು ಬಂದಿದೆ ಎಂದು ಹೇಳಿದ್ದಾರೆ. ಅವರ ವ್ಯಕ್ತಿತ್ವ ಏನು ಎಂಬುದು ಇಡೀ ರಾಜ್ಯಕ್ಕೆ ಗೊತ್ತಿದೆ. ಬಿಜೆಪಿಯವರಿಗಾಗಲೀ, ಬೇರೆಯವರಿಗಾಗಲೀ ನನ್ನ ವಿರುದ್ಧ ಮಾತಾಡುವ ನೈತಿಕತೆ ಇಲ್ಲ ಎಂದು ಕಿಡಿಕಾರಿದ್ದಾರೆ.

ಜೈ ಸಂವಿಧಾನ ಸಮಾವೇಶ

ನಾಯಕರು, ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಸಂಸತ್ ಸದಸ್ಯರು, ಶಾಸಕರು, ರಾಜ್ಯದ ಕಾರ್ಯಕರ್ತರು ಹಾಗೂ ಸಾರ್ವಜನಿಕರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನ ನೀಡಲಾಗಿದೆ.

ವಿಶೇಷ ಪುಸ್ತಕ: 1924ರ ಕಾಂಗ್ರೆಸ್ ಅಧಿವೇಶನ ದಾಖಲೆಗಳನ್ನು ಸಂಗ್ರಹಿಸಿ, ಪುಸ್ತಕ ಮಾಡಿದ್ದು, ನಾಳೆ ಬಿಡುಗಡೆ ಮಾಡಲಾಗುವುದು, 26ರ ಬೆಳಗ್ಗೆ 10 ಗಂಟೆಗೆ ವೀರಸೌಧದಲ್ಲಿ ಗಾಂಧಿ ಪುತ್ಥಳಿ ಅನಾವರಣ ನಡೆಯಲಿದೆ, ಛಾಯಾಚಿತ್ರ ಪ್ರದರ್ಶನಕ್ಕೆ ಚಾಲನೆ, ಬೆಳಗ್ಗೆ 10.45ಕ್ಕೆ ಖಾದಿ ಮೇಳ ಉದ್ಘಾಟನೆ, 11.15ಕ್ಕೆ ಗಂಗಾಧರ ದೇಶಪಾಂಡೆ ಸ್ಮಾರಕವನ್ನು ಮುಖ್ಯಮಂತ್ರಿಗಳ ಜೊತೆ ಅನಾವರಣ ಮಾಡಲಿದ್ದೇವೆ. ಗಂಗಾಧರ ದೇಶಪಾಂಡೆ ಛಾಯಾಚಿತ್ರ ಪ್ರದರ್ಶನಕ್ಕೆ ಚಾಲನೆ, ಮಧ್ಯಾಹ್ನ 3 ಗಂಟೆಗೆ ಕಾರ್ಯಕಾರಿ ಸಮಿತಿ ಸಭೆ, ರಾತ್ರಿ 7ಕ್ಕೆ ಎಐಸಿಸಿ ಅಧ್ಯಕ್ಷರಿಂದ ಭೋಜನಕೂಟ ಏರ್ಪಡಿಸಲಾಗಿದೆ.

27ರ ಬೆಳಗ್ಗೆ 10.30ಕ್ಕೆ ಸುವರ್ಣ ಸೌಧದಲ್ಲಿ ಗಾಂಧಿ ಪ್ರತಿಮೆಯನ್ನು ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅನಾವರಣ ಮಾಡಲಿದ್ದಾರೆ, ಮುಖ್ಯಮಂತ್ರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಮುಖಂಡತ್ವದಲ್ಲಿ ಕಾರ್ಯಕ್ರಮ, ಮಧ್ಯಾಹ್ನ 1 ಗಂಟೆಗೆ ಸಾರ್ವಜನಿಕ ಸಮಾವೇಶ ನಡೆಯಲಿದೆ ಎಂದರು.

ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಹಿನ್ನೆಲೆಯಲ್ಲಿ ನಗರದಲ್ಲಿ ದೀಪಾಲಂಕಾರ ಮಾಡಲಾಗಿದೆ, ಕಿತ್ತೂರು ಕರ್ನಾಟಕ ಭಾಗದ ಜನ ದೀಪಾಲಂಕಾರ ಕಣ್ತುಂಬಿಕೊಳ್ಳುವಂತಿದೆ. 1904ರಲ್ಲಿ ಶಿವನಸಮುದ್ರದಲ್ಲಿ ವಿದ್ಯುತ್ ಉತ್ಪಾದನೆ ಆರಂಭವಾಗಿತ್ತು, 1924ರಲ್ಲಿ ಬೆಳಗಾವಿ ಅಧಿವೇಶನ ವೇಳೆ ಬೆಳಗಾವಿಯಲ್ಲಿ ದೀಪಾಲಂಕಾರ ಮಾಡಲಾಗಿತ್ತು, ಛಾಯಾಚಿತ್ರಗಳು ನಮ್ಮ ಬಳಿ ಇವೆ, ವಿಜಯನಗರದ ವಿರೂಪಾಕ್ಷ ದೇಗುಲ ಮಾದರಿಯ ದೀಪಾಲಂಕಾರದ ಛಾಯಾ ಚಿತ್ರ ಲಭ್ಯವಾಗಿವೆ. ಅದೇ ರೀತಿ ಈ ಬಾರಿಯೂ ದೀಪಾಲಂಕಾರ ಮಾಡಲಾಗಿದೆ.

ಪಥ ಸಂಚಲನದ ಮೂಲಕ ಆಹ್ವಾನ: ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರನ್ನು ಸೇವಾದಳ ಕಾರ್ಯಕರ್ತರು ಪಾದಯಾತ್ರೆ ಮೂಲಕ ಸಭಾ ಸ್ಥಳಕ್ಕೆ ಗೌರವಯುತ ಪಥಸಂಚಲನದ ಮೂಲಕ ಕರೆದೊಯ್ಯಲಿದ್ದಾರೆ. ನಂತರ ಸಭೆಯಲ್ಲಿ ನಾಯಕರು ವಿವಿಧ ವಿಚಾರಗಳ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಿದ್ದಾರೆ. ಶತಮಾನೋತ್ಸವ ಅಂಗವಾಗಿ ವರ್ಷಪೂರ್ತಿ ರಾಜ್ಯಾದ್ಯಂತ 'ಗಾಂಧಿ ಭಾರತ' ಕಾರ್ಯಕ್ರಮ ಆಚರಿಸಲಾಗುವುದು, ಗಾಂಧಿ ತತ್ವ, ಆಚಾರ–ವಿಚಾರಗಳ ಬಗ್ಗೆ ಶಾಲಾ–ಕಾಲೇಜುಗಳಲ್ಲಿ ಚರ್ಚಾ ಸ್ಪರ್ಧೆಗಳು ನಡೆಯಲಿವೆ, ಬೆಳಗಾವಿ ಶಾಸಕರಿಗೆ ಸಂಘಟನೆ ಜವಾಬ್ದಾರಿ ನೀಡಲಾಗಿದೆ.

ಕಾರ್ಯಕಾರಿ ಸಮಿತಿ ಸಭೆಯಲ್ಲಿ ಪಕ್ಷದ ರಾಷ್ಟ್ರೀಯ ನಾಯಕರು ಚರ್ಚಾ ವಿಷಯಗಳನ್ನು ತೀರ್ಮಾನಿಸಲಿದ್ದಾರೆ, ಈಗಾಗಲೇ ಕರಡು ಸಮಿತಿ ಸಭೆ ನಡೆಯುತ್ತಿದ್ದು, ಯಾವ ವಿಚಾರ ಚರ್ಚೆ ಮಾಡಬೇಕು ಎಂಬ ಬಗ್ಗೆ ನಿರ್ಧರಿಸಲಿದ್ದಾರೆ. ಎರಡು ದಿನಗಳ ಕಾರ್ಯಕ್ರಮ ನಡೆಯುವ ಮೈದಾನದ ಪಕ್ಕದ ಶಾಲೆಗಳನ್ನು ಗಮನದಲ್ಲಿಟ್ಟುಕೊಂಡು ರಜೆ ತೀರ್ಮಾನ ಮಾಡಲಾಗುವುದು.

ಭಾರಿ ಬಂದೋಬಸ್ತ್: ಅಧಿವೇಶನ ಬಂದೋಬಸ್ತ್‌ಗೆ ಸುಮಾರು 3 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ, ಸಂಚಾರ ದಟ್ಟಣೆ ನಿಯಂತ್ರಣ, ವಾಹನಗಳ ನಿಲುಗಡೆ ವ್ಯವಸ್ಥೆ ಮಾಡಲಾಗುವುದು.

ಗಾಂಧಿ ಮದ್ಯಪಾನ ವಿರೋಧ ಮಾಡಿದ್ದರು, ರಾಜ್ಯದಲ್ಲಿ ಮದ್ಯಪಾನ ನಿಷೇಧ ಮಾಡುತ್ತೀರಾ ಎಂಬ ಪ್ರಶ್ನೆಗೆ, ಆಗಿನ ಕಾಲವೇ ಬೇರೆ, ಈಗಿನ ಕಾಲವೇ ಬೇರೆ, ಆಗ ಖಾದಿ ಹಾಕುತ್ತಿದ್ದರು, ಈಗ ಬೇರೆ ಬಟ್ಟೆ ಹಾಕುತ್ತಿಲ್ಲವೇ, ಖಾದಿ ಪ್ರಚಾರಕ್ಕೆ ವಸ್ತುಪ್ರದರ್ಶನ ಏರ್ಪಡಿಸಲಾಗಿದೆ ಎಂದರು.

ಗಾಂಧಿ ಮೇಲೆ ಪ್ರೀತಿ ಇದ್ದಿದ್ದರೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಸೇರಿ ಕಾರ್ಯಕ್ರಮ ಮಾಡಿದ್ದರೆ 500 ಕೋಟಿ ರೂ. ಖರ್ಚು ಮಾಡಲು ಸಿದ್ಧವಿದ್ದೆವು, ಒಂದು ವರ್ಷ ಪೂರ್ತಿ ಆಚರಣೆ ಮಾಡುತ್ತಿದ್ದೇವೆ, ಅವರೇ ಮುಂದಾಳತ್ವ ವಹಿಸಿಕೊಂಡು ಕಾರ್ಯಕ್ರಮ ಮಾಡಲಿ, ನಾವು ಸೇವಕರಂತೆ ಕೆಲಸ ಮಾಡುತ್ತೇವೆ.

ಗಾಂಧಿ ಅವರ ಹಕ್ಕನ್ನು ಬಿಜೆಪಿ ತೆಗೆದುಕೊಳ್ಳಲು ಸಾಧ್ಯವಿಲ್ಲ. ಅವರಿಗೆ ಸ್ವಾತಂತ್ರ್ಯ ಹೋರಾಟದ ಇತಿಹಾಸವಿಲ್ಲ. ಸ್ವಾತಂತ್ರ್ಯ ಹೋರಾಟದ ಇತಿಹಾಸ ಇರುವುದು ಕಾಂಗ್ರೆಸಿಗರಿಗೆ ಮಾತ್ರ ಎಂದರು.

ಶಾಲಾ ಮಕ್ಕಳಲ್ಲಿ ಅನಾರೋಗ್ಯ!

ರವಿಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಕೋಳಿ ಫಾರಂಗಳಲ್ಲಿ ಮಾಂಸವನ್ನು ಹೆಚ್ಚು ಪರಿಣಾಮಕಾರಿಯಾಗಿ ಉತ್ಪಾದಿಸಲು ಹಾರ್ಮೋನ್ ಬೆಳವಣಿಗೆಗಾಗಿ ಕೋಳಿಗಳಿಗೆ ಔಷಧಿಗಳನ್ನು ನೀಡಲಾಗುತ್ತದೆ. ಜೊತೆಗೆ ಸ್ಟಿರಾಯಿಡ್ ಇಂಜೆಕ್ಷನ್‌ಗಳನ್ನು ಕೋಳಿಗಳಿಗೆ ನೀಡಲಾಗುತ್ತದೆ. ಇದರಿಂದ ಆರು ತಿಂಗಳ ಬೆಳವಣಿಗೆ ಕೇವಲ ಮೂರೇ ತಿಂಗಳಲ್ಲಿ ಆಗುತ್ತದೆ. ಇಂತಹ ಕೋಳಿ ಮೊಟ್ಟೆಯನ್ನು ನೀಡಿದರೆ ಕೆಲವೇ ದಿನಗಳಲ್ಲಿ ಮಕ್ಕಳಲ್ಲಿ ಅನಾರೋಗ್ಯ ಉಂಟಾಗುತ್ತದೆ ಎಂದು ತಿಳಿಸಿದ್ದಾರೆ.

ಕೋಳಿ ಮೊಟ್ಟೆಗಳು ಗುಣಮಟ್ಟದವೇ, ಇಲ್ಲವೇ ಎಂಬ ಯಾವುದೇ ಮಾನದಂಡವಿಲ್ಲದೆ ಅವುಗಳನ್ನು ಖರೀದಿ ಮಾಡಲಾಗುತ್ತದೆ. ಜೊತೆಗೆ ಕಾಲಾವಧಿ ಮೀರಿದ ಮೊಟ್ಟೆಗಳನ್ನು ಕೂಡ ನೀಡಲಾಗುತ್ತಿದೆ. ಇಂತಹ ಮೊಟ್ಟೆಗಳನ್ನು ಸೇವಿಸಿದ ಮಕ್ಕಳಲ್ಲಿ ಬುದ್ಧಿಶಕ್ತಿ ಕಡಿಮೆಯಾಗಿ, ಕ್ಯಾನ್ಸರ್‌ನಂತಹ ಮಾರಕ ರೋಗಗಳು ಬರುತ್ತವೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಶಾಲಾ ಮಕ್ಕಳ ಕೋಳಿ ಮೊಟ್ಟೆ ವಿತರಣೆಗೆ ಅಜೀಂ ಪ್ರೇಮ್ ಜೀ ಫೌಂಡೇಷನ್ ಒಂದೂವರೆ ಸಾವಿರ ಕೋಟಿ ರೂಪಾಯಿ ಸಹಾಯಧನ ನೀಡುತ್ತಿದೆ. ಆದರೆ ಈ ಹಣ ಸರಿಯಾದ ರೀತಿಯಲ್ಲಿ ಬಳಕೆಯಾಗುತ್ತಿಲ್ಲ ಎಂದು ಸರ್ಕಾರವೇ ಬಿಇಒಗಳಿಗೆ ನೋಟಿಸ್ ಜಾರಿ ಮಾಡಿದೆ. ಇದರಿಂದ ಅವೈಜ್ಞಾನಿಕವಾದ ಈ ಯೋಜನೆಯಿಂದ ಒಂದೂವರೆ ಸಾವಿರ ಕೋಟಿ ರೂಪಾಯಿ ವ್ಯರ್ಥವಾಗುತ್ತಿದೆ ಎಂದು ರವಿಕುಮಾರ್ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಶಾಲಾ ಮಕ್ಕಳಿಗೆ ಕೋಳಿ ಮೊಟ್ಟೆ ವಿತರಣೆ ರದ್ದು ಮಾಡಬೇಕು ಎಂದು ಹೈಕೋರ್ಟ್‌ನ ರಿಜಿಸ್ಟರ್ ಜನರಲ್ ಅವರಿಗೆ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ ವಸ್ತುಸ್ಥಿತಿ ಮನದಟ್ಟು ಮಾಡಿಕೊಟ್ಟಿದ್ದೇನೆ. ಈ ಅರ್ಜಿ ಹೈಕೋರ್ಟ್ ಮುಖ್ಯ ನ್ಯಾಯಾಧೀಶರ ಬಳಿ ವಿಚಾರಣೆಗೆ ಬರಲಿದ್ದು, ಇದನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಬೇಕೋ ಬೇಡವೋ ಎಂಬುದನ್ನು ಮುಖ್ಯ ನ್ಯಾಯಮೂರ್ತಿ ತೀರ್ಮಾನ ಮಾಡುತ್ತಾರೆ ಎಂದು ರವಿಕುಮಾರ್ ಹೇಳಿದ್ದಾರೆ.

'ಕೈ' ಬಲಪಡಿಸುವ ಜಾಣ್ಮೆ!

ದೆಹಲಿಯಿಂದ ಅತಿಥಿಗಣ್ಯರನ್ನು ಬೆಳಗಾವಿಗೆ ಕರೆತರಲು 2 ವಿಶೇಷ ವಿಮಾನಗಳನ್ನು ಸಿದ್ಧಗೊಳಿಸಲಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಅಧಿನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಸೇರಿದಂತೆ ದಿಗ್ಗಜ ನಾಯಕರು ಸಮಾ ವೇಶಕ್ಕೆ ಆಗಮಿಸಲಿದ್ದಾರೆ. ಐತಿಹಾಸಿಕ ಸಮಾವೇಶದಲ್ಲಿ ಮಹತ್ವದ ಸಂದೇಶ ನೀಡುವ ನಿರ್ಣಯಗಳನ್ನು ಪಕ್ಷದ ವರಿಷ್ಠರು ತೆಗೆದುಕೊಳ್ಳಲಿದ್ದಾರೆ, ಇದಕ್ಕಾಗಿಯೇ ಸಿಡಬ್ಲ್ಯೂಸಿಯ ವಿಶೇಷ ಸಭೆಯೂ ನಡೆಯುತ್ತಿದೆ. ಸ್ವಾತಂತ್ರ್ಯ ಹೋರಾಟದ ಉತ್ತುಂಗದಲ್ಲಿದ್ದಾಗ 1924ರಲ್ಲಿ ಮಹಾತ್ಮ ಗಾಂಧೀಜಿ ಇದೇ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಈ ಐತಿಹಾಸಿಕ ಅಧಿವೇಶನಕ್ಕೆ 100 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಇದನ್ನು ಮತ್ತೊಂದು ಐತಿಹಾಸಿಕ ಘಟನೆಯನ್ನಾಗಿಸಲು ಎಲ್ಲಾ ಸಿದ್ಧತೆ ನಡೆಸಿದೆ.

ಸಮಾವೇಶವು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ಕೆಲವು ನಿರ್ಣಯ ಕೈಗೊಳ್ಳುವ ಮೂಲಕ ಪಕ್ಷವನ್ನು ಮತ್ತಷ್ಟು ಬಲಿಷ್ಠ ಗೊಳಿಸಲು ಸಜ್ಜುಗೊಂಡಿದೆ. ದೆಹಲಿ ಇಲ್ಲವೇ ಉತ್ತರ ಭಾರತದ ಯಾವುದಾದರೂ ರಾಜ್ಯದಲ್ಲಿ ಎಐಸಿಸಿ ಮಹಾಧಿವೇಶನ ನಡೆಸಲು ಪಕ್ಷ ತೀರ್ಮಾನ ಕೈಗೊಂಡಿತ್ತು. ಆದರೆ, ಉಪಮುಖ್ಯಮಂತ್ರಿಯೂ ಆಗಿ ರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಬೆಳಗಾವಿ ಅಧಿವೇಶನಕ್ಕೆ 100 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕದಲ್ಲೇ ಮಾಡೋಣ ಎಂದು ವರಿಷ್ಠರ ಮನವೊಲಿಸಿದ ಫಲವಾಗಿ ಸಮಾವೇಶ ಆಯೋಜನೆಗೊಂಡಿದೆ. ಕಳೆದ ಎರಡು ತಿಂಗಳಿಂದ ಸಿದ್ಧತೆ ಹೊಣೆಹೊತ್ತು, ಮುಖ್ಯಮಂತ್ರಿ ಸೇರಿದಂತೆ ಸಂಪುಟದ ಎಲ್ಲಾ ಸದಸ್ಯರನ್ನು ಕಾರ್ಯಕ್ರಮ ಯಶಸ್ವಿಗಾಗಿ ತೊಡಗಿಸಿಕೊಂಡಿದ್ದಾರೆ, ಅಲ್ಲದೆ, ಪ್ರತಿಯೊಬ್ಬ ಮಂತ್ರಿಗೂ ನಿರ್ದಿಷ್ಟ ಉಸ್ತುವಾರಿ ವಹಿಸಿದ್ದಾರೆ.

ವಾಯುವಿಹಾರಕ್ಕೆ ತೆರಳಿದ ಉಪನ್ಯಾಸಕನ ಶವ ವರುಣ ಕೆರೆಯಲ್ಲಿ ಪತ್ತೆ!

ಮೈಸೂರು, ಡಿ.25(ಎಸ್‌ಪಿಎನ್)–ವಾಯುವಿಹಾರಕ್ಕೆ ಹೋಗಿ ಬರುತ್ತೇನೆ ಎಂದು ಮನೆಯಿಂದ ಹೋರಹೋಗಿದ್ದ ಉಪನ್ಯಾಸಕರ ಶವ ಬುಧವಾರ ವರುಣ ಕೆರೆಯಲ್ಲಿ ಪತ್ತೆಯಾಗಿದೆ.

ಮೈಸೂರು ಗಂಗೋತ್ರಿ ಬಡಾವಣೆಯ ನಿವಾಸಿ ಜಯಣ್ಣ (52) ಮೃತಪಟ್ಟವರು. ಇವರು, ಡಿ.23ರಂದು ಸಂಜೆ 4.30ರ ಸುಮಾರಿನಲ್ಲಿ ವಾಕಿಂಗ್ ಹೋಗಿ ಬರುವುದಾಗಿ ಕುಟುಂಬ ಸದಸ್ಯರಿಗೆ ತಿಳಿಸಿ ಮನೆಯಿಂದ ಹೋಗಿದ್ದರು.

ರಾತ್ರಿ ಆದರೂ ಮನೆಗೆ ವಾಪಸ್ ಆಗದ ಹಿನ್ನಲೆಯಲ್ಲಿ ಗಾಬರಿಗೊಂಡ ಕುಟುಂಬದ ಸದಸ್ಯರು ಸರಸ್ವತಿಪುರಂ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು. ಎರಡು ದಿನಗಳ ನಂತರ ಇಂದು(ಬುಧವಾರ) ವರುಣ ಕೆರೆಯಲ್ಲಿ ಜಯಣ್ಣ ಅವರ ಮೃತದೇಹ ಪತ್ತೆಯಾಗಿದ್ದು, ವರುಣ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಶವವನ್ನು ಕೆ.ಆರ್.ಆಸ್ಪತ್ರೆ ಶವಗಾರಕ್ಕೆ ಸಾಗಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಾಗಿದೆ ಎಂದು ವರುಣ ಪೊಲೀಸರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ್ದಾರೆ. ಜಯಣ್ಣ ಅವರು, ಮುಗೂರು ಸರ್ಕಾರಿ ಪಿಯು ಕಾಲೇಜಿನಲ್ಲಿ ಜೀವಶಾಸ್ತ್ರ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಎರಡು ವರ್ಷಗಳ ಹಿಂದೆ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಇವರು, ಚಿಕಿತ್ಸೆ ಪಡೆಯುತ್ತಿದ್ದರು. ಇದರಿಂದ ಅವರ ಆರೋಗ್ಯದಲ್ಲಿ ಚೇತರಿಕೆ ಕಂಡಿದ್ದರೂ ಆಗಾಗ್ಗೆ ಹೊಟ್ಟೆ ನೋವಿನಿಂದ ಬಳಲುತ್ತಿದ್ದರು ಎನ್ನಲಾಗಿದೆ.

ಪಶ್ಚಿಮ ಘಟ್ಟದ 153.8 ಚದರ ಕಿ.ಮೀ.ಅರಣ್ಯ ನಾಶ: ಶಿವಮೊಗ್ಗದಲ್ಲೇ ಅತೀಹೆಚ್ಚು

ಬೆಂಗಳೂರು: ಪಶ್ಚಿಮ ಘಟ್ಟದ ಸೆರಗಿನಲ್ಲಿರುವ ರಾಜ್ಯದ ಹತ್ತು ಜಿಲ್ಲೆಗಳ ಪೈಕಿ ಆರರಲ್ಲಿ ಅರಣ್ಯ ನಾಶ ತೀವ್ರವಾಗಿದೆ. 2013ರಿಂದ 2023ರ ನಡುವೆ ಆರು ಜಿಲ್ಲೆಗಳಲ್ಲಿ 153.80 ಚದರ ಕಿ.ಮೀ.ನಷ್ಟು ಅರಣ್ಯ ಪ್ರದೇಶ ಇಲ್ಲವಾಗಿದೆ.

ಕೇಂದ್ರ ಸರ್ಕಾರವು ಈಚೆಗೆ ಬಿಡುಗಡೆ ಮಾಡಿದ ಭಾರತೀಯ ಅರಣ್ಯ ಸ್ಥಿತಿಗತಿ ವರದಿ–2023'ರಲ್ಲಿ ಈ ಮಾಹಿತಿ ಇದೆ. ಹೆಚ್ಚು ಅರಣ್ಯ ನಾಶವಾದ ಜಿಲ್ಲೆಗಳಲ್ಲಿ ಶಿವಮೊಗ್ಗ ಜಿಲ್ಲೆ ಮೊದಲ ಸಾಲಿನಲ್ಲಿದೆ. ಜಿಲ್ಲೆಯಲ್ಲಿ ಒಟ್ಟು 74.54 ಚದರ ಕಿ.ಮೀ., ಕೊಡಗಿನಲ್ಲಿ 33.40 ಚದರ ಕಿ.ಮೀ., ಬೆಳಗಾವಿಯಲ್ಲಿ 24.91 ಚದರ ಕಿ.ಮೀ. ಮತ್ತು ಮೈಸೂರಿನಲ್ಲಿ 15.28 ಚದರ ಕಿ.ಮೀ.ನಷ್ಟು ಅರಣ್ಯ ನಾಶವಾಗಿದೆ. ಹಾಸನ ಮತ್ತು ಚಾಮರಾಜನಗರದಲ್ಲಿ ಅರಣ್ಯದ ವಿಸ್ತೀರ್ಣ ಸ್ವಲ್ಪ ಕುಸಿದಿದೆ.

ಇಷ್ಟೂ ಜಿಲ್ಲೆಗಳಲ್ಲಿ ಅತಿದಟ್ಟಾರಣ್ಯದ ವ್ಯಾಪ್ತಿ ಹತ್ತು ವರ್ಷಗಳಲ್ಲಿ ಹೆಚ್ಚಾಗಿದೆ. ಆದರೆ 'ದಟ್ಟಾರಣ್ಯ'ದ ವ್ಯಾಪ್ತಿ ಸ್ವಲ್ಪ ಕುಸಿದಿದೆ. ಪಶ್ಚಿಮ ಘಟ್ಟದ ಅಂಚಿನಲ್ಲಿರುವ 'ಸಾಧಾರಣ ಅರಣ್ಯ'ವು ಜನವಸತಿ ಮತ್ತು ವಾಣಿಜ್ಯ ಬೆಳೆ ಚಟುವಟಿಕೆ ಪ್ರದೇಶಗಳಿಗೆ ಹೊಂದಿಕೊಂಡಿದ್ದು, ಇಲ್ಲೇ ಅತಿಹೆಚ್ಚು ಅರಣ್ಯ ನಾಶವಾಗಿದೆ. ಮರಗಳ ಹಸಿರಿನ ಹೊದಿಕೆ ಶೇ 10ರಿಂದ ಶೇ40ರಷ್ಟು ಇರುವ ಕಾಡನ್ನು 'ಸಾಧಾರಣ ಅರಣ್ಯ' ಎಂದು ವರ್ಗೀಕರಿಸಲಾಗಿದ್ದು, ಪಶ್ಚಿಮ ಘಟ್ಟದ ಶೋಲಾ ಕಾಡುಗಳೂ ಇದರ ವ್ಯಾಪ್ತಿಗೆ ಬರುತ್ತವೆ. ವಾಣಿಜ್ಯ ಬೆಳೆ ಪ್ರದೇಶಗಳಿಗೆ ಹೊಂದಿಕೊಂಡಿರುವ ಈ ಅರಣ್ಯ ಪ್ರದೇಶಗಳಿಗೆ ಆಕ್ರಮಣಕಾರಿ ಸಸ್ಯಪ್ರಬೇಧಗಳು ದಾಟಿಕೊಂಡಿವೆ. ಇದರಿಂದ ಸ್ಥಳೀಯ ಅರಣ್ಯ ಸಸಿ, ಮರ, ಹುಲ್ಲು ಪ್ರಬೇಧಗಳಿಗೆ ಮತ್ತು ವನ್ಯಜೀವಿಗಳಿಗೆ ಕಂಟಕ ಎದುರಾಗಿದೆ ಎಂಬ ವಿವರ ವರದಿಯಲ್ಲಿದೆ.

ಮೈಸೂರಲ್ಲಿ ಸಂಭ್ರಮದ ಕ್ರಿಸ್‌ಮಸ್ ಆಚರಣೆ

ಚರ್ಚ್‌ಗಳಲ್ಲಿ ಸಾಮೂಹಿಕ ಪ್ರಾರ್ಥನೆ, ಭಕ್ತರು, ಪ್ರವಾಸಿಗರಿಂದ ಯೇಸು ಕ್ರಿಸ್ತನ ಸ್ಮರಣೆ




ಮೈಸೂರು ಧರ್ಮಕ್ಷೇತ್ರದ ಆರ್ಚ್ ಬಿಷಪ್ ಎಮಿರಿಟಸ್ ಬರ್ನಾರ್ಡ್ ಮೊರಾಸ್ ಅವರು ಸೇಂಟ್ ಫಿಲೋಮಿನಾ ಚರ್ಚ್‌ನಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಸಿಕೊಟ್ಟರು. ಬಲಚಿತ್ರದಲ್ಲಿ ಕ್ರೈಸ್ತ ಬಾಂಧವರಿದ್ದಾರೆ.

ಮೈಸೂರು,ಡಿ.25(ಆರ್‌ಕೆ)–ಮೈಸೂರು ನಗರ ಹಾಗೂ ಜಿಲ್ಲಾದ್ಯಂತ ಕ್ರಿಸ್‌ಮಸ್ ಹಬ್ಬವನ್ನು ಸಂಭ್ರಮ–ಸಡಗರದಿಂದ ಆಚರಿಸಲಾಯಿತು.

ಪ್ರಭು ಯೇಸುವಿನ ಜನ್ಮದಿನದ ಅಂಗವಾಗಿ ಲಷ್ಕರ್ ಮೊಹಲ್ಲಾದ ಸೇಂಟ್ ಫಿಲೋಮಿನಾ, ಬಿ.ಎನ್.ರಸ್ತೆಯ ಸೇಂಟ್ ಬಾರ್ತಲೋಮಿಯಾ, ವೆಸ್ಲಿ, ಎಫ್‌ಟಿಎಸ್ ಸರ್ಕಲ್ ಬಳಿಯ ಕರುಣಾಪುರ ಚರ್ಚ್ ಸೇರಿದಂತೆ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಎಲ್ಲಾ ಚರ್ಚ್‌ಗಳಲ್ಲಿ ಇಂದು ಬೆಳಗ್ಗೆಯಿಂದ ರಾತ್ರಿವರೆಗೂ ಕನ್ನಡ, ಇಂಗ್ಲಿಷ್, ತಮಿಳು ಭಾಷೆಗಳಲ್ಲಿ ಭಕ್ತರು ಸಾಮೂಹಿಕ ಪ್ರಾರ್ಥನೆ ಮೂಲಕ ಯೇಸು ಕ್ರಿಸ್ತನಿಗೆ ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿದರು.



ಬಾಲ ಯೇಸುವಿಗೆ ಕ್ರಿಸ್‌ಮಸ್ ದಿನ ವಿಶೇಷ ಪೂಜೆ ಸಲ್ಲಿಸಿದ ಕ್ರೈಸ್ತ ಬಾಂಧವರು.

ಪರಸ್ಪರ ಕ್ರಿಸ್‌ಮಸ್ ಶುಭಾಶಯ ವಿನಿಮಯ ಮಾಡಿಕೊಂಡ ಕ್ರೈಸ್ತ ಬಾಂಧವರು ಚರ್ಚ್‌ಗಳಲ್ಲಿ ಯೇಸುವಿನ ಮೂರ್ತಿ ಮುಂದೆ ಸೆಲ್ಫಿ ತೆಗೆದುಕೊಂಡು ಸಂಭ್ರಮಿಸಿದರು. ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ನೆರೆ ರಾಜ್ಯಗಳಿಂದ ಕ್ರೈಸ್ತ ಬಾಂಧವರು ಹಾಗೂ ಪ್ರವಾಸಿಗರು ತಂಡೋಪತಂಡವಾಗಿ ಮೈಸೂರಿಗೆ ಆಗಮಿಸಿ ಇಲ್ಲಿನ ಪ್ರವಾಸಿ ತಾಣಗಳಾದ ಸೇಂಟ್ ಫಿಲೋಮಿನಾ ಚರ್ಚ್, ಅರಮನೆ, ಜಗನ್ಮೋಹನ ಅರಮನೆ, ಮೃಗಾಲಯ, ಕಾರಂಜಿ ಕೆರೆ ಉದ್ಯಾನವನ, ಚಾಮುಂಡಿಬೆಟ್ಟ, ನಂಜನಗೂಡಿನ ಶ್ರೀ ನಂಜುಂಡೇಶ್ವರ ದೇವಾಲಯಗಳಿಗೆ ಭೇಟಿ ನೀಡಿ, ವೀಕ್ಷಿಸಿದರು. ಮೈಸೂರು ಧರ್ಮಕ್ಷೇತ್ರದ ಆರ್ಚ್ ಬಿಷಪ್ ಎಮಿರಿಟಸ್ ಬರ್ನಾರ್ಡ್ ಮೊರಾಸ್ ಅವರು ಸೇಂಟ್ ಫಿಲೋಮಿನಾ ಚರ್ಚ್‌ನಲ್ಲಿ ಸಾಮೂಹಿಕ ಪ್ರಾರ್ಥನೆ, ವಿವಿಧ ಧಾರ್ಮಿಕ ಕೈಂಕರ್ಯ ನಡೆಸಿಕೊಟ್ಟು, ಆಶೀರ್ವಚನ ನೀಡಿದರು. ಅವರಿಗೆ ಬಿಷಪ್ ಹೌಸ್‌ನಲ್ಲಿ ಸಮುದಾಯದ ಮುಖಂಡರು, ವಿವಿಧ ಪಕ್ಷಗಳ ಪ್ರಮುಖರು, ಗಣ್ಯರು ಕ್ರಿಸ್‌ಮಸ್ ಶುಭಾಶಯ ಕೋರಿದರು. ಹಬ್ಬದ ಹಿನ್ನೆಲೆಯಲ್ಲಿ ಮೈಸೂರಿನ ಎಲ್ಲಾ ಬಡಾವಣೆಯ ಚರ್ಚ್‌ಗಳಲ್ಲೂ ಆಯಾ ಠಾಣೆಗಳಿಂದ ಸಿಬ್ಬಂದಿಗಳನ್ನು ನಿಯೋಜಿಸಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.



ಕ್ರಿಸ್‌ಮಸ್ ಹಿನ್ನೆಲೆ ಸಂತ ಫಿಲೋಮಿನಾ ಚರ್ಚ್‌ನಲ್ಲಿ ಕಂಡು ಬಂದ ಜನಸ್ತೋಮ



ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ಸಮರ್ಥನಂ ಅಂಗವಿಕಲರ ಸಂಸ್ಥೆಯ ಜೀವನೋಪಾಯ ಸಂಪನ್ಮೂಲ ಕೇಂದ್ರದಲ್ಲಿ ಕ್ರಿಸ್‌ಮಸ್ ಆಚರಿಸಲಾಯಿತು. ಈ ವೇಳೆ ಕೇಕ್ ಕತ್ತರಿಸುವುದರ ಮೂಲಕ ಕೇಂದ್ರದ ವಿದ್ಯಾರ್ಥಿನಿಯರು ಸಂಭ್ರಮಿಸಿದರು. ಸಂಸ್ಥೆಯ ಮೈಸೂರು ವಿಭಾಗೀಯ ಸಂಯೋಜಕ ಶಿವರಾಜು, ಶಿಕ್ಷಕಿ ಭುವನ, ಸಿಬ್ಬಂದಿ ಹೇಮಲತಾ ಲಕ್ಷ್ಮಿ, ವಿಹಾರಿಕ, ಪ್ರೇಮ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.



ಕ್ರಿಸ್ಮಸ್ ಹಿನ್ನೆಲೆಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮೈಸೂರಿನ ವಿವಿಧ ಚರ್ಚ್‌ಗಳಿಗೆ ಭೇಟಿ ನೀಡಿ ಕ್ರೈಸ್ತ ಧರ್ಮಗುರುಗಳಿಗೆ ಶುಭ ಕೋರಿದರು. ಈ ವೇಳೆ ಮುಖಂಡರಾದ ವಿಶ್ವನಾಥ್ (ವಿಶ್ವ), ಆಶ್ರಯ ಸಮಿತಿ ಸದಸ್ಯರಾದ ಗುಣಶೇಖರ್, ಮಹ್ಮದ್ ಫಾರೂಖ್, ರೂಪೇಶ್ ಉಪಸ್ಥಿತರಿದ್ದರು.



ಕ್ರಿಸ್ಮಸ್ ಹಬ್ಬದ ಪ್ರಯುಕ್ತ ಮೈಸೂರಿನ ಸೆಂಟ್ ಫಿಲೋಮಿನಾಸ್ ಚರ್ಚ್‌ನ ಫಾದರ್ ಸ್ಟಾಲಿನ್ ಅವರಿಗೆ ಶುಭಾಶಯ ಕೋರಲಾಯಿತು. ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮತ್ತು ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು ಈ ವೇಳೆ ಉಪಸ್ಥಿತರಿದ್ದರು.

ಹುಣಸೂರು ಡಿವೈಎಸ್ಪಿ ಗೋಪಾಲಕೃಷ್ಣ ಅವರಿಗೆ ಹುಟ್ಟುಹಬ್ಬದ ಶುಭಾಶಯ...



ಹುಟ್ಟುಹಬ್ಬ ಆಚರಿಸಿಕೊಂಡ ಹುಣಸೂರು ಡಿವೈಎಸ್ಪಿ ಗೋಪಾಲಕೃಷ್ಣ ಅವರನ್ನು ಜಂಬುಪುರ ಜವರ ನಾಯಕ, ಟೆನ್ನಿಸ್ ಗೋಪಿ, ಕ್ಯಾತಮಾರನಹಳ್ಳಿ ವೆಂಕಟೇಶ್, ಕಾಟೂರು ಸಿದ್ದರಾಜು, ಸಾಹುಕಾರಹುಂಡಿ ಮಹದೇವು, ಧನಗಳ್ಳಿ ನಿಂಗರಾಜು, ಯಡಳ್ಳಿ ರಮೇಶ್, ಸೋಮೇಶ್ವರಪುರ ನಾರಾಯಣ್, ಹಂಚ್ಯಾ ರವಿಕುಮಾರ್ ಇತರರು ಸನ್ಮಾನಿಸಿ, ಶುಭಕೋರಿದರು.

ಡಿ.29ರಂದು ಕೆ.ಹೆಮ್ಮನಹಳ್ಳಿಯಲ್ಲಿ 'ಶ್ರೀಕೃಷ್ಣ ಗಾರುಡಿ' ನಾಟಕ

ಮೈಸೂರು,ಡಿ.25–ತಾಲೂಕಿನ ಬೋಗಾದಿ–ಗದ್ದಿಗೆ ರಸ್ತೆಯಲ್ಲಿರುವ (9ನೇ ಕಿ.ಮೀ ದೂರ) ಕೆ.ಹೆಮ್ಮನಹಳ್ಳಿಯ ಪ್ರಸಿದ್ಧ ಹಾರ್ಮೋನಿಯಂ ಶಿಕ್ಷಕರೂ, ನಾಟಕ ಗುರುಗಳಾಗಿದ್ದ ದೇವರಗುಡಿ ಶೆಟ್ಟಿ ಮತ್ತು ಮಾದೇವ ಶೆಟ್ಟಿ ಸ್ಮರಣಾರ್ಥ ಡಿ.29 ರಂದು ಮಧ್ಯಾಹ್ನ 3 ಗಂಟೆಯಿಂದ ರಾತ್ರಿ 10 ಗಂಟೆವರೆಗೆ ಬೆಳ್ಳಾವೆ ನರಹರಿ ಶಾಸ್ತ್ರಿ ವಿರಚಿತ 'ಶ್ರೀಕೃಷ್ಣಗಾರುಡಿ' ಪೌರಾಣಿಕ ನಾಟಕವನ್ನು ಶ್ರೀ ಮಹಾಲಿಂಗೇಶ್ವರ ಕೃಪಾಪೋಷಿತ ನಾಟಕ ಮಂಡಲಿ ಕಲಾವಿದರು ಪ್ರದರ್ಶಿಸಲಿದ್ದಾರೆ. ಕೆ.ಹೆಮ್ಮನಹಳ್ಳಿಯ ಶ್ರೀ ದೊಡ್ಡಮ್ಮ ತಾಯಿ ದೇವಸ್ಥಾನದ ಎದುರು ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ಹಾರ್ಮೋನಿಯಂನಲ್ಲಿ ಆರ್.ಮಂಜುನಾಥ ಹೆಮ್ಮನಹಳ್ಳಿ ಮತ್ತು ವಾದ್ಯ ಗೋಷ್ಠಿ ಕೂರ್ಗಳ್ಳಿ ಲೋಕೇಶ ಮತ್ತು ತಂಡ. ಮಹಿಳಾ ಕಲಾವಿದರಾದ ಮೇರಿ ವಸಂತ, ಗೀತಾಂಜಲಿ ಮತ್ತು ಲಕ್ಷ್ಮೀ ಭಾಗವಹಿಸಲಿದ್ದಾರೆ. ಜವರಶೆಟ್ಟಿ ಮತ್ತು ಚಾಮಶೆಟ್ಟಿ ನಾಟಕವನ್ನು ನಿರ್ದೇಶಿಸಿದ್ದಾರೆ. ಮಾಹಿತಿಗೆ ಎಂ.ಗಣೇಶ 9342336927, ಅನಂತವರ್ಧನ 9449264920 ಸಂಪರ್ಕಿಸಿ.

ರಾಜೇಂದ್ರ ಶ್ರೀಗಳು ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ, ಶೈಕ್ಷಣಿಕ ಚಕ್ರವರ್ತಿಗಳು

ಜೆಎಸ್‌ಎಸ್ ಕರ್ನಾಟಕ ಮುಕ್ತ ವಿವಿಯ ನಿರ್ದೇಶಕ ಸಿ.ಎಸ್.ಶಿವಸ್ವಾಮಿ ಬಣ್ಣನೆ

ಮೈಸೂರು, ಡಿ.25(ಜಿಎ)–ಸುತ್ತೂರು ಕ್ಷೇತ್ರದ ರಾಜೇಂದ್ರ ಶ್ರೀಗಳು ಏಕಕಾಲದಲ್ಲಿ ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ ಹಾಗೂ ಶೈಕ್ಷಣಿಕ ಚಕ್ರವರ್ತಿಗಳಾಗಿ ಮೆರೆದರು ಎಂದು ಜೆಎಸ್‌ಎಸ್ ಕರ್ನಾಟಕ ಮುಕ್ತ ವಿವಿಯ ನಿರ್ದೇಶಕ ಸಿ.ಎಸ್.ಶಿವಸ್ವಾಮಿ ತಿಳಿಸಿದರು.

ಮೈಸೂರಿನ ಎಂಜಿ ರಸ್ತೆಯಲ್ಲಿರುವ ರಾಜೇಂದ್ರ ಭವನದಲ್ಲಿ ರಾಜ್ಯ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಮೈಸೂರು ಜಿಲ್ಲಾ ಘಟಕವು ಆಯೋಜಿಸಿದ್ದ ಶಿವರಾತ್ರಿ ರಾಜೇಂದ್ರ ಶ್ರೀಗಳ 109ನೇ ಜಯಂತಿ, ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರು ಹಾಗೂ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಉನ್ನತಿಗೆ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶಿವರಾತ್ರಿ ರಾಜೇಂದ್ರ ಶ್ರೀಗಳು ಮಹತ್ವಪೂರ್ಣ ಕೊಡುಗೆ ನೀಡಿದ್ದು, ತಮಗಾಗಿ ಏನನ್ನೂ ಬಯಸದೆ, ಸಮಾಜದ ಸರ್ವರ ಯೋಗಕ್ಷೇಮಕ್ಕಾಗಿ ದುಡಿಯಲು ಆರಂಭಿಸಿದರು. ಅವರು ಮಾಡಿದ ಸೇವೆ ಅಪಾರವಾದದ್ದು. ಸುತ್ತೂರು ಮಠ ಇಲ್ಲದಿದ್ದರೆ ನಾವೆಲ್ಲರೂ ಈ ಸಂತೋಷ ಕೂಟದಲ್ಲಿ, ಸಮಾಜದಲ್ಲಿ ಯಾವ ಸೇವೆ ಮಾಡಲು ಆಗುತ್ತಿರಲಿಲ್ಲ ಎಂದು ಹೇಳಿದರು.



ಮೈಸೂರಿನ ರಾಜೇಂದ್ರ ಭವನದಲ್ಲಿ ರಾಜ್ಯ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಮೈಸೂರು ಜಿಲ್ಲಾ ಘಟಕವು ಬುಧವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಜೇಂದ್ರ ಶ್ರೀ, ಶಿವಕುಮಾರ ಸ್ವಾಮೀಜಿ ಹಾಗೂ ಬಸವಣ್ಣ ಅವರ ಭಾವಚಿತ್ರಕ್ಕೆ ಮುಖ್ಯ ಅತಿಥಿಗಳು ಪುಷ್ಪ ನಮನ ಸಲ್ಲಿಸಿದರು.

ಇಂದು ವಿದ್ಯಾರ್ಥಿಗಳಲ್ಲಿ ದೃಢ ನಿರ್ಧಾರ, ಆತ್ಮವಿಶ್ವಾಸ, ಸತತ ಪ್ರಯತ್ನ ಮಾಡುವ ಗುಣ ಇರಬೇಕು. ವಿದ್ಯಾರ್ಥಿಗಳು ಸಮಯವನ್ನು ವ್ಯರ್ಥ ಮಾಡದೆ ಶಿಕ್ಷಣಕ್ಕೆ ಒತ್ತು ಕೊಟ್ಟು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಮೈಸೂರಿನ ಕುದೇರು ಮಠದ ಕಿರಿಯ ಶ್ರೀ ಗುರುಲಿಂಗ ಸ್ವಾಮೀಜಿ, ರಾಜ್ಯ ಶಿಕ್ಷಣ ಮತ್ತು ಸಂಶೋಧನಾ ತರಬೇತಿ ಸಂಸ್ಥೆ ಉಪನಿರ್ದೇಶಕ ಎಸ್.ಸ್ವಾಮಿ, ರಾಜೇಂದ್ರ ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ನಂತರ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ಸಮುದಾಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರು ಹಾಗೂ ವಿವಿಧ ಕ್ಷೇತ್ರದ ಸಾಧಕರನ್ನು ಅಭಿನಂದಿಸಲಾಯಿತು.

ಮಾಜಿ ಉಪಮೇಯರ್ ದಕ್ಷಿಣ ಮೂರ್ತಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಹೆಚ್.ವಿ.ಬಸವರಾಜು, ಚಾಮರಾಜೇಶ್ವರಿ ಅಕ್ಕನ ಬಳಗದ ಅಧ್ಯಕ್ಷೆ ಮಾದಲಾಂಬಿಕ ನಂಜುಂಡಸ್ವಾಮಿ, ಹಿರಿಯ ವೈದ್ಯಕೀಯ ತಜ್ಞ ಡಾ.ಪಿ. ಶಿವಶಂಕರ್, ಶ್ರೀ ಗುರುಮಲ್ಲೇಶ್ವರ ಪದವೀಧರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಅಶ್ವಿನ್ ಆರ್.ಪಾಳೇಗಾರ್, ಉಪಾಧ್ಯಕ್ಷ ಕೆ.ಎಂ.ಕಲ್ಲಳ್ಳಿ ನಟರಾಜು, ರಾಜ್ಯ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಮೈಸೂರು ಜಿಲ್ಲಾಧ್ಯಕ್ಷ ಆಲೂರು ಬಸವರಾಜು, ಗೌರವಾಧ್ಯಕ್ಷ ಎಂ.ಕೆ.ಸ್ವಾಮಿ, ರಾಜ್ಯ ಸಂಚಾಲಕ ರಾಜಶೇಖರ, ಪ್ರಧಾನ ಕಾರ್ಯದರ್ಶಿ ಪಿ.ಪ್ರಭುಸ್ವಾಮಿ, ನಿಕಟಪೂರ್ವ ಕಾರ್ಯದರ್ಶಿ ಕೆಂಪಣ್ಣ, ನಾಗರಾಜು, ಶಿವಕುಮಾರ್, ಮರಿಮಲ್ಲಪ ಕಾಲೇಜಿನ ಪ್ರಾಧ್ಯಾಪಕಿ ಪ್ರೊ.ಶೈಲಾ ಮತ್ತಿತರರಿದ್ದರು.

ಗೃಹಬಂಧನದಲ್ಲಿದ್ದ ಮಹಿಳೆ ರಕ್ಷಿಸಿದ ಪೊಲೀಸರು

ಮೈಸೂರು, ಡಿ. 25(ಆರ್‌ಕೆ)– ಪತಿಯೇ ಹಿಂಸೆ ನೀಡಿ ಗೃಹಬಂಧನದಲ್ಲಿರಿಸಿದ್ದ ಪತ್ನಿಯನ್ನು ವಿಜಯನಗರ ಪೊಲೀಸರು ರಕ್ಷಿಸಿರುವ ಪ್ರಕರಣ ಡಿ.19ರಂದು ನಡೆದಿದೆ. ಮೈಸೂರಿನ ವಿಜಯನಗರ 4ನೇ ಹಂತದ ಸಂಕಲ್ಪ ಅಪಾರ್ಟ್‌ಮೆಂಟ್ ಬಳಿಯ ನಿವಾಸಿ ಎಸ್.ಎಲ್.ದೀಪಾ, ಪತಿ ಅನೂಪ್‌ರಿಂದ ಗೃಹಬಂಧನಕ್ಕೊಳಗಾಗಿದ್ದವರು. 2023ರ ಮೇ 1ರಂದು ಚಿಕ್ಕಮಗಳೂರಿನ ಕನಕ ಸಮುದಾಯ ಭವನದಲ್ಲಿ ಅನೂಪ್ ಜೊತೆ ಮದುವೆಯಾಗಿದ್ದ ದೀಪಾ, ಮೈಸೂರಿನಲ್ಲಿ ಗಂಡ, ಅತ್ತೆ–ಮಾವರೊಂದಿಗೆ ವಾಸವಾಗಿದ್ದರು. ಕೆಲ ದಿನಗಳವರೆಗೆ ತನ್ನನ್ನು ಚೆನ್ನಾಗಿ ನೋಡಿಕೊಳ್ಳುತ್ತಿದ್ದ ಅನೂಪ್, ನಂತರ ವಿನಾಕಾರಣ ಮಾನಸಿಕ ಹಾಗೂ ದೈಹಿಕವಾಗಿ ಹಿಂಸೆ ನೀಡುತ್ತಿದ್ದ ಎಂದು ದೀಪಾ ವಿಜಯನಗರ ಠಾಣೆಗೆ ನೀಡಿರುವ ದೂರಿನಲ್ಲಿ ಆರೋಪಿಸಿದ್ದಾರೆ. 2024ರ ಡಿ.18ರಂದು ನನ್ನನ್ನು ಕೊಲೆ ಮಾಡುವ ಉದ್ದೇಶದಿಂದ ಅನೂಪ್ ಮನೆಯಲ್ಲಿ ಕೂಡಿ ಹಾಕಿ ಹೊರಗಿನಿಂದ ಬಾಗಿಲಿಗೆ ಬೀಗ ಹಾಕಿ ಗೃಹಬಂಧನದಲ್ಲಿರಿಸಿದ್ದ. ನಂತರ ನಾನು ಅಕ್ಕ ಮತ್ತು ಭಾವನವರಿಗೆ ಮೊಬೈಲ್ ಮೂಲಕ ವಿಷಯ ತಿಳಿಸಿದ ಹಿನ್ನೆಲೆಯಲ್ಲಿ ಡಿ.19ರಂದು ಬೆಳಗ್ಗೆ ಅವರು ಬಂದು ವಿಜಯನಗರ ಠಾಣೆಗೆ ಮಾಹಿತಿ ನೀಡಿದ ಕಾರಣ, ಪೊಲೀಸರು ಬಂದು ಮನೆ ಬಾಗಿಲು ಒಡೆದು ನನ್ನನ್ನು ರಕ್ಷಿಸಿ ಕ್ಲಿಯರ್‌ಮೆಡಿ ರೇಡಿಯಂಟ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದರು. ಆಕೆಯ ಲಿಖಿತ ದೂರಿನನ್ವಯ ಪತಿ ಅನೂಪ್ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ವಿಜಯನಗರ ಠಾಣೆ ಸಬ್‌ಇನ್‌ಸ್ಪೆಕ್ಟರ್ ಕೆ.ನಾರಾಯಣ ತನಿಖೆ ನಡೆಸುತ್ತಿದ್ದಾರೆ.

ಹಾವೇರಿಯಲ್ಲಿ ಕಾರುಗಳ ನಡುವೆ ಡಿಕ್ಕಿ; ಒಂದೇ ಕುಟುಂಬದ ನಾಲ್ವರ ಸಾವು



ಹಾವೇರಿ: ರಾಜ್ಯದಲ್ಲಿ ಬುಧವಾರ ಮಧ್ಯಾಹ್ನ ಮತ್ತೊಂದು ಭೀಕರ ಅಪಘಾತ ಸಂಭವಿಸಿದ್ದು, ಬಾಲಕ ಸೇರಿದಂತೆ ಒಂದೇ ಕುಟುಂಬದ ನಾಲ್ವರು ಸಾವಿಗೀಡಾಗಿರುವ ಧಾರುಣ ಘಟನೆ ಶಿಗ್ಗಾಂವಿ ಬಳಿಯ ತಡಸ ಕ್ರಾಸ್‌ನ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಪೊಲೀಸರ ಪ್ರಕಾರ, ಹುಬ್ಬಳ್ಳಿ ಕಡೆಗೆ ಹೋಗುತ್ತಿದ್ದ ಎಸ್‌ಯುವಿ ನಿಯಂತ್ರಣ ತಪ್ಪಿ ರಸ್ತೆ ವಿಭಜಕವನ್ನು ಹಾರಿ ಹುಬ್ಬಳ್ಳಿಯಿಂದ ಬೆಂಗಳೂರು ಕಡೆಗೆ ಬರುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದು ತಿಮ್ಮಾಪುರ ಬಳಿಯಲ್ಲಿ ಅಪಘಾತ ಸಂಭವಿಸಿದೆ. ಡಿಕ್ಕಿಯ ರಭಸಕ್ಕೆ ಒಂದು ಕಾರಿನಲ್ಲಿದ್ದ ಇಬ್ಬರು ಸ್ಥಳದಲ್ಲೇ ಮೃತಪಟ್ಟರೆ, ಗಂಭೀರವಾಗಿ ಗಾಯಗೊಂಡಿದ್ದ ಮತ್ತಿಬ್ಬರು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯಲ್ಲಿ ಉಸಿರು ಚೆಲ್ಲಿದ್ದಾರೆ. ಮತ್ತೊಂದು ಕಾರಿನಲ್ಲಿದ್ದ ಚಾಲಕ ಹಾಗೂ ಇತರರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಅಪಘಾತದಲ್ಲಿ ಮೃತಪಟ್ಟವರನ್ನು ಬೆಂಗಳೂರಿನ ಚಾಮರಾಜಪೇಟೆಯ 59 ವರ್ಷದ ಚಂದ್ರಮ್ಮ, ಅವರ ಮಗಳು ಮೀನಾ (38), ಕಾರು ಚಾಲಕ ಮಹೇಶ್ ಕುಮಾರ್ ಸಿ (41) ಹಾಗೂ ಧನ್ವೀರ್ (11) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಒಂದು ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಮತ್ತೊಂದು ಕಾರಿನ ಮುಂಭಾಗ ನಜ್ಜು ಗುಜ್ಜಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದೇಶ - ವಿದೇಶ

ಕಜಕಿಸ್ತಾನದಲ್ಲಿ ವಿಮಾನ ಪತನ, ಕನಿಷ್ಠ 30 ಮಂದಿ ಸಾವು



ಕಜಕಿಸ್ತಾನ: ಕಜಕಿಸ್ತಾನದಲ್ಲಿ ಸುಮಾರು 70ಕ್ಕೂ ಹೆಚ್ಚು ಪ್ರಯಾಣಿಕರಿದ್ದ ವಿಮಾನ ಪತನವಾಗಿದ್ದು, ಕನಿಷ್ಠ 30 ಮಂದಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. 70ಕ್ಕೂ ಹೆಚ್ಚು ಪ್ರಯಾಣಿಕರನ್ನು ಹೊತ್ತ ಅಜರ್‌ಬೈಜಾನ್ ಏರ್‌ಲೈನ್ಸ್ ವಿಮಾನ ಬಕು ನಗರದಿಂದ ರಷ್ಯಾದ ಗ್ರೋಜ್ನಿ ನಗರಕ್ಕೆ ಪ್ರಯಾಣ ಬೆಳೆಸಿತ್ತು. ಪೈಲಟ್ ನಿಯಂತ್ರಣ ಕಳೆದುಕೊಂಡ ವಿಮಾನ ನೋಡ ನೋಡುತ್ತಲೇ ನೆಲಕ್ಕೆ ಅಪ್ಪಳಿಸಿ ಸ್ಫೋಟಗೊಂಡಿದೆ. ಭೀಕರ ದೃಶ್ಯವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದು, ಈ ದೃಶ್ಯ ಇದೀಗ ವೈರಲ್ ಆಗುತ್ತಿದೆ.

ದಟ್ಟ ಮಂಜಿನ ಕಾರಣ ವಿಮಾನದ ಮಾರ್ಗ ಕೊನೆಯ ಕ್ಷಣದಲ್ಲಿ ಬದಲಾಯಿಸಲಾಗಿತ್ತು. ರಷ್ಯಾದ ಗ್ರೋಜ್ನಿಗೆ ಹೊರಟಿದ್ದ ವಿಮಾನಕ್ಕೆ ಮಾರ್ಗ ಬದಲಾವಣೆ ಸೂಚನೆ ನೀಡಲಾಗಿತ್ತು. ಆದರೆ ಅಕ್ತಾವು ಬಳಿ ವಿಮಾನ ಆಗಸದಲ್ಲೇ ಕೆಲ ಸುತ್ತು ಹೊಡೆದಿದೆ. ಪೈಲಟ್ ವಿಮಾನ ಲ್ಯಾಂಡಿಂಗ್ ಮಾಡುವ ಪ್ರಯತ್ನ ಮಾಡಿದ್ದಾರೆ. ಆದರೆ ಲ್ಯಾಂಡಿಂಗ್ ಸಾಧ್ಯವಾಗಿಲ್ಲ. ನೇರವಾಗಿ ವಿಮಾನ ನೆಲಕ್ಕೆ ಅಪ್ಪಳಿಸಿದ ಪರಿಣಾಮ ವಿಮಾನ ಪತನಗೊಂಡಿದೆ. ವಿಮಾನ ಅಪಘಾತದಲ್ಲಿ ಅಚ್ಚರಿ ರೀತಿಯಲ್ಲಿ ಹಲವು ಪ್ರಯಾಣಿಕರು ಪಾರಾಗಿದ್ದು, 25 ಮಂದಿ ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಲಾಗಿದೆ.

ಕಾರು–ಬಸ್ ನಡುವೆ ಡಿಕ್ಕಿ: ಐವರು ಸಾವು



ಜೈಪುರ: ರಾಜಸ್ಥಾನದ ಕರೌಲಿ ಜಿಲ್ಲೆಯಲ್ಲಿ ಕಾರು ಮತ್ತು ಬಸ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ್ದು, ಭೀಕರ ಅಪಘಾತದಲ್ಲಿ ಐವರು ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮಂಗಳವಾರ ರಾತ್ರಿ ಕುಡಗಾಂವ್ ಪೊಲೀಸ್ ಠಾಣಾ ವ್ಯಾಪ್ತಿಯ ಸೇಲಂಪುರ–ಕುಡ್ಗಾಂವ್ ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ಕಾರಿನಲ್ಲಿ ಪ್ರಯಾಣಿಸುತ್ತಿದ್ದವರು ಕೈಲಾದೇವಿ ದೇವಸ್ಥಾನಕ್ಕೆ ಭೇಟಿ ನೀಡಿ, ವಾಪಸ್ ಗಂಗಾಪುರ ನಗರದ ಕಡೆಗೆ ಹೋಗುತ್ತಿದ್ದರು ಎಂದು ಕರೌಲಿ ಪೊಲೀಸ್ ವರಿಷ್ಠಾಧಿಕಾರಿ ಬ್ರಿಜೇಶ್ ಜ್ಯೋತಿ ಉಪಾಧ್ಯಾಯ ತಿಳಿಸಿದ್ದಾರೆ.

ಕಾರಿನಲ್ಲಿದ್ದ ಐವರು, ನಯನ್ ದೇಶಮುಖ್(60), ಅವರ ಸಹೋದರಿ ಪ್ರೀತಿ ಭಟ್(60), ಅವರ ಮಗ ಖುಷ್ ದೇಶಮುಖ್(22), ಅವರ ಮಗಳು ಮನಸ್ವಿ (25) ಮತ್ತು ಸಂಬಂಧಿ ಅನಿತಾ(55) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಎಸ್ಪಿ ಹೇಳಿದ್ದಾರೆ. ಸಂತ್ರಸ್ತರು ಮಧ್ಯಪ್ರದೇಶದ ಇಂದೋರ್ ನಿವಾಸಿಗಳು ಎಂದು ಕುಡ್ಗಾಂವ್ ಸ್ಟೇಷನ್ ಹೌಸ್ ಆಫೀಸರ್ ರುಕ್ಮಣಿ ಗುರ್ಜರ್ ಅವರು ತಿಳಿಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಶವಾಗಾರಕ್ಕೆ ಕಳುಹಿಸಲಾಗಿದೆ.


ಸ್ಫೋಟಕ ವಸ್ತುಗಳ ಘಟಕದಲ್ಲಿ ಭಾರಿ ಸ್ಫೋಟ; 12 ಮಂದಿ ಸಾವು



ಇಸ್ತಾಂಬುಲ್: ವಾಯುವ್ಯ ಟರ್ಕಿಯಲ್ಲಿ ಮಂಗಳವಾರ ಸ್ಫೋಟಕ ವಸ್ತುಗಳ ಘಟಕದಲ್ಲಿ ಪ್ರಬಲ ಸ್ಫೋಟ ಸಂಭವಿಸಿದ್ದು, ಘಟನೆಯಲ್ಲಿ 12 ಜನ ಸಾವನ್ನಪ್ಪಿದ್ದಾರೆ ಮತ್ತು ಐವರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಾಥಮಿಕ ವರದಿಗಳ ಪ್ರಕಾರ, ಬಲಿಕೇಸಿರ್ ಪ್ರಾಂತ್ಯದ ಕರೇಸಿ ಜಿಲ್ಲೆಯ ಸ್ಫೋಟಕ ವಸ್ತುಗಳ ಘಟಕದಲ್ಲಿ ಸಂಭವಿಸಿದ ಸ್ಫೋಟದಲ್ಲಿ 12 ಉದ್ಯೋಗಿಗಳು ಸಾವನ್ನಪ್ಪಿದ್ದಾರೆ ಮತ್ತು ಐವರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಸ್ಥಳೀಯ ಗವರ್ನರ್ ಇಸ್ಮಾಯಿಲ್ ಉಸ್ತಾವೊಗ್ಲು ಹೇಳಿದ್ದಾರೆ. ಕಾರ್ಖಾನೆಯೊಳಗೆ ಯಾವುದೇ ಸಿಬ್ಬಂದಿ ಉಳಿದಿಲ್ಲ ಮತ್ತು ಬೆಂಕಿಯನ್ನು ನಂದಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಸ್ಥಾವರದ ಒಂದು ವಿಭಾಗದಲ್ಲಿ ಬೆಳಗ್ಗೆ 8.25ಕ್ಕೆ ಸ್ಫೋಟ ಸಂಭವಿಸಿದೆ. ವಸತಿ ಪ್ರದೇಶಗಳಿಂದ ದೂರದಲ್ಲಿರುವ ಈ ಕಾರ್ಖಾನೆಯಲ್ಲಿ ಸಂಭವಿಸಿದ ಸ್ಫೋಟಕ್ಕೆ ಕಾರಣ ಇನ್ನೂ ತಿಳಿದು ಬಂದಿಲ್ಲ ಎಂದು ಆಂತರಿಕ ಸಚಿವ ಅಲಿ ಯರ್ಲಿಕಾಯಾ ಹೇಳಿದ್ದಾರೆ. ಸ್ಫೋಟಕ್ಕೆ ಕಾರಣವೇನು ಎಂಬುದನ್ನು ಪತ್ತೆ ಹಚ್ಚಲು ಪ್ರಯತ್ನಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ.


ಅಣ್ಣಾ ವಿವಿ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ



ಚೆನ್ನೈ: ತಮಿಳುನಾಡಿನ ಅಣ್ಣಾ ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿನಿಯೊಬ್ಬಳ ಮೇಲೆ ಇಬ್ಬರು ವ್ಯಕ್ತಿಗಳು ಅತ್ಯಾಚಾರವೆಸಗಿದ್ದಾರೆ. ಈ ಸಂಬಂಧ ಕೋತ್ತೂರ್‌ಪುರಂ ಠಾಣೆ ಪೊಲೀಸರು ಬಿಎನ್‌ಎಸ್‌ಎಸ್ ಸೆಕ್ಷನ್ 64ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಮಧ್ಯರಾತ್ರಿ ಸಮೀಪದ ಚರ್ಚ್‌ನಲ್ಲಿ ಕ್ರಿಸ್‌ಮಸ್ ಪ್ರಾರ್ಥನೆ ಮುಗಿಸಿ ಹಿಂದಿರುಗಿದ ನಂತರ ಯುವತಿ ಹಾಗೂ ಆಕೆಯ ಸ್ನೇಹಿತ ಕ್ಯಾಂಪಸ್‌ನಲ್ಲಿ ಒಟ್ಟಿಗೆ ಕುಳಿತಿದ್ದಾಗ ಈ ಘಟನೆ ಸಂಭವಿಸಿದೆ. ಆರೋಪಿಗಳು ಆಕೆಯ ಸ್ನೇಹಿತನ ಮೇಲೆ ಹಲ್ಲೆ ನಡೆಸಿ, ನಂತರ ಯುವತಿ ಮೇಲೆ ಅತ್ಯಾಚಾರ ಎಸಗಿದ್ದಾರೆ ಎನ್ನಲಾಗಿದೆ. ಘಟನೆ ಕುರಿತು ಬಿಜೆಪಿ ರಾಜ್ಯಾಧ್ಯಕ್ಷ ಕೆ.ಅಣ್ಣಾಮಲೈ ಪ್ರತಿಕ್ರಿಯಿಸಿದ್ದು, ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಆಗ್ರಹಿಸಿದ್ದಾರೆ. ಡಿಎಂಕೆ ಸರ್ಕಾರದಲ್ಲಿ ತಮಿಳುನಾಡು ಕಾನೂನುಬಾಹಿರ ಚಟುವಟಿಕೆಗಳ ಮತ್ತು ಅಪರಾಧಿಗಳ ಆಶ್ರಯ ತಾಣವಾಗಿದೆ. ಇನ್ನು ಮುಂದೆ ರಾಜ್ಯದಲ್ಲಿ ಮಹಿಳೆಯರಿಗೆ ಸುರಕ್ಷಿತ ಭಾವನೆ ಇಲ್ಲ. ಏಕೆಂದರೆ ರಾಜ್ಯ ಸರ್ಕಾರ ಪೊಲೀಸರನ್ನು ಬಳಸಿಕೊಂಡು ಪ್ರತಿಪಕ್ಷಗಳನ್ನು ಮೌನಗೊಳಿಸಲು ಪ್ರಯತ್ನಿಸುತ್ತಿದೆ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಆರೋಪಿಸಿದ್ದಾರೆ.

ಅಫ್ಘಾನಿಸ್ತಾನದ ಮೇಲೆ ಪಾಕಿಸ್ತಾನದಿಂದ ವೈಮಾನಿಕ ದಾಳಿ: 15 ಮಂದಿ ಸಾವು



ಕಾಬುಲ್: ಅಫ್ಘಾನಿಸ್ತಾನದ ಬರ್ಮಾಲ್ ಜಿಲ್ಲೆಯ ಮೇಲೆ ಪಾಕಿಸ್ತಾನ ಸರಣಿ ವೈಮಾನಿಕ ದಾಳಿಗಳನ್ನು ನಡೆಸಿದ್ದು, ಈ ದಾಳಿಯಲ್ಲಿ ಮಕ್ಕಳು ಸೇರಿದಂತೆ ಕನಿಷ್ಠ 15 ಜನರು ಸಾವಿಗೀಡಾಗಿದ್ದಾರೆ. ಈ ಪೈಕಿ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದಾರೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಡಿ.24ರ ರಾತ್ರಿ ಅಫ್ಘಾನಿಸ್ತಾನದ ಲಮನ್ ಸೇರಿದಂತೆ ಏಳು ಗ್ರಾಮಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ವಾಯುಸೇನೆ ದಾಳಿ ನಡೆಸಿದೆ. ಪಾಕಿಸ್ತಾನದ ಫೈಟರ್ ಜೆಟ್‌ಗಳು ಈ ಬಾಂಬ್ ದಾಳಿ ನಡೆಸಿವೆ ಎಂದು ತಾಲಿಬಾನ್ ಆಡಳಿತ ಆರೋಪಿಸಿದೆ. ಈ ವೈಮಾನಿಕ ದಾಳಿಯಲ್ಲಿ ಭಾರಿ ವಿನಾಶ ಸಂಭವಿಸಿದ್ದು, ಬರ್ಮಾಲ್‌ನ ಮುರ್ಗ್ ಬಜಾರ್ ಗ್ರಾಮವೇ ಸಂಪೂರ್ಣವಾಗಿ ನಾಶವಾಗಿದೆ. ಪಾಕಿಸ್ತಾನದ ವೈಮಾನಿಕ ದಾಳಿಯ ನಂತರ ಈ ಪ್ರದೇಶದಲ್ಲಿ ಉದ್ವಿಗ್ನತೆ ಮತ್ತಷ್ಟು ಹೆಚ್ಚಾಗಿದ್ದು, ಈ ದಾಳಿಯಲ್ಲಿ ತಾಲಿಬಾನ್ ತರಬೇತಿ ಶಿಬಿರವನ್ನು ಧ್ವಂಸಗೊಳಿಸಲಾಗಿದೆ ಮತ್ತು ಅನೇಕ ಭಯೋತ್ಪಾದಕರು ಹತರಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಪಾಕಿಸ್ತಾನ ದಾಳಿಯನ್ನು ಖಂಡಿಸಿರುವ ತಾಲಿಬಾನ್ ಆಡಳಿತ ಪಾಕಿಸ್ತಾನಕ್ಕೆ ಶೀಘ್ರದಲ್ಲೇ ಮುಟ್ಟಿನೋಡಿಕೊಳ್ಳುವಂತೆ ಉತ್ತರ ನೀಡುತ್ತೇವೆ ಎಂದಿದೆ.

ಸಭೆಗೆ ಗೈರಾದ ವಿವಿಧ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ

ಗ್ರಾಮಸಭೆಯಿಂದ ಹೊರ ನಡೆದ ಗ್ರಾಮಸ್ಥರು



ಸಭೆಗೆ ಗೈರಾದ ಅಧಿಕಾರಿಗಳ ವಿರುದ್ಧ ಗ್ರಾಮಸ್ಥರು ಘೋಷಣೆ ಕೂಗಿ ಗ್ರಾಮಸಭೆಯಿಂದ ಹೊರ ನಡೆದರು.

ಸುಂಟಿಕೊಪ್ಪ, ಡಿ.25–ನಾಕೂರು ಶಿರಂಗಾಲ ಗ್ರಾಮ ಪಂಚಾಯಿತಿಯ 2024–25ನೇ ಸಾಲಿನ ಗ್ರಾಮ ಸಭೆಗೆ ಪ್ರಮುಖ ಇಲಾಖೆ ಅಧಿಕಾರಿಗಳು ಗೈರಾದ ಕಾರಣ ಸಭೆಗೆ ಆಗಮಿಸಿದ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿ, ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಸಭೆಯಿಂದ ಹೊರ ನಡೆದರು.


ನಾಕೂರು ಶಿರಂಗಾಲ ಗ್ರಾಮ ಪಂಚಾಯಿತಿಯ ಗ್ರಾಮಸಭೆಯನ್ನು ಅಧ್ಯಕ್ಷ ಮಂದೋಡಿ ಜಗನಾಥ್ ಅಧ್ಯಕ್ಷತೆಯಲ್ಲಿ ಕಾನ್‌ಬೈಲು ಸರ್ಕಾರ ಪ್ರಾಥಮಿಕ ಶಾಲೆ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಗ್ರಾಪಂ ಅಧ್ಯಕ್ಷ ಮಂದೋಡಿ ಜಗನಾಥ್, ಉಪಾಧ್ಯಕ್ಷ ಸತೀಶ್, ಸದಸ್ಯರಾದ ಕೊಳಂಬೆ ಸುಭಾಶ್, ಪ್ರೇಮಾ, ಬಿ.ಜಿ.ರಮೇಶ್, ಸೀತೆ, ರಾಧಾ ಮಣಿ, ಅರುಣಾ ಕುಮಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗೂಳಪ್ಪ ಕೂತಿನ ಅವರು ಸಭೆಗೆ ಸಮಯಕ್ಕೆ ಸರಿಯಾಗಿ ಆಗಮಿಸಿದ್ದರು. ಗ್ರಾಮಸ್ಥರು ಕೂಡ ಅಧಿಕ ಸಂಖ್ಯೆಯಲ್ಲಿ ಸೇರಿದ್ದರು.

ಆದರೆ, ಗ್ರಾಮಸಭೆಗೆ ಕಂದಾಯ ಇಲಾಖೆ, ನೀರಾವರಿ, ಆಹಾರ ಮತ್ತು ನಾಗರಿಕ ಪೂರೈಕೆ, ಅರಣ್ಯ ಇಲಾಖೆ ಅಧಿಕಾರಿಗಳು ಗೈರಾಗಿದ್ದರು. ಇದರಿಂದ ಆಕ್ರೋಶಿತರಾದ ಗ್ರಾಮಸ್ಥರು, ಸಭೆ ಮುಂದೂಡಬೇಕೆಂದು ಆಗ್ರಹಿಸಿದರು.

ಗ್ರಾಮಸ್ಥರಾದ ರಾಮಯ್ಯ, ಅಂಬೆಕಲ್ ಚಂದ್ರು, ಶಾಂತಪ್ಪ ಮಾತನಾಡಿ, ಆಹಾರ ಇಲಾಖೆ, ಅರಣ್ಯ ಇಲಾಖೆ, ನೀರು, ರಸ್ತೆ ಸಂಬಂಧಿಸಿದ ಸಮಸ್ಯೆಗಳಿವೆ. ಈ ಇಲಾಖೆಗಳ ಅಧಿಕಾರಿಗಳು ಇಲ್ಲದೆ ಗ್ರಾಮಸಭೆ ನಡೆಸಿ ಪ್ರಯೋಜನವಿಲ್ಲ. ಹೀಗಾಗಿ ಸಭೆ ಮುಂದೂಡಿ ಎಂದು ಒಕ್ಕೊರಲಿನಿಂದ ಒತ್ತಾಯಿಸಿದರು. ಬಳಿಕ ಗೈರಾದ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಸಭೆಯಿಂದ ಹೊರ ನಡೆದರು.

ಜಿಲ್ಲಾ ಪಂಚಾಯಿತಿ ಇಂಜಿನಿಯರ್ ವಿಭಾಗದ ಸಹಾಯಕ ಅಭಿಯಂತರ ಫಾಯಜ್ ಅಹ್ಮದ್, ಉದ್ಯೋಗ ಖಾತ್ರಿ ಯೋಜನೆಯ ಸಹಾಯಕ ಇಂಜಿನಿಯರ್ ವಿಷ್ಣು, ನೋಡಲ್ ಅಧಿಕಾರಿ ಕಾನ್‌ಬೈಲು ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಕೆಮೂರ್ತಿ, ಮಕ್ಕಳ ಮತು ಮಹಿಳಾ ಅಭಿವೃದ್ಧಿ ಕಲ್ಯಾಣ ಇಲಾಖೆ, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಸಹಾಯಕರು, ಕೃಷಿ, ಪಶು ವೈದ್ಯ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ತಟ್ಟಕೆರೆಯಲ್ಲಿ ಹುಲಿ ದಾಳಿ: ವ್ಯಕ್ತಿಗೆ ಗಾಯ



ಆಸ್ಪತ್ರೆಯಲ್ಲಿ ಗಾಯಾಳುವಿನ ಆರೋಗ್ಯ ವಿಚಾರಿಸಿದ ರಾಜ್ಯ ವನ್ಯಜೀವಿ ಸಂರಕ್ಷಣಾ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ

ಗೋಣಿಕೊಪ್ಪ, ಡಿ.25–ತೋಟದಲ್ಲಿ ಕಾಫಿ ಕುಯ್ಲು ಮಾಡುತ್ತಿದ್ದ ವ್ಯಕ್ತಿ ಮೇಲೆ ಹುಲಿ ದಾಳಿ ನಡೆಸಿ ಗಾಯಗೊಳಿಸಿರುವ ಘಟನೆ ಪೊನ್ನಂಪೇಟೆ ತಾಲೂಕಿನ ಬಾಳಲೆ ನಿಟ್ಟೂರು ಸಮೀಪದ ತಟ್ಟಕೆರೆ ಪೈಸಾರಿಯಲ್ಲಿ ಬುಧವಾರ ನಡೆದಿದೆ.

ಗೋಣಿಕೊಪ್ಪ ಕಾಲ್ಸ್ ಶಾಲೆ ಬಸ್ ಚಾಲಕ ಎಂ.ಕೆ.ರಾಜನ್(54) ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈತ ಕ್ರಿಸ್‌ಮಸ್ ಹಬ್ಬದ ಹಿನ್ನೆಲೆಯಲ್ಲಿ ಬುಧವಾರ ಶಾಲೆಗೆ ರಜೆ ಇದ್ದ ಕಾರಣ ಮಧ್ಯಾಹ್ನ 2 ಗಂಟೆಯಲ್ಲಿ ತಮ್ಮ ತೋಟದಲ್ಲಿ ಕಾಫಿ ಕುಯ್ಯುತ್ತಿದ್ದರು. ಈ ವೇಳೆ ಹುಲಿ ದಾಳಿ ಮಾಡಿದೆ. ಕಿವಿ ಹಾಗೂ ಕಾಲಿನ ಭಾಗಕ್ಕೆ ಗಂಭೀರ ಗಾಯವಾಗಿದ್ದು, ರಾಜನ್ ಕಿರುಚಾಡಿದ್ದರಿಂದ ಹುಲಿ ತೋಟದೊಳಗೆ ಮರೆಯಾಗಿದೆ. ಗಾಯಾಳು ರಾಜನ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬಾಳೆಲೆ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ವಿರಾಜಪೇಟೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಡಿಎಫ್‌ಓ ಗೋಪಾಲ್ ಮತ್ತು ಅರಣ್ಯ ಸಿಬ್ಬಂದಿ ಬೇಟಿ ನೀಡಿ, ಪರಿಶೀಲನೆ ನಡೆಸಿದರು.

ರಾಜ್ಯ ವನ್ಯಜೀವಿ ಸಂರಕ್ಷಣಾ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ ವಿರಾಜಪೇಟೆ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ರಾಜನ್ ಆರೋಗ್ಯ ವಿಚಾರಿಸಿದರು. ಗಾಯಾಳುವಿಗೆ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಲಾಗುವುದು. ವಿರಾಜಪೇಟೆ ಮತ್ತು ನಾಗರಹೊಳೆ ವಲಯ ಅರಣ್ಯಾಧಿಕಾರಿಗಳಿಗೆ ಹುಲಿ ಸೆರೆಗೆ ಕಾರ್ಯಾಚರಣೆ ನಡೆಸುವಂತೆ ಶಾಸಕ ಎ.ಎಸ್.ಪೊನ್ನಣ್ಣ ಸೂಚಿಸಿದ್ದಾರೆ ಎಂದು ತಿಳಿಸಿದರು.

ಡಿ.29ರಂದು ಮಾಯಮುಡಿಯಲ್ಲಿ ತೋಕ್ ನಮ್ಮೆ

ಮಡಿಕೇರಿ, ಡಿ.25–ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಹಾಗೂ ಜೆಸಿಐ ಪೊನ್ನಂಪೇಟೆ ನಿಸರ್ಗ ಸಹಯೋಗದಲ್ಲಿ ಡಿ.29ರಂದು ಮಾಯಮುಡಿಯಲ್ಲಿ ತೋಕ್ ನಮ್ಮೆ ನಡೆಯಲಿದೆ.

ಮಾಯಮುಡಿ ಸರ್ಕಾರಿ ಶಾಲಾ ಮೈದಾನದಲ್ಲಿ ಅಂದು ಬೆಳಗ್ಗೆ 9.30ಕ್ಕೆ ನಡೆಯಲಿರುವ ಕಾರ್ಯಕ್ರಮವನ್ನು ಶಾಸಕ ಎ.ಎಸ್.ಪೊನ್ನಣ್ಣ ಉದ್ಘಾಟಿಸಲಿದ್ದು, ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ಅಧ್ಯಕ್ಷತೆ ವಹಿಸಲಿದ್ದಾರೆ.

ವಕೀಲ ಬಲ್ಯಮಾಡ ಬಿ.ಮಾದಪ್ಪ ವಿಚಾರ ಮಂಡಣೆ ಮಾಡಲಿದ್ದಾರೆ. ವಿಧಾನ ಪರಿಷತ್ ಸದಸ್ಯ ಮಂಡೆಪಂಡ ಸುಜಾ ಕುಶಾಲಪ್ಪ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ, ಜೆಸಿಐ ಪೊನ್ನಂಪೇಟೆ ನಿಸರ್ಗ ಅಧ್ಯಕ್ಷ ಜೇಸಿ ಪೆಮ್ಮಂಡ ಮಂಜು ಬೋಪಣ್ಣ, ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಪಾಲ್ಗೊಳ್ಳಲಿದ್ದಾರೆ.

ಮಡಿಕೇರಿದಲ್ಲಿ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ

ಮಡಿಕೇರಿ, ಡಿ.25–ಕರ್ನಾಟಕ ಅರೆಭಾಷೆ, ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಹಾಗೂ ಕೊಡಗು ಗೌಡ ವಿದ್ಯಾ ಸಂಘದ ವತಿಯಿಂದ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ ನಡೆಯಿತು.

ನಗರದ ಕೊಡಗು ಗೌಡ ಸಮಾಜದ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮವನ್ನು ಪುಟಾಣಿಗಳ ಮೂಲಕ ಉದ್ಘಾಟಿಸಲಾಯಿತು. ಇದೇ ವೇಳೆ ಕೊಡಗು ಗೌಡ ವಿದ್ಯಾ ಸಂಘದ ನಿರ್ದೇಶಕ ಸೂದನ ಎಸ್.ಈರಪ್ಪ ಮಾತನಾಡಿ, ಅರೆಭಾಷೆ ಸಾಹಿತ್ಯ, ಸಂಸ್ಕೃತಿ, ಆಚಾರ, ವಿಚಾರ ಮತ್ತು ಸಂಪ್ರದಾಯ ಕುರಿತು ಸಮಾಜದವರು ಅರಿತುಕೊಳ್ಳಬೇಕು. ಈ ರೀತಿಯ ಸ್ಪರ್ಧೆಗಳಲ್ಲಿ ಮಕ್ಕಳು ಹೆಚ್ಚಾಗಿ ಪಾಲ್ಗೊಳ್ಳಬೇಕು. ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ನೀಡಲು ಮತ್ತು ಅರೆಭಾಷೆ ಐನ್‌ಮನೆ ಕಾರ್ಯಕ್ರಮಕ್ಕೆ ಉತ್ತೇಜನ ನೀಡಲು ಅರೆಭಾಷೆ ಅಕಾಡೆಮಿ ಸದಾ ಸಿದ್ಧವಿದೆ ಎಂದು ತಿಳಿಸಿದರು.


ಸಂಘದ ಅಧ್ಯಕ್ಷ ನವೀನ್ ಅಂಬೆಕಲ್ಲು ಮಾತನಾಡಿ, ವಿದ್ಯಾ ಸಂಘ ಕಟ್ಟಡದ ನವೀಕರಣ ಕಾರ್ಯ ನಡೆಯುತ್ತಿದ್ದರೂ ಮಕ್ಕಳಿಗೆ ಪ್ರೋತ್ಸಾಹ ನೀಡಬೇಕೆನ್ನುವ ಉದ್ದೇಶದಿಂದ ಅರೆಭಾಷೆ ಅಕಾಡೆಮಿ ಸಹಕಾರದೊಂದಿಗೆ ಸ್ಪರ್ಧಾ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಿದ್ದೇವೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯಾ ಸಂಘದ ಉಪಾಧ್ಯಕ್ಷ ಅಮೆ ಸೀತಾರಾಂ, ಕಾರ್ಯದರ್ಶಿ ಪೇರಿಯನ ಉದಯ, ಕೊಡಗು ಗೌಡ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಚೊಕ್ಕಾಡಿ ಅಪ್ಪಯ್ಯ, ಜಂಟಿ ಕಾರ್ಯದರ್ಶಿ ತಳೂರು ದಿನೇಶ್, ಖಜಾಂಚಿ ಕಾಳೇರಮ್ಮನ ಲತಾ ನಂದಕುಮಾರ್ ಮತ್ತು ನಿರ್ದೇಶಕರು ಉಪಸ್ಥಿತರಿದ್ದರು.



ಮಡಿಕೇರಿ ಕೊಡಗು ಗೌಡ ಸಮಾಜದ ಸಭಾಂಗಣದಲ್ಲಿ ನಡೆದ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮವನ್ನು ಪುಟಾಣಿಗಳ ಸಮ್ಮುಖದಲ್ಲಿ ಉದ್ಘಾಟಿಸಲಾಯಿತು.

ಕುಶಾಲನಗರದಲ್ಲಿ ಸಂಭ್ರಮದ ಕ್ರಿಸ್‌ಮಸ್ ಆಚರಣೆ



ಕುಶಾಲನಗರದ ಸಂತ ಸೆಬಾಸ್ಟಿಯನ್ನರ ದೇವಾಲಯದ ಗೋದಲಿಯಲ್ಲಿ ಬಾಲ ಯೇಸುವನ್ನು ಪ್ರತಿಷ್ಠಾಪಿಸಲಾಯಿತು.

ಕುಶಾಲನಗರ, ಡಿ.25–ಪಟ್ಟಣದಲ್ಲಿ ಕ್ರೈಸ್ತರು ಕ್ರಿಸ್‌ಮಸ್ ಹಬ್ಬವನ್ನು ಬುಧವಾರ ಸಂಭ್ರಮದಿಂದ ಆಚರಿಸಿದರು.

ಕ್ರೈಸ್ತರು ಹೊಸ ಉಡುಗೆ ಧರಿಸಿ ಪಟ್ಟಣದ ಹೃದಯ ಭಾಗದಲ್ಲಿರುವ ಸಂತ ಸೆಬಾಸ್ಟಿಯನ್ನರ ದೇವಾಲಯಕ್ಕೆ ತೆರಳಿ ಧರ್ಮಗುರು ವಂ.ಫಾ.ಎಂ. ಮಾರ್ಟಿನ್ ಹಾಗೂ ತಪೋವನ ಗುರು ಮಠದ ವಂ.ಫಾ.ವಿಲ್‌ಫ್ರೆಡ್ ನೇತೃತ್ವದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಯೇಸು ಕ್ರಿಸ್ತ ದೇವರ ಪುತ್ರ ಹಾಗೂ ಮಾನವ ಕುಲದ ಪಾಪ ವಿಮೋಚನೆಗಾಗಿ ಅವರನ್ನು ದೇವರೇ ಕಳುಹಿಸಿದರು. ಯೇಸು ಕ್ರಿಸ್ತರ ಆಗಮನದ ಬಗ್ಗೆ ದೇವರು ಪ್ರವಾದಿಗಳ ಮುಖಾಂತರ ಸುಮಾರು 600 ವರ್ಷಗಳ ಮೊದಲೇ ಪ್ರಕಟ ಪಡಿಸಿದ್ದರು ಎನ್ನುವುದು ಕ್ರೈಸ್ತರ ನಂಬಿಕೆ. ಈ ಹಿನ್ನೆಲೆಯಲ್ಲಿ ವಿಮೋಚಕರೊಬ್ಬರು ಬರುತ್ತಾರೆ ಎಂಬ ನಿರೀಕ್ಷೆಯಲ್ಲಿ ಜನರು ಕಾಯುತ್ತಿದ್ದರು. ಅದರಂತೆ ಮರಿಯ ಎಂಬ ಯುವತಿಯ ಗರ್ಭದಲ್ಲಿ ಪವಿತ್ರಾತ್ಮನ ವರಗಳ ಕೃಪೆಯಿಂದ ಅವತರಿಸಿ ಯೇಸು ಜನಿಸಿದರು ಎಂದು ವಂ.ಫಾ.ವಿಲ್ ಫ್ರೆಡ್ ಸಂದೇಶ ನೀಡಿದರು.

ಸಂತ ಸೆಬಾಸ್ಟಿಯನ್ ದೇವಾಲಯದ ಯುವಕ ಸಂಘದಿಂದ ಯೇಸುವಿನ ಜನನ ಸ್ಮರಿಸಲು ಗೋದಲಿಯನ್ನು ವಿಶೇಷವಾಗಿ ನಿರ್ಮಿಸಲಾಗಿತ್ತು. ಈ ಸಂದರ್ಭ ದೇವಾಲಯ ಸಲಹಾ ಸಮಿತಿ, ಯುವಕ ಸಂಘ, ಮರಣ ನಿಧಿ ಸದಸ್ಯರು ಹಾಗೂ ಭಕ್ತರು ನೆರೆದಿದ್ದರು.

ಕ್ರೈಸ್ತರು ತಮ್ಮ ಮನೆಗಳಲ್ಲಿ ಬಾಲ ಯೇಸು ಹಾಗೂ ಮಾತೆ ಮೇರಿ ಗೊಂಬೆ ಸ್ಥಾಪಿಸಿ ವಂದಿಸಿದರು. ಕ್ರಿಸ್‌ಮಸ್ ಟ್ರೀ ಹಾಗೂ ಮನೆಯನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಸಂತ ಅನ್ನಮ್ಮ ದೇವಾಲಯದಲ್ಲಿ ಧಾರ್ಮಿಕ ಕಾರ್ಯ



ವಿರಾಜಪೇಟೆ ಸಂತ ಅನ್ನಮ್ಮ ದೇವಾಲಯದಲ್ಲಿ ಯೇಸು ಹಾಗೂ ಮಾತೆ ಮೇರಿ ಗೊಂಬೆ ಪ್ರತಿಷ್ಠಾಪಿಸಲಾಗಿತ್ತು.

ವಿರಾಜಪೇಟೆ, ಡಿ.25–ಪ್ರಭು ಯೇಸು ಕ್ರಿಸ್ತರ ಜಯಂತಿ (ಕ್ರಿಸ್‌ಮಸ್)ಯನ್ನು ನಗರದ ಸಂತ ಅನ್ನಮ್ಮ ದೇವಾಲಯದಲ್ಲಿ ಹಲವು ಧಾರ್ಮಿಕ ಕಾರ್ಯಗಳೊಂದಿಗೆ ಕ್ರೈಸ್ತರು ಆಚರಿಸಿದರು.

ಕ್ರಿಸ್‌ಮಸ್ ಅಂಗವಾಗಿ ಮಂಗಳವಾರ ರಾತ್ರಿ ಸಂತ ಅನ್ನಮ್ಮ ದೇವಾಲಯದಲ್ಲಿ ಧಾರ್ಮಿಕ ಕಾರ್ಯ ಹಾಗೂ ಧರ್ಮ ಕೇಂದ್ರದ ವೃಂದದಿಂದ ಗಾಯನ ನಡೆಯಿತು. ಪ್ರಧಾನ ಧರ್ಮಗುರು ಬಾಲ ಯೇಸುವಿನ ಮೂರ್ತಿಯನ್ನು ದೇವಾಲಯದಲ್ಲಿ ನಿರ್ಮಿಸಿದ ಗೋದಲಿಯಲ್ಲಿ ಮಂತ್ರಿಸಿ ಪ್ರತಿಷ್ಠಾಪಿಸಿದರು. ನಂತರ ಪ್ರದಾನ ಬಲಿಪೂಜೆ, ಯೇಸು ಕ್ರಿಸ್ತನ ದಿವ್ಯ ಗಾಯನ ನಡೆಯಿತು.

ಪ್ರಧಾನ ಧರ್ಮಗುರು ತಮ್ಮ ದಿವ್ಯ ಸಂದೇಶದಲ್ಲಿ ಯೇಸು ಜನನದ ಉದ್ದೇಶ ಮಾನವನಿಗೆ ಆಧ್ಯಾತ್ಮಿಕ ಸ್ವಾತಂತ್ರ ನೀಡುವುದಾಗಿದೆ. ಆತನ ಪುನರುತ್ಥಾನ ಎಂದಿಗೂ ಮನುಕುಲಕ್ಕೆ ನಿರೀಕ್ಷೆ, ನಂಬಿಕೆ, ಭರವಸೆ, ಶಾಂತಿ, ಸಮಾಧಾನ, ಸಂತೃಪ್ತಿ, ನೆಮ್ಮದಿಯ ಬದುಕನ್ನು ಕರುಣಿಸುತ್ತದೆ ಎಂದು ಶುಭ ಸಂದೇಶ ನೀಡಿದರು.

ಬುಧವಾರ ಬೆಳಗ್ಗೆ ದೇವಾಲಯದಲ್ಲಿ ದಿವ್ಯ ಬಲಿಪೂಜೆ ಹಾಗೂ ಗೀತೆ ಗಾಯನ ನಡೆಯಿತು. ಈ ಸಂದರ್ಭ ಶಾಸಕ ಎ.ಎಸ್.ಪೊನ್ನಣ್ಣ ಸಂತ ಅನ್ನಮ್ಮ ದೇವಾಲಯಕ್ಕೆ ಭೇಟಿ ನೀಡಿ, ಕ್ರಿಸ್‌ಮಸ್ ಶುಭಶಯ ಕೋರಿದರು. ಪುರಸಭೆ ಸದಸ್ಯರು, ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

ವಿವಿಧ ಚರ್ಚ್‌ಗೆ ಶಾಸಕರ ಪುತ್ರ ಭೇಟಿ, ಶುಭಾಶಯ



ಶಾಸಕ ಸಿ.ಪುಟ್ಟರಂಗಶೆಟ್ಟಿ ಪುತ್ರ, ಯಳಂದೂರು ಟಿಎಪಿಸಿಎಂಎಸ್ ಅಧ್ಯಕ್ಷ ಕುಸುಮ ರಾಜು ವಿವಿಧ ಚರ್ಚ್‌ಗಳಿಗೆ ಭೇಟಿ ನೀಡಿ, ಕ್ರಿಸ್‌ಮಸ್ ಶುಭಾಶಯ ಕೋರಿದರು.

ಚಾಮರಾಜನಗರ: ಕ್ರಿಸ್‌ಮಸ್ ಅಂಗವಾಗಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಪುತ್ರ, ಯಳಂದೂರು ಟಿಎಪಿಸಿಎಂಎಸ್ ಅಧ್ಯಕ್ಷ ಕುಸುಮ ರಾಜು ತಾಲೂಕಿನ ವಿವಿಧ ಚರ್ಚ್‌ಗಳಿಗೆ ಬುಧವಾರ ಭೇಟಿ ನೀಡಿ, ಕ್ರೈಸ್ತರಿಗೆ ಶುಭಾಶಯ ಕೋರಿದರು. ನಗರದ ಸಿಎಸ್‌ಐ, ರಾಮಸಮುದ್ರ ಮಸಗಾಪುರ ಬಿಷಪ್ ಸಾರ್ಜೆಂಟ್ ಸ್ಮಾರಕ ದೇವಾಲಯ, ದೊಡ್ಡರಾಯಪೇಟೆಯ ಸಂತ ತೆರೆಸಾ, ಕೋಡಿಉಗನೆ, ನಾಗವಳ್ಳಿ ಚರ್ಚ್‌ಗಳಿಗೆ ಭೇಟಿ ನೀಡಿ, ಅಲ್ಲಿನ ಧರ್ಮಗುರುಗಳಿಗೆ ಶುಭ ಕೋರಿದರು.

ಇದೇ ವೇಳೆ ಕುಸುಮರಾಜು ಮಾತನಾಡಿ, ಶಾಂತಿ, ಅಹಿಂಸೆ, ಕರುಣೆಯಂತಹ ಮಾನವೀಯತೆ ಗುಣಗಳನ್ನು ಜಗತ್ತಿಗೆ ಸಾರಿದ ಮಹಾನ್ ಮಾನವತಾವಾದಿ ಯೇಸುಕ್ರಿಸ್ತ ಹುಟ್ಟಿದ ಶ್ರೇಷ್ಠ ದಿನವಾಗಿದೆ. ಕ್ರಿಸ್‌ಮಸ್ ಹಾಗೂ ನೂತನ ವರ್ಷ ನಾಡಿನ ಜನತೆಗೆ ಒಳಿತನ್ನುಂಟು ಮಾಡಿ, ಉತ್ತಮ ಮಳೆ–ಬೆಳೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಸದಸ್ಯ ರಾಜು ಇತರರು ಹಾಜರಿದ್ದರು.

ಯಳಂದೂರಿನಲ್ಲಿ ವಿಶೇಷ ಪ್ರಾರ್ಥನೆ



ಯಳಂದೂರು ದೇಶವಳ್ಳಿ ಗ್ರಾಮದ ಸಿಎಸ್‌ಐ ಸುಶಾಂತಿ ಚರ್ಚ್‌ನಲ್ಲಿ ಕ್ರಿಸ್‌ಮಸ್ ಶುಭಾಶಯ ವಿನಿಮಯ ಮಾಡಿಕೊಂಡರು.

ಯಳಂದೂರು, ಡಿ.25–ಸಮೀಪದ ಸಂತೆಮರಹಳ್ಳಿ ಹಾಗೂ ತಾಲೂಕಿನ ಸುತ್ತಮುತ್ತಲ ಗ್ರಾಮಗಳಲ್ಲಿ ಬುಧವಾರ ಕ್ರಿಸ್‌ಮಸ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಪಟ್ಟಣ ಸೇರಿದಂತೆ ಸಂತೆಮರಹಳ್ಳಿ ಹೋಬಳಿಯ ದೇಶವಳ್ಳಿ, ನಾಗವಳ್ಳಿ, ಮಂಗಲ ಗ್ರಾಮಗಳ ಚರ್ಚ್‌ಗಳಲ್ಲಿ ಮಂಗಳವಾರ ರಾತ್ರಿ ಹಾಗೂ ಬುಧವಾರ ಬೆಳಗ್ಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಕ್ರಿಸ್‌ಮಸ್ ಅಂಗವಾಗಿ ಪಟ್ಟಣ ಸೇರಿದಂತೆ ಅನೇಕ ಕಡೆ ಕೇಕ್‌ಗಳ ಮಾರಾಟ ಜೋರಾಗಿತ್ತು. ಕ್ರೈಸ್ತರು ತಮ್ಮ ಮನೆಗಳ ಮುಂದೆ ಕ್ರಿಸ್‌ಮಸ್ ಟ್ರೀಗಳನ್ನು ನಿರ್ಮಿಸಿ, ಸ್ಟಾರ್, ಗಂಟೆಗಳನ್ನು ಕಟ್ಟಿ ವಿಶೇಷ ಅಲಂಕಾರ ಮಾಡಿದ್ದರು. ಮಕ್ಕಳು ಸಾಂತಕ್ಲಾಸ್ ವೇಷಭೂಷಣದೊಂದಿಗೆ ಗಮನ ಸೆಳೆದರು.

ದೇಶವಳ್ಳಿ ಗ್ರಾಮದ ಸಿಎಸ್‌ಐ ಸುಶಾಂತಿ ಚರ್ಚ್‌ನಲ್ಲಿ ಫಾದರ್ ರೆವೆರಂಡ್ ಪುಟ್ಟರಾಜು ನೇತೃತ್ವದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಗ್ರಾಪಂ ಸದಸ್ಯ ಎಚ್.ಎನ್. ಶಿವಕುಮಾರ್, ಡಿ.ಸಿ.ಸುರೇಂದ್ರ, ಶಿವಮಲ್ಲು, ಡಿ.ಸಿ.ಆನಂದ, ಜೇಮ್ಸ್, ಸುರೇಶ್, ಡಾ.ಸುಪ್ರಿಯಾ, ರಾಣಿ ಸತ್ಯಪ್ರಕಾಶ್ ಇದ್ದರು.

ವಿದ್ಯೆ ಸಾಧಕನ ಸೊತ್ತೇ ಹೊರತು, ಸೋಮಾರಿಗಳದ್ದಲ್ಲ

• ಶ್ರೀ ಶಿವರಾತ್ರಿ ದೇಶಿಕೇಂದ್ರಸ್ವಾಮೀಜಿ ಅಭಿಮತ • ದುಗ್ಗಟ್ಟಿ ವೀರಭದ್ರಪ್ಪಗೆ ರಾಜೇಂದ್ರ ಸೇವಾ ಪ್ರಶಸ್ತಿ ಪ್ರದಾನ, ಮಹೇಶ್ವರಿಗೆ ಕೆ.ಸಿ.ಶಿವಪ್ಪ ಪ್ರತಿಭಾ ಪುರಸ್ಕಾರ



ಚಾಮರಾಜನಗರದ ಡಾ.ರಾಜ್‌ಕುಮಾರ್ ಕಲಾಮಂಟಪದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜೇಂದ್ರಶ್ರೀಗಳ ಸೇವಾ ಪ್ರಶಸ್ತಿಯನ್ನು ದುಗ್ಗಹಟ್ಟಿ ವೀರಭದ್ರಪ್ಪಗೆ ಹಾಗೂ ವಿದ್ಯಾರ್ಥಿನಿ ಮಹೇಶ್ವರಿಗೆ ಕೆ.ಸಿ.ಶಿವಪ್ಪ ಪ್ರತಿಭಾ ಪುರಸ್ಕಾರವನ್ನು ನೀಡಲಾಯಿತು.

ಚಾಮರಾಜನಗರ, ಡಿ.25–ನಮ್ಮ ಮಕ್ಕಳು ಪ್ರತಿಷ್ಠಿತ ಖಾಸಗಿ ವಿದ್ಯಾಸಂಸ್ಥೆಗಳಲ್ಲಿ ಓದಿದರೆ ಮಾತ್ರ ರ‍್ಯಾಂಕ್ ಪಡೆದುಯುತ್ತಾರೆ ಎಂಬ ಭಾವನೆ ಪೋಷಕರಲ್ಲಿದೆ. ಇದೊಂದು ಫ್ಯಾಷನ್ ಆಗಿದೆ. ಆದರೆ, ವಿದ್ಯೆ ಸಾಧಕನ ಸೊತ್ತೇ ಹೊರತು, ಸೋಮಾರಿಗಳದ್ದಲ್ಲ ಎಂಬುದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರಸ್ವಾಮೀಜಿ ಹೇಳಿದರು.

ನಗರದ ಡಾ.ರಾಜ್‌ಕುಮಾರ್ ಕಲಾಮಂಟಪದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್‌ನ ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಘಟಕದಿಂದ ನಡೆದ ರಾಜೇಂದ್ರಶ್ರೀಗಳ ಸೇವಾ ಪ್ರಶಸ್ತಿ ಹಾಗೂ ಕೆ.ಸಿ.ಶಿವಪ್ಪ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದ ಅವರು, ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂಬ ಮನೋಭಾವನೆ ಪ್ರತಿಯೊಬ್ಬರಿಗೂ ಬಂದರೆ ಸರ್ಕಾರಿ ಶಾಲೆಗಳು ತಾನಾಗಿಯೇ ಅಭಿವೃದ್ಧಿ ಹೊಂದುತ್ತವೆ. ಯಾವುದೇ ಸೌಲಭ್ಯ ಹಾಗೂ ಶಿಕ್ಷಕರು ಇಲ್ಲದ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿದ ಬಡ ಹೆಣ್ಣು ಮಕ್ಕಳಾದ ಮಹೇಶ್ವರಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ ಎಂದರೆ ಆಕೆಯ ಓದುವ ಉತ್ಸಾಹ, ಶ್ರದ್ಧೆ ಹಾಗೂ ಸಾಧಿಸಬೇಕೆಂಬ ಛಲವೇ ಕಾರಣವಾಗಿದೆ. ಈಕೆ 604 ಅಂಕ ಗಳಿಸುವ ಮೂಲಕ ಗ್ರಾಮಾಂತರ ಪ್ರದೇಶದ ಮಕ್ಕಳು ಪ್ರತಿಭಾವಂತರು, ಬುದ್ಧಿವಂತರು ಎಂಬ ಸಂದೇಶ ನೀಡಿದ್ದಾಳೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸರ್ಕಾರಿ ಶಾಲೆಗಳು ಮುಚ್ಚುತ್ತಿವೆ ಎಂಬ ಮಾತುಗಳು ಕೇಳು ಬರುತ್ತಿವೆ. ಈ ಶಾಲೆಗಳನ್ನು ಅಭಿವೃದ್ಧಿಪಡಿಸಲು ಬೇರೆ ಏನು ಮಾಡಬೇಕಿಲ್ಲ. ಸರ್ಕಾರಿ ಸವಲತ್ತು ಪಡೆದುಕೊಳ್ಳುವವರು ಸರ್ಕಾರಿ ಶಾಲೆಗಳಲ್ಲೇ ತಮ್ಮ ಮಕ್ಕಳನ್ನು ಕಡ್ಡಾಯವಾಗಿ ಓದಿಸಬೇಕೆಂಬ ಕಾನೂನು ಬಂದರೆ, ಯಾರು ಸಹ ಅಭಿವೃದ್ಧಿ ಮಾಡಬೇಕಿಲ್ಲ. ತಾನಗೇ ಎಲ್ಲಾ ಸರ್ಕಾರಿ ಶಾಲೆಗಳು ಪ್ರಗತಿಯಾಗುತ್ತವೆ. ಆದರೆ, ಇದನ್ನು ಮಾಡುವ ಇಚ್ಛಾಶಕ್ತಿ ಯಾರಿಗೂ ಇಲ್ಲ ಎಂದರು.

ರಾಜೇಂದ್ರಶ್ರೀಗಳಿಗೆ ಚಾಮರಾಜನಗರ ಜಿಲ್ಲೆ ಬಗ್ಗೆ ವಿಶೇಷ ಕಾಳಜಿ, ಆಸಕ್ತಿ ಇತ್ತು. ಹೀಗಾಗಿ ಮೈಸೂರು ಹೊರತುಪಡಿಸಿ ಚಾ.ನಗರ ಜಿಲ್ಲೆಯ ಭಾಗಗಳಿಗೆ ಹೆಚ್ಚಿನ ಒತ್ತು ನೀಡಿದ್ದರು. ಈ ಭಾಗದ ಬಹುತೇಕ ಮುಖಂಡರೊಂದಿಗೆ ಸಂಪರ್ಕ ಹೊಂದಿದ್ದರು. ಇದರಲ್ಲಿ ಪ್ರಮುಖವಾಗಿ ದುಗ್ಗಹಟ್ಟಿ ವೀರಭದ್ರಪ್ಪ ಅವರು. ಶ್ರೀಮಠದ ಬಗ್ಗೆ ಅವರಿಗೂ ವಿಶೇಷ ಕಾಳಜಿ ಇತ್ತು. ಮಠದೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. ಜೊತೆಗೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು ಎಂದರು.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಪತಿ ಡಾ.ಮಲ್ಲೇಪುರಂ ಜಿ.ವೆಂಕಟೇಶ್ ಮಾತನಾಡಿ, ಶರಣ ಸಾಹಿತ್ಯ ಪರಿಷತ್, ವಚನ ಸಾಹಿತ್ಯ ಹಾಗೂ ಕನ್ನಡ ಸೇವೆಯನ್ನು ಬಹಳ ಅಚ್ಚುಕಟ್ಟಾಗಿ ನಿರ್ವಹಣೆ ಮಾಡುತ್ತಿದೆ. ಇಂಥ ಸಂಸ್ಥೆ ರಾಜೇಂದ್ರ ಶ್ರೀಗಳ ನೇತೃತ್ವದಲ್ಲಿ ಅಸ್ತಿತ್ವಕ್ಕೆ ಬಂತು ಎಂಬುವುದ ಹೆಮ್ಮೆ. ಶ್ರೀಗಳು ಧಾರ್ಮಿಕ, ಶೈಕ್ಷಣಿಕ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚಿನ ಕೊಡುಗೆ ನೀಡುವ ಜೊತೆಗೆ ವಚನ ಸಾಹಿತ್ಯ ಉಳಿಸಿ ಬೆಳೆಸುವ ಪರಿಕಲ್ಪನೆಯೊಂದಿಗೆ ಪರಿಷತ್ ಸ್ಥಾಪನೆ ಮಾಡಿದರು. ಅವರ ಉದ್ದೇಶವನ್ನು ಕೆ.ಸಿ.ಶಿವಪ್ಪ ದತ್ತಿ ಸ್ಥಾಪನೆ ಮಾಡಿ, ಸೇವಾ ಪ್ರಶಸ್ತಿ ಹಾಗೂ ಪ್ರತಿಭಾ ಪುರಸ್ಕಾರ ನೀಡಿದ್ದಾರೆ ಎಂದು ಹೇಳಿದರು.

ಇದೇ ವೇಳೆ ಸಮಾಜ ಸೇವಕ ದುಗ್ಗಟ್ಟಿ ಪಿ.ವೀರಭದ್ರಪ್ಪ ಅವರಿಗೆ ರಾಜೇಂದ್ರಶ್ರೀಗಳ ಸೇವಾ ಪ್ರಶಸ್ತಿ ಹಾಗೂ ವಿದ್ಯಾರ್ಥಿನಿ ಶಿಂಡನಪುರ ಮಹೇಶ್ವರಿ ಅವರಿಗೆ ಕೆ.ಸಿ. ಶಿವಪ್ಪ ಪ್ರತಿಭಾ ಪುರಸ್ಕಾರ ನೀಡಲಾಯಿತು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರ್, ಪಡಗೂರು ಅಡವಿ ಮಠಾಧ್ಯಕ್ಷ ಶ್ರೀ ಶಿವಲಿಂಗೇಂದ್ರಸ್ವಾಮೀಜಿ, ಸಾಹಿತಿ ಕೆ.ಸಿ. ಶಿವಪ್ಪ, ಕಸಾಪ ಜಿಲ್ಲಾಧ್ಯಕ್ಷ ವಿ.ಮಲ್ಲಿಕಾರ್ಜುನಸ್ವಾಮಿ ದುಗ್ಗಹಟ್ಟಿ, ಪ್ರಧಾನ ಕಾರ್ಯದರ್ಶಿ ಬಿ.ಕೆ.ರವಿ ಕುಮಾರ್, ಕಾರ್ಯದರ್ಶಿ ಬಿ.ಎಸ್.ವಿನಯ್, ನಾಗರಾಜು, ನಗರಾಧ್ಯಕ್ಷ ಎಂ.ಸುಂದರ್ ತಾಲೂಕು ಅಧ್ಯಕ್ಷ ಆರ್.ಎಸ್. ಲಿಂಗರಾಜು, ಕಾರ್ಯದರ್ಶಿ ವೀರಭದ್ರ ಸ್ವಾಮಿ, ನಾಗರಾಜು, ನಾಗಮಲ್ಲೇಶ್, ದೊಡ್ಡರಾಯಪೇಟೆ ನಾಗರಾಜು, ಕದಳಿ ವೇದಿಕೆ ಅಧ್ಯಕ್ಷೆ ವಸಂತಮ್ಮ ಇದ್ದರು.

ಜಿಲ್ಲಾದ್ಯಂತ ಸಂಭ್ರಮದ ಕ್ರಿಸ್‌ಮಸ್ ಆಚರಣೆ

ಚಾಮರಾಜನಗರ: ಪ್ರೀತಿ, ಮಮತೆ, ಶಾಂತಿ ಸಂದೇಶ ಸಾರಿದ ಯೇಸು ಕ್ರಿಸ್ತನ ಜನ್ಮದಿನದ ಪ್ರತೀಕವಾದ ಕ್ರಿಸ್‌ಮಸ್ ಹಬ್ಬವನ್ನು ಚಾಮರಾಜನಗರ, ಗುಂಡ್ಲುಪೇಟೆ, ಯಳಂದೂರು, ಕೊಳ್ಳೇಗಾಲ ಹಾಗೂ ಹನೂರು ಸೇರಿದಂತೆ ಜಿಲ್ಲಾದ್ಯಂತ ಬುಧವಾರ ಸಂಭ್ರಮದಿಂದ ಆಚರಿಸಲಾಯಿತು.

ಚರ್ಚ್‌ಗಳಲ್ಲಿ ಕ್ರೈಸ್ತರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಹಬ್ಬದ ಪ್ರಯುಕ್ತ ಎಲ್ಲಾ ಚರ್ಚ್‌ಗಳನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕೃತಗೊಳಿಸಲಾಗಿತ್ತು. ಮಂಗಳವಾರ ರಾತ್ರಿಯಿಂದಲೇ ಚರ್ಚ್‌ಗಳಲ್ಲಿ ವಿಶೇಷ ಪೂಜೆ, ಪ್ರಾರ್ಥನೆ ನೆರವೇರಿಸಲಾಯಿತು.

ಕ್ರೈಸ್ತರು ಹೊಸಬಟ್ಟೆ ತೊಟ್ಟು ಕೇಕ್ ಕತ್ತರಿಸಿ ಪರಸ್ಪರ ಸಿಹಿ ಹಂಚಿ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಅಲ್ಲದೇ ಮನೆಗಳನ್ನು ಬಣ್ಣ ಬಣ್ಣದ ವಿದ್ಯುತ್ ದೀಪ, ಕ್ರಿಸ್‌ಮಸ್ ಟ್ರೀ, ಆಕಾಶ ದೀಪಗಳಿಂದ ಅಲಂಕರಿಸುವ ಜೊತೆಗೆ ಗೋದಲಿ ನಿರ್ಮಿಸಿ ಸಂಭ್ರಮಿಸಿದರು.

ವಿವಿಧೆಡೆ ಆಚರಣೆ: ಚಾಮರಾಜನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕ್ರೈಸ್ತರು ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಿದರು. ಚಾಮರಾಜನಗರದ ಸಂತಪೌಲರ ದೇವಾಲಯ, ತಾಲೂಕಿನ ಮಸಗಾಪುರ, ಮಾದಾಪುರ, ನಾಗವಳ್ಳಿ ಸೇರಿದಂತೆ ಇತರೆ ಗ್ರಾಮಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಇತರೆ ಧರ್ಮದವರು ಕ್ರೈಸ್ತರ ಮನೆಗಳಿಗೆ ತೆರಳಿ ಹಬ್ಬದ ಶುಭಾಶಯ ಕೋರಿದರು.

ಹನೂರು ತಾಲೂಕಿನ ವಿವಿಧೆಡೆ ಸಂಭ್ರಮದಿಂದ ಕ್ರಿಸ್‌ಮಸ್ ಆಚರಿಸಿ, ಯೇಸುವಿನ ಸ್ಮರಿಸಲಾಯಿತು. ಪಟ್ಟಣದ ಕ್ರಿಸ್ತರಾಜ ವಿದ್ಯಾಸಂಸ್ಥೆ ಆವರಣದ ಚರ್ಚ್ ಸೇರಿ ದಂತೆ ಇನ್ನಿತರೆ ಕ್ರೈಸ್ತ ದೇಗುಲಗಳಲ್ಲಿ ಯೇಸುವಿನ ಸ್ಮರಣೆ ಮಾಡಿ, ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು.

ಯರಿಯೂರಲ್ಲಿ ಗ್ರಾಮಸ್ಥರಿಂದ ಹೆದ್ದಾರಿ ತಡೆ



ಯರಿಯೂರು ಗ್ರಾಮದಲ್ಲಿ ಬಸ್ ನಿಲ್ಲಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಯಳಂದೂರು: ತಾಲೂಕಿನ ಯರಿಯೂರು ಗ್ರಾಮದಲ್ಲಿ ಸಾರಿಗೆ ಸಂಸ್ಥೆ ಬಸ್‌ಗಳನ್ನು ನಿಲ್ಲಿಸುವಂತೆ ಒತ್ತಾಯಿಸಿ ಗ್ರಾಮಸ್ಥರು ಬುಧವಾರ ಗ್ರಾಮದ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಗ್ರಾಮದಲ್ಲಿ 5 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇದ್ದು, ಗ್ರಾಮದಿಂದ ಪ್ರತಿನಿತ್ಯ ಕೂಲಿ ಕಾರ್ಮಿಕರು, ರೈತರು, ಮಹಿಳೆಯರು, ವಿದ್ಯಾರ್ಥಿಗಳು ಪಕ್ಕದ ಯಳಂದೂರು, ಕೊಳ್ಳೇಗಾಲ, ಚಾಮರಾಜನಗರ, ಮೈಸೂರಿಗೆ ತೆರಳುತ್ತಾರೆ. ಗ್ರಾಮದಲ್ಲಿ ಬಸ್ ನಿಲ್ಲಿಸುವಂತೆ ಸಾರಿಗೆ ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಆದ್ದರೂ ಬಸ್‌ಗಳನ್ನು ನಿಲ್ಲಿಸುವುದಿಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಗುಂಡ್ಲುಪೇಟೆ, ಚಾಮರಾನಗರ, ಕೊಳ್ಳೇಗಾಲ ಡಿಪೋನಿಂದ ನಮಗೆ ಯಾವುದೇ ಮಾಹಿತಿ ನೀಡಿಲ್ಲ. ಹಾಗಾಗಿ ಬಸ್ ನಿಲ್ಲಿಸುವುದಿಲ್ಲ ಎಂದು ನೆಪವೊಡ್ಡಿ ಚಾಲಕರು ಉಡಾಫೆಯಿಂದ ಉತ್ತರ ನೀಡುತ್ತಾರೆ. ಗ್ರಾಮದಲ್ಲಿ ಬಸ್‌ಗಳನ್ನು ನಿಲ್ಲಿಸಲೇಬೇಕು ಎಂದು ಪಟ್ಟುಹಿಡಿದರು. ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆಯಿತು. ನಂತರ ಪೊಲೀಸರು ಶಾಂತಿಯುತವಾಗಿ ಪ್ರತಿಭಟನೆ ನಡೆಸುವಂತೆ ತಿಳಿಸಿದರು.

ನಂತರ ಸ್ಥಳಕ್ಕೆ ಆಗಮಿಸಿದ ಡಿಪೋ ಮ್ಯಾನೇಜರ್ ಕುಮಾರ್ ನಾಯಕ ಮಾತನಾಡಿ, ಗ್ರಾಮದಲ್ಲಿ ಬಸ್‌ಗಳನ್ನು ನಿಲ್ಲಿಸುವಂತೆ ಚಾಲಕರಿಗೆ ತಿಳಿಸುತ್ತೇನೆ ಎಂದು ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು. ಅರ್ಧ ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆ ನಡೆಸಿದರಿಂದ ವಾಹನ ಸವಾರರು ಪರದಾಡುವಂತಾಯಿತು.

ಇದೇ ವೇಳೆ ತಹಶೀಲ್ದಾರ್ ಜಯಪ್ರಕಾಶ್, ಸಿಪಿಐ ಶ್ರೀಕಾಂತ್, ಪಿಎಸ್‌ಐ ಹನುಮಂತ ಉಪ್ಪಾರ್, ಗ್ರಾಮದ ಮುಖಂಡರಾದ ಯರಿಯೂರು ಶ್ರೀನಿವಾಸ, ಚಿಕ್ಕಮಾದಯ್ಯ, ಜೆ. ಯೋಗೇಶ್, ಪುಟ್ಟಯ್ಯ, ಜಯಣ್ಣ, ರಂಗ ಸ್ವಾಮಿ, ಕುಮಾರ್, ಜವರೇಗೌಡ, ಲೋಕೇಶ್ ಮೌರ್ಯ, ಚಿನ್ನಸ್ವಾಮಿ, ಪಾಪು, ಶಶಿ, ಶ್ರೀದೇವಿ, ನಾಗಮ್ಮ ಅನೇಕರು ಇದ್ದರು.

6 ವರ್ಷದ ಬಾಲಕನ ಜೀವ ತೆಗೆದ ಎಸ್‌ಯುವಿ ಕಾರಿನ ಏರ್ ಬ್ಯಾಗ್





ಮುಂಬೈ: ಅಪಘಾತದ ಸಮಯದಲ್ಲಿ ಕಾರಿನಲ್ಲಿರುವ ಏರ್ ಬ್ಯಾಗ್ ಪ್ರಯಾಣಿಕರಿಗೆ ವರದಾನ ಎಂದು ಹೇಳಲಾಗುತ್ತದೆ. ಆದರೆ ಅದೇ ಏರ್ ಬ್ಯಾಗ್ ವಾಶಿಯಲ್ಲಿ 6 ವರ್ಷದ ಮಗುವಿನ ಜೀವ ತೆಗೆದಿದೆ. ನವಿ ಮುಂಬೈನ ವಾಶಿ ಪ್ರದೇಶದಲ್ಲಿ ಈ ದಾರುಣ ಘಟನೆ ಸಂಭವಿಸಿದೆ ಅಪಘಾತದ ವೇಳೆ ಕಾರಿನ ಏರ್ ಬ್ಯಾಗ್ ಓಪನ್ ಆಗಿದ್ದರಿಂದ ಮಗು ಹರ್ಷ ಮಾವ್ಜಿ ಅರೋಥಿಯಾ ಪ್ರಾಣ ಕಳೆದುಕೊಂಡಿದ್ದಾನೆ.

ಹರ್ಷ್ ಪ್ರಯಾಣಿಸುತ್ತಿದ್ದ ಎಸ್‌ಯುವಿ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿದೆ. ಹೀಗಾಗಿ ಏರ್ ಬ್ಯಾಗ್ ಇದ್ದಕ್ಕಿದ್ದಂತೆ ತೆರೆದುಕೊಂಡಿದೆ. ಹೀಗಾಗಿ ಕಾರಿನ ಮುಂದಿನ ಸೀಟಿನಲ್ಲಿ ಕುಳಿತಿದ್ದ ಹರ್ಷ್ ಉಸಿರುಗಟ್ಟಿ ಮೃತಪಟ್ಟಿದ್ದಾನೆ. ಈ ಅಪ ಘಾತದ ನಂತರ, ಎಸ್‌ಯುವಿ ಮಾಲೀಕನ ವಿರುದ್ಧ ಪೊಲೀಸರು ಪ್ರಕರಣ ದಾಖ ಲಿಸಿದ್ದಾರೆ. ಹರ್ಷನ ತಂದೆ ಮಾವ್ಜಿ ಅರೋಥಿಯಾ ಪ್ರಕಾರ, ಹರ್ಷ ಮತ್ತು ಅವನ ಒಡಹುಟ್ಟಿದವರು ಪಾನಿಪುರಿ ತಿನ್ನಲು ಒತ್ತಾಯಿಸುತ್ತಿದ್ದರು. ಹೀಗಾಗಿ ಎಲ್ಲರೂ ಪಾನಿಪುರಿ ತಿನ್ನಲು ಹೋದೆವು ಎಂದು ಹರ್ಷನ ತಂದೆ ಹೇಳಿದರು.

ಮಾವ್ಜಿ ಕಾರು ಓಡಿಸುತ್ತಿದ್ದು ತಮ್ಮ ಪಕ್ಕದಲ್ಲಿ ಹರ್ಷ ಕುಳಿತಿದ್ದನು. ಉಳಿದವರು ಹಿಂದಿನ ಸೀಟಿನಲ್ಲಿ ಕುಳಿತಿದ್ದರು. ರಾತ್ರಿ 11.30ರ ಸುಮಾರಿಗೆ ವಾಶಿಯ ಸೆಕ್ಟರ್-28ರ ಬ್ಲೂ ಡೈಮಂಡ್ ಹೋಟೆಲ್ ಜಂಕ್ಷನ್ ಬಳಿ ಎಸ್‌ಯುವಿ ವೇಗವಾಗಿ ಮುಂದೆ ಸಾಗಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದಿದೆ. ಆ ಆಘಾತದಿಂದ ಕಾರಿನ ಏರ್ ಬ್ಯಾಗ್ ತೆರೆದುಕೊಂಡಿದ್ದು, ಹರ್ಷ ಗಂಭೀರವಾಗಿ ಗಾಯಗೊಂಡಿದ್ದನು. ಕೂಡಲೇ ಮಗುವನ್ನು ಆಸ್ಪತ್ರೆಗೆ ದಾಖಲಿಸಿದರೂ ಪ್ರಯೋಜನವಾಗಲಿಲ್ಲ.

ಹರ್ಷನ ಮೈಮೇಲೆ ಯಾವುದೇ ಗಾಯದ ಗುರುತುಗಳಿಲ್ಲ. ವೈದ್ಯರ ಪ್ರಕಾರ, ಪಾಲಿಟ್ರಾಮಾ ಶಾಕ್‌ನಿಂದ ಹರ್ಷ್ ಸಾವನ್ನಪ್ಪಿದ್ದಾರೆ. ಪಾಲಿಟ್ರಾಮಾದಿಂದ ದೇಹದಲ್ಲಿ ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ಗಾಯವಾಗಿದೆ. ಆಂತರಿಕ ಗಾಯಗಳಿಂದ ರಕ್ತಸ್ರಾವ ಉಂಟಾಗಿ ಹರ್ಷ ಮೃತಪಟ್ಟಿದ್ದಾನೆ. ಅಪಘಾತದಲ್ಲಿ ಮಾವ್ಜಿ ಮತ್ತು ಹರ್ಷ ಅವರ ಒಡಹುಟ್ಟಿದವರಿಗೂ ಸಣ್ಣಪುಟ್ಟ ಗಾಯಗಳಾಗಿವೆ.

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸ್ಮಶಾನಕ್ಕೆ ರಸ್ತೆ ಸಂಪರ್ಕ ಕೊಡಿಸದಿದ್ದರೆ ಕಾವೇರಿ ಸರ್ಕಲ್‌ನಲ್ಲಿ ಶವಸಂಸ್ಕಾರ

ಪುರಸಭಾ ಸದಸ್ಯ ಶಿವಣ್ಣ ಎಚ್ಚರಿಕೆ



ತಿ.ನರಸೀಪುರ ಪಟ್ಟಣದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಬನ್ನೂರು ಪುರಸಭೆ ಸದಸ್ಯ ಶಿವಣ್ಣ ಮಾತನಾಡಿದರು.

ತಿ.ನರಸೀಪುರ, ಡಿ.25– ಬನ್ನೂರು ಪಟ್ಟಣದಲ್ಲಿ ಮಾದಿಗ (ಆದಿ ಜಾಂಬವ) ಸಮುದಾಯದ ಸ್ಮಶಾನಕ್ಕೆ ರಸ್ತೆ ಸಂಪರ್ಕ ಕಲ್ಪಿಸಿಕೊಡದಿದ್ದಲ್ಲಿ ಪಟ್ಟಣದ ಹೃದಯ ಭಾಗವಾಗಿರುವ ಕಾವೇರಿ ಸರ್ಕಲ್‌ನಲ್ಲೇ ಶವಸಂಸ್ಕಾರ ಮಾಡಲಾಗುತ್ತದೆ ಎಂದು ಪುರಸಭೆ ಸದಸ್ಯ ಶಿವಣ್ಣ ಎಚ್ಚರಿಕೆ ನೀಡಿದ್ದಾರೆ.

ಪಟ್ಟಣದ ಕಬಿನಿ ಅತಿಥಿಗೃಹದಲ್ಲಿ ಬುಧವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಬನ್ನೂರು ಪಟ್ಟಣದ ಸುಭಾಷ್ ನಗರದ ಮಾದಿಗ ಜನಾಂಗದವರಿಗೆ ಕಾವೇರಿ ನದಿ ತೀರದ ಬನ್ನೂರು ಹೋಬಳಿ ಗ್ರಾಮಾಂತರ ಸರ್ವೆ ನಂ.1023/2 ರಲ್ಲಿ 16 ಗುಂಟೆ ಖರಾಬು ಜಮೀನನ್ನು ಸ್ಮಶಾನಕ್ಕಾಗಿ ನೀಡಲಾಗಿದ್ದು, ಜಮೀನಿನ ಮೂಲಕ ಸ್ಮಶಾನಕ್ಕೆ ಹೋಗಲು ರಸ್ತೆ ಸಂಪರ್ಕ ಇಲ್ಲ. ರಸ್ತೆ ಸಂಪರ್ಕ ಕಲ್ಪಿಸಿಕೊಡುವ ಸಂಬಂಧ ಅನೇಕ ವರ್ಷಗಳಿಂದ ಮುಖ್ಯಮಂತ್ರಿ, ಕಂದಾಯ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಶಾಸಕರು, ಜಿಲ್ಲಾಧಿಕಾರಿಗಳು ಸೇರಿದಂತೆ ಉಪ ವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸುತ್ತಾ ಬಂದಿದ್ದರೂ ಅಧಿಕಾರಿ ವರ್ಗವಾಗಲೀ ಅಥವಾ ಸರ್ಕಾರವಾಗಲೀ ಯಾವುದೇ ಕ್ರಮ ಕೈಗೊಳ್ಳದೇ ಮಾದಿಗ ಜನಾಂಗವನ್ನು ಕಡೆಗಣಿಸುತ್ತಲೇ ಬಂದಿದೆ ಎಂದು ಸರ್ಕಾರ, ಅಧಿಕಾರಿಗಳ ನಡೆಯ ಬಗ್ಗೆ ತೀವ್ರ ಕಿಡಿಕಾರಿದರು.

ಸ್ಮಶಾನಕ್ಕೆ ರಸ್ತೆ ಸಂಪರ್ಕ ಕಲ್ಪಿಸಿಕೊಡುವಂತೆ ಒತ್ತಾಯಿಸಿ ಬನ್ನೂರು ಪಟ್ಟಣದ ಕಾವೇರಿ ಸರ್ಕಲ್‌ನಲ್ಲಿ ಎರಡು ತಿಂಗಳ ಹಿಂದೆಯಷ್ಟೇ ಸುಭಾಷ್‌ನಗರದಲ್ಲಿ ಮೃತರಾದ ನಿಂಗರಾಜು ಎಂಬುವರ ಶವ ಇಟ್ಟು 3–4 ಗಂಟೆಗಳ ಕಾಲ ಪ್ರತಿಭಟನೆ ಮಾಡಿದರೂ ಸರ್ಕಾರ ಜಾಣ ಕುರುಡು ಪ್ರದರ್ಶನ ಮಾಡಿದೆ. ಪ್ರತಿಭಟನೆ ವೇಳೆ ಕಾವೇರಿ ವೃತ್ತದಲ್ಲೇ ಶವಸಂಸ್ಕಾರ ಮಾಡಲು ಮುಂದಾದ ಸಂದರ್ಭದಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಸಮಾಜ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಪ್ರತಿಭಟನೆ ಕೈ ಬಿಟ್ಟು ಶವಸಂಸ್ಕಾರ ಮಾಡುವಂತೆ ನಮ್ಮ ಮನವೊಲಿಸಿದ್ದರು. ಆ ಸಮಯದಲ್ಲಿ ಸ್ಮಶಾನದ ರಸ್ತೆಯ ಕಾಮಗಾರಿಯನ್ನು ನಾಳೆಯಿಂದಲೇ ಆರಂಭಿಸುವುದಾಗಿ ಭರವಸೆ ನೀಡಿದ್ದರಾದರೂ 2 ತಿಂಗಳು ಕಳೆದರೂ ಯಾವುದೇ ಕಾಮಗಾರಿ ಆರಂಭಿಸಿಲ್ಲ. ಮಾದಿಗ ಜನಾಂಗದವರ ಸ್ಮಶಾನಕ್ಕೆ ಶವ ಸಾಗಿಸಲು ರಸ್ತೆ ಇಲ್ಲದ್ದರಿಂದ ನಮಗೆ ಅಧಿಕಾರಿಗಳ ಭರವಸೆ ಕಾಯಲು ಸಾಧ್ಯವಿಲ್ಲ. ಮುಂದೆ ಬನ್ನೂರು ಪಟ್ಟಣದಲ್ಲಿ ಮಾದಿಗ ಸಮಾಜದ ಯಾವುದಾದರೂ ಸಾವು ಸಂಭವಿಸಿದರೆ ಅಧಿಕಾರಿಗಳನ್ನು ಕಾಯದೇ ಪಟ್ಟಣದ ಕಾವೇರಿ ಸರ್ಕಲ್‌ನಲ್ಲೇ ಶವವನ್ನು ಹೂಳುವ ಅಥವಾ ಸುಡುವ ಕಾರ್ಯಕ್ಕೆ ಮುಂದಾಗುತ್ತೇವೆ ಎಂದು ಎಚ್ಚರಿಕೆ ನೀಡಿದರು.

ತಾಲೂಕು ಡಾ.ಬಾಬು ಜಗಜೀವನರಾಂ ಜನಕಲ್ಯಾಣ ಸಂಘದ ಅಧ್ಯಕ್ಷ ಮಲಿಯೂರು ಶಂಕರ್ ಮಾತನಾಡಿ, ಬನ್ನೂರು ಪಟ್ಟಣದ ಕಾವೇರಿ ನದಿ ತೀರದಲ್ಲಿ ಮಾದಿಗ ಸಮುದಾಯಕ್ಕೆ ನೀಡಿರುವ ಸ್ಮಶಾನಕ್ಕೆ ರಸ್ತೆ ಸೌಕರ್ಯ ಇಲ್ಲ. ಹೆಗ್ಗೂರು, ನರೀಪುರ, ಮಂಗಿ ಪಚ್ಚನಹುಂಡಿ ಹಾಗೂ ಮೂಗೂರು ಹೊಸಹಳ್ಳಿ ಗ್ರಾಮಗಳಿಗೆ ಸ್ಮಶಾನವೇ ಇಲ್ಲ. ಕಳೆದ 30–35 ವರ್ಷಗಳಿಂದ ಸದಾಶಿವ ಆಯೋಗ ಜಾರಿಗೆ ಜನಾಂಗ ಒತ್ತಾಯಿಸುತ್ತಿದೆ ಅದನ್ನೂ ಸರ್ಕಾರ ಜಾರಿಗೆ ತರಲು ಮೀನಾ–ಮೇಷ ಎಣಿಸುತ್ತಿದೆ. ತಾಪಂ, ಜಿಪಂಗಳಲ್ಲೂ ನಮ್ಮ ಸಮಾಜಕ್ಕೆ ಟಿಕೆಟ್ ಕೊಡುತ್ತಿಲ್ಲ. ಮನೆ ಕಟ್ಟಲು ಸಾಲ ಕೊಡುತ್ತಿಲ್ಲ. ಕೊನೆಗೆ ಮೃತರ ಶವ ಹೂಳಲು ರಸ್ತೆ ಹಾಗೂ ಜಾಗ ಕೊಡಿ ಅಂದರೆ ಅದನ್ನೂ ಕೊಡುತ್ತಿಲ್ಲ ಎಂದರು.

ಪೂರ್ವಭಾವಿ ಸಭೆಯಲ್ಲಿ ಬಾಬು ಜಗಜೀವನರಾಂ ಜನ ಕಲ್ಯಾಣ ಸಂಘದ ಉಪಾಧ್ಯಕ್ಷ ಗೋವಿಂದರಾಜು, ಹೊಸಹಳ್ಳಿ ಮಾದೇಶ್, ಬೈರಾಪುರ ಮಹದೇವಯ್ಯ, ಹ್ಯಾಕನೂರು ಬಸವರಾಜು, ಸಿ.ಲಿಂಗರಾಜು, ಮಂಗಿ ಪಚ್ಚನ ಹುಂಡಿ ನಾಗಪ್ಪ, ಮೂಗೂರು ಗಿರೀಶ್, ಮಾಲೂರು ಶಿವರಾಜ್, ಕಳ್ಳೀಪುರ ವಸಂತ್, ಶಿವಪ್ರಸಾದ್, ಬನ್ನೂರು ರಾಜೇಂದ್ರ, ಹೆಗ್ಗೂರು ಶಿವಕುಮಾರ್, ಕೆಂಪಯ್ಯ, ಕೆ.ಸಿ.ಲಿಂಗರಾಜು, ಗೋಪಾಲ್, ಬೈರಾಪುರ ರಂಜನಿ, ಕುನ್ನಯ್ಯ, ಬನ್ನೂರು ರವಿ ಹಾಜರಿದ್ದರು.

ಚಿಕ್ಕದೇವಮ್ಮ ಕ್ಷೇತ್ರದ ಸನ್ನಿಧಿಯಲ್ಲಿ ಸರಗೂರು ತಾಲೂಕು ಸಾಹಿತ್ಯ ಸಮ್ಮೇಳನ ಪ್ರಚಾರಕ್ಕೆ ಚಾಲನೆ



ಸರಗೂರು ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾಲೂಕಿನ ಪ್ರಸಿದ್ಧ ಅಧಿದೇವತೆ ಶ್ರೀ ಚಿಕ್ಕದೇವಮ್ಮ ಕ್ಷೇತ್ರದ ಸನ್ನಿಧಿಯಲ್ಲಿ ಪದಾಧಿಕಾರಿಗಳು ಪೂಜೆ ಸಲ್ಲಿಸಿ ಪ್ರಚಾರಕ್ಕೆ ಚಾಲನೆ ನೀಡಿದರು.

ಸರಗೂರು, ಡಿ.25– ಜ.17ರಂದು ಸರಗೂರಲ್ಲಿ ನಡೆಯುವ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾಲೂಕಿನ ಪ್ರಸಿದ್ಧ ಅಧಿದೇವತೆ ಶ್ರೀ ಚಿಕ್ಕದೇವಮ್ಮ ಕ್ಷೇತ್ರದ ಸನ್ನಿಧಿಯಲ್ಲಿ ಪದಾಧಿಕಾರಿಗಳು ಪೂಜೆ ಸಲ್ಲಿಸಿ ಪ್ರಚಾರಕ್ಕೆ ಚಾಲನೆ ನೀಡಿದರು.

ಚಿಕ್ಕದೇವಮ್ಮನವರ ಬೆಟ್ಟದ ಪಾರುಪತ್ತೇದಾರ್ ಮಹದೇವಸ್ವಾಮಿ ಪೂಜಾ ಸೇವೆ ನೆರವೇರಿಸಿದರು. ನಂತರ ತಾಲೂಕು ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ ಮಾತನಾಡಿ, ಸಾಹಿತ್ಯ ಸಮ್ಮೇಳನ ಕಾರ್ಯ ನಿರ್ವಿಘ್ನವಾಗಿ ನೆರವೇರಲೆಂದು ಅಧಿದೇವತೆಯಲ್ಲಿ ಪ್ರಾರ್ಥಿಸಿ ಚಾಲನೆ ನೀಡಿದ್ದೇವೆ. ಸಮ್ಮೇಳನ ಕಾರ್ಯ ನಾಳೆಯಿಂದ ವೇಗ ಪಡೆದುಕೊಳ್ಳಲಿವೆ. ತಾಲೂಕಿನ ಸಮಸ್ತರು ಯಶಸ್ಸಿಗೆ ಕೈ ಜೋಡಿಸಬೇಕೆಂದು ಮನವಿ ಮಾಡಿದರು.

ಜಿಪಂ ಮಾಜಿ ಸದಸ್ಯ ಪಿ.ರವಿ ಮಾತನಾಡಿ, ಸರಗೂರು ತಾಲೂಕು ರಚನೆಯಾದ ನಂತರದ ಪ್ರಥಮ ತಾಲೂಕು ಸಾಹಿತ್ಯ ಸಮ್ಮೇಳನ ಇದಾಗಿದ್ದು, ಹೆಚ್ಚು ಅರ್ಥಪೂರ್ಣವಾಗಿ ಆಕರ್ಷಣೀಯವಾಗಿ ಸಮ್ಮೇಳನ ಮೂಡಿ ಬರಲು ನಾವೆಲ್ಲರೂ ಶ್ರಮಿಸೋಣ. ಮಾಧ್ಯಮಗಳು ಸಮ್ಮೇಳನಕ್ಕೆ ಹೆಚ್ಚು ಪ್ರಚಾರ ನೀಡಬೇಕಿದೆ ಎಂದು ಮನವಿ ಮಾಡಿದರು. ಸಾಹಿತಿ ಹಾಗೂ ಮೈಸೂರು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ. ವೈ.ಡಿ. ರಾಜಣ್ಣ ಮಾತನಾಡಿ, ಸಮ್ಮೇಳನ ಸರಗೂರು ತಾಲೂಕಿನ ಸಮಸ್ತರು ಪಾಲ್ಗೊಳ್ಳುವ ಮೂಲಕ ತಾಲೂಕಿನ ಸಾಹಿತ್ಯ ಸಂಸ್ಕೃತಿಯ ಬಗ್ಗೆ ಅರಿವು–ಅಭಿಮಾನ ಬೆಳೆಸುವ ನಿಟ್ಟಿನಲ್ಲಿ ಸಮ್ಮೇಳನವನ್ನು ರೂಪಿಸುವ ಅಗತ್ಯವಿದೆ ಎಂದರು.

ಕನ್ನಡ ಸಾಹಿತ್ಯ ಸಮ್ಮೇಳನದ ಸಾಂಸ್ಕೃತಿಕ ಸಮಿತಿ ಉಪಾಧ್ಯಕ್ಷ ಗದ್ದೆಹುಂಡಿ ಗುಣಪಾಲ್, ಪುರದಕಟ್ಟೆ ಬಸವರಾಜು, ಸಂಚಾಲಕ ಹೆಚ್.ಎನ್.ನಿಂಗರಾಜು, ಆಹಾರ ಸಮಿತಿ ಸಂಚಾಲಕ ಎಸ್.ಎನ್. ಮೋಹನ್ ಕುಮಾರ್, ವೇದಿಕೆ ಸಂಚಾಲಕ ಚನ್ನಿಪುರ ಮಲ್ಲೇಶ್, ಎಸ್.ಬಿ. ನಾಗರಾಜು, ಕಂದಲಿಕೆ ಹೋಬಳಿ ಕಸಾಪ ಅಧ್ಯಕ್ಷ ಕಂದೇಗಾಲ ಶಿವರಾಜು, ಪ್ರಚಾರ ಸಮಿತಿ ಸಂಚಾಲಕ ಎಸ್.ಆರ್.ನಾಗರಾಮ್, ರಂಗರಾಜು, ರಘುರಾಮ್, ಚಂದ್ರು, ವಿಜಯ್ ಹಾಗೂ ಇನ್ನಿತರರು ಇದ್ದರು.

ಕೆ.ಎಸ್.ಪುಟ್ಟಣ್ಣಯ್ಯರವರ 76ನೇ ಜನ್ಮದಿನಾಚರಣೆ



ದಿವಂಗತ ಕೆ.ಎಸ್. ಪುಟ್ಟಣ್ಣಯ್ಯ ಅವರ 76ನೇ ಜನ್ಮದಿನವನ್ನು ಆಚರಿಸಲಾಯಿತು.

ಹುಣಸೂರು, ಡಿ.25– ತಾಲೂಕಿನ ಹೊಸೂರು ಕೊಡಗು ಕಾಲೋನಿ ಗ್ರಾಮದಲ್ಲಿ ರೈತ ನಾಯಕ ಮಾಜಿ ಶಾಸಕ, ರಾಜ್ಯ ರೈತ ಸಂಘದ ಸಂಸ್ಥಾಪಕ ದಿವಂಗತ ಕೆ.ಎಸ್. ಪುಟ್ಟಣ್ಣಯ್ಯ ಅವರ 76ನೇ ಜನ್ಮದಿನವನ್ನು ಆಚರಿಸಲಾಯಿತು.

ಮೈಸೂರು ಜಿಲ್ಲಾ ರೈತ ಸಂಘದ ಅಧ್ಯಕ್ಷರಾದ ಹೊಸೂರು ಕುಮಾರ್‌ರವರ ನೇತೃತ್ವದಲ್ಲಿ ಗ್ರಾಮ ಘಟಕದ ಅಧ್ಯಕ್ಷ ಹೆಚ್.ಎನ್. ಅಭಿಷೇಕ್‌ರವರು ಗ್ರಾಮಸ್ಥರನ್ನು ಒಗ್ಗೂಡಿಸಿ ಪುಟ್ಟಣ್ಣಯ್ಯರವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿಸಿ ಮೇಣದ ಬತ್ತಿ ಹಚ್ಚಿ, ಸಿಹಿ ಹಂಚಿ ಸಂಭ್ರಮಿಸಿದರು.

ಕಾರ್ಯಕ್ರಮದಲ್ಲಿ ರೈತ ಸಂಘದ ಹುಣಸೂರು ತಾಲೂಕು ಉಪಾಧ್ಯಕ್ಷ ವಿ.ಟಿ.ಮಣಿ, ಗ್ರಾಮ ಘಟಕದ ಉಪಾಧ್ಯಕ್ಷ ಮಂಜುನಾಥ್, ಚಿನ್ನು, ಗ್ರಾಮದ ಯಜಮಾನ ಮಂಜೇಗೌಡ್ರು, ಸುರೇಶ್ ಸ್ವಾಮಿ ಸೇರಿದಂತೆ ಗ್ರಾಮದ ಎಲ್ಲಾ ಮುಖಂಡರು ಗ್ರಾಮಸ್ಥರು ಭಾಗಿಯಾಗಿದ್ದರು.

ಅಟಲ್ ಬಿಹಾರಿ ವಾಜಪೇಯಿ ದೂರದೃಷ್ಟಿಯುಳ್ಳ ನಾಯಕ

ಹೆಳವರಹುಂಡಿಯಲ್ಲಿ ವಾಜಪೇಯಿ ಜನ್ಮದಿನ ಆಚರಣೆ



ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಮಾತನಾಡಿದರು.

ತಿ.ನರಸೀಪುರ, ಡಿ.25– ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ದೂರದೃಷ್ಟಿಯುಳ್ಳ ನಾಯಕರಾಗಿದ್ದರು ಎಂದು ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಬಣ್ಣಿಸಿದರು.

ಪಟ್ಟಣದ ಹೆಳವರಹುಂಡಿ ಗ್ರಾಮದಲ್ಲಿ ವರುಣ ಬಿಜೆಪಿ ಘಟಕದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿಯವರ 100 ನೇ ವರ್ಷದ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವಾಜಪೇಯಿ ಅವರು ಜಾರಿಗೆ ತಂದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ, ಸುವರ್ಣ ಚತುಷ್ಪಥ ರಸ್ತೆ, ಸರ್ವ ಶಿಕ್ಷಣ ಅಭಿಯಾನ, ವಾಂಬೆ ಕಿಸಾನ್ ಕ್ರೆಡಿಟ್ ಕಾರ್ಡ್ ಇನ್ನಿತರ ಯೋಜನೆಗಳು ಈಗಿನ ಪೀಳಿಗೆಗೆ ಅನುಕೂಲಕರವಾಗಿವೆ ಎಂದು ತಿಳಿಸಿದರು.

23 ರಾಜಕೀಯ ಪಕ್ಷಗಳನ್ನು ಒಂದುಗೂಡಿಸಿಕೊಂಡು ಉತ್ತಮ ಆಡಳಿತವನ್ನು ನೀಡಿ ಇಡೀ ವಿಶ್ವಕ್ಕೆ ಮಾದರಿ ಆಗಿದ್ದಾರೆ. ಪಾಕಿಸ್ತಾನ ಸೇರಿದಂತೆ ಅನೇಕ ರಾಷ್ಟ್ರಗಳ ಜೊತೆ ಉತ್ತಮ ಬಾಂಧವ್ಯವನ್ನು ಇಟ್ಟುಕೊಂಡಿದ್ದರು. ಪಾಕಿಸ್ತಾನ ವಾಜಪೇಯಿ ಕಾಲದಲ್ಲಿ ಭಾರತದ ತಂಟೆಗೆ ಬರಲು ಹೆದುರುತ್ತಿತ್ತು ಎಂದು ತಿಳಿಸಿದರು.

ವಾಜಪೇಯಿ ರೀತಿಯಲ್ಲಿಯೇ ನರೇಂದ್ರ ಮೋದಿಯವರು ಆಡಳಿತ ನಡೆಸುತ್ತಿದ್ದಾರೆ. ಮುಂಬರುವ ಚುನಾವಣೆಯಲ್ಲಿ ಮತ್ತೆ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಪಕ್ಷದ ಕಾರ್ಯಕರ್ತರು ಒಗ್ಗಟ್ಟಿನಿಂದ ದುಡಿದಾಗ ಮಾತ್ರ ಸಾಧ್ಯವೆಂದರು.

ವರುಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಸಂಚಾಲಕ ನಗರ್ಲೆ ಮಹದೇವಸ್ವಾಮಿ ಮಾತನಾಡಿ, ವಾಜಪೇಯಿಯವರು ದೇಶ ಕಂಡ ಅಪರೂಪದ ರಾಜಕಾರಣಿಯಾಗಿದ್ದು, ಅವರ ಆದರ್ಶಗಳು ಇಂದಿನ ರಾಜಕಾರಣಿಗಳಿಗೆ ಅನುಕರಣೀಯವಾಗಿದೆ. ಅಟಲ್ ಬಿಹಾರಿ ವಾಜಪೇಯಿಯವರ 100 ನೇ ಜನ್ಮದಿನವನ್ನು ಇಂದು ಆಚರಿಸಲಾಗುತ್ತಿದೆ. ಈ ದಿನವನ್ನು ಉತ್ತಮ ಆಡಳಿತ ದಿನವನ್ನಾಗಿಯೂ ಆಚರಿಸಿಕೊಂಡು ಬರಲಾಗುತ್ತಿದೆ. ಮೂರು ಬಾರಿ ಪ್ರಧಾನಮಂತ್ರಿಯಾಗಿ, 11 ಬಾರಿ ಲೋಕಸಭೆ ಹಾಗೂ 2 ಬಾರಿ ರಾಜ್ಯಸಭೆ ಸದಸ್ಯರಾಗಿ ಸೇವೆ ಸಲ್ಲಿಸುವ ಮೂಲಕ ತಮ್ಮ ಅಧಿಕಾರಾವಧಿಯಲ್ಲಿ ಅನೇಕ ಮಹತ್ವದ ಯೋಜನೆಗಳು ಮತ್ತು ಕಾರ್ಯಕ್ರಮಗಳು ಅನುಷ್ಠಾನಕ್ಕೆ ತರುವಲ್ಲಿ ಯಶಸ್ವಿಯಾದರು ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಲಕೃಷ್ಣ, ಹಿರಿಯ ಮುಖಂಡ ತೋಟದಪ್ಪ ಬಸವರಾಜು, ಪ್ರಧಾನ ಕಾರ್ಯದರ್ಶಿ ವೆಂಕಟರಮಣ ಶೆಟ್ಟಿ, ಅಡುಗೆ ಪ್ರಭು, ವಿಜಿ, ಆಟೋ ಮೂರ್ತಿ, ನಂಜುಂಡ, ಕೇಬಲ್ ಸುರೇಶ್, ಡಾಲಿ ಮಹೇಂದ್ರ, ಚೇತು, ಕೇಬಲ್ ಮಹದೇವಸ್ವಾಮಿ, ಮೋಹನ್, ದುಂಡಯ್ಯನ ಮಲ್ಲೇಶ, ಕೃಷ್ಣ, ಪ್ರಭುಸ್ವಾಮಿ, ಸಿದ್ದು, ಮಹಿಳಾ ಮುಖಂಡರಾದ ಲಕ್ಷ್ಮಿ, ಅನಿಲ್, ಕುಮಾರ್, ಚಿರಂಜೀವಿ, ಕೃಷ್ಣ ಸೇರಿದಂತೆ ಮತ್ತಿತರರು ಹಾಜರಿದ್ದರು.


ನರಸೀಪುರದಲ್ಲಿ ದಿನದರ್ಶಿಕೆ ಬಿಡುಗಡೆ



ತಿ.ನರಸೀಪುರ ತಾಲೂಕಿನ ವಾಟಾಳು ಮಠದ ಮಠಾಧ್ಯಕ್ಷರಾದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿಯವರ ವರ್ಧಂತ್ಯುತ್ಸವಕ್ಕೆ ಶುಭಕೋರಿ ಅವರು ಹೊರತಂದಿರುವ 2025ನೇ ವರ್ಷದ ದಿನದರ್ಶಿಕೆಯನ್ನು ಪೂಜಿತ್ ಮೆಡಿಕಲ್ ಕುಮಾರ್ ಬಿಡುಗಡೆ ಮಾಡಿದರು. ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ.ಆರ್.ಪ್ರಕಾಶ್, ಡಾ.ಮಲ್ಲಿಕಾರ್ಜುನ ಸ್ವಾಮಿ, ಕ್ಷೇತ್ರ ಬಿಜೆಪಿ ಅಧ್ಯಕ್ಷ ಸತ್ಯಪ್ಪ, ತೋಂಟೇಶ್, ವಕೀಲ ಜ್ಞಾನೇಂದ್ರಮೂರ್ತಿ, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ಸುಗಂಧರಾಜು, ಆಡಿಟರ್ ಮಂಜುನಾಥ್, ಹಿರಿಯೂರು ಪ್ರಕಾಶ್, ಅಕ್ಕಿ ನಾಗಪ್ಪ, ಕಾವೇರಿಪುರ ಮಲ್ಲು, ಅಂಗಡಿ ನಾಗೇಶ್, ಕೈಯಂಬಳ್ಳಿ ಅಶೋಕ್, ಕರುಹಟ್ಟಿ ರಾಜಶೇಖರ್ ಮತ್ತಿತರರು ಹಾಜರಿದ್ದರು.

ಕೊಟ್ಟಿಗೆಗೆ ನುಗ್ಗಿ ಮೇಕೆ ತಿಂದು ಪರಾರಿಯಾದ ಚಿರತೆ

ಆತಂಕದಲ್ಲಿ ಕುಟುಂಬಸ್ಥರು, ಗ್ರಾಮಸ್ಥರು



ಸತ್ತು ಬಿದ್ದಿರುವ ಮೇಕೆ.

ಹಿರೀಕ್ಯಾತನಹಳ್ಳಿ, ಡಿ.25– ಚಿರತೆಯೊಂದು ಕೊಟ್ಟಿಗೆಗೆ ನುಗ್ಗಿ, ಮೇಕೆ ತಿಂದು ಹಾಕಿರುವ ಘಟನೆ ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿಯ ಹಿರೀಕ್ಯಾತನಹಳ್ಳಿ ಗ್ರಾಮದಲ್ಲಿ ಮಂಗಳವಾರ ರಾತ್ರಿ ನಡೆದಿದೆ.

ಗ್ರಾಮದ ಅಶೋಕ ಅವರು ತಮ್ಮ ಜಮೀನಿನಲ್ಲಿ ಮನೆ ಕಟ್ಟಿಕೊಂಡು ವಾಸಿಸುತ್ತಿದ್ದು, ಅವರ ಮನೆಯ ಹಿಂಭಾಗ ಕೊಟ್ಟಿಗೆಯಲ್ಲಿ ಮೂರು ಮೇಕೆ ಹಾಗೂ ರಾಸುಗಳನ್ನು ಕಟ್ಟಿ ಹಾಕಿದ್ದರು. ಚಿರತೆ ಮಧ್ಯರಾತ್ರಿಯಲ್ಲಿ ಮೇಕೆ ಮೇಲೆ ದಾಳಿ ಮಾಡಿ ಅರ್ಧ ತಿಂದು ಬಿಟ್ಟು ಹೋಗಿದೆ. ರೈತ ಅಶೋಕ್ ಕುಟುಂಬ ಸಮೇತರಾಗಿ ಜಮೀನಿನಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದು ಮನೆಯಲ್ಲಿರುವ ಮಹಿಳೆಯರು ಭಯಭೀತರಾಗಿದ್ದಾರೆ. ಕಳೆದ ಒಂದು ವರ್ಷದಿಂದ ಹಿರೀಕ್ಯಾತನಹಳ್ಳಿ, ಶಿರೇನಹಳ್ಳಿ, ಹರವೆ, ಮರೂರು ಸುತ್ತಮುತ್ತ ಹಲವಾರು ರೈತರ ಕುರಿ, ಮೇಕೆಗಳನ್ನು ಕಣ್ಮುಂದೆಯೇ ಕಚ್ಚಿಕೊಂಡು ಹೋಗಿದೆ. ಹಲವಾರು ಬಾರಿ ಅರಣ್ಯ ಇಲಾಖೆಯವರ ಗಮನಕ್ಕೂ ತಂದರೂ ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ.

ಅದೃಷ್ಟವಶಾತ್ ರೈತರು ಮಹಿಳೆಯರು ಮೇಕೆ ದನಕರು ಮೇಯಿಸುವಾಗಲೇ ಅವರ ಮುಂದೆ ಕುರಿ ಮೇಕೆಗಳನ್ನು ಎಳೆದು ಹೋಗಿರುವ ಘಟನೆಗಳು ಕೂಡ ನಡೆದಿವೆ. ಆದರೆ ಮಾನವರ ಮೇಲೆ ಚಿರತೆ ದಾಳಿ ಮಾಡುತ್ತಿಲ್ಲ. ಕೂಡಲೇ ಈ ಭಾಗದಲ್ಲಿ ಚಿರತೆ ಸೆರೆ ಹಿಡಿಯುವಂತೆ ರೈತರು ಒತ್ತಾಯಿಸಿದ್ದಾರೆ.

ಮೈಸೂರಿಂದ ಅಯ್ಯಪ್ಪಸ್ವಾಮಿ ಭಕ್ತರ ಬೃಹತ್ ಪಾದಯಾತ್ರೆ



ಪಾದಯಾತ್ರೆ ಹೊರಟಿರುವ ಅಯ್ಯಪ್ಪಸ್ವಾಮಿ ಭಕ್ತರು.

ನಂಜನಗೂಡು, ಡಿ.25– ಇಲ್ಲಿನ ಕಪಿಲಾ ನದಿಯ ತೀರದಲ್ಲಿರುವ ಶ್ರೀ ಅಯ್ಯಪ್ಪಸ್ವಾಮಿ ದೇವಾಲಯದ 27ನೇ ವರ್ಷದ ಬ್ರಹ್ಮೋತ್ಸವದ ಅಂಗವಾಗಿ 250ಕ್ಕೂ ಹೆಚ್ಚು ಇರುಮುಡಿ ಹೊತ್ತ ಅಯ್ಯಪ್ಪಸ್ವಾಮಿ ಭಕ್ತರು ಮೈಸೂರಿನ ಶ್ರೀ ದತ್ತ ವೆಂಕಟೇಶ್ವರ ಸ್ವಾಮಿ ದೇವಾಲಯದಿಂದ ಶ್ರೀ ಅಯ್ಯಪ್ಪಸ್ವಾಮಿ ದೇವಾಲಯದವರೆಗೆ ಪಾದಯಾತ್ರೆ ನಡೆಸಿ 18 ಮೆಟ್ಟಿಲುಗಳನ್ನು ಹತ್ತಿ ದೇವರ ದರ್ಶನ ಪಡೆದು ಪುನೀತರಾದರು.

ಬ್ರಹ್ಮೋತ್ಸವ ಅಂಗವಾಗಿ ಮಂಗಳವಾರ ಅಯ್ಯಪ್ಪಸ್ವಾಮಿ ದೇವಾಲಯದ ವತಿಯಿಂದ ಸುಮಾರು 250ಕ್ಕೂ ಹೆಚ್ಚು ವ್ರತಾಧಾರಿ ಮಾಲಾಧಾರಿ ಅಯ್ಯಪ್ಪ ಸ್ವಾಮಿ ಭಕ್ತಾದಿಗಳಿಗೆ ದೇವಾಲಯದ ಆವರಣದಲ್ಲಿ ಇರುಮುಡಿಯನ್ನು ಕಟ್ಟಲಾಯಿತು.

ನಂತರ ಬುಧವಾರ ಬೆಳಗ್ಗೆ 4ಕ್ಕೆ ಮೈಸೂರಿನ ದತ್ತ ವೆಂಕಟೇಶ್ವರಸ್ವಾಮಿ ದೇವಾಲಯಕ್ಕೆ ತೆರಳಿದರು. ಬೆಳಗ್ಗೆ 4.30 ರಿಂದ ಪ್ರಾರಂಭವಾದ ಅಯ್ಯಪ್ಪ ಸ್ವಾಮಿ ಮಾಲಾಧಾರಿ ಭಕ್ತರ ಪಾದಯಾತ್ರೆಯು ಬೆಳಗ್ಗೆ 12ರ ವೇಳೆಗಾಗಲೇ ಶ್ರೀಅಯ್ಯಪ್ಪಸ್ವಾಮಿ ದೇವಾಲಯವನ್ನು ತಲುಪಿತು. ಮಾರ್ಗಮಧ್ಯದಲ್ಲಿ ಅಯ್ಯಪ್ಪ ಮಾಲೆಧಾರಿ ಭಕ್ತರಿಗೆ ವಿವಿಧ ಸಂಘ–ಸಂಸ್ಥೆಗಳು ಹಾಗೂ ಅಂಗಡಿ ಮಾಲೀಕರು ಅವರನ್ನು ಪುಷ್ಪಹಾರಗಳಿಂದ ಸ್ವಾಗತಿಸಿ, ಭಕ್ತರಿಗೆ ಕುಡಿಯಲು ಪಾನೀಯ, ಫಲಹಾರ ನೀಡಿ ಸತ್ಕರಿಸಿದರು. ನಂತರ ಶ್ರೀಕ್ಷೇತ್ರ ಮಲ್ಲನಮೂಲೆ ಮಠದ ಶ್ರೀ ಚೆನ್ನಬಸವ ಸ್ವಾಮಿಗಳು ಪಾದಯಾತ್ರೆಯನ್ನು ಆಧಾರದಿಂದ ಸ್ವಾಗತಿಸಿ, ಬೆಳಗಿನ ತಿಂಡಿಯನ್ನು ಉಣ ಬಡಿಸಿ ಫಲಹಾರದಿಂದ ಸತ್ಕರಿಸಿ ಆಶೀರ್ವದಿಸಿದರು.

ದೇವಾಲಯದ ಗುರುಸ್ವಾಮಿಗಳಾದ ಪಿ. ದೇವರಾಜು ಮಾತನಾಡಿ, ಬ್ರಹ್ಮೋತ್ಸವದ ಅಂಗವಾಗಿ ಶಬರಿ ಮಲೆಗೆ ಹೋಗಲು ಆಗದ ಮಾಲಾಧಾರಿ ಭಕ್ತರ ಅನುಕೂಲಕ್ಕಾಗಿ ದೇವಾಲಯದ ವತಿಯಿಂದಲೇ ಭಕ್ತರಿಗೆ ಇರುಮುಡಿಯನ್ನು ಕಟ್ಟಿ ಮೈಸೂರಿನಿಂದ ನಂಜನಗೂಡಿಗೆ ಪಾದಯಾತ್ರೆ ಮೂಲಕ ಸಾಗಿ ಬಂದು ದೇವಾಲಯದ 18 ಮೆಟ್ಟಿಲು ಗಳನ್ನು ಹತ್ತಿ ಸೇವೆ ಮಾಡಿಸಲಾಗುತ್ತದೆ. ಗುರುವಾರ ಬೆಳಗ್ಗೆ 8ರ ವೇಳೆಗೆ ದೇವಾಲಯದಲ್ಲಿ ಇರುಮುಡಿಯನ್ನು ಒಡೆದು ಅಯ್ಯಪ್ಪಸ್ವಾಮಿಯವರಿಗೆ ಮಂಡಲಾಭಿಷೇಕ ನೆರವೇರಿಸಲಾಗುತ್ತದೆ. ಮತ್ತು ಮಹಾಮಂಗಳಾರತಿಯ ನಂತರ ದೇವರ ದರ್ಶನಕ್ಕೆ ಅನುವು ಮಾಡಿ ಕೊಡಲಾಗುವುದು ಎಂದು ಮಾಹಿತಿ ನೀಡಿದರು.

ಪಾದಯಾತ್ರೆಯಲ್ಲಿ ಪಿ.ದೇವರಾಜು, ಎನ್.ಎಂ.ಮಂಜುನಾಥ್, ರಾಜೇಗೌಡ, ನಾರಾಯಣಸ್ವಾಮಿ, ಭಕ್ತವತ್ಸಲ, ವೆಂಕಟೇಶ್, ಮೋಹನ್, ಬಾಲಾಜಿ, ವಿಶ್ವ, ವಿನೋದ್ ಸೇರಿದಂತೆ ನೂರಾರು ಮಾಲಾಧಾರಿ ಭಕ್ತರು, ಮಕ್ಕಳು, ಮಹಿಳೆಯರು ಇದ್ದರು.

ವಿಶ್ವ ರೈತ ದಿನಾಚರಣೆ



ಬನ್ನೂರಿನ ಎಪಿಎಂಸಿ ಆವರಣದಲ್ಲಿ ನಡೆದ ವಿಶ್ವ ರೈತ ದಿನಾಚರಣೆಯ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ (ಮೂಲ ಸಂಘಟನೆ) ಜಿಲ್ಲಾಧ್ಯಕ್ಷ ಬನ್ನೂರು ನಾರಾಯಣ್ ಮಾತನಾಡಿದರು. ಇಂಡುವಾಳು ಚಂದ್ರಣ್ಣ, ಬಸವರಾಜು, ಪ್ರಕಾಶ್ ಇದ್ದರು.

ಮಿಮಿಕ್ರಿ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ



ವಿದ್ಯಾರ್ಥಿಯನ್ನು ಅಭಿನಂದಿಸಿದ ಶಾಲಾ ಶಿಕ್ಷಕರು.

ಹುಣಸೂರು, ಡಿ.25– ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಹುಣಸೂರು ತಾಲೂಕಿನ ನಲ್ಲೂರುಪಾಲದ ಸೃಜನ ಸರೋವರ ಶಾಲೆಯ ವಿದ್ಯಾರ್ಥಿ ಶಶಿಕುಮಾರ್ ಮಿಮಿಕ್ರಿ ಸ್ಪರ್ಧಾ ವಿಭಾಗದಲ್ಲಿ ದ್ವಿತೀಯ ಸ್ಥಾನವನ್ನು ಪಡೆದಿದ್ದಾರೆ.

ಶಾಲೆಯ ಮುಖ್ಯ ಶಿಕ್ಷಕ ಸಂತೋಷ್ ಕುಮಾರ್, ಸಂಸ್ಥೆಯ ಆಡಳಿತ ಮಂಡಳಿ ಅಧ್ಯಕ್ಷ ಅನಿ ಕೆ.ಜಿ, ರವಿ. ಎಸ್ ಸುರೇಂದ್ರ, ಶಾಲಾ ಶಿಕ್ಷಕಿಯರು ಅಭಿನಂದಿಸಿದ್ದಾರೆ.

ಮಲ್ಲೇಗೌಡರು ನಿಧನ



ತಿ.ನರಸೀಪುರ, ಡಿ.25– ತಾಲೂಕಿನ ಚೌಹಳ್ಳಿ ಗ್ರಾಮದ ಮಾಜಿ ಯಜಮಾನ ಕಾ.ಮಲ್ಲೇಗೌಡರು (90) ನಿಧನರಾದರು.

ಮೃತರು ಭತ್ತದ ವ್ಯಾಪಾರಿ ಚೌಹಳ್ಳಿ ಗುರುಮಲ್ಲು ಸೇರಿದಂತೆ ನಾಲ್ವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯನ್ನು ಸ್ವಗ್ರಾಮದ ಕುರುಬ ಸಮುದಾಯದ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ಮೂಲಗಳು ತಿಳಿಸಿವೆ. ಪುರಸಭಾ ಸದಸ್ಯ ಬಾದಾಮಿ ಮಂಜು, ಮೂಗೂರು ಹರೀಶ್ ಸಂತಾಪ ಸೂಚಿಸಿದ್ದಾರೆ.

ಹೆಚ್.ಡಿ.ಕೋಟೆಯಲ್ಲಿ ಅಟಲ್‌ಜೀ ಜನ್ಮದಿನ ಆಚರಣೆ



ಹೆಚ್.ಡಿ.ಕೋಟೆ ಪಟ್ಟಣದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಬಾಣಂತಿಯರಿಗೆ ಹಾಗೂ ರೋಗಿಗಳಿಗೆ ಹಣ್ಣು ವಿತರಿಸಲಾಯಿತು.

ಹೆಚ್.ಡಿ.ಕೋಟೆ, ಡಿ.25– ಭಾರತವನ್ನು ಮಾದರಿ ದೇಶವನ್ನಾಗಿ ಮಾಡುವ ನಿಟ್ಟಿನಲ್ಲಿ ಗ್ರಾಮ ಸಡಕ್ ಯೋಜನೆ ಅಡಿಯಲ್ಲಿ ಗ್ರಾಮಗಳ ರಸ್ತೆಗಳನ್ನು ಅಭಿವೃದ್ಧಿಗೊಳಿಸಿದವರು ಅಟಲ್ ಬಿಹಾರಿ ವಾಜಪೇಯಿ ಅವರು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ತಿಳಿಸಿದ್ದಾರೆ.

ಪಟ್ಟಣದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಬಾಣಂತಿಯರಿಗೆ ಹಾಗೂ ರೋಗಿಗಳಿಗೆ ಹಣ್ಣು–ಹಂಪಲು ವಿತರಿಸಿ, ಗಿಡ ನೆಡುವುದರ ಮೂಲಕ ದೇಶದ ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ಹುಟ್ಟುಹಬ್ಬವನ್ನು ಹೆಚ್.ಡಿ. ಕೋಟೆ ಕ್ಷೇತ್ರದ ಭಾರತೀಯ ಜನತಾ ಪಾರ್ಟಿ ವತಿಯಿಂದ ವಿಶೇಷವಾಗಿ ಆಚರಿಸಿ ಮಾತನಾಡಿದ ಅವರು, ದೇಶವನ್ನು ಭಾರತ ಉದಯಿಸುತ್ತದೆ ಎಂಬ ಧ್ಯೇಯವಾಕ್ಯದೊಂದಿಗೆ ಭಾರತ ಮಾದರಿಯಾಗಲು ಕಾರ್ಯಕರ್ತರಾದರು ಅಟಲ್ ಜೀ ಎಂದರು.

ರಸ್ತೆಗಳಿಲ್ಲದೆ ಗ್ರಾಮಗಳಿಗೆ ಗ್ರಾಮ ಸಡಕ್ ಯೋಜನೆ ಅಡಿಯಲ್ಲಿ ರಸ್ತೆಗಳ ಮಾಡಲು ಮುಂದಾಗಿ ಹಾಗೂ ಪೋಖ್ರಾನ್ ಅಣುವಿದ್ಯುತ್ ಪರೀಕ್ಷೆಯಲ್ಲಿ ಮೊದಲ ಬಾರಿಗೆ ಯಶಸ್ವಿ ಆದಂತಹ ವ್ಯಕ್ತಿ ಎಂದು ಅವರನ್ನು ಈ ಸಂದರ್ಭದಲ್ಲಿ ಸ್ಮರಿಸಿದರು.

ಇದೇ ಸಂದರ್ಭದಲ್ಲಿ ಡಾ.ರಶ್ಮಿ, ಪ್ರಶಾಂತ್ ಕುಮಾರ್ ಗಂಗೋಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್, ಜಿಲ್ಲಾ ಕಾರ್ಯದರ್ಶಿ ಪಾಪಣ್ಣ, ಜಿಲ್ಲಾ ಪ್ರಕೋಷ್ಠ ಸಂಚಾಲಕ ಮೊತ್ತ ಬಸವರಾಜಪ್ಪ, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ವೆಂಕಟಸ್ವಾಮಿ, ವೀರಶೈವ ಸಮಾಜದ ಅಧ್ಯಕ್ಷ ರುದ್ರಪ್ಪ, ಓಬಿಸಿ ಅಧ್ಯಕ್ಷ ಬಸವರಾಜು ಆಚಾರ್, ತಾಲೂಕು ಯುವ ಮೋರ್ಚಾ ಅಧ್ಯಕ್ಷ ಪೃಥ್ವಿಕುಮಾರ್, ಕಾರ್ಯದರ್ಶಿ ಬಿಡುಗಳ ರಾಜು, ಮುಖಂಡರುಗಳಾದ ಗಿರಿಜಾ, ಮಂಜುಳಾ, ಮಂಜುಳಾ ಬಾಯಿ, ಪುಟ್ಟ ಚೆನ್ನಮ್ಮ, ಸೋಮೇಶ್, ಶಿವರಾಜಪ್ಪ, ನಂದೀಶ್, ರಾಜೇಂದ್ರ, ಸತೀಶ್, ಚಂದ್ರಶೇಖರ್, ಲೋಕೇಶ್, ನಟರಾಜು, ಕುಮಾರ್, ಜವರಯ್ಯ, ಗೋಪಾಲಯ್ಯ, ರವೀಂದ್ರ, ಅಕ್ರಂಪಾಶ, ಸೋಮಾಚಾರಿ, ರಮೇಶ್, ಮಹೇಶ, ಚಂದ್ರಮೌಳಿ, ಶಿವಸ್ವಾಮಿ, ರೂಪೇಶ್, ಗೋವಿಂದರಾಜು, ನವೀನ್, ಕುಮಾರ್, ಶಿವರಾಜು, ಸೋಮು, ಸೋಮೇಶ್, ಜೆ.ಪಿ. ಶಿವರಾಜ್, ಮಾದೇವಪ್ಪ, ಗುರುಸ್ವಾಮಿ, ಪರಮೇಶ, ಮಾದೇಶ ಸೇರಿದಂತೆ ಬಿಜೆಪಿ ಮುಖಂಡರುಗಳು ಹಾಜರಿದ್ದರು.

ದೇಶದ ಉದ್ಧಾರಕ್ಕೆ ಎಂದು ಹುಟ್ಟಿದಂತಹ ಅಟಲ್ ಬಿಹಾರಿ ವಾಜಪೇಯಿ ಅವರ 100ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ವಿಶೇಷವಾಗಿ ಹಿರಿಯ ನಾಗರಿಕರಾದ ರಾಧಾ ಜೆ.ಪಿ. ಚಂದ್ರಶೇಖರ್ ಅವರನ್ನು ತಾಲೂಕು ಬಿಜೆಪಿ ಘಟಕದ ವತಿಯಿಂದ ಸನ್ಮಾನಿಸಿ ಗೌರವಿಸುವುದರ ಮೂಲಕ, ಹೆಚ್.ಡಿ.ಕೋಟೆ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಲಾಯಿತು.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನಕ್ಕೆ ಮೋದಿ ಗಿಫ್ಟ್

ದೇಶದ ಮೊದಲ ನದಿ ಜೋಡಣೆ ಯೋಜನೆಗೆ ಶಿಲಾನ್ಯಾಸ

ಭೋಪಾಲ್,ಡಿ.25– ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 100ನೇ ಜನ್ಮದಿನದಂದೇ ಅವರ ಬಹುದೊಡ್ಡ ಕನಸು ಈಡೇರಿಸಲು ಮೋದಿ ಸರ್ಕಾರ ಮುಂದಾಗಿದೆ. ದೇಶದಲ್ಲಿ ಮೊದಲ ಬಾರಿಗೆ ನದಿಗಳ ಜೋಡಣೆಗೆ ಕೇಂದ್ರ ಸರ್ಕಾರ ಮುಂದಾಗಿದೆ. ಮಧ್ಯಪ್ರದೇಶದ ಖಜ್ರಾಹೋದಲ್ಲಿ ಕೆನ್–ಬೆಟ್ವಾ ನದಿಗಳ ಜೋಡಣೆಗೆ ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ ಮಾಡಿದ್ದಾರೆ.

ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ವಿ.ಡಿ.ಶರ್ಮಾ, ಉಪಮುಖ್ಯಮಂತ್ರಿ ರಾಜೇಂದ್ರ ಶುಕ್ಲಾ, ಸಚಿವ ಪ್ರಹ್ಲಾದ್ ಪಟೇಲ್, ಉಪಮುಖ್ಯಮಂತ್ರಿ ಜಗದೀಶ್ ದೇವ್ರಾ, ಸಚಿವ ರಾಕೇಶ್ ಸಿಂಗ್, ಜಲಸಂಪನ್ಮೂಲ ಸಚಿವೆ ತುಳಸಿ ಸಿಲಾವತ್, ಕೃಷಿ ಸಚಿವ ಇಂದಲ್ ಸಿಂಗ್ ಕಂಸಾನಾ, ಕೇಂದ್ರ ಕೃಷಿ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. 2014ರಲ್ಲಿ ನರೇಂದ್ರ ಮೋದಿ ಅವರು ಪ್ರಧಾನಿಯಾದಾಗ ವಾಜಪೇಯಿ ಅವರ ಕನಸು ನದಿಗಳ ಜೋಡಣೆ ಯೋಜನೆಯನ್ನೂ ಜಾರಿಗೆ ತರಲು ಬಯಸಿದ್ದರು. ಅದು ಸಾಧ್ಯವಾಗಿರಲಿಲ್ಲ. ಬಳಿಕ ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಒಟ್ಟಾಗಿ ಈ ಕಾರ್ಯದಲ್ಲಿ ಎದುರಾದ ಎಲ್ಲಾ ಅಡೆತಡೆಗಳನ್ನು ನಿವಾರಿಸಿದರು. ಈಗ ಕೇಂದ್ರದಿಂದ ಅನುದಾನ ಮಂಜೂರಾತಿಯೂ ಆಗಿದೆ. ಈಗ ಪ್ರಧಾನಿ ನರೇಂದ್ರ ಮೋದಿ ಅದರ ಅಡಿಪಾಯ ಹಾಕುತ್ತಿದ್ದಾರೆ.



ಮಧ್ಯಪ್ರದೇಶದ ಖಜ್ರಾಹೋದಲ್ಲಿ ಕೆನ್–ಬೆಟ್ವಾ ನದಿಗಳ ಜೋಡಣೆಗೆ ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ ಮಾಡಿದ್ದಾರೆ.

ಪರ್ವತದಲ್ಲಿ ಎರಡು ಸುರಂಗ: ಮಧ್ಯಪ್ರದೇಶದ ಛತ್ತರ್‌ಪುರ ಮತ್ತು ಪನ್ನಾ ಜಿಲ್ಲೆಗಳಲ್ಲಿ ಕೆನ್–ಬೆಟ್ವಾ ಲಿಂಕ್ ಯೋಜನೆಯನ್ನು ಆರಂಭಿಸಿದೆ. ಯೋಜನೆಯಡಿ ಪನ್ನಾ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕೆನ್ ನದಿಯ ಮೇಲೆ 77 ಮೀಟರ್ ಎತ್ತರ ಮತ್ತು 2.13 ಕಿಲೋಮೀಟರ್ ಉದ್ದದ ದೌಧನ್ ಅಣೆಕಟ್ಟು ನಿರ್ಮಿಸಲಾಗುವುದು. ಇಲ್ಲಿ 2,853 ಮಿಲಿಯನ್ ಕ್ಯೂಬಿಕ್ ಮೀಟರ್ ನೀರು ಸಂಗ್ರಹವಾಗಲಿದೆ. ಅಣೆಕಟ್ಟಿನ ಮೇಲಿನ ಹಂತದಲ್ಲಿ 1.9 ಕಿ.ಮೀ ಮತ್ತು ಕೆಳಮಟ್ಟದಲ್ಲಿ 1.1 ಕಿ.ಮೀ ಸುರಂಗ ನಿರ್ಮಿಸಲಾಗುವುದು. ಈ ಸುರಂಗಗಳ ಮೂಲಕ, ಕೆನ್ ನದಿಯ ಉಳಿದ ನೀರನ್ನು 221 ಕಿಮೀ ಉದ್ದದ ಲಿಂಕ್ ಕಾಲುವೆಯ ಮೂಲಕ ಬೆಟ್ವಾ ನದಿಗೆ ಬಿಡುಗಡೆ ಮಾಡಲಾಗುತ್ತದೆ.

ಈ ಕಾಲುವೆ ಮಧ್ಯಪ್ರದೇಶದ ಛತ್ತರ್‌ಪುರ, ಟಿಕಮ್‌ಗಢ, ನಿವಾರಿ ಮೂಲಕ ಹಾದು ಉತ್ತರ ಪ್ರದೇಶದ ಝಾನ್ಸಿಯಲ್ಲಿ ಬೆಟ್ವಾ ನದಿಯನ್ನು ಸೇರುತ್ತದೆ. ಈ ಜಿಲ್ಲೆಗಳ ಗ್ರಾಮಗಳ ರೈತರಿಗೆ ನೀರಾವರಿಗಾಗಿ ಕಾಲುವೆಯಿಂದ ನೀರು ಲಭ್ಯವಾಗಲಿದೆ. ಅಲ್ಲದೆ, ಕುಡಿಯುವ ಉದ್ದೇಶಕ್ಕೂ ನೀರು ಲಭ್ಯವಾಗಲಿದೆ. ಇದಾದ ನಂತರ ಉಳಿದ ನೀರನ್ನು ಬೆಟ್ವಾ ನದಿಗೆ ಬಿಡಲಾಗುವುದು. ಇದಲ್ಲದೇ ಬೀನಾ ನದಿ ಮತ್ತು ಉರ್ ನದಿಗೆ ಅಣೆಕಟ್ಟುಗಳನ್ನು ನಿರ್ಮಿಸಲಾಗುವುದು.

65 ಲಕ್ಷ ಜನರಿಗೆ ಕುಡಿಯುವ ನೀರು: ಕೆನ್ ಬೆಟ್ವಾ ಲಿಂಕ್ ಯೋಜನೆಯಿಂದ ಮಧ್ಯಪ್ರದೇಶದ 10 ಜಿಲ್ಲೆಗಳಲ್ಲಿ 8.11 ಲಕ್ಷ ಹೆಕ್ಟೇರ್ ಭೂಮಿಗೆ ಮತ್ತು ಉತ್ತರ ಪ್ರದೇಶದ 4 ಜಿಲ್ಲೆಗಳಲ್ಲಿ 2.51 ಲಕ್ಷ ಹೆಕ್ಟೇರ್ ಭೂಮಿಗೆ ನೀರುಣಿಸುತ್ತದೆ. ಅಲ್ಲದೆ 65 ಲಕ್ಷ ಜನರಿಗೆ ಕುಡಿಯುವ ನೀರು ಸಿಗಲಿದೆ ಎಂದು ಅಂದಾಜಿಸಿದೆ. ಮಧ್ಯಪ್ರದೇಶದ 10 ಜಿಲ್ಲೆಗಳು ಈ ಯೋಜನೆಯಿಂದ ಪ್ರಯೋಜನವಾಗಲಿದೆ. ಪನ್ನಾ, ದಾಮೋಹ್, ಛತ್ತರ್‌ಪುರ್, ಟಿಕಮ್‌ಗಢ್, ನಿವಾರಿ, ಸಾಗರ್, ರೈಸೆನ್, ವಿದಿಶಾ, ಶಿವಪುರಿ ಮತ್ತು ದಾತಿಯಾ ಸೇರಿವೆ. ರೈತರಿಗೆ ಕುಡಿಯಲು ಮತ್ತು ನೀರಾವರಿಗೆ ನೀರು ಸಿಗುತ್ತದೆ. ಎರಡನೇ ಹಂತದಲ್ಲಿ ಯೋಜನೆಯಡಿ ಉಪನದಿಗಳಲ್ಲಿ ಅಣೆಕಟ್ಟು ಹಾಗೂ ಇತರೆ ಕಾಮಗಾರಿ ಆರಂಭಿಸಲಾಗುವುದು ಎಂದು ಸರ್ಕಾರ ಹೇಳಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪುಷ್ಪ–2 (ಕ)	3 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುಐ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಪುಷ್ಪ–2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಸಂಗಂ	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ) + ಬೇಬಿ ಜಾನ್ (ಹಿಂ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಬೇಬಿಜಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ಪುಷ್ಪ–2 (ತೆ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಯುಐ (2024) (ಕ): ಬೆ.9.30ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12.10ಕ್ಕೆ, ಮ.2.35ಕ್ಕೆ, ಸಂ.5ಕ್ಕೆ, ರಾ.7.25ಕ್ಕೆ, ಮಾರ್ಕೋ (ಮ): ರಾ.9.55ಕ್ಕೆ.
ಸ್ಕ್ರೀನ್ 2	ಯುಐ (2024) (ಕ): ಬೆ.9ಕ್ಕೆ, ಪುಷ್ಪಾ 2 (ತೆ): ಮ.12.05ಕ್ಕೆ, ವಿಡುತಲೈ 2 (ತ): ಮ.3.55ಕ್ಕೆ, ರಾ.10.05ಕ್ಕೆ, ವನ್ವಾಸ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 3	ಇಡಿ ಎಕ್ಸ್ಟ್ರಾ ಡಿಸೆಂಟ್ (ಮ): ಬೆ.9.50ಕ್ಕೆ, ಪುಷ್ಪಾ 2 (ಕ): ಮ.12.15ಕ್ಕೆ, ಸಂ.6.10ಕ್ಕೆ, ಹರಿದಾಸರ ದಿನಚರಿ (ಕ): ಸಂ.4.05ಕ್ಕೆ, ಬಚ್ಚಲ ಮಲ್ಲಿ (ತೆ): ರಾ.10.05ಕ್ಕೆ.
ಸ್ಕ್ರೀನ್ 4	ಯುಐ (2024) (ಕ): ಬೆ.8.30ಕ್ಕೆ, ಬೆ.11.10ಕ್ಕೆ, ಮ.1.50ಕ್ಕೆ, ಸಂ.4.30.ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕಾಲ್ತುಳಿತದಲ್ಲಿ ಮಹಿಳೆ ಸಾವು ಪ್ರಕರಣ

ಸಂತ್ರಸ್ತ ಕುಟುಂಬಕ್ಕೆ 2 ಕೋಟಿ ರೂ. ಪರಿಹಾರ ಘೋಷಿಸಿದ ಪುಷ್ಪ 2 ತಂಡ



ಹೈದರಾಬಾದ್, ಡಿ.25– ಸಂಧ್ಯಾ ಚಿತ್ರಮಂದಿರದಲ್ಲಿ ಡಿ.4 ರಂದು ಚಿತ್ರ ಪ್ರದರ್ಶನದ ವೇಳೆ ನೂಕುನುಗ್ಗಲು ಉಂಟಾಗಿ ಮೃತಪಟ್ಟ ಮಹಿಳೆಯ ಕುಟುಂಬಕ್ಕೆ ನಟ ಅಲ್ಲು ಅರ್ಜುನ್, 'ಪುಷ್ಪ 2' ಚಿತ್ರದ ನಿರ್ದೇಶಕರು ಮತ್ತು ನಿರ್ಮಾಪಕರು ಬುಧವಾರ 2 ಕೋಟಿ ರೂಪಾಯಿ ಆರ್ಥಿಕ ನೆರವು ಘೋಷಿಸಿದ್ದಾರೆ.

ಈ ಮಧ್ಯೆ, ಸರ್ಕಾರ ಮತ್ತು ಚಿತ್ರರಂಗದ ನಡುವೆ ಆರೋಗ್ಯಕರ ಸಂಬಂಧ ಬೆಳೆಸಲು ನಿಯೋಗ ಗುರುವಾರ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರನ್ನು ಭೇಟಿ ಮಾಡಲಿದೆ ಎಂದು ತೆಲಂಗಾಣ ರಾಜ್ಯ ಚಲನಚಿತ್ರ ಅಭಿವೃದ್ಧಿ ನಿಗಮದ (ಎಫ್‌ಡಿಸಿ) ಅಧ್ಯಕ್ಷ ಮತ್ತು ನಿರ್ಮಾಪಕ ದಿಲ್ ರಾಜು ಹೇಳಿದ್ದಾರೆ.

ಕಾಲ್ತುಳಿತದಿಂದ ಗಂಭೀರವಾಗಿ ಗಾಯಗೊಂಡು ಬಾಲಕ ಚಿಕಿತ್ಸೆ ಪಡೆಯುತ್ತಿರುವ ಖಾಸಗಿ ಆಸ್ಪತ್ರೆಗೆ ಅಲ್ಲು ಅರ್ಜುನ್ ಅವರ ತಂದೆ ಮತ್ತು ಹಿರಿಯ ನಿರ್ಮಾಪಕ ಅಲ್ಲು ಅರವಿಂದ್, ದಿಲ್ ರಾಜು ಮತ್ತು ಇತರರು ಭೇಟಿ ನೀಡಿದ್ದಾರೆ.

ವೈದ್ಯರೊಂದಿಗೆ ಮಾತನಾಡಿದ ನಂತರ ಸುದ್ದಿಗಾರರಿಗೆ ಮಾಹಿತಿ ನೀಡಿದ ಅಲ್ಲು ಅರವಿಂದ್, ಬಾಲಕ ಚೇತರಿಸಿಕೊಳ್ಳುತ್ತಿದ್ದಾನೆ ಮತ್ತು ವೆಂಟಿಲೇಟರ್ ಸಹಾಯವಿಲ್ಲದೆ ಈಗ ಉಸಿರಾಡುತ್ತಿದ್ದಾನೆ. ಬಾಲಕ ಸಂಪೂರ್ಣವಾಗಿ ಚೇತರಿಸಿಕೊಳ್ಳುವ ವಿಶ್ವಾಸವನ್ನು ವೈದ್ಯರು ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದ್ದಾರೆ.

ಅಲ್ಲು ಅರ್ಜುನ್ (1 ಕೋಟಿ), ಪುಷ್ಪ ನಿರ್ಮಾಣ ಸಂಸ್ಥೆ ಮೈತ್ರಿ ಮೂವಿ ಮೇಕರ್ಸ್ (50 ಲಕ್ಷ), ಮತ್ತು ಚಿತ್ರದ ನಿರ್ದೇಶಕ ಸುಕುಮಾರ್ (50 ಲಕ್ಷ) ಸೇರಿ ಒಟ್ಟು 2 ಕೋಟಿ ರೂ. ಆರ್ಥಿಕ ನೆರವನ್ನು ಬಾಲಕನ ಕುಟುಂಬಕ್ಕೆ ನೀಡುವುದಾಗಿ ಘೋಷಿಸಿದ್ದಾರೆ. ಅಲ್ಲು ಅರವಿಂದ್ ಅವರು ಚೆಕ್‌ಗಳನ್ನು ದಿಲ್ ರಾಜು ಅವರಿಗೆ ಹಸ್ತಾಂತರಿಸಿದ್ದು, ಅವುಗಳನ್ನು ಬಾಲಕನ ಕುಟುಂಬಕ್ಕೆ ತಲುಪಿಸುವಂತೆ ವಿನಂತಿಸಿದ್ದಾರೆ.

ಡಿ.4ರಂದು ಹೈದರಾಬಾದ್‌ನ ಸಂಧ್ಯಾ ಥಿಯೇಟರ್‌ನಲ್ಲಿ 'ಪುಷ್ಪ 2' ಚಿತ್ರ ಪ್ರದರ್ಶನಗೊಂಡ ವೇಳೆ ಉಂಟಾದ ಕಾಲ್ತುಳಿತದಲ್ಲಿ 35 ವರ್ಷದ ಮಹಿಳೆಯೊಬ್ಬರು ಸಾವಿಗೀಡಾಗಿದ್ದರು ಮತ್ತು ಅವರ ಎಂಟು ವರ್ಷದ ಮಗ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು. ಘಟನೆ ನಂತರ, ಮೃತ ಮಹಿಳೆಯ ಕುಟುಂಬದ ದೂರಿನ ಆಧಾರದ ಮೇಲೆ ಚಿಕ್ಕಡಪಲ್ಲಿ ಪೊಲೀಸ್ ಠಾಣೆಯಲ್ಲಿ ಅಲ್ಲು ಅರ್ಜುನ್, ಅವರ ಭದ್ರತಾ ತಂಡ ಮತ್ತು ಥಿಯೇಟರ್ ಆಡಳಿತದ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್) ವಿವಿಧ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ರಾಜ್ಯದ ಬಾಲಭವನಗಳ ನೂರಾರು ಎಕರೆ ಭೂಮಿ ಒತ್ತುವರಿ

ಮೈಸೂರಲ್ಲಿ ರೈಲಿದೆ, ಟ್ರ್ಯಾಕೂ ಇದೆ. ಆದರೆ ಓಡಿಸುವವರಿಲ್ಲ!

> **"ರಾಜ್ಯದ ನಾನಾ ಜಿಲ್ಲೆಗಳಲ್ಲಿ ಬಾಲಭವನಕ್ಕೆ ಸೇರಿದ ನೂರಾರು ಎಕರೆ ಜಮೀನು ಇದೆ. ಸಿಬ್ಬಂದಿ ಕೊರತೆ ಮತ್ತಿತರ ಸಮಸ್ಯೆಗಳಿಂದ ಜಾಗವನ್ನು ಪರರು ಬಳಸುತ್ತಿದ್ದಾರೆ. ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಬಾಲಭವನಗಳ ಸ್ಥಿತಿ–ಗತಿಗಳನ್ನು ಪರಿಶೀಲಿಸಲಾಗುತ್ತಿದೆ. ನಮ್ಮ ಜಾಗಗಳನ್ನು ಪತ್ತೆ ಹಚ್ಚಿ ಈಗಾಗಲೇ ಕೆಲವರಿಗೆ ನೋಟೀಸ್ ನೀಡಿದ್ದೇವೆ. ಆ ಜಾಗಗಳಲ್ಲಿ ಬಾಲಭವನಗಳಿಗೆ ಪೂರಕವಾದ ಕ್ರಿಯಾಯೋಜನೆ ರೂಪಿಸಿ, ಮಕ್ಕಳ ಚಟುವಟಿಕೆಗಳಿಗೆ ಬೇಕಾದ ಸೌಲಭ್ಯ ಕಲ್ಪಿಸಲಾಗುವುದು. ಬಾಲಭವನದ ಒಂದಿಂಚೂ ಭೂಮಿಯನ್ನೂ ಅನ್ಯರಿಗೆ ಬಿಡುವುದಿಲ್ಲ.** –ಬಿ.ಆರ್.ನಾಯ್ಡು, ಜವಾಹರ ಬಾಲಭವನ ಅಧ್ಯಕ್ಷ.



ಬೆಂಗಳೂರು, ಡಿ.25–ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಕ್ಕಳ ಚಟುವಟಿಕೆಗಳಿಗೆಂದೇ ಮೀಸಲಿಟ್ಟಿರುವ ಬಾಲಭವನದ ನೂರಾರು ಎಕರೆ ಭೂಮಿ ಪರರ ಪಾಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯ, ನಿರ್ವಹಣೆ ಕೊರತೆಯಿಂದ ಮನಸ್ಸೋ ಇಚ್ಛೆ ಒತ್ತುವರಿ ನಡೆದಿದೆ. ಭೂಮಿಯ ರಕ್ಷಣೆಗೆ ಬಾಲಭವನ ತಡವಾಗಿ ಎಚ್ಚೆತ್ತುಕೊಂಡಿದ್ದು, ಒತ್ತುವರಿದಾರರಿಗೆ ನೋಟಿಸ್ ನೀಡಲು ಮುಂದಾಗಿದೆ.

ರಾಜ್ಯದ 80 ಸ್ಥಳಗಳಲ್ಲಿ ಬಾಲಭವನ ನಿರ್ಮಾಣಕ್ಕೆ ಜಾಗ ಮೀಸಲಿಡಲಾಗಿದೆ. ಆದರೆ, ಬೆಂಗಳೂರು ಸೇರಿದಂತೆ ಸಾಕಷ್ಟು ಜಿಲ್ಲೆಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಒತ್ತುವರಿಯಾಗಿದೆ. ಬಾಲಭವನಗಳ ಬಳಕೆ ಮಕ್ಕಳ ಹಕ್ಕು. ಆದರೆ, ಮಕ್ಕಳು ಪ್ರಶ್ನಿಸುವುದಿಲ್ಲ, ಮಕ್ಕಳಿಗೆ ಧ್ವನಿಯಿಲ್ಲ ಎಂದರಿತ ಕಬಳಿಕೆದಾರರು ಮಕ್ಕಳ ಹಕ್ಕುಗಳನ್ನೇ ಕಸಿದಿದ್ದಾರೆ.

ಬಾಲಭವನಗಳು ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಬರುತ್ತವೆ. ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿ ಬೆಂಗಳೂರು ಬಾಲಭವನದ ಸೊಸೈಟಿ ಅಡಿ ರಾಜ್ಯದ ಎಲ್ಲಾ ಬಾಲಭವನಗಳು ಬರುತ್ತವೆ. 16 ವರ್ಷ ವಯಸ್ಸಿನ ಮಕ್ಕಳ ಸೃಜನಶೀಲ ಅನ್ವೇಷಣೆಗಳಿಗೆ ಅವಕಾಶಗಳನ್ನು ಒದಗಿಸುವ ಉದ್ದೇಶದಿಂದ ಬಾಲಭವನಗಳನ್ನು ನಿರ್ಮಿಸಲಾಗಿದೆ.

ಪರರ ಪಾಲಾದ 200 ಎಕರೆ: ಅರ್ಧ ಎಕರೆಯಿಂದ ಸುಮಾರು 12 ಎಕರೆಯವರೆಗೆ ರಾಜ್ಯಾದ್ಯಂತ 80 ಕಡೆ ಬಾಲಭವನಗಳಿಗೆ ಭೂಮಿ ನೀಡಲಾಗಿದೆ. ಬರೋಬ್ಬರಿ ಸುಮಾರು 200 ಎಕರೆಗೂ ಹೆಚ್ಚು ಭೂಮಿಯಿದೆ. 80 ಕಡೆಗಳಲ್ಲಿ ಬಾಲಭವನಗಳಿಗೆ ಭೂಮಿ ನೀಡಿದ್ದರೂ ಸದ್ಯ 40 ಕಡೆಗಳಲ್ಲಿ ಮಾತ್ರ ಕಟ್ಟಡ, ಉದ್ಯಾನಗಳನ್ನು ನಿರ್ಮಿಸಲಾಗಿದೆ. ಆದರೆ ಕ್ರಿಯಾಶೀಲವಾಗಿರುವುದು ಕೇವಲ ಬೆಂಗಳೂರಿನ ಬಾಲಭವನ ಮಾತ್ರ. ಉಳಿದ ಕಡೆ ಉದ್ಯಾನಗಳಿದ್ದರೂ ವಾರಸುದಾರರೂ ಇಲ್ಲದೆ, ಇತ್ತ ನಿರ್ವಹಣೆಯೂ ಇಲ್ಲದೆ, ಬೇಕಾದಂತೆ ಒತ್ತುವರಿ ನಡೆದು ಹೋಗಿದೆ. ಕೆಲವೆಡೆ ಬಾಲಭವನದ ಜಾಗಕ್ಕೆ ಬೇಲಿ ಇದ್ದರೂ ಅದನ್ನು ಕಿತ್ತು ವ್ಯಾಪಾರಿ ಮಳಿಗೆಗಳನ್ನು ತೆರೆಯುವುದು ಇತ್ಯಾದಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ. ಈಗ ಇವರಿಗೆ ನೋಟಿಸ್ ನೀಡಲು ಬಾಲಭವನ ಮುಂದಾಗಿದೆ. ಮೈಸೂರು, ಮಂಗಳೂರು, ದಾವಣಗೆರೆ, ಶಿವಮೊಗ್ಗ, ಹಾವೇರಿ ಮತ್ತಿತರ ಜಿಲ್ಲೆಗಳ ಬಾಲಭವನಗಳಲ್ಲಿ ರೈಲು ಇದೆ, ಟ್ರ್ಯಾಕೂ ಇದೆ. ಆದರೆ ಓಡುವುದಿಲ್ಲ. ಕೆಲವೆಡೆ ಓಡಿಸುವವರಿಲ್ಲ. ಮತ್ತೆ ಕೆಲವೆಡೆ ದುರಸ್ತಿಯಲ್ಲಿದೆ ಎನ್ನುತ್ತಾರೆ. ಕಲಬುರಗಿಯಲ್ಲಿ 50 ಸಾವಿರ ಚದರಡಿ ಜಾಗ ಫೈವ್ ಸ್ಟಾರ್ ಹೋಟೆಲ್ ಒಂದರ ಬಳಿಯೇ ಇದೆ. ಆದರೆ ಅದು ಕೂಡ ಪರರು ಬಳಸುತ್ತಿದ್ದರೂ ಕೇಳುವವರಿಲ್ಲದಂತಾಗಿದೆ. ಬೆಂಗಳೂರಿನ ಜೀವನ್ ಭೀಮಾನಗರದಲ್ಲಿ ಸುಮಾರು ಅರ್ಧ ಎಕರೆ ಜಾಗದಲ್ಲಿ ಉದ್ಯಾನ ನಿರ್ಮಿಸಲಾಗಿದೆ. ಇದರ ನೀರಿನ ಬಿಲ್, ವಿದ್ಯುತ್ ಬಿಲ್ ಬಾಲಭವನದ ಹೆಸರಿನಲ್ಲಿವೆ. ಆದರೆ ಜಾಗವನ್ನು ಅನ್ಯರು ಬಳಸುತ್ತಿದ್ದಾರೆ. ಎಚ್‌ಎಸ್‌ಆರ್ ಬಡಾವಣೆಯಲ್ಲಿರುವ ಜಾಗದ ಸ್ಥಿತಿಯೂ ಇದಕ್ಕೆ ಹೊರತಾಗಿಲ್ಲ. ರಾಜ್ಯದ ಬಹುತೇಕ ಬಾಲಭವನಗಳ ಸ್ಥಿತಿ ಇದಾಗಿದೆ.

ಚುನಾವಣಾ ನಿಯಮ ತಿದ್ದುಪಡಿ: ಆಯೋಗದ ಕ್ರಮ ಪ್ರಶ್ನಿಸಿ ಸುಪ್ರೀಂಕೋರ್ಟ್ ಮೊರೆ ಹೋದ ಕಾಂಗ್ರೆಸ್

ನವದೆಹಲಿ, ಡಿ.25– ಚುನಾವಣೆ ನಿಯಮಗಳ ನಡವಳಿಕೆ–1961ಕ್ಕೆ ತಿದ್ದುಪಡಿ ಮಾಡಿರುವ ಕೇಂದ್ರ ಸರಕಾರ ಹಾಗೂ ಚುನಾವಣಾ ಆಯೋಗದ ಕ್ರಮ ಪ್ರಶ್ನಿಸಿ ಕಾಂಗ್ರೆಸ್ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ.

ವಿದ್ಯುನ್ಮಾನ ದಾಖಲೆಗಳ ದುರ್ಬಳಕೆ ತಡೆಯಲು ಇತ್ತೀಚೆಗೆ 1961ರ ಚುನಾವಣಾ ನಿಯಮಗಳಿಗೆ ಮಾಡಲಾದ ತಿದ್ದುಪಡಿ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿರುವ ಕಾಂಗ್ರೆಸ್, ಚುನಾವಣಾ ಆಯೋಗದ ಸಮಗ್ರತೆ ಹಾಗೂ ಪಾರದರ್ಶಕತೆಯನ್ನು ನ್ಯಾಯಾಲಯ ಕಾಪಾಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದೆ.

ಸಿಸಿಟಿವಿ ದೃಶ್ಯ, ವೆಬ್‌ಕ್ಯಾಸ್ಟಿಂಗ್ ದೃಶ್ಯಾವಳಿ, ಅಭ್ಯರ್ಥಿಗಳ ವಿಡಿಯೋ ರೆಕಾರ್ಡಿಂಗ್ ಸೇರಿದಂತೆ ಕೆಲವು ವಿದ್ಯುನ್ಮಾನ ದಾಖಲೆಗಳ ದುರ್ಬಳಕೆ ತಡೆಯಲು ಚುನಾವಣಾ ನಿಯಮಗಳ ನಡಾವಳಿ ನಿಯಮ 93ಕ್ಕೆ ತಿದ್ದುಪಡಿ ತರಲಾಗಿದೆ. ಚುನಾವಣೆಗೆ ಸಂಬಂಧಿಸಿದ ಯಾವುದೇ ಇ–ದಾಖಲೆಗಳನ್ನು ಸಾರ್ವಜನಿಕ ಪರಾಮರ್ಶೆಯಿಂದ ನಿರ್ಬಂಧಿಸಲಾಗಿದೆ.

ದೇಶದ ಚುನಾವಣಾ ವ್ಯವಸ್ಥೆಯಲ್ಲಿನ ಪಾರದರ್ಶಕತೆ ಕುಸಿಯುತ್ತಿದೆ. ಆಯೋಗದ ಸಮಗ್ರತೆ ವಿಷಯದಲ್ಲಿ ರಾಜಿ ಮಾಡಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಆಯೋಗದ ಸಮಗ್ರತೆ ಹಾಗೂ ಪಾರದರ್ಶಕತೆ ಪುನರ್ ಸ್ಥಾಪಿಸಲು ಸುಪ್ರೀಂ ಕೋರ್ಟ್ ಮುಂದಾಗಲಿದೆ ಎಂಬ ನಂಬಿಕೆಯಿದೆ ಎಂದು ಹೇಳಿದರು.

ಮುನಿರತ್ನ ಮೇಲೆ ಮೊಟ್ಟೆ ಎಸೆತ: ಸಂಸದ ಡಾ. ಸಿ.ಎನ್.ಮಂಜುನಾಥ್, ಪ್ರಹ್ಲಾದ್ ಜೋಷಿ, ವಿಜಯೇಂದ್ರ ಖಂಡನೆ

ಬೆಂಗಳೂರು, ಡಿ.25– ಬಿಜೆಪಿ ಶಾಸಕ ಮುನಿರತ್ನ ಅವರ ಮೇಲೆ ಮೊಟ್ಟೆ ಎಸೆತ ಪ್ರಕರಣಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಸಂಸದ ಡಾ. ಸಿ.ಎನ್.ಮಂಜುನಾಥ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಖಂಡನೆ ವ್ಯಕ್ತಪಡಿಸಿದ್ದಾರೆ.

ಮುನಿರತ್ನ ಅವರ ಆರೋಗ್ಯದ ಬಗ್ಗೆ ವಿಚಾರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಾ. ಮಂಜುನಾಥ್ ಅವರು, ಇದ್ದಕ್ಕಿದ್ದಂತೆ ನನ್ನ ತಲೆ ಮೇಲೆ ಜೋರಾದ ಪೆಟ್ಟು ಬಿತ್ತು. ತಲೆಯಲ್ಲಿ ಉರಿ ಆಯ್ತು, ಕೂದಲು ಕೂಡ ಕಿತ್ತು ಬಂತು. ತಲೆ ಸುತ್ತು ಮತ್ತು ವಾಂತಿ ಬಂದಂತೆ ಆಗುತ್ತಿದೆ ಎಂದು ಶಾಸಕ ಮುನಿರತ್ನ ಅವರು ಹೇಳಿದ್ದಾರೆ.

ತಲೆಗೆ ಪೆಟ್ಟು ಬಿದ್ದಂತಹ ಸಂದರ್ಭದಲ್ಲಿ ವಾಂತಿ ಬಂದಂತಾದರೆ ಸಿ.ಟಿ ಸ್ಕ್ಯಾನ್ ಮಾಡಿಸಬೇಕಾಗುತ್ತದೆ. ಅಕಸ್ಮಾತ್ ಮಿದುಳು ಒಳಗಡೆ ಏನಾದರು ತೊಂದರೆ ಆಗಿದೆಯೇ ಎಂಬುದನ್ನು ತಿಳಿದುಕೊಳ್ಳಬೇಕಾಗುತ್ತದೆ. ವೈದ್ಯರ ಜೊತೆ ಮಾತನಾಡಿದ್ದೇನೆ. ತಲೆಗೆ ಪೆಟ್ಟು ಬಿದ್ದ ಜಾಗದಲ್ಲಿ ಸ್ವಲ್ಪ ಕೂದಲು ಬರ್ನಿಂಗ್ ಆಗಿದೆ ಎಂದು ತಿಳಿಸಿದರು.

ಈ ರೀತಿಯ ವ್ಯವಸ್ಥೆ ಆಗಬಾರದು. ಈ ಬಾರಿ 75ನೇ ವರ್ಷದ ಸಂವಿಧಾನ ದಿನಾಚರಣೆ ಮಾಡಿದ್ದೇವೆ. ಸಂವಿಧಾನಕ್ಕೆ ನಾವು ಬೆಲೆ ಕೊಡಬೇಕು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಆರೋಗ್ಯಕರ ಸ್ಪರ್ಧೆ ಇರಬೇಕು. ಚುನಾವಣೆಯಲ್ಲಿ ಒಬ್ಬರು ಗೆಲ್ಲುವುದು ಅಥವಾ ಸೋಲುವುದು ಸ್ವಾಭಾವಿಕ. ಆದರೆ ನಿರಂತರವಾಗಿ ಹೀಗೆ ಮಾಡುವುದು ಖಂಡನೀಯ ಎಂದು ಮುನಿರತ್ನ ಮೇಲಿನ ದಾಳಿಗೆ ಅಸಮಾಧಾನ ವ್ಯಕ್ತಪಡಿಸಿದರು.

ಪ್ರಹ್ಲಾದ್ ಜೋಶಿ ವಾಗ್ದಾಳಿ: ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆದ ಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಾಗ್ದಾಳಿ ನಡೆಸಿದ್ದಾರೆ. ಮುನಿರತ್ನ ವಿರುದ್ಧ ಆರೋಪ ಇದೆ. ಕಾನೂನು ಕ್ರಮಗಳು ನಡೆಯುತ್ತಿವೆ. ಅವರಿಗೆ ನ್ಯಾಯಾಲಯ ಜಾಮೀನು ನೀಡಿದೆ. ಆದರೆ ಅವರ ಮೇಲೆ ಮೊಟ್ಟೆ ಎಸೆಯಲಾಗಿದೆ. ಕಾನೂನು ಕೈಗೆ ತೆಗೆದುಕೊಳ್ಳುವುದು ಸರಿಯಲ್ಲ ಎಂದರು.

ಈ ರೀತಿಯ ನಡವಳಿಕೆ ಪ್ರಜಾಪ್ರಭುತ್ವದಲ್ಲಿ ಒಪ್ಪಲು ಸಾಧ್ಯವಿಲ್ಲ. ಇಲ್ಲಿ ಸಂವಿಧಾನ ಪ್ರಕಾರವಾಗಿ ಕೆಲಸ ಮಾಡಬೇಕು ಎಂದು ಪ್ರಹ್ಲಾದ್ ಜೋಶಿ ರಾಜ್ಯ ಸರ್ಕಾರಕ್ಕೆ ಕಿವಿ ಹಿಂಡಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಧಿಕಾರ ಇದೆ ಎಂದು ಜನ ಪ್ರತಿನಿಧಿಗಳ ಮೇಲೆ ದಬ್ಬಾಳಿಕೆ ಮಾಡುವುದು, ಅವಮಾನ ಮಾಡುವುದು ಖಂಡನೀಯ ಎಂದರು.

150 ಅಡಿ ಆಳದ ಕಂದಕಕ್ಕೆ ಸೇನಾ ವಾಹನ ಪಲ್ಟಿ: ರಾಜ್ಯದ ಮೂವರು ಸೇರಿ ಐವರು ಯೋಧರು ಹುತಾತ್ಮ



ಜಮ್ಮು, ಡಿ.25– ಜಮ್ಮು–ಕಾಶ್ಮೀರದ ಪೂಂಚ್ ಜಿಲ್ಲೆಯ ಮೆಂಧರ್‌ನ ಬಲ್ನೋಯಿ ಪ್ರದೇಶದಲ್ಲಿ ಸೇನಾ ವಾಹನ 150 ಅಡಿ ಕಂದಕಕ್ಕೆ ಉರುಳಿ ಕರ್ನಾಟಕದ ಮೂವರು ಸೇರಿದಂತೆ ಐವರು ಯೋಧರು ಹುತಾತ್ಮರಾಗಿದ್ದಾರೆ. ದುರಂತದಲ್ಲಿ ಬಾಗಲಕೋಟೆ ಜಿಲ್ಲೆಯ ರಬಕವಿಬನಹಟ್ಟಿ ತಾಲೂಕಿನ ಮಹಾಲಿಂಗಪುರದ ಮಹೇಶ್ ನಾಗಪ್ಪ ಮಾರಿಗೊಂಡ (25), ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ಬಿಜಾಡಿಯ ಯೋಧ ಅನೂಪ್(35), ಬೆಳಗಾವಿ ಜಿಲ್ಲೆಯ ಸಾಂಬ್ರಾ ಗ್ರಾಮದ ಸುಬೇದಾರ್ ದಯಾನಂದ ತಿರಕಣ್ಣನವರ(45) ಹುತಾತ್ಮರಾದವರು.

11 ಮರಾಠಾ ಲೈಟ್ ಇನ್‌ಫೆಂಟ್ರಿಯ ಸೇನಾ ವಾಹನವು ಡಿ.23ರ ಸಂಜೆ 5.30ರ ಸುಮಾರಿಗೆ ನಿಲಂ ಪ್ರಧಾನ ಕಚೇರಿಯಿಂದ ಎಲ್‌ಒಸಿ ಮೂಲಕ ಪೂಂಚ್ ಜಿಲ್ಲೆಯ ಬನೋಯ್ ಘರೋವಾ ಪೋಸ್ಟ್‌ಗೆ ತೆರಳುತ್ತಿತ್ತು. ಮಾರ್ಗ ಮಧ್ಯೆ ಘರೋವಾ ಪ್ರದೇಶದಲ್ಲಿ ವಾಹನ ಚಾಲಕನ ನಿಯಂತ್ರಣ ತಪ್ಪಿ ಸುಮಾರು 150 ಅಡಿ ಆಳದ ಕಂದಕಕ್ಕೆ ಬಿದ್ದಿತ್ತು. ಘಟನೆಯಲ್ಲಿ ಕರ್ನಾಟಕದ ಮೂವರು ಸೇರಿದಂತೆ ಒಟ್ಟು ಐವರು ಹುತಾತ್ಮರಾಗಿದ್ದಾರೆ. 12 ಸೈನಿಕರಿಗೆ ಗಂಭೀರ ಗಾಯಗಳಾಗಿವೆ. ಸೇನಾ ವಾಹನವು ಗಡಿ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿಯ ಪೋಸ್ಟ್‌ಗೆ ತೆರಳುತ್ತಿದ್ದಾಗ ಅಪಘಾತ ಸಂಭವಿಸಿದೆ. ಗಾಯಗೊಂಡಿರುವ ಯೋಧರಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದ್ದು, ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸೇರಿ ಹಲವು ನಾಯಕರು ಹುತಾತ್ಮ ಯೋಧರಿಗೆ ಸಂತಾಪ ಸೂಚಿಸಿದ್ದಾರೆ.

4,500 ಕೋಟಿ ರೂ. ಮೌಲ್ಯದ ವಹಿವಾಟಿನ ಮಾಹಿತಿ ನೀಡದೇ ನಿಯಮ ಉಲ್ಲಂಘನೆ

ಮೈಸೂರು ಉತ್ತರ ಸೇರಿ ರಾಜ್ಯದ ನಾಲ್ಕು ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ಐಟಿ ಶೋಧ

ಮೈಸೂರು, ಡಿ. 25(ಆರ್‌ಕೆ)–ಆಸ್ತಿಗಳ ನೋಂದಣಿ ಮಾಡಿದ 3 ವರ್ಷಗಳ ಮಾಹಿತಿ ನೀಡದೇ ನಿಯಮ ಉಲ್ಲಂಘಿಸಿರುವ ಮೈಸೂರಿನ ಉತ್ತರ ಸೇರಿದಂತೆ 4 ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ಆದಾಯ ತೆರಿಗೆ ಇಲಾಖೆಯ ಇಂಟೆಲಿಜೆನ್ಸ್ ಮತ್ತು ಅಪರಾಧ ತನಿಖಾ ನಿರ್ದೇಶನಾಲಯದ ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ.

ಮೈಸೂರಿನ ನಜರ್‌ಬಾದ್‌ನ ಮಿನಿ ವಿಧಾನಸೌಧದಲ್ಲಿರುವ ಉಪನೋಂದಣಾಧಿಕಾರಿ (ಉತ್ತರ) ಕಚೇರಿ, ಬೆಂಗಳೂರಿನ ಬಾಣಸವಾಡಿ, ಕೆ.ಆರ್.ಪುರಂ ಹಾಗೂ ವರ್ತೂರು ಉಪನೋಂದಣಾಧಿಕಾರಿ ಕಚೇರಿಗಳಲ್ಲಿ 2021–22, 2022–23 ಹಾಗೂ 2023–24ನೇ ಸಾಲಿನಲ್ಲಿ ನಡೆದ 4,500 ಕೋಟಿ ರೂ. ಮೌಲ್ಯದ ವಹಿವಾಟಿನ ಬಗ್ಗೆ ಆದಾಯ ತೆರಿಗೆ ಇಲಾಖೆಗೆ ವರದಿ ಸಲ್ಲಿಸಿಲ್ಲ ಎಂಬುದು ಬಹಿರಂಗವಾಗಿದೆ.


ಮೈಸೂರಿನ ಮಿನಿ ವಿಧಾನಸೌಧದಲ್ಲಿರುವ ಉಪನೋಂದಣಾಧಿಕಾರಿ (ಉತ್ತರ) ಕಚೇರಿ.

ಇತ್ತೀಚೆಗೆ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳಿಗೆ ತೆರಿಗೆ ಒಳಪಡುವ 4,500 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ನೋಂದಣಿ ಮಾಡಿದ್ದರೂ, ಅದರ ಮಾಹಿತಿಯನ್ನು ಆದಾಯ ತೆರಿಗೆ ಅಧಿಕಾರಿಗಳು ಪತ್ತೆ ಮಾಡಿದ್ದಾರೆ. 2021ರಿಂದ 2024ರವರೆಗೆ ಈ ನಾಲ್ಕೂ ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ಒಟ್ಟು 27,552 ಕೋಟಿ ರೂ. ಬೆಲೆಬಾಳುವ ಆಸ್ತಿಗಳ ವಹಿವಾಟು ನಡೆದಿದ್ದು, ಆ ಪೈಕಿ 4,500 ಕೋಟಿ ರೂ. ಮೌಲ್ಯದ ವಹಿವಾಟಿನ ಬಗ್ಗೆ ಆದಾಯ ತೆರಿಗೆ ಇಲಾಖೆಗೆ ವರದಿ ನೀಡಿಲ್ಲ ಎಂಬುದು ಪರಿಶೀಲನೆ ವೇಳೆ ಕಂಡುಬಂದಿದೆ. ಸ್ವತ್ತುಗಳ ಖರೀದಿದಾರರು ಮತ್ತು ಮಾರಾಟ ಮಾಡುವವರಿಂದ ಪಾನ್ ನಂಬರ್ ಹಾಗೂ ಇತರ ಅಗತ್ಯ ದಾಖಲಾತಿಗಳನ್ನು ಪಡೆಯದಿರುವುದು, ಅವರ ಆದಾಯ ಮೂಲಗಳ ಬಗ್ಗೆ ಮಾಹಿತಿ ದೊರೆಯದಂತೆ ಮಾಡಿರುವುದು ತಪಾಸಣೆ ವೇಳೆ ಕಂಡುಬಂದಿದೆ ಎಂದು ಆದಾಯ ತೆರಿಗೆ ಇಲಾಖೆ ಮೂಲಗಳು ತಿಳಿಸಿವೆ.

ಅತೀ ಹೆಚ್ಚು ಮೌಲ್ಯದ ನೂರಾರು ಆಸ್ತಿಗಳ ಸೇಲ್ ಡೀಡ್ ನೋಂದಣಿ ಮಾಡುವಾಗ ಅನುಸರಿಸಬೇಕಾದ ನಿಯಮಗಳನ್ನು ಪಾಲಿಸದ ಕಾರಣ ಆದಾಯ ತೆರಿಗೆ ಇಲಾಖೆಗೆ ತೆರಿಗೆ ವಸೂಲಾತಿಯಲ್ಲಿ ನಷ್ಟ ಉಂಟಾಗಿದೆ ಎಂದು ಅಧಿಕಾರಿಗಳು ತಪಾಸಣೆಯಲ್ಲಿ ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತಂತೆ ಪ್ರತಿಕ್ರಿಯೆ ಪಡೆಯಲು 'ಮೈಸೂರು ಮಿತ್ರ' ಪ್ರಯತ್ನಿಸಿದರೂ ಹಿಂದಿನ ಮೈಸೂರಿನ ಉತ್ತರ ಉಪನೋಂದಣಾಧಿಕಾರಿ ಕಿರಣ್ ಸಂಪರ್ಕಕ್ಕೆ ಸಿಗಲಿಲ್ಲ.

ಅರಮನೆ ವೇದಿಕೆಯಲ್ಲಿ ಸೂಸಿದ ಸಂಗೀತದ ಹೊನಲು

ರಿಯಾಲಿಟಿ ಶೋ ಖ್ಯಾತಿಯ ಗಾಯಕರ ಗಾನ ಮಾಧುರ್ಯಕ್ಕೆ ಮನಸೋತ ಪ್ರೇಕ್ಷಕರು

ಫಲಪುಷ್ಪ ಪ್ರದರ್ಶನ ಪ್ರಯುಕ್ತದ ಸಾಂಸ್ಕೃತಿಕ ಸಂಭ್ರಮಕ್ಕೆ ತೆರೆ





ಅರಮನೆ ವೇದಿಕೆಯಲ್ಲಿ ಬುಧವಾರ ಸನೀಲ್ ಗುಜಗೊಂಡ್ ಮತ್ತು ಐಶ್ವರ್ಯ ರಂಗರಾಜನ್ ಗಾಯನ ಸಾದರಪಡಿಸಿದ ಕ್ಷಣ. ಬಾಲ ಪ್ರತಿಭೆ ಜ್ಞಾನ ಗುರುರಾಜ್ ಗಾನ ಮೋಡಿ (ಮಧ್ಯದ ಚಿತ್ರ). ಹಾಗೂ ದರ್ಶನ್ ನಾರಾಯಣ್ ಮತ್ತು ವಸುಶ್ರೀ ಹಳೆಮನೆ (ಕೊನೆ ಚಿತ್ರ) ಗಾಯನವೊಂದನ್ನು ಪ್ರಸ್ತುತಪಡಿಸುತ್ತಿರುವುದನ್ನು ಕಾಣಬಹುದು.



ಅರಮನೆ ವೇದಿಕೆಯಲ್ಲಿ ಬುಧವಾರ ಪ್ರೊ.ಸಿ.ಎ.ಶ್ರೀಧರ ಹಾಗೂ ವಿದ್ವಾನ್ ಸಿ.ಎಸ್.ಕೇಶವಚಂದ್ರ ಅವರ ಕರ್ನಾಟಕ ಶಾಸ್ತ್ರೀಯ ದ್ವಂದ್ವ ವೇಣುವಾದನ ನಡೆಯಿತು.



ಮೈಸೂರು ಅರಮನೆ ಆವರಣದಲ್ಲಿ ಫಲಪುಷ್ಪ ಪ್ರದರ್ಶನವನ್ನು ಭಾರೀ ಸಂಖ್ಯೆಯ ಪ್ರವಾಸಿಗರು ವೀಕ್ಷಿಸಿದರು.

ಮೈಸೂರು,ಡಿ.25(ಪಿಎಂ)– ಜೀ ಕನ್ನಡ ರಿಯಾಲಿಟಿ ಶೋ ಖ್ಯಾತಿಯ ಗಾಯಕರ ಸಿನಿಮಾ, ಜನಪದ ಗೀತೆಗಳ ಸಂಗೀತದ ಅಲೆ... ಕರ್ನಾಟಕ ಶಾಸ್ತ್ರೀಯ ದ್ವಂದ್ವ ವೇಣುವಾದನದ ನಾದದ ಸ್ವರತರಂಗ... ಶಾಸ್ತ್ರೀಯ ಸಂಗೀತದ ರಸಧಾರೆ... ಇಂತಹ ಸಾಂಸ್ಕೃತಿಕ ಲೋಕದಲ್ಲಿ ತೇಲಾಡಿದ ಸಭಿಕರು ಮನಸೋತು ಸಂಭ್ರಮಿಸಿದರು. ಆ ಮೂಲಕ ಐದು ದಿನಗಳ ಸಾಂಸ್ಕೃತಿಕ ಸಡಗರಕ್ಕೆ ತೆರೆ ಬಿದ್ದಿತು.

ಅರಮನೆ ಮಂಡಳಿ ವತಿಯಿಂದ ಹಮ್ಮಿಕೊಂಡಿರುವ ಫಲಪುಷ್ಪ ಪ್ರದರ್ಶನದ ಪ್ರಯುಕ್ತ ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಅಂತೆಯೇ ಐದನೇ ಹಾಗೂ ಕೊನೆ ದಿನವಾದ ಬುಧವಾರ ಕಲಾ ಲೋಕವೊಂದು ಅನಾವರಣಗೊಂಡು ಸಭಿಕರ ಮೋಡಿ ಮಾಡಿತು.

ಜೀ ಕನ್ನಡ ರಿಯಾಲಿಟಿ ಶೋ ಖ್ಯಾತಿಯ ಗಾಯಕರಾದ ದರ್ಶನ್ ನಾರಾಯಣ್, ಐಶ್ವರ್ಯ ರಂಗರಾಜನ್, ಸನೀಲ್‌ಗುಜಗೊಂಡ್, ವಸುಶ್ರೀ ಹಳೆಮನೆ ಮತ್ತು ಜ್ಞಾನ ಗುರುರಾಜ್ (ಬಾಲ ಪ್ರತಿಭೆ) ಅವರ ಕಂಠಸಿರಿಯಲ್ಲಿ ಹೊಮ್ಮಿದ ಹಾಡುಗಳು ಶ್ರೋತೃಗಳನ್ನು ಸಂಗೀತದ ಅಲೆಯಲ್ಲಿ ಸಂಭ್ರಮಿಸುವಂತೆ ಮಾಡಿತು.

'ಗಜವದನ ಹೇರಂಬಾ...' ಗೀತೆಯನ್ನು ದರ್ಶನ್ ನಾರಾಯಣ್ ಸಾದರಪಡಿಸಿ ಸಭಿಕರಲ್ಲಿ ಭಕ್ತಿಭಾವ ಮೂಡಿಸಿದರು. 'ಸರಿಗಮ ಪದನಿ ಸಾವಿರದ ಶರಣೂ... ಗಾನಯೋಗಿ ಗುರುವೆ...' ಗೀತೆಯನ್ನು ಬಾಲ ಪ್ರತಿಭೆ ಜ್ಞಾನ ಗುರುರಾಜ್ ಪ್ರಸ್ತುತಪಡಿಸಿ, ಗಾನಯೋಗಿ ಪಂಚಾಕ್ಷರ ಗವಾಯಿಯವರನ್ನು ಸ್ಮರಿಸಿದಳು. ಈ ಪುಟಾಣಿಯು ಯಾವುದೇ ಸಭಾ ಕಂಪನವಿಲ್ಲದೇ ಸಂಗೀತದ ಇಂಪಿನ ಕಂಪನ ಉಂಟು ಮಾಡಿ ಸಭಿಕರಿಂದ ಅಭಿಮಾನದ ಚಪ್ಪಾಳೆ ಗಿಟ್ಟಿಸಿತು. 'ಮುಕುಂದ ಮುರಾರಿ' ಚಿತ್ರದ 'ನೀನೇ ರಾಮ ನೀನೇ ಶಾಮ...' ಗೀತೆಯನ್ನು ಸುಶ್ರಾವ್ಯವಾಗಿ ಹಾಡುವ ಮೂಲಕ ಸನೀಲ್ ಗುಜಗೊಂಡ್, ಶ್ರೋತೃಗಳ ಅಭಿಮಾನದ ಚಪ್ಪಾಳೆಗೆ ಪಾತ್ರರಾದರು.

ಬಳಿಕ ಐಶ್ವರ್ಯ ರಂಗರಾಜನ್ ಅವರ ಗಾನ ಮಾಧುರ್ಯಕ್ಕೆ ವೇದಿಕೆ ತೆರೆದುಕೊಂಡಿತು. ತಾವೇ ಹಾಡಿರುವ 'ಕಬ್ಜ' ಸಿನಿಮಾದ 'ನಮಾಮಿ... ನಮಾಮಿ...' ಗೀತೆಯನ್ನು ಸಾದರಪಡಿಸಿ ಸಭಿಕರಿಂದ ಚಪ್ಪಾಳೆ ಗಿಟ್ಟಿಸಿದರು. 'ಎಲ್ಲಿ ಕಾಣೆ ಎಲ್ಲಿ ಕಾಣೆನಾ ಯಲ್ಲವನಂತಕಿನ ಎಲ್ಲಿ ಕಾಣೆನೋ ಉದೋ ಉದೋ...' ಜನಪದ ಗೀತೆಯ ಮೂಲಕ ಯಲ್ಲವನ ಸ್ಮರಿಸಿದ ವಸುಶ್ರೀ ಹಳೆಮನೆ ಭಕ್ತಿಯ ಪರಾಕಾಷ್ಠೆ ಮೆರೆದರು. ಅವರ ಲಘು ನೃತ್ಯ ಹಾಗೂ ಗಾನ ಮೋಡಿಗೆ ಮರುಳಾದ ಶ್ರೋತೃಗಳು ತಾವು ಹಾಡಿ ಕೈಗಳನ್ನು ಎತ್ತಿ ಚಪ್ಪಾಳೆ ತಟ್ಟಿ ಸಂಭ್ರಮಿಸಿದರು.

'ಪಲ್ಲವಿ ಅನುಪಲ್ಲವಿ' ಸಿನಿಮಾದ 'ನಗುವ ನಯನ ಮಧುರ ಮೌನ' ಗೀತೆಯನ್ನು ಸನೀಲ್‌ಗುಜಗೊಂಡ್ ಮತ್ತು ಐಶ್ವರ್ಯ ರಂಗರಾಜನ್ ಸಾದರಪಡಿಸಿ ಮಧುರವಾದ ಸಂಗೀತದ ಅಲೆಗಳನ್ನು ಹೊಮ್ಮಿಸಿದರು. ಈ ಗಾನ ಮೋಡಿಗೆ ಸಭಿಕರು ಮನಸೋತು ಚಪ್ಪಾಳೆಯ ಮಳೆ ಸುರಿಸಿದರು. ಇನ್ನು ಅನೇಕ ಗೀತೆಗಳೊಂದಿಗೆ ಈ ತಂಡವು ಶ್ರೋತೃಗಳನ್ನು ರಂಜಿಸಿತು.

ಇದಕ್ಕೂ ಮುನ್ನ ಸಂಗೀತ ವಿದ್ವಾನ್ ಪ್ರೊ.ಸಿ.ಎ.ಶ್ರೀಧರ ಹಾಗೂ ಅವರ ಪುತ್ರ ವಿದ್ವಾನ್ ಸಿ.ಎಸ್.ಕೇಶವಚಂದ್ರ ಅವರ ಕರ್ನಾಟಕ ಶಾಸ್ತ್ರೀಯ ದ್ವಂದ್ವ ವೇಣುವಾದನ ಸಭಿಕರನ್ನು ಮಂತ್ರಮುಗ್ಧರನ್ನಾಗಿಸಿತು. ಇವರ ವೇಣುವಾದನ ನಾದ ಲೋಕಕ್ಕೆ ಸಭಿಕರು ಅಭಿಮಾದನ ಚಪ್ಪಾಳೆ ನೀಡಿ ಉತ್ತೇಜಿಸಿದರು. ಜಯ ಚಾಮರಾಜ ಒಡೆಯರ್ ಅವರ ಕೆಲ ಕೃತಿ ಸೇರಿದಂತೆ ವಿವಿಧ ಕೃತಿಗಳ ರಾಗ ತಾಳಗಳನ್ನು ನುಡಿಸಿ ಸಭಿಕರು ತಲೆದೂಗುವಂತೆ ಮಾಡಿದರು. ಇವರಿಗೆ ಪಕ್ಕವಾದ್ಯದಲ್ಲಿ ವಿದ್ವಾನ್ ಕೇಶವ ಮೋಹನ್ ಕುಮಾರ್ (ಪಿಟೀಲು), ವಿದ್ವಾನ್ ಹೆಚ್.ಎಲ್.ಶಿವಶಂಕರ ಸ್ವಾಮಿ (ಮೃದಂಗ), ವಿದ್ವಾನ್ ರಘುನಂದನ್ (ಘಟಂ) ಸಹಕಾರ ನೀಡಿದರು. ಇದರೊಂದಿಗೆ ಆರಂಭದಲ್ಲೇ ನಡೆದ ನಾಹರ್ ಗುರುದತ್ತ ಮತ್ತು ತಂಡದವರ ಶಾಸ್ತ್ರೀಯ ಸಂಗೀತವು ಸಭಿಕರು ಮೈಮರೆಯುವಂತೆ ಮಾಡಿತು. ಹೀಗೆ ಈ ಬಾರಿಯ ಫಲಪುಷ್ಪ ಪ್ರದರ್ಶನದ ಪ್ರಯುಕ್ತ ನಡೆದ ಸಾಂಸ್ಕೃತಿಕ ಸಂಭ್ರಮಕ್ಕೆ ತೆರೆ ಬಿದ್ದಿತು. ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ಸೇರಿದಂತೆ ಮತ್ತಿತರರ ಗಣ್ಯರು ಹಾಜರಿದ್ದರು.

ಮೈಸೂರಲ್ಲಿ ಪ್ರವಾಸಿಗರ ದಂಡು; ಪ್ರವಾಸಿ ತಾಣಗಳಲ್ಲಿ ಭಾರಿ ವಾಹನ–ಜನ ದಟ್ಟಣೆ



ಅರಮನೆಗೆ ಬುಧವಾರ ಸಂಜೆ ಭಾರೀ ಪ್ರಮಾಣದಲ್ಲಿ ಪ್ರವಾಸಿಗರು ಲಗ್ಗೆಯಿಟ್ಟಿದ್ದರು.

ಮೈಸೂರು, ಡಿ.25(ಪಿಎಂ)– ಸಾಂಸ್ಕೃತಿಕ ಹಾಗೂ ಪಾರಂಪರಿಕ ನಗರಿ ಮೈಸೂರಿನತ್ತ ಪ್ರವಾಸಿಗರ ದಂಡು ಹರಿದು ಬರತೊಡಗಿದೆ. ಕ್ರಿಸ್‌ಮಸ್ ಹಾಗೂ ವರ್ಷಾಂತ್ಯದ ರಜೆಯ ಹಿನ್ನೆಲೆಯಲ್ಲಿ ಮೈಸೂರಿನ ಪ್ರವಾಸಿ ತಾಣಗಳತ್ತ ಪ್ರವಾಸಿಗರ ಮುಖ ಮಾಡಿದ್ದು, ಅಂತೆಯೇ ಬುಧವಾರ ಮೈಸೂರು ನಗರದ ಪ್ರಮುಖ ರಸ್ತೆಗಳಲ್ಲಿ ವಾಹನ ಹಾಗೂ ಜನದಟ್ಟಣೆ ಹೆಚ್ಚಾಗಿತ್ತು.

ಬುಧವಾರ ಸಂಜೆ ಅರಮನೆ ಆವರಣಕ್ಕೆ ಪ್ರವಾಸಿಗರು ಭಾರಿ ಸಂಖ್ಯೆಯಲ್ಲಿ ಲಗ್ಗೆಯಿಟ್ಟಿದ್ದರು. ಇಲ್ಲಿನ ಫಲಪುಷ್ಪ ಪ್ರದರ್ಶನಕ್ಕೆ ಭೇಟಿ ನೀಡಿ ಸಂಭ್ರಮಿಸಿದರು. ಅಲ್ಲದೆ, ಇಲ್ಲಿನ ಕೊನೆ ದಿನದ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಿಸಿ ಹರ್ಷಚಿತ್ತರಾದರು.

ಹಾರ್ಡಿಂಜ್ ವೃತ್ತ, ಕೆಆರ್ ವೃತ್ತ ಸೇರಿದಂತೆ ಅರಮನೆಗೆ ಸಂಪರ್ಕ ಕಲ್ಪಿಸುವ ರಸ್ತೆಗಳಲ್ಲಿ ವಾಹನ ದಟ್ಟಣೆ ಹೆಚ್ಚಾಗಿತ್ತು. ಮೃಗಾಲಯ, ಕಾರಂಜಿಕೆರೆ ವೀಕ್ಷಣೆಗೂ ಪ್ರವಾಸಿಗರು ಹೆಚ್ಚಿನ ಪ್ರಮಾಣದಲ್ಲಿ ಮುಖ ಮಾಡಿದ್ದರು. ಅಲ್ಲದೆ, ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ಸಂತ ಫಿಲೋಮಿನಾ ಚರ್ಚ್‌ಗೂ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಹಾಗೂ ಸ್ಥಳೀಯರು ಭೇಟಿ ನೀಡುತ್ತಿದ್ದ ದೃಶ್ಯ ಬುಧವಾರ ಕಂಡು ಬಂದಿತು.

ಡಿ.28ರಂದು ನಾಲ್ಕನೇ ಶನಿವಾರ ಹಾಗೂ ಡಿ.29ರ ಭಾನುವಾರವಾಗಿದ್ದು, ಈ ರಜೆ ದಿನಗಳವರೆಗೂ ಹಾಗೂ ಅನಂತರದ ಹೊಸ ವರ್ಷದ ಹೊಸ್ತಿಲಿನ ದಿನಗಳಲ್ಲೂ ಮೈಸೂರಲ್ಲಿ ಪ್ರವಾಸಿಗರ ಸಂಚಾರ ವ್ಯಾಪಕವಾಗಿರಲಿದೆ ಎಂಬ ಅಭಿಪ್ರಾಯ ಪ್ರವಾಸೋದ್ಯಮದ ವಿವಿಧ ವಲಯಗಳಿಂದ ವ್ಯಕ್ತವಾಗಿದೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಕ್ರಿಸ್‌ಮಸ್ ಹಾಗೂ ನೂತನ ವರ್ಷದ ಆರಂಭಕ್ಕೆ ಕ್ಷಣಗಣನೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಮೈಸೂರು ನಗರದಲ್ಲಿರುವ 425 ಹೋಟೆಲ್‌ಗಳ 10,500 ಕೊಠಡಿಗಳು ಡಿ.22ರಿಂದ 2025ರ ಜ.1ರವರೆಗೆ ಪೂರ್ಣ ಪ್ರಮಾಣದಲ್ಲಿ ಪ್ರವಾಸಿಗರಿಂದ ಭರ್ತಿಯಾಗಿವೆ ಎಂದು ತಿಳಿಸಿದರು.

ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ಶಾಲೆಗಳಿಗೆ ರಜೆ ಇದ್ದು, ಜೊತೆಗೆ ಕೋರ್ಟ್‌ಗಳಿಗೂ ಈಗ ರಜೆ ಇದೆ. ಅಲ್ಲದೆ, ವಾರಾಂತ್ಯದ ರಜೆಗಳು ಇರುವ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬೀಡು ಬಿಟ್ಟಿದ್ದಾರೆ. ಹೀಗಾಗಿ ಮೈಸೂರಿನ ಎಲ್ಲಾ ಹೋಟೆಲ್, ಅತಿಥಿಗೃಹಗಳು ಹಾಗೂ ಕ್ಲಬ್‌ಗಳಲ್ಲಿ ಶೇ.100ರಷ್ಟು ಕೊಠಡಿಗಳು ಭರ್ತಿಯಾಗಿವೆ. ಜೊತೆಗೆ ಕೆಲವೊಂದನ್ನು ಕಾಯ್ದಿರಿಸಲಾಗಿದೆ ಎಂದರು. ನಗರ ಹೊರವಲಯದ ರಿಂಗ್ ರಸ್ತೆಯ ಆಜುಬಾಜುಗಳಲ್ಲಿರುವ ಮತ್ತು ವಿವಿಧ ಬಡಾವಣೆಗಳಲ್ಲಿರುವ ಕೆಲವು ಸರ್ವೀಸ್ ಅಪಾರ್ಟ್‌ಮೆಂಟ್ ಹೋಮ್ ಸ್ಟೇ ಹೋಟಲುಗಳಲ್ಲಿಯೂ ಕೊಠಡಿಗಳು ಭರ್ತಿಯಾಗಿವೆ ಎಂದು ಅವರು ತಿಳಿಸಿದರು.



ಬುಧವಾರ ಕೆಆರ್ ವೃತ್ತದಲ್ಲಿ ಕಂಡು ಬಂದ ವಾಹನ ದಟ್ಟಣೆ.